ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 22 ಶನಿವಾರ 2023

ಸಂಪುಟ: 44 | ಸಂಚಿಕೆ: 97 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹ 4

ಸರ್ಕಾರ ಅಸ್ಥಿರಗೊಳಿಸುವ ಸಂಚು ನಡೆಯುತ್ತಿದೆ; ಕುಟುಕು ಕಾರ್ಯಾಚರಣೆ ಬಗ್ಗೆ ನೀವೆಲ್ಲರೂ ಸದಾ ಎಚ್ಚರವಾಗಿರಿ...!

ಸಚಿವರು, ಶಾಸಕರಿಗೆ ಸಿಎಂ ಸಿದ್ದರಾಮಯ್ಯ ಮಾಹಿತಿ; ಇತ್ತೀಚಿನ ವರ್ಗಾವಣೆ ದಂಧೆ ರೇಟ್ ಕಾರ್ಡ್ ಬಗ್ಗೆಯೂ ಕಿವಿಮಾತು



ಬೆಂಗಳೂರು, ಜು.21(ಕೆಎಂಶಿ)– ಸರ್ಕಾರ ಅಸ್ಥಿರಗೊಳಿಸಲು ಹವಣಿಸುತ್ತಿರುವ ಶಕ್ತಿಗಳು ಕುಟುಕು ಕಾರ್ಯಾಚರಣೆ ಸೇರಿದಂತೆ ಆಧುನಿಕ ತಂತ್ರಜ್ಞಾನ ಬಳಸಿ, ನಿಮ್ಮನ್ನು ಸಿಲುಕಿಸಿ, ಕಾಂಗ್ರೆಸ್ ಸರ್ಕಾರವನ್ನು ಇಕ್ಕಟ್ಟಿಗೀಡು ಮಾಡುವ ಸಂಚು ನಡೆಯುತ್ತಿದೆ ಎಂದು ಸಚಿವ, ಶಾಸಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿರುವ ವಿಚಾರ ಬಹಿರಂಗಗೊಂಡಿದೆ. ಕೆಲವು ಶಕ್ತಿಗಳು ನಡೆಸುತ್ತಿರುವ ಇಂತಹ ಸಂಚಿಗೆ ನೀವು ಬಲಿಯಾಗಬೇಡಿ. ಬಹಳ ಎಚ್ಚರಿಕೆಯಿಂದ ನಿಮ್ಮ ಕೆಲಸ ಕಾರ್ಯಗಳನ್ನು ಮಾಡಿ ಎಂದಿದ್ದಾರೆ.

ಇತ್ತೀಚೆಗೆ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಮುಖ್ಯಮಂತ್ರಿಯವರು ಕೆಲವು ಸಚಿವರನ್ನು ಗಮನದಲ್ಲಿಟ್ಟುಕೊಂಡೇ ಈ ಎಚ್ಚರಿಕೆ ಮಾತುಗಳನ್ನು ಹೇಳಿದ್ದಾರೆ. ನನಗೆ ಬಂದಿರುವ ಮಾಹಿತಿಯಂತೆ ಇಂತಹ ಚಟುವಟಿಕೆ ಗಳು ಆರಂಭಗೊಂಡಿವೆ. ಇದರ ಹಿನ್ನೆಲೆಯಲ್ಲಿ ನಿಮಗೆ ಮೊದಲೇ ಮಾಹಿತಿ ನೀಡುತ್ತಿದ್ದೇನೆ. ಯಾವುದಾದರೂ ಭ್ರಷ್ಟಾಚಾರದ ಆರೋಪಗಳಲ್ಲಿ ಸಿಲುಕಿಕೊಂಡರೆ, ನಾನು ಸಹಿಸುವುದಿಲ್ಲ ಎಂದಿದ್ದಾರೆ. ಕಾಂಗ್ರೆಸ್ ದೊಡ್ಡ ಪ್ರಮಾಣದಲ್ಲಿ ಬಹುಮತದಿಂದ ಅಧಿಕಾರದ ಚುಕ್ಕಾಣಿ ಹಿಡಿದಿರುವುದನ್ನು ಸಹಿಸದ ಕೆಲವರು ಸಂಚು ನಡೆಸುತ್ತಿದ್ದಾರೆ. ನಾವು ಎಷ್ಟು ಹುಷಾರಾಗಿ ಇರುತ್ತೇವೋ ಅಷ್ಟು ನಮಗೆ ಒಳ್ಳೆಯದು. ನೀವು ಯಾವುದೇ ಕಡತ ಇಲ್ಲವೇ ವ್ಯವಹಾರ ಮಾಡುವಾಗ ಅತ್ಯಂತ ಎಚ್ಚರಿಕೆ ಹಾಗೂ ಸೂಕ್ಷ್ಮವಾಗಿ ವ್ಯವಹರಿಸಿ. ಇತ್ತೀಚಿನ ಘಟನೆಗಳು (ಕುಮಾರಸ್ವಾಮಿ ಅವರು ವರ್ಗಾವಣೆ ರೇಟ್ ಕಾರ್ಡ್ ಬಿಡುಗಡೆ) ನಿಮ್ಮ ಗಮನಕ್ಕೆ ಬಂದಿರಬಹುದು. ಇಂತಹ ಪ್ರಕರಣಗಳು ನಡೆದ ನಂತರವೂ ನಾವು ಎಚ್ಚೆತ್ತುಕೊಳ್ಳದಿದ್ದರೆ ಒಳ್ಳೆಯ ಆಡಳಿತ ನೀಡಲು ಸಾಧ್ಯವಿಲ್ಲ ಎಂದಿದ್ದಾರೆ.

ಬಿಜೆಪಿ ಹಾಗೂ ಜೆಡಿಎಸ್ ಅದರಲ್ಲೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವರ್ಗಾವಣೆ ವಿಚಾರದಲ್ಲಿ ಕೆಲವು ದಾಖಲೆ ಬಿಡುಗಡೆ ಮಾಡುವುದಾಗಿ ಸದನದ ಒಳಗೆ, ಹೊರಗೆ ಹೇಳಿದ್ದಾರೆ. ಅವರ ಬಳಿ ಯಾವ ಸತ್ಯಾಂಶವಿದೆಯೋ ನನಗೆ ಗೊತ್ತಿಲ್ಲ. ಆದರೆ ●9ನೇ ಪುಟಕ್ಕೆ

ಹಾಲೂ ದುಬಾರಿ

ಆ.1ರಿಂದ ಲೀಟರ್‌ಗೆ 3 ರೂ ಹೆಚ್ಚಳ



ಹಾಲಿ ದರ	ಪರಿಷ್ಕೃತ ದರ
● ಟೋನ್ಡ್ ಹಾಲು 37 ರೂ.	40 ರೂ.
● ಹೋಮೋಜಿನೈಸ್ಡ್ ಹಾಲು 38 ರೂ.	41 ರೂ.
● ಹೊಮೊಜಿನೈಸ್ಡ್ ಹಸುವಿನ ಹಾಲು 42 ರೂ.	45 ರೂ.
● ಸ್ಪೆಷಲ್ ಹಾಲು 43 ರೂ.	46 ರೂ.
● ಶುಭಂ ಹಾಲು 43 ರೂ.	46 ರೂ.
● ಹೊಮೊಜಿನೈಸ್ಡ್ ಸ್ಟ್ಯಾಂಡಡೈಸ್ಡರ್ ಹಾಲು 44 ರೂ.	47 ರೂ.
● ಸಮೃದ್ಧಿ ಹಾಲು 48 ರೂ.	51 ರೂ.
ಸಂತೃಪ್ತಿ ಹಾಲು 50 ರೂ.	53 ರೂ.
● ಡಬಲ್ ಟೋನ್ಡ್ ಹಾಲು 36 ರೂ.	39 ರೂ.

ಬೆಂಗಳೂರು: ನಂದಿನಿ ಹಾಲಿನ ದರವನ್ನು ಪ್ರತಿ ಲೀಟರ್‌ಗೆ 3 ರೂಪಾಯಿ ಏರಿಕೆ ಮಾಡಲಾಗಿದೆ. ಆಗಸ್ಟ್ 1 ರಿಂದ ಪರಿಷ್ಕೃತ ದರ ಜಾರಿಗೆ ಬರಲಿವೆ.

ಕೆಎಂಎಫ್ ಪ್ರತಿ ಲೀಟರ್‌ಗೆ 5 ರೂಪಾಯಿ ಹೆಚ್ಚಳಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಆದರೆ 3 ರೂಪಾಯಿ ಹೆಚ್ಚಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಒಪ್ಪಿಗೆ ಸೂಚಿಸಿದ್ದಾರೆ. ಹೆಚ್ಚಳವಾದ 3 ರೂ. ಹಾಲು ಉತ್ಪಾದಕರಿಗೆ ಹೋಗಬೇಕು ಎಂದು ಮುಖ್ಯಮಂತ್ರಿ ಸೂಚಿಸಿದ್ದಾರೆ ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದಲ್ಲಿನ ಎಲ್ಲಾ ಹಾಲು ಒಕ್ಕೂಟಗಳು ಹಾಗೂ ಕೆಎಂಎಫ್ ಅಧ್ಯಕ್ಷರ ಸಭೆ ನಡೆಸಿದರು.

ಕೆಎಂಎಫ್ ಅಧ್ಯಕ್ಷ ಭೀಮಾ ನಾಯ್ಕ, ಸಹಕಾರ ಸಚಿವ ಕೆ.ಎನ್.ರಾಜಣ್ಣ, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಸಹಕಾರ ಇಲಾಖೆ ಪ್ರಧಾನ ಕಾರ್ಯದರ್ಶಿ ಎನ್. ಮಂಜುನಾಥ್ ಪ್ರಸಾದ್, ಪಶುಸಂಗೋಪನಾ ಇಲಾಖೆ ಕಾರ್ಯದರ್ಶಿ ಸಲ್ಮಾ ಫಾಹಿಂ, ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಜಗದೀಶ್, ಕೆಎಂಎಫ್ ನಿರ್ದೇಶಕ ಹೆಚ್.ಡಿ.ರೇವಣ್ಣ ಸಭೆಯಲ್ಲಿ ಭಾಗವಹಿಸಿದ್ದರು.

ನೈಸ್ ಯೋಜನೆ ಸರ್ಕಾರ ವಶಕ್ಕೆ ಪಡೆಯಲು ಜೆಡಿಎಸ್–ಬಿಜೆಪಿ ಆಗ್ರಹ

● ಮಾಜಿ ಮುಖ್ಯಮಂತ್ರಿಗಳಾದ ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಆಗ್ರಹ ● ಜಂಟಿ ಸದನ ಸಮಿತಿ ವರದಿ; ಕೋರ್ಟ್ ಆದೇಶಗಳನುಸಾರ ಯೋಜನೆ ಮುಟ್ಟುಗೋಲಿಗೆ ಒತ್ತಾಯ ● ಯೋಜನೆ ವಶಕ್ಕೆ ಪಡೆಯದಿದ್ದರೆ ಜಂಟಿ ಹೋರಾಟ ನಡೆಸುವ ಎಚ್ಚರಿಕೆ ● ನೈಸ್ ಯೋಜನೆಯಡಿ ಬೆಂಗಳೂರು ರಿಂಗ್ ರಸ್ತೆ ನಿರ್ಮಾಣವಾಗಿ ಈಗಾಗಲೇ ಸಾವಿರಾರು ಕೋಟಿ ಟೋಲ್ ವಸೂಲಿ; ಆದರೆ ಬೆಂಗಳೂರು–ಮೈಸೂರು ಹೆದ್ದಾರಿ ನಿರ್ಮಾಣ ನೆನೆಗುದಿಗೆ ಬಿದ್ದಿದೆ

ಬೆಂಗಳೂರು, ಜು.21(ಕೆಎಂಶಿ)– ಅಕ್ರಮಗಳ ಆಗರವಾಗಿರುವ ಹಾಗೂ ರಾಜ್ಯದ ಜನತೆಗೆ ವಂಚನೆ ಎಸಗಿರುವ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೈವೇ–ನೈಸ್ ಯೋಜನೆಯನ್ನು ಸಂಪೂರ್ಣವಾಗಿ ಸರಕಾರದ ವಶಕ್ಕೆ ಪಡೆಯಬೇಕು ಎಂದು ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳು ರಾಜ್ಯ ಸರಕಾರವನ್ನು ಒತ್ತಾಯ ಮಾಡಿವೆ. ವಿಧಾನಸೌಧದಲ್ಲಿರುವ ಜೆಡಿಎಸ್ ಶಾಸಕಾಂಗ ಪಕ್ಷದ ಕಚೇರಿಯಲ್ಲಿ ಜಂಟಿ ಮಾಧ್ಯಮಗೋಷ್ಠಿ



ನಡೆಸಿದ ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಬಸವರಾಜ ಬೊಮ್ಮಾಯಿ ಅವರು; ನೈಸ್ ಯೋಜನೆಯನ್ನು ಯಾವ ಮುಲಾಜಿಲ್ಲದೆ ಸರಕಾರದ ವಶಕ್ಕೆ ಪಡೆಯಬೇಕು ಹಾಗೂ ಉನ್ನತ ಮಟ್ಟದ ತನಿಖೆ ನಡೆಯಬೇಕು ಎಂದು ಆಗ್ರಹಪಡಿಸಿದರು. ●9ನೇ ಪುಟಕ್ಕೆ

ನಾಳೆ ನಾರಾಯಣ ನಮನ ಗ್ರಂಥ ಲೋಕಾರ್ಪಣೆ



ಮೈಸೂರು, ಜು.21(ಜಿಎ)–ಡಾ. ವಿ.ಲಕ್ಷ್ಮೀನಾರಾಯಣ್ ಅಭಿನಂದನಾ ಸಮಿತಿ ವತಿಯಿಂದ ಜು.23ರಂದು ಅಭಿನಂದನಾ ಸಮಾರಂಭ ಮತ್ತು 'ನಾರಾಯಣ ನಮನ' ಅಭಿನಂದನಾ ಗ್ರಂಥ ಲೋಕಾರ್ಪಣೆ ಸಮಾರಂಭವನ್ನು ಏರ್ಪಡಿಸಲಾಗಿದೆ ಎಂದು ಮೈಸೂರು ವಿವಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿವೃತ್ತ ನಿರ್ದೇಶಕ ಹಾಗೂ ಗ್ರಂಥದ ಸಂಪಾದಕರೂ ಆದ ಡಾ.ನೀಲಗಿರಿ ಎಂ.ತಳವಾರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10 ಗಂಟೆಗೆ ನಗರದ ಆದಿಚುಂಚನಗಿರಿ ರಸ್ತೆಯಲ್ಲಿರುವ ಗಾನ ಭಾರತಿ, ವೀಣೆ ಶೇಷಣ್ಣ ಸಭಾಂಗಣದಲ್ಲಿ ಆಯೋಜಿಸಿದ್ದು, ಕಾರ್ಯಕ್ರಮವನ್ನು ಚಾಮರಾಜನಗರ ಸಂಸದರಾದ ವಿ. ಶ್ರೀನಿವಾಸ್ ಪ್ರಸಾದ್ ಉದ್ಘಾಟಿಸಲಿದ್ದು, ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಪ್ರಧಾನ್ ಗುರುದತ್ತ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

'ನಾರಾಯಣ ನಮನ' ಅಭಿನಂದನಾ ಗ್ರಂಥವನ್ನು ಕುವೆಂಪು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ.ಕೆ.ಚಿದಾನಂದ ಗೌಡ ಲೋಕಾರ್ಪಣೆ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕೃಷ್ಣರಾಜ ವಿಧಾನ ಸಭಾ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಮತ್ತು ವಿಧಾನ ಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ ಆಗಮಿಸಲಿದ್ದು, ವಿಶೇಷ ಆಹ್ವಾನಿತರಾಗಿ ಮೈಸೂರು ಅರಗು ಮತ್ತು ಬಣ್ಣ ಕಾರ್ಖಾನೆ ಮಾಜಿ ಅಧ್ಯಕ್ಷ ರಘು ಆರ್. ಕೌಟಿಲ್ಯ ಮತ್ತು ಕರ್ನಾಟಕ ಬಿಜೆಪಿ ಪ್ರಧಾನ ಕಾರ್ಯದರ್ಶಿ ಸಿದ್ದರಾಜು ಇರಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಸ್ಕೃತ ವಿದ್ವಾನ್ ಡಾ.ಎಚ್.ವಿ.ನಾಗರಾಜರಾವ್, ಡಾ. ಎಂ.ಜಿ.ಆರ್. ಅರಸ್, ಡಾ.ನೀ.ಗಿರಿಗೌಡ ಮತ್ತು ಪುರುಷೋತ್ತಮ್ ಉಪಸ್ಥಿತರಿದ್ದರು.

ಪರಿದೃಶ್ಯ ಕಿರುಚಿತ್ರ, ಸಾಕ್ಷ್ಯ ಚಿತ್ರೋತ್ಸವ



ಮೈಸೂರು, ಜು.21(ಜಿಎ)–ಮೈಸೂರಿನಲ್ಲಿ ಭಾರತೀಯ ಚಿತ್ರ ಸಾಧನ ಮತ್ತು 'ಮೈಸೂರು ಸಿನಿಮಾ ಸೊಸೈಟಿ' ಸಹಯೋಗದಲ್ಲಿ ವಿದ್ಯಾರ್ಥಿ ಮತ್ತು ವೃತ್ತಿಪರ ವಿಭಾಗಗಳಲ್ಲಿ 'ಪರಿದೃಶ್ಯ' ಅಂತಾರಾಷ್ಟ್ರೀಯ ಕಿರುಚಿತ್ರ ಮತ್ತು ಸಾಕ್ಷ್ಯ ಚಿತ್ರೋತ್ಸವವನ್ನು ಆಯೋಜಿಸಲಾಗಿದೆ ಎಂದು ಸೊಸೈಟಿಯ ಸಂಯೋಜಕ ಹರೀಶ್ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2024ರ ಫೆಬ್ರವರಿ 3 ಮತ್ತು 4 ರಂದು ನಡೆಯಲಿರುವ ಎರಡು ದಿನಗಳ 'ಪರಿದೃಶ್ಯ' ಅಂತಾರಾಷ್ಟ್ರೀಯ ಕಿರುಚಿತ್ರ ಮತ್ತು ಸಾಕ್ಷ್ಯ ಚಿತ್ರೋತ್ಸವದಲ್ಲಿ ಅತ್ಯುತ್ತಮ ಕಿರುಚಿತ್ರ, ಅತ್ಯುತ್ತಮ ನಿರ್ದೇಶಕ, ಅತ್ಯುತ್ತಮ ನಟ, ಅತ್ಯುತ್ತಮ ನಟಿ, ಅತ್ಯುತ್ತಮ ಛಾಯಾಗ್ರಹಣ, ಅತ್ಯುತ್ತಮ ಚಿತ್ರಕಥೆ, ಅತ್ಯುತ್ತಮ ಕಥೆ, ಅತ್ಯುತ್ತಮ ಧ್ವನಿ ಸಂಯೋಜನೆ ಹೀಗೆ ಹಲವು ಆಕರ್ಷಕ ಬಹುಮಾನಗಳಿವೆ ಎಂದರು.

ಭಾಗವಹಿಸುವವರು 2022ರ ನಂತರ ಚಿತ್ರೀಕರಿಸಲಾದ ಕಿರುಚಿತ್ರಗಳು ಮತ್ತು ಸಾಕ್ಷ್ಯಚಿತ್ರಗಳು ಪ್ರವೇಶಕ್ಕೆ ಅರ್ಹವಾಗಿದ್ದು, ಚಿತ್ರೋತ್ಸವದಲ್ಲಿ ಭಾಗವಹಿಸಲು ಅರ್ಜಿ ಸಲ್ಲಿಸುವುದಕ್ಕೆ ಡಿ.15 ಕಡೆಯ ದಿನವಾಗಿದೆ. ಭಾಗವಹಿಸುವವರು https://filmfreeway.com/paridrishya, https://paridrishyafilimfest.com ಮೂಲಕ ಚಿತ್ರಗಳನ್ನು ಅಪ್‌ಲೋಡ್ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗೆ 99805 96824 ಸಂಪರ್ಕಿಸಿ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮ ಸಂಯೋಜಕ ಚೇತನ್, ಸಹ ಸಂಯೋಜಕಿ ಪದ್ಮಾವತಿ ಭಟ್ ಉಪಸ್ಥಿತರಿದ್ದರು.

ಮಣಿಪುರದಲ್ಲಿ ರಾಷ್ಟ್ರಪತಿ ಆಡಳಿತಕ್ಕೆ ಒತ್ತಾಯ



ಮೈಸೂರು, ಜು.21(ಜಿಎ)–ಮಣಿಪುರ ಮತ್ತು ಕೇಂದ್ರದಲ್ಲಿ ರಾಷ್ಟ್ರಪತಿ ಆಡಳಿತ ಜಾರಿಗೆ ತಂದು ಶಾಂತಿ ನೆಲೆಸುವಂತೆ ಕ್ರಮ ವಹಿಸಬೇಕೆಂದು ಮೈಸೂರು ನಗರ ಕಾಂಗ್ರೆಸ್ ಸಮಿತಿ ವಕ್ತಾರ ಎಸ್.ರಾಜೇಶ್ ಒತ್ತಾಯಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮಣಿಪುರದಲ್ಲಿ ನಡೆದಿರುವ ಮಹಿಳೆಯರ ಮೇಲಿನ ಅತ್ಯಾಚಾರ ಮತ್ತು ಬೆತ್ತಲೆ ಮೆರವಣಿಗೆ ಇಡೀ ರಾಷ್ಟ್ರವೇ ತಲೆತಗ್ಗಿಸುವ ಕಾರ್ಯವಾಗಿದ್ದು, ಮಣಿಪುರದಲ್ಲಿ ನಿತ್ಯವೂ ಸಾವು ನೋವುಗಳು ಸಂಭವಿಸುತ್ತಿದೆ. ಇದನ್ನು ನಿಭಾಯಿಸುವಲ್ಲಿ ಕೇಂದ್ರ ಮತ್ತು ಮಣಿಪುರ ರಾಜ್ಯ ಸರ್ಕಾರ ವಿಫಲವಾಗಿದ್ದು, ಕಳೆದ 75ದಿನಗಳಿಂದ ನಡೆಯುತ್ತಿರುವ ಹಿಂಸಾಚಾರವನ್ನು ನಿಭಾಯಿಸುವಲ್ಲಿ ಗೃಹಮಂತ್ರಿ ಅಮಿತ್ ಶಾ ವಿಫಲರಾಗಿದ್ದು, ಇದರ ಹೊಣೆ ಹೊತ್ತು ಅವರು ಕೂಡಲೇ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು.

ತಕ್ಷಣವೇ ರಾಷ್ಟ್ರಪತಿ ಆಳ್ವಿಕೆ ಜಾರಿಗೆ ತಂದು ಪರಿಸ್ಥಿತಿ ನಿಭಾಯಿಸಬೇಕು ಎಂದು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಸಾಹುಕಾರ ಚೆನ್ನಯ್ಯ ಬ್ಯಾಂಕ್ ಕಾರ್ಯದರ್ಶಿ ಎಸ್.ಎ.ರಹೀಂ, ಕಾಂಗ್ರೆಸ್ ಮುಖಂಡರಾದ ಗೋಕುಲಂ ಮಂಜು, ಮೈಸೂರು ಬಸವಣ್ಣ ಉಪಸ್ಥಿತರಿದ್ದರು.

ಕಾಂಗ್ರೆಸ್‌ನಿಂದ ಸ್ಪೀಕರ್ ಅಧಿಕಾರ ದುರ್ಬಳಕೆ

ಮೈಸೂರು, ಜು. 21– ಬಿಜೆಪಿಯ 10 ಶಾಸಕರನ್ನು ಸದನದಿಂದ ಅಮಾನತುಗೊಳಿಸುವ ಮೂಲಕ ಕಾಂಗ್ರೆಸ್, ವಿಪಕ್ಷಗಳನ್ನು ಹತ್ತಿಕ್ಕಲು ಸ್ಪೀಕರ್ ಸ್ಥಾನದ ಅಧಿಕಾರವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಮೈಸೂರು ನಗರ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷ ಹೇಮ ನಂದೀಶ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಕಾಂಗ್ರೆಸ್ ಪ್ರಾಯೋಜಿತ ವಿರೋಧ ಪಕ್ಷಗಳ ಸಭೆಗೆ ರಾಜ್ಯ ಐಎಎಸ್ ಅಧಿಕಾರಿಗಳ ನಿಯೋಜನೆ ಮಾಡಿದ ತಮ್ಮ ಹುಳುಕನ್ನು ಮುಚ್ಚಿಹಾಕಲು ಬಿಜೆಪಿ ಶಾಸಕರನ್ನು ಅಮಾನತುಗೊಳಿಸುವ ಜೊತೆಗೆ ವಿಪಕ್ಷ ಶಾಸಕರ ಹಕ್ಕನ್ನು ಮೊಟಕುಗೊಳಿಸಿದೆ. ಸಿದ್ದರಾಮಯ್ಯ ಸರ್ಕಾರ ಸದನದಲ್ಲಿ ಏಕಪಕ್ಷೀಯವಾಗಿ, ಸರ್ವಾಧಿಕಾರಿ ಧೋರಣೆ ತೋರ್ಪಡಿಸುತ್ತಿದೆ. ಸ್ಪೀಕರ್ ಕಾಂಗ್ರೆಸ್‌ನ ಕೈಗೊಂಬೆಯಂತೆ ವರ್ತಿಸುತ್ತಿರುವುದು ಅವರ ನಡವಳಿಕೆಯಿಂದ ಸ್ಪಷ್ಟವಾಗಿದೆ. ಈ ಹಿಂದೆ ಸದನದಲ್ಲಿ ಕಾಂಗ್ರೆಸ್ ಶಾಸಕರು ಯಾವ ರೀತಿ ಅಸಂವಿಧಾನಿಕವಾಗಿ ನಡೆದುಕೊಂಡಿದ್ದರು ಎಂಬುದನ್ನು ಕಾಂಗ್ರೆಸಿಗರು ತಿಳಿದುಕೊಳ್ಳುವುದು ಉತ್ತಮ. ಸದನದಲ್ಲಿ ಮಸೂದೆಯ ಪ್ರತಿಗಳನ್ನು ಹರಿದು ಹಾಕಿ, ಸ್ಪೀಕರ್ ಮೇಲೆ ದೈಹಿಕ ಹಲ್ಲೆ ನಡೆಸಿದ ಕರಾಳ ಇತಿಹಾಸ ಕಾಂಗ್ರೆಸ್ ಪಕ್ಷದ್ದಾಗಿದೆ ಎಂದು ಹೇಮಾ ನಂದೀಶ್ ತಿಳಿಸಿದ್ದಾರೆ.

ರಸ್ತೆಬದಿ ವ್ಯಾಪಾರಿಗಳಿಗೆ ಛತ್ರಿ ವಿತರಣೆ



ಮೈಸೂರು, ಜು. 21–ಮೈಸೂರಿನ ನಂಜುಮಳಿಗೆಯಲ್ಲಿ ರಸ್ತೆ ಬದಿ ವ್ಯಾಪಾರಿಗಳಿಗೆ ಛತ್ರಿ ವಿತರಿಸುವ ಮೂಲಕ ನೆರಳು ಫೌಂಡೇಶನ್ 15ನೇ ವಾರ್ಷಿಕೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಹುಟ್ಟು–ಸಾವುಗಳ ಮಧ್ಯೆ ಪವಿತ್ರವಾದ ಬದುಕು ರೂಪಿಸಿಕೊಳ್ಳುವುದು ನಮ್ಮೆಲ್ಲರ ಹೊಣೆಗಾರಿಕೆಯಾಗಿದೆ. ನೊಂದು–ಬೆಂದವರ, ಸಂಕಷ್ಟದಲ್ಲಿರುವವರಿಗೆ ಸ್ಪಂದಿಸುವ ಛಲ ನಮ್ಮದಾಗಬೇಕು.

ಮುಡಾ ಮಾಜಿ ಸದಸ್ಯರಾದ ಲಕ್ಷ್ಮೀದೇವಿ, ಕೆಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ತೀರ್ಥ ಕುಮಾರ್, ಬೈರತಿ ಲಿಂಗರಾಜು, ಅಪೂರ್ವ ಸುರೇಶ್, ನಂದೀಶ್ ನಾಯಕ್, ಎಸ್.ಎನ್.ರಾಜೇಶ್ ಇನ್ನಿತರರು ಭಾಗವಹಿಸಿದ್ದರು.

ಜೀವರಕ್ಷಣೆ ತರಬೇತಿ ಪ್ರತಿಯೊಬ್ಬರಿಗೂ ಅಗತ್ಯ

ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕ ಪ್ರೊ.ಎಲ್.ಶ್ರೀನಿವಾಸ್



ಮೈಸೂರು, ಜು.21– ಪ್ರತಿಯೊಬ್ಬ ನಾಗರಿಕರಿಗೂ ತುರ್ತುಪರಿಸ್ಥಿತಿಯಲ್ಲಿ ಜೀವರಕ್ಷಣೆ ಮಾಡುವ ತರಬೇತಿಯ ಅಗತ್ಯವಿದ್ದು, ಶಾಲಾ ಮಕ್ಕಳಲ್ಲಿಯೂ ಅರಿವನ್ನು ಮೂಡಿಸುವ ವಿಜ್ಞಾನ ಪಠ್ಯದಲ್ಲಿ ಸೇರಿಸಲು ಸರ್ಕಾರದ ಗಮನಕ್ಕೆ ತರುವುದಾಗಿ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕ ಪ್ರೊ. ಎಲ್. ಶ್ರೀನಿವಾಸ್ ತಿಳಿಸಿದರು.

ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಸ್ವಾಮಿ ವಿವೇಕಾನಂದ ಯೂತ್ ಮೂಮೆಂಟ್‌ನ ಜೀವರಕ್ಷಕ ಟ್ರಸ್ಟ್ ಹಾಗೂ ರೋಟರಿ ಮೈಸೂರು ವತಿಯಿಂದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಆಶ್ರಯ ಶಾಲೆಗಳಲ್ಲಿನ ಮುಖ್ಯಶಿಕ್ಷಕರು, ಶಿಕ್ಷಕರು, ನಿಲಯಪಾಲಕರು ಹಾಗೂ ಅಧಿಕಾರಿಗಳಿಗೆ ಜೀವ ಸುರಕ್ಷತೆಗೆ ಅಗತ್ಯ ಮೂಲಭೂತ ಜ್ಞಾನ ಕುರಿತು ನಡೆದ 3 ದಿನಗಳ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ನಮ್ಮ ಸಂಸ್ಥೆಯಲ್ಲಿ ಆದಿವಾಸಿಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತೇವೆ. ನಾವು ಯಾವುದೇ ಕಾರ್ಯಕ್ರಮ ಮಾಡಿದರೂ ಬುಡಕಟ್ಟು ಜನರಿಗೆ ತಲುಪಬೇಕು.

ಆ ನಿಟ್ಟಿನಲ್ಲಿ ನಮ್ಮ ನಡೆ–ಹಾಡಿಯ ಕಡೆ ಇದ್ದೇ ಇದೆ. ಕಾಡಂಚಿನಲ್ಲಿರುವ ಆದಿವಾಸಿಗಳಿಗೆ ಅರಣ್ಯ ಹಕ್ಕು ಕಾಯ್ದೆ ಬಗ್ಗೆ ಶಿಕ್ಷಕರು ಅರಿವನ್ನು ಮೂಡಿಸಬೇಕು. ಉಪನಿರ್ದೇಶಕಿ ಬಿ.ಎಸ್. ಪ್ರಭಾ ಅರಸ್ ಅವರು ಮಾಡುವ ಎಲ್ಲಾ ಕಾರ್ಯಕ್ರಮಗಳಿಗೂ ಪ್ರೋತ್ಸಾಹ ನೀಡುತ್ತೇವೆ. ಶಿಕ್ಷಕರು ಸರ್ಕಾರದ ಮೇಲೆ ಒತ್ತಡ ಹಾಕಿದರೆ ನಿಮ್ಮ ಬೇಡಿಕೆಯು ಈಡೇರುತ್ತದೆ. ಇದೇ ತಿಂಗಳು 26ನೇ ತಾರೀಖಿನಿಂದ ಆಶ್ರಮ ಶಾಲೆಗಳ ಮಕ್ಕಳಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಲಾಗುವುದು. ಈ ಕಾರ್ಯಕ್ರಮ ಪ್ರತಿಯೊಬ್ಬರಿಗೂ ಅನುಕೂಲವಾಗಿದ್ದು, ನೀವು ಕಲಿತದ್ದನ್ನು ನಿಮ್ಮ ನಿಮ್ಮ ಶಾಲೆಗಳಲ್ಲಿ ಹಾಡಿಗಳಲ್ಲಿನ ಜನರಿಗೆ ತಿಳಿಸಿ ಅರಿವು ಮೂಡಿಸಿರಿ ನೀವೆಲ್ಲರೂ ಸಹಕಾರ ನೀಡಿದರೆ ಇನ್ನು ಹೆಚ್ಚಿನ ಕಾರ್ಯಕ್ರಮಗಳನ್ನು ಹಾಡಿ ಜನರಿಗೆ ನೀಡಬಹುದು ಎಂದರು. ಇದೇ ಸಂದರ್ಭದಲ್ಲಿ ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಸಂಪನ್ಮೂಲ ವ್ಯಕ್ತಿಗಳನ್ನು ಅಭಿನಂದಿಸಲಾಯಿತು.

ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪನಿರ್ದೇಶಕಿ ಬಿ.ಎಸ್. ಪ್ರಭಾ ಅರಸ್, ಡಾ॥ ರೇಖಾ, ಡಾ. ಸುಮಂತ್, ಡಾ. ದಾಕ್ಷಾಯಿಣಿ, ಡಾ. ರಮೇಶ್ ಬಿ.ಗಣಿ, ತಾಲೂಕು ಕಲ್ಯಾಣಾಧಿಕಾರಿಗಳಾದ ಎಚ್.ಸಿ. ಬಸವರಾಜು, ಎಂ. ನಾರಾಯಣಸ್ವಾಮಿ, ಮಹ್ಮದ್ ಶಫೀರ್, ಸತ್ಯರಾಜ್, ದಿವ್ಯಾ, ವಿದ್ಯಾಶ್ರೀ, ನಂದಿನಿ, ಪ್ರತೀಕ್ಷಾ, ಅನಿಲ್‌ಕುಮಾರ್, ಕೃಷ್ಣ, ದೇವರಾಜ್ ಹಾಜರಿದ್ದರು.

ಆ.20ರ ಅರಸು ಪ್ರತಿಮೆ ಶಂಕುಸ್ಥಾಪನೆ ಸಮಾರಂಭಕ್ಕೆ ಮುಖ್ಯಮಂತ್ರಿಗಳಿಗೆ ಆಹ್ವಾನ



ಮೈಸೂರು, ಜು. 21– ಡಿ.ದೇವರಾಜ ಅರಸ್ ಪ್ರತಿಮೆ ಪ್ರತಿಷ್ಠಾಪನ ಸಮಿತಿ ವತಿಯಿಂದ ಸಾಮಾಜಿಕ ನ್ಯಾಯದ ಹರಿಕಾರರು, ಸಮ ಸಮಾಜದ ಚಿಂತಕರು ಆದ ಮಾಜಿ ಮುಖ್ಯಮಂತ್ರಿ ಡಿ ದೇವರಾಜ ಅರಸು ಅವರ ಪ್ರತಿಮೆಯನ್ನು ಅವರದೇ ತವರು ಜಿಲ್ಲೆ, ಸಾಂಸ್ಕೃತಿಕ ನಗರ ಮೈಸೂರಿನಲ್ಲಿ ಈಗಾಗಲೇ ಉದ್ದೇಶಿರುವ ಸ್ಥಳದಲ್ಲಿ ಪ್ರತಿಷ್ಠಾಪಿಸುವ ಸಮಾರಂಭಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಸ್ವಾಗತಿಸಲಾಯಿತು.

ಈ ಹಿಂದೆ ಯಡಿಯೂರಪ್ಪ ಹಾಗೂ ಬಸವರಾಜ್ ಬೊಮ್ಮಾಯಿ ಮುಖ್ಯಮಂತ್ರಿಗಳಾಗಿದ್ದ ಅವಧಿಯಲ್ಲಿ ಅರಸು ಸಮಿತಿ ನೀಡಿದ ಮನವಿಯನ್ನು ಪುರಸ್ಕರಿಸಿ, ಮೈಸೂರಿನ ಸಿದ್ದಾರ್ಥನಗರದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಜಿಲ್ಲಾ ಕಚೇರಿಗಳ ಸಂಕೀರ್ಣದ ಮುಂಭಾಗ ಅರಸು ಪ್ರತಿಮೆ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿತ್ತು.

ಪ್ರತಿಮೆ ನಿರ್ಮಾಣಕ್ಕೆ ಹಣಕಾಸು ಇಲಾಖೆಯಿಂದ ರೂ.92 ಲಕ್ಷ ರೂ. ಮಂಜೂರಾಗಿದ್ದು, ಬದಲಾದ ಸರ್ಕಾರದ ಅವಧಿಯಲ್ಲಿ ಅರಸು ಅವರ ಪ್ರತಿಮೆ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಶಂಕುಸ್ಥಾಪನೆ ನೆರವೇರಿಸಲು ನಿರ್ಧರಿಸಿ, ಅವರನ್ನು ಅರಸು ಸಮಿತಿ ಸ್ವಾಗತಿಸಿದೆ. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರ ಅಡಗೂರು ಹೆಚ್ ವಿಶ್ವನಾಥ್, ಸಮಿತಿಯ ಅಧ್ಯಕ್ಷ ಜಾಕೀರ್ ಹುಸೇನ್, ಗೌರವಾಧ್ಯಕ್ಷ ಎಂ ಚಂದ್ರಶೇಖರ್, ಗೌರವ ಸಲಹೆಗಾರ ಡಾ. ವೈ.ಡಿ.ರಾಜಣ್ಣ ಜಿಲ್ಲಾ ಪ್ರಧಾನ ಸಂಚಾಲಕ ಪವನ್ ಸಿದ್ದರಾಮಯ್ಯ ಉಪಸ್ಥಿತರಿದ್ದರು.

ಲಯನ್ಸ್ ಕ್ಲಬ್ ಆಫ್ ಮೈಸೂರ್ 66ನೇ ಪದಗ್ರಹಣ ಸಮಾರಂಭ, ವೈದ್ಯರ ದಿನಾಚರಣೆ

ಮೈಸೂರು, ಜು. 21– ಮೈಸೂರಿನ ತಿಲಕ್‌ನಗರದಲ್ಲಿರುವ ಲಯನ್ಸ್ ಕ್ಲಬ್ ಮೈಸೂರಿನ 2023–24ನೇ ಸಾಲಿನ ಪದಗ್ರಹಣ ಸಮಾರಂಭ ಮತ್ತು ವೈದ್ಯರ ದಿನಾಚರಣೆಯನ್ನು ಬೋಗಾದಿ ರಿಂಗ್ ರಸ್ತೆಯಲ್ಲಿರುವ ದಿ ಕಬಾನ ಗಾರ್ಡನ್‌ನಲ್ಲಿ ಜು. 23 ರಂದು ಬೆಳಗ್ಗೆ 11 ಗಂಟೆಗೆ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಶಾಸಕ ಕೆ.ಹರೀಶ್‌ಗೌಡ ಭಾಗವಹಿಸಲಿದ್ದಾರೆ. ನೂತನ ಅಧ್ಯಕ್ಷರಾದ ಲಯನ್ ಬಿ. ಭಾರತಿ ಮತ್ತು ತಂಡದವರಿಗೆ ಮಾಜಿ ರಾಜ್ಯಪಾಲರಾದ ಲಯನ್ ಡಾ.ಜಿ.ಎ. ರಮೇಶ್ ಪ್ರತಿಜ್ಞಾವಿಧಿ ಬೋಧಿಸುವರು. 15 ನೂತನ ಸದಸ್ಯರಿಗೆ ಲಯನ್ ಎನ್. ಸುಬ್ರಹ್ಮಣ್ಯ ಪ್ರಮಾಣವಚನ ಬೋಧಿಸುವರು. ಇದೇ ಸಂದರ್ಭದಲ್ಲಿ ಕ್ಲಬ್ಬಿನ ಕಿರು ಹೊತ್ತಿಗೆಯನ್ನು PST ಫೋರಂ ಜಿಲ್ಲಾಧ್ಯಕ್ಷರಾದ ಎಸ್.ಮತಿದೇವ್‌ಕುಮಾರ್ ಬಿಡುಗಡೆಗೊಳಿಸಲಿದ್ದಾರೆ. ಬೆಂಗಳೂರಿನ ಕಣ್ಣಿನ ವೈದ್ಯರಾದ ಡಾ.ವಿ.ಪ್ರೀತಿ ಅವರನ್ನು ಸನ್ಮಾನಿಸಲಾಗುವುದು. ನಿಕಟಪೂರ್ವ ಅಧ್ಯಕ್ಷ ಬಿ.ಎಲ್.ಗಿರೀಶ್, ಕಾರ್ಯದರ್ಶಿ ಲಯನ್ ಶಿವಕುಮಾರ್, ಖಜಾಂಚಿ ಜೆ.ಲೋಕೇಶ್, ಪ್ರತಿಷ್ಠಾಪನಾ ಸಮಿತಿ ಚೇರ್ಮನ್ ಲಯನ್ ಬಿ.ಶಿವಣ್ಣ ಮತ್ತು ಕ್ಲಬ್ಬಿನ ಸದಸ್ಯರು ಭಾಗವಹಿಸಲಿದ್ದಾರೆ.

ಅಖಿಲ ಭಾರತೀಯ ಗ್ರಾಹಕ ಪಂಚಾಯತ್‌ನ ಮೈಸೂರು ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ



ಮೈಸೂರು, ಜು. 21–ಅಖಿಲ ಭಾರತೀಯ ಗ್ರಾಹಕ ಪಂಚಾಯತ್‌ನ ಮೈಸೂರು ಘಟಕದ ನೂತನ ಅಧ್ಯಕ್ಷ ಹಾಗೂ ಇತರ ಪದಾಧಿಕಾರಿಗಳ ಪದಗ್ರಹಣ ಹಾಗೂ ಗ್ರಾಹಕರ ಹಿತ ಚಿಂತನ ಸಭೆಯನ್ನು ಚಾಮುಂಡಿಪುರಂನಲ್ಲಿರುವ ಅಪೂರ್ವ ಹೋಟೆಲ್ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ನೂತನ ಅಧ್ಯಕ್ಷರಾಗಿ ಸಿ.ಎಸ್.ಚಂದ್ರಶೇಖರ್, ಉಪಾಧ್ಯಕ್ಷರಾಗಿ ಡಿ.ಪಿ.ಜಯಕುಮಾರ್, ಸುಬ್ಬರಾವ್, ಸಂಘಟನಾ ಕಾರ್ಯದರ್ಶಿ ವಿಕ್ರಂ ಅಯ್ಯಂಗಾರ್, ಸಹ ಕಾರ್ಯದರ್ಶಿ ಪಿ.ವಿ.ರಮೇಶ್ ಹಾಗೂ ಆನಂದ್, ಕೋಶಾಧ್ಯಕ್ಷ ಶ್ರೀಧರ್ ಮೂರ್ತಿ, ಮಹಿಳಾ ಅಧ್ಯಕ್ಷೆ ನಾಗಮಣಿ ಹಾಗೂ ಘಟಕದ ವಿವಿಧ ಆಯಾಮಗಳ ಸದಸ್ಯರಾದ ದೊರೆಸ್ವಾಮಿ, ಟಿ.ಎಂ.ಚಂದ್ರಶೇಖರ್, ಎಚ್. ದಾಸಪ್ಪ ವಿನೋದ್‌ಕುಮಾರ್, ಶ್ರೀನಿವಾಸ್, ಶಿವಕುಮಾರ್ ಆಯ್ಕೆಯಾಗಿದ್ದಾರೆ.

ಗ್ರಾಹಕರ ಹಿತಚಿಂತನಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಹಿರಿಯ ಸಮಾಜ ಸೇವಕ ಕೆ. ರಘುರಾಮ್ ವಾಜಪೇಯಿ, ಸಮಾಜದಲ್ಲಿನ ಪ್ರತಿಯೊಬ್ಬ ಗ್ರಾಹಕರಲ್ಲೂ ಗ್ರಾಹಕ ಹಕ್ಕುಗಳ ಬಗ್ಗೆ ಅರಿವಿದ್ದಾಗ ಮೋಸ ಹಾಗೂ ವಂಚನೆಗೆ ಒಳಗಾಗುವುದು ತಪ್ಪುತ್ತದೆ. ಸರಕು, ಸೇವೆಗಳನ್ನು ಕೊಳ್ಳುವಾಗ ಗುಣಮಟ್ಟ ಖಾತರಿಪಡಿಸಿಕೊಂಡು ಪಡೆಯಬೇಕು. ಗ್ರಾಹಕರು ತಮ್ಮ ಹಕ್ಕುಗಳು ಹಾಗೂ ಮೌಲ್ಯಗಳನ್ನು ತಿಳಿದು ಮೋಸ ಹಾಗೂ ವಂಚನೆಗೆ ಒಳಗಾಗದೆ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ ಮೂಲಕ ತಮ್ಮ ಹಕ್ಕು ಚಲಾಯಿಸಲು ಮುಂದಾಗಬೇಕು ಎಂದರು.

ಹಿರಿಯ ವಕೀಲ ಡಾ.ರವೀಂದ್ರ ಮಾತನಾಡಿ, ಗ್ರಾಹಕ ಹಕ್ಕುಗಳ ಬಗ್ಗೆ ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಅರಿವು ಉಂಟಾಗುತ್ತಿದೆ. ಶ್ರೀಸಾಮಾನ್ಯರು ತಮ್ಮ ಗ್ರಾಹಕ ಹಕ್ಕುಗಳನ್ನು ಸಂರಕ್ಷಣೆ ಮಾಡಿಕೊಳ್ಳುವುದರ ಜತೆಗೆ ಮಾರಾಟಗಾರರು ಸಹ ಎಚ್ಚರಿಕೆಯಿಂದ ಗ್ರಾಹಕ ಸೇವೆ ಒದಗಿಸಬೇಕು ಎಂದರು. ನೂತನ ಮೈಸೂರು ಘಟಕದ ಅಧ್ಯಕ್ಷರಾಗಿ ಆಯ್ಕೆಯಾದ ಚಂದ್ರಶೇಖರ್ ಮಾತನಾಡಿ, ಮೈಸೂರು ಜಿಲ್ಲೆ ಪ್ರಾಂತದ ಕಾರ್ಯಕರ್ತರೆಲ್ಲರೂ ಜೊತೆಗೂಡಿ ತಮ್ಮ ತಮ್ಮ ಜವಾಬ್ದಾರಿಗಳನ್ನು ಸಕ್ರಿಯವಾಗಿ ನಿರ್ವಹಿಸುತ್ತಾ ಸೆಪ್ಟಂಬರ್‌ನಲ್ಲಿ ಬರುವ ಸ್ವರ್ಣ ಜಯಂತಿ ವರ್ಷದಲ್ಲಿ ಮೈಸೂರು ಸುತ್ತಮುತ್ತ ಎಲ್ಲಾ ಜಿಲ್ಲೆಗಳನ್ನು ತಲುಪಲು ಪ್ರಯತ್ನಿಸಿ ಹಾಗೂ ನಮ್ಮ ಗ್ರಾಹಕ ಆಂದೋಲನವನ್ನು ಜನಾಂದೋಲನವನ್ನಾಗಿ ಮಾಡುವಲ್ಲಿ ಕಾರ್ಯನಿರತರಾಗೋಣ ಎಂದರು ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ರಾಜ್ಯ ಶಿಕ್ಷಣ ಕ್ಷೇತ್ರದ ಸಂಚಾಲಕ ಡಾ.ಜಿ.ವಿ.ರವಿಶಂಕರ್, ರಾಜ್ಯ ಸಂಚಾಲಕರಾದ ರಾಘವೇಂದ್ರ, ಅಂಬಾಭವಾನಿ ಮಹಿಳಾ ಸಮಾಜದ ಅಧ್ಯಕ್ಷ ಸವಿತಾ ಘಾಟ್ಕೆ ಸಾಮಾಜಿಕ ಹೋರಾಟಗಾರ ಅಜಯ್ ಶಾಸ್ತ್ರಿ, ಎಸ್.ಎನ್.ರಾಜೇಶ್, ಮಿರ್ಲೆ ಪನೀಶ್, ಸುಚೇಂದ್ರ ಚಕ್ರಪಾಣಿ, ಜೈ ಭೀಮ್ ಜನಸ್ಪಂದನ ವೇದಿಕೆ ಅಧ್ಯಕ್ಷ ಚೇತನ್ ಕಾಂತರಾಜು, ಇನ್ನಿತರರು ಭಾಗವಹಿಸಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.7.2023 ಶನಿವಾರ, ಮಳೆ ನಕ್ಷತ್ರ: ಆಶ್ಲೇಷ 21.07.2023 ರಿಂದ 03.08.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಅಧಿಕ ಶ್ರಾವಣ ಮಾಸ, ಶುಕ್ಲ ಪಕ್ಷ,
ತಿಥಿ: ಚೌತಿ, ನಕ್ಷತ್ರ: ಪುಬ್ಬ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಮಧುಮೇಹ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ಭವೇದ್ ಆಯುರ್ವೇದ :** ಮೂಳೆ ಸಾಂದ್ರತೆ ಪರೀಕ್ಷೆ ಮತ್ತು ತಪಾಸಣಾ ಶಿಬಿರ, ಸ್ಥಳ: ಭವೇದ್, ಗೋಕುಲಂ 3ನೇ ಹಂತ, ಬೆಳಗ್ಗೆ 9 ರಿಂದ.

■ **ಗೋಲ್ಡನ್ ಕ್ರೀಪರ್ ಎಂಟರ್‌ಪ್ರೈಸಸ್ :** ವಿನೂತನ ಆಭರಣ ಪ್ರದರ್ಶನ ಮತ್ತು ಮಾರಾಟ ಮೇಳ 'ದಿ ಜ್ಯುವೆಲರಿ ಶೋ', ಸ್ಥಳ: ರ್‍ಯಾಡಿಸನ್ ಬ್ಲೂ ಪ್ಲಾಜಾ, ಬೆಳಗ್ಗೆ 10 ರಿಂದ.

■ **ಡಾ. ಹೆಚ್.ಸಿ.ಮಹದೇವಪ್ಪ ಅಭಿಮಾನಿಗಳ ಬಳಗ :** ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರ 'ಸಂವಿಧಾನದ ನೆರಳಲ್ಲಿ' (ಸಾಮಾಜಿಕ–ರಾಜಕೀಯ ಬರಹಗಳು) ಪುಸ್ತಕ ಲೋಕಾರ್ಪಣೆ ಸಮಾರಂಭ, ಪುಸ್ತಕ ಲೋಕಾರ್ಪಣೆ : ಸಾಹಿತಿ ಮತ್ತು ಸಂಗೀತ ನಿರ್ದೇಶಕ ಡಾ. ಹಂಸಲೇಖ, ಪುಸ್ತಕ ಕುರಿತು ಮಾತನಾಡುವವರು : ವಿಮರ್ಶಕ, ನಾಟಕಕಾರ ಡಾ.ಕೆ.ವೈ. ನಾರಾಯಣಸ್ವಾಮಿ, ಅಧ್ಯಕ್ಷತೆ : ಸಂಸ್ಕೃತಿ ಚಿಂತಕ ಡಾ. ಬಂಜಗೆರೆ ಜಯಪ್ರಕಾಶ್, ಉಪಸ್ಥಿತರು : ಕೃತಿ ಲೇಖಕ : ಡಾ.ಹೆಚ್.ಸಿ. ಮಹದೇವಪ್ಪ, ಸ್ಥಳ:ಕಲಾಮಂದಿರ, ಬೆಳಗ್ಗೆ 10.30ಕ್ಕೆ.

■ **ಕೆ. ಪುಟ್ಟಸ್ವಾಮಿ ಪ್ರಥಮ ದರ್ಜೆ ಕಾಲೇಜು :** ಸಮಾರೋಪ ಸಮಾರಂಭ, ಸಮಾರೋಪ ಭಾಷಣ : ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಕೌನ್ಸಿಲ್ ಉಪಾಧ್ಯಕ್ಷ ಡಾ.ವೈ.ಎಸ್.ಸಿದ್ದೇಗೌಡ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಮುಖ್ಯ ಅತಿಥಿಗಳು: ಸಂಘದ ಕಾರ್ಯದರ್ಶಿ ಪಿ. ವಿಶ್ವನಾಥ್, ಗೌರವ ಅತಿಥಿಗಳು: ಶ್ರೀಶೈಲ ರಾಮಣ್ಣವರ್, ಪ್ರಿನ್ಸಿಪಾಲ್ ಡಾ. ಎಂ. ಶಿವಲಿಂಗೇಗೌಡ, ಸ್ಥಳ: ಸಾಹುಕಾರ್ ಚೆನ್ನಯ್ಯ ಸಭಾಂಗಣ, ಬೆಳಗ್ಗೆ 10.30ಕ್ಕೆ

■ **ಜೆಎಸ್‌ಎಸ್ ಪದವಿಪೂರ್ವ ಕಾಲೇಜು :** ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಮತ್ತು ಪ್ರತಿಭಾ ಪುರಸ್ಕಾರ, ಅಧ್ಯಕ್ಷತೆ : ಜೆಎಸ್‌ಎಸ್ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ ಆರ್. ಮೂಗೇಶಪ್ಪ, ಉದ್ಘಾಟನೆ:ಖ್ಯಾತ ವಾಗ್ಮಿ ಹಿರೇಮಗಳೂರು ಕಣ್ಣನ್, ಪ್ರತಿಭಾ ಪುರಸ್ಕಾರ:ಉಪನ್ಯಾಸಕರಾದ ಶ್ರೀಮತಿ ನಾಗಶ್ರೀ ತ್ಯಾಗರಾಜ್, ಮುಖ್ಯ ಅತಿಥಿಗಳು: ಮುಖ್ಯ ಕಾರ್ಯನಿರ್ವಾಹಕ ಪ್ರೊ.ಬಿ.ವಿ. ಸಾಂಬಶಿವಯ್ಯ, ಅಂತಾರಾಷ್ಟ್ರೀಯ ಖೋ ಖೋ ಕ್ರೀಡಾಪಟು ಎಂ. ವೀಣಾ, ಕಾಲೇಜು ಪ್ರಾಂಶುಪಾಲ ಪ್ರೊ. ಎಂ.ಪಿ. ವಿಜಯೇಂದ್ರಕುಮಾರ್, ಸ್ಥಳ: ಕಾಲೇಜು ಆವರಣ, ಊಟಿ ರಸ್ತೆ, ಬೆಳಗ್ಗೆ 10.30ಕ್ಕೆ.

■ **ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು:** ಸಮಾರೋಪ ಸಮಾರಂಭ, ಸಮಾರೋಪ ನುಡಿ: ಶಾಸಕ ಜಿ.ಟಿ. ದೇವೇಗೌಡ, ಮುಖ್ಯ ಅತಿಥಿಗಳು: ಹೂಟಗಳ್ಳಿ ನಗರಸಭೆ ಆಯುಕ್ತ ಟಿ.ಎನ್.ನರಸಿಂಹ ಮೂರ್ತಿ, ಯೋಜನಾ ಸಮನ್ವಯಾಧಿಕಾರಿ ಎನ್.ಮುನಿರಾಜು, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಬಿ.ರಂಗೇಗೌಡ, ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕ ಸಿ.ಪಳನಿಸ್ವಾಮಿ, ಚಲನಚಿತ್ರ ನಟ ಕಿಶನ್ ಬಿಳಗಲಿ, ಅಧ್ಯಕ್ಷತೆ: ಕಾಲೇಜು ಪ್ರಾಂಶುಪಾಲ ಪ್ರೊ.ಎಂ.ಎಸ್.ಅನಿತಾ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

■ **ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು :** ಸಾಂಸ್ಕೃತಿಕ ವೇದಿಕೆ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು: ಶಾಸಕ ಕೆ.ಹರೀಶ್‌ಗೌಡ, ಚಲನಚಿತ್ರ ನಟ ಧನ್‌ವೀರ್‌ಗೌಡ, ಅಧ್ಯಕ್ಷತೆ: ಕಾಲೇಜು ಪ್ರಾಂಶುಪಾಲ ಪ್ರೊ. ಸೋಮಣ್ಣ, ಉಪಸ್ಥಿತರು : ಸಾಂಸ್ಕೃತಿಕ ವೇದಿಕೆ ಸಂಚಾಲಕ ಡಾ.ಬಿ.ರವಿಶಂಕರ್, ಖಜಾಂಚಿ ಪ್ರೊ. ಹೆಚ್.ಎಸ್. ಧನಲಕ್ಷ್ಮಿ, ಸಂಚಾಲಕ ಡಾ.ವಿ.ಮಂಜುನಾಥ್, ಸ್ಥಳ: ಕಾಲೇಜು ಆವರಣ, ಪಡುವಾರಹಳ್ಳಿ, ಬೆಳಗ್ಗೆ 10.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸಿ.ಎಫ್.ಟಿ.ಆರ್.ಐ ಸಿರಿಧಾನ್ಯದ ಸಿರಿ – ಪ್ರಾಯೋಜಿತ ಕಾರ್ಯಕ್ರಮ, 6.40 ಹಾಡು ಹೇಳಿದ ಕಥೆ, ಪ್ರಸ್ತುತಿ– ಡಾ. ಮೈಸೂರ್ ಉಮೇಶ್, 7.15 ಭಾವಗೀತೆಗಳು, 8.30 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಬಾನುಲಿ ಸರಣಿ. ವೈದಿಕ ವಾಂಙ್ಮಯಕ್ಕೆ ಡಿಜಿಟಲ್ ವೇದಿಕೆ ಕಲ್ಪಿಸುವ ಡಾ. ಯೋಗಾನಂದ ಅವರೊಂದಿಗೆ ಸಂವಾದ ನಡೆಸಿಕೊಡುತ್ತಾರೆ ದಿವಾಕರ ಹೆಗಡೆ, 9.05 ವಸುಧೈವ ಕುಟುಂಬಕಂ – ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 10.00 ಓ.ಎಸ್. ತ್ಯಾಗರಾಜನ್ –ಹಾಡುಗಾರಿಕೆ, 11.00 "ಸ್ವರಾಜ್"–ಭಾರತ ಸ್ವಾತಂತ್ರ್ಯ ಸಂಗ್ರಾಮದ ಸಮಗ್ರ ತಾಥೆ

ಮಧ್ಯಾಹ್ನ: 12.30 ದೇವರನಾಮ–ಸಿ.ಎಲ್. ನಾಗಶ್ರೀ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಕುರಿತ ಕಾರ್ಯಕ್ರಮ, 1.20 ಭಾವಗೀತೆ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.30 ಮಕ್ಕಳ ಮಂಟಪ–ನಂದಗೋಕುಲ, ಪ್ರಸ್ತುತಿ – ಕೆ.ಬಿ. ಮೀನಾ, 4.00 ನಾಟಕ, 4.30 ನೆನಪಿನಂಗಳ, ಪ್ರಸ್ತುತಿ– ಎಸ್. ಲಕ್ಷ್ಮೀನಾರಾಯಣ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ತೋರಣ ಹೂರಣ–ವಾರದ ಗ್ರಾಮೀಣ ಕಾರ್ಯಕ್ರಮ, ಪ್ರಸ್ತುತಿ– ಎನ್. ಕೇಶವಮೂರ್ತಿ, ಡಾ. ಮೈಸೂರು ಉಮೇಶ್, ಆರ್. ಲೋಕೇಶ್ವರಿ, ಪರಾಗ–ಬೇಸಾಯದ ಬದುಕು ಸರಾಗ–ಬಾನುಲಿ ಸರಣಿ, 8.00 ಯುವವಾಣಿ, 9.30 ಆಕಾಶವಾಣಿ ಕೇಳುವುದೆಂದರೆ, ಕಾಳಿಹುಂಡಿ ಶಿವಕುಮಾರ್ ಅವರೊಡನೆ ಸಂದರ್ಶನ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ–ಪಂಡಿತ್ ನಂದನ್ ಕುಮಾರ್–ವಯೋಲಿನ್ ವಾದನ

■ **ಸಹರಾ ಆರ್ಟ್ ಅಂಡ್ ಕ್ರಾಫ್ಟ್:** ಶಾಪಿಂಗ್ ಫೆಸ್ಟಿವಲ್, ಹ್ಯಾಂಡಿಕ್ರಾಫ್ಟ್ ಅಂಡ್ ಹ್ಯಾಂಡ್‌ಲೂಮ್ ಪ್ರದರ್ಶನ ಮತ್ತು ಮಾರಾಟ, ಸ್ಥಳ: ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನ, ಜಿಲ್ಲಾಧಿಕಾರಿ ಕಚೇರಿ ಹಿಂಭಾಗ, ಬೆಳಗ್ಗೆ 10.30ರಿಂದ ರಾತ್ರಿ 9.30ರವರೆಗೆ.

■ **ಸುಯೋಗ್ ಆಸ್ಪತ್ರೆ, ಸುಯೋಗ್ ಕಾಲೇಜ್ ಆಫ್ ನರ್ಸಿಂಗ್:** ರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ವೈದ್ಯಕೀಯ ಕ್ಷೇತ್ರದಲ್ಲಿ ಗಣನೀಯ ಸಾಧನೆಗೈದ ವೈದ್ಯರಿಗೆ ಗೌರವ ಸಮರ್ಪಣೆ, ಉದ್ಘಾಟನೆ: ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯ ಉಪಕುಲಪತಿ ಡಾ.ಎಂ.ಕೆ.ರಮೇಶ್, ಅಧ್ಯಕ್ಷತೆ: ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ಮುಖ್ಯ ಅತಿಥಿಗಳು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಕುಮಾರಸ್ವಾಮಿ, ಸ್ಥಳ: ಸುಯೋಗ್ ಆಸ್ಪತ್ರೆ ಸಭಾಂಗಣ, ರಾಮಕೃಷ್ಣನಗರ, ಮಧ್ಯಾಹ್ನ 12ಕ್ಕೆ.

■ **ವಿಜಯನಗರ 1ನೇ ಹಂತದ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ :** ಶಾಸಕ ಹರೀಶ್‌ಗೌಡರಿಗೆ ಸನ್ಮಾನ ಹಾಗೂ ಕುಂದುಕೊರತೆಗಳ ಸಭೆ, ಸ್ಥಳ: ಶ್ರೀಯೋಗ ನರಸಿಂಹಸ್ವಾಮಿ ದೇವಸ್ಥಾನದ ಎದುರಿನ ಉದ್ಯಾನವನದ ಯೋಗ ಮಂಟಪ, ಸಂಜೆ 5ಕ್ಕೆ.

■ **ಶ್ರೀ ಕೃಷ್ಣ ಗಾನಸಭಾ:** ಮಹಾರಾಜ ಶ್ರೀ ಜಯಚಾಮರಾಜ ಒಡೆಯರ್ ಅವರ 105ನೇ ಜನ್ಮ ದಿನಾಚರಣೆ, ಸಾನ್ನಿಧ್ಯ: ಶ್ರೀ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದಂಗಳವರು, ಉದ್ಘಾಟನೆ: ಮೇಯರ್ ಶಿವಕುಮಾರ್, ಗೌರವ ಅತಿಥಿಗಳು: ಪಾಲಿಕೆಸದಸ್ಯ ಎಸ್.ಬಿ.ಎಂ.ಮಂಜು, ಅಧ್ಯಕ್ಷತೆ: ಶ್ರೀಕೃಷ್ಣ ಗಾನಸಭಾ ಅಧ್ಯಕ್ಷ ಬಿ.ಎಸ್.ಶ್ರೀಧರರಾಜೇ ಅರಸು, ವಿದ್ವಾನ್ ಎನ್.ಆರ್.ಪ್ರಶಾಂತ್ ಅವರಿಂದ ಗಾಯನ, ವಿದುಷಿ ಪೃಥ್ವಿ ಭಾಸ್ಕರ್–ಪಿಟೀಲು, ವಿದ್ವಾನ್ ತುಮಕೂರು ರವಿಶಂಕರ್–ಮೃದಂಗ, ವಿದ್ವಾನ್ ಶರತ್ ಕೌಶಿಕ್–ಘಟಂ, ಸ್ಥಳ: ಆಳ್ವಾರ್ ಕಲಾ ಭವನ, ಶ್ರೀ ಕೃಷ್ಣ ದೇವಸ್ಥಾನ, ಗೋಕುಲಂ 3ನೇಹಂತ, ಸಂಜೆ 5.30ಕ್ಕೆ.

■ **ಶ್ರೀ ವ್ಯಾಸರಾಜ ಮಠ ಸೋಸಲೆ, ಶ್ರೀ ವ್ಯಾಸತೀರ್ಥ ವಿದ್ಯಾಪೀಠ:** ಅಧಿಕ ಶ್ರಾವಣ ಮಾಸದ ಪ್ರಯುಕ್ತ ಪ್ರತಿನಿತ್ಯ ಸಂಜೆ 6ರಿಂದ 7ರವರೆಗೆ ಸಂಪೂರ್ಣ ರಾಮಾಯಣ ಪ್ರವಚನ ಯಜ್ಞ, ವಿದ್ವಾನ್ ಕೃಷ್ಣಾಚಾರ್ಯ ನಾಗಸಂಪಿಗೆ ಅವರಿಂದ ಸುಂದರಕಾಂಡ ಕುರಿತು ಪ್ರವಚನ, ಸ್ಥಳ: ಶ್ರೀ ಸೋಸಲೆ ವ್ಯಾಸರಾಜ ಮಠ, ಕೃಷ್ಣಮೂರ್ತಿಪುರಂ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಮಹಿಮಾಪಾಲಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರುತಿಮಂಜರಿ ಪ್ರತಿಷ್ಠಾನ :** ಶ್ರೀ ಜಯಚಾಮರಾಜ ಒಡೆಯರ್‌ರವರ ಕೃತಿಗಳನ್ನಾಧರಿಸಿದ ಕರ್ನಾಟಕ ಶಾಸ್ತ್ರೀಯ ಗಾಯನ, ವಿದ್ವಾನ್ ದಿಲೀಪ್ ಸಿಂಹ ಅವರಿಂದ ಹಾಡುಗಾರಿಕೆ, ವಿದ್ವಾನ್ ಕೇಶವ್ ಮೋಹನ್ ಕುಮಾರ್–ಪಿಟೀಲು, ವಿದ್ವಾನ್ ಎ. ರಾಧೇಶ್–ಮೃದಂಗ, ಸ್ಥಳ: ರೋಟರಿ ಪಶ್ಚಿಮ ಸಭಾಂಗಣ, ಕಾಮಾಕ್ಷಿ ಆಸ್ಪತ್ರೆ ಎದುರು, ಸರಸ್ವತಿಪುರಂ, ಸಂಜೆ 6ಕ್ಕೆ.

ಮೈಸೂರು ಮಿತ್ರ ಶನಿವಾರ 22 ಜುಲೈ 2023

ಆಲೂರು ಬಳಿ ಅಪಘಾತ: ನಾಲ್ವರು ಸಾವು



ಹಾಸನ, ಜು.21– ಜಿಲ್ಲೆಯ ಆಲೂರು ತಾಲೂಕು ಹೆದ್ದುರ್ಗದ ಬಳಿ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಟಿಪ್ಪರ್ ಹಾಗೂ ಇನ್ನೋವಾ ಕಾರಿನ ನಡುವೆ ಭೀಕರ ಅಪಘಾತ ಸಂಭವಿಸಿ, ನಾಲ್ವರು ಸ್ಥಳದಲ್ಲೇ ಮೃತಪಟ್ಟ ಘಟನೆ ಶುಕ್ರವಾರ ಸಂಜೆ ಸಂಭವಿಸಿದೆ.

ಘಟನೆಯಲ್ಲಿ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ಹಾಸನ ತಾಲೂಕು ಕುಪ್ಪಳಿ ಗ್ರಾಮದ ಚೇತನ್, ಗುಡ್ಡೇನಹಳ್ಳಿಯ ಅಶೋಕ್, ತಟ್ಟೆಕೆರೆಯ ಪುರುಷೋತ್ತಮ, ಆಲೂರು ತಾಲೂಕು ಚಿಗಳೂರಿನ ದಿನೇಶ್ ಮೃತಪಟ್ಟಿದ್ದಾರೆ.

ಈ ನಾಲ್ವರು ಸಕಲೇಶಪುರದಿಂದ ಹಾಸನದ ಕಡೆಗೆ ಇನ್ನೋವಾ ಕಾರಿನಲ್ಲಿ ತೆರಳುವಾಗ ಎದುರಿಗೆ ಬಂದ ಟಿಪ್ಪರ್ ಡಿಕ್ಕಿ ಹೊಡೆದಿದೆ. ಈ ಸ್ಥಳದಲ್ಲಿ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ಒಂದು ಭಾಗದ ರಸ್ತೆಯಲ್ಲಿ ದ್ವಿಮುಖ ವಾಹನ ಸಂಚಾರವಿತ್ತು ಎನ್ನಲಾಗಿದೆ.

ಸ್ಥಳಕ್ಕೆ ದಾವಿಸಿದ ಪೊಲೀಸರು, ಮೃತದೇಹಗಳನ್ನು ಆಲೂರು ತಾಲೂಕು ಆಸ್ಪತ್ರೆ ಶವಾಗಾರಕ್ಕೆ ರವಾನಿಸಿದರು. ಈ ಸಂಬಂಧ ಆಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ವೈದ್ಯಕೀಯ ಪರೀಕ್ಷೆ ಬಳಿಕ ದೇಹಗಳನ್ನು ವಾರಸುದಾರರಿಗೆ ಹಸ್ತಾಂತರಿಸಲಾಗುವುದು ಎಂದು ಸಬ್‌ಇನ್‌ಸ್ಪೆಕ್ಟರ್ ಜನಾಬಾಯಿ ಕಡಪಟ್ಟಿ ತಿಳಿಸಿದ್ದಾರೆ.



ಯುವ ಮುಖಂಡರೂ ಆದ ಮೈಸೂರಿನ ಕೆಆರ್ ಬ್ಯಾಂಕ್ ನಿಕಟಪೂರ್ವ ಉಪಾಧ್ಯಕ್ಷ ಹಾಗೂ ಹಾಲಿ ನಿರ್ದೇಶಕ ಜಿ.ಎಂ. ಪಂಚಾಕ್ಷರಿ ಅವರ ಜನ್ಮದಿನದ ಅಂಗವಾಗಿ ಕುವೆಂಪು ನಗರ ಸ್ನೇಹ ಬಳಗ ವತಿಯಿಂದ ಅದರ ಅಧ್ಯಕ್ಷರಾದ ವಿಕ್ರಾಂತ್ ಪಿ ದೇವೇಗೌಡ ಸನ್ಮಾನಿಸಿದರು. ಮುಖಂಡರುಗಳಾದ ಮೈಲಾ ವಿಜಯಕುಮಾರ್, ಶ್ಯಾಮಲ, ಆನಂದ್, ಕೊಪ್ಪಲ್ ರಾಕೇಶ್ ಗೌಡ, ಕಾಳಬೋರಪ್ಪ, ಗಂಗೆ, ಮರಿಯಪ್ಪ, ನಾಗಣ್ಣ, ಎಚ್.ಜಿ.ಅನಿಲ್ ಕುಮಾರ್ ಇತರರಿದ್ದಾರೆ.

ಎಲ್ಲೇ ಹೋದರೂ ಸರ್ವರ್ ಡೌನ್... ಸರ್ವರ್ ಡೌನ್...

ಗೃಹಲಕ್ಷ್ಮಿ ಯೋಜನೆಗೆ ಹೆಸರು ನೋಂದಾಯಿಸಲು ಯಜಮಾನಿಯರ ಪರದಾಟ!

ಮೊದಲು 8147500500, 8277000555 ನಂಬರ್‌ಗೆ ಮೆಸೇಜ್ ಮಾಡಿ

24 ಗಂಟೆಯೊಳಗೆ ಹೆಸರು ನೋಂದಣಿ ಮಾಡಿಸಲು ಸೂಚನೆ

ರೇಷನ್ ಕಾರ್ಡ್, ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಕಡ್ಡಾಯ

ಬಿಪಿಎಲ್ ಹಾಗೂ ಎಪಿಎಲ್ ಕಾರ್ಡ್‌ದಾರರಿಗೂ ಯೋಜನೆ ಫಲ

ಐಟಿ, ಜಿಎಸ್‌ಟಿ ಪಾವತಿದಾರರಿಗಿಲ್ಲ ಯೋಜನೆ ಪ್ರಯೋಜನ

ಮೈಸೂರು, ಜು.21(ಬಿಎಲ್‌ಯು)– ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹ ಲಕ್ಷ್ಮಿ ಯೋಜನೆಗೆ ನೋಂದಾಯಿಸಿಕೊಳ್ಳಲು ಎರಡನೇ ದಿನವಾದ ಇಂದು ಕೂಡ ಸರ್ವರ್ ಡೌನ್ ಸಮಸ್ಯೆ ಕಾಡಿತು. ಇದರಿಂದ ಮೊಬೈಲ್ ಆ್ಯಪ್ ಹಾಗೂ ಸೇವಾ ಕೇಂದ್ರಗಳಲ್ಲಿ ಹೆಸರು ನೋಂದಾಯಿಸಿಕೊಳ್ಳಲು ಫಲಾನುಭವಿಗಳು ಪರದಾಡಿದರು.

ಕುಟುಂಬದ ಯಜಮಾನಿಗೆ 2 ಸಾವಿರ ರೂಪಾಯಿಗಳನ್ನು ಆಕೆಯ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸುವ ಗೃಹ ಲಕ್ಷ್ಮಿ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಈಗಾಗಲೇ ಚಾಲನೆ ನೀಡಿದ್ದಾರೆ. ಕರ್ನಾಟಕದ 1.01 ಕೋಟಿಗೂ ಹೆಚ್ಚು ಮಹಿಳೆಯರು ಯೋಜನೆಯ ಫಲಾನುಭವಿಗಳಾಗಿದ್ದಾರೆ.

ಮೈಸೂರು ಒನ್ ಅಥವಾ ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಹೆಸರು ನೋಂದಾಯಿಸಿಕೊಳ್ಳಬಹುದು. ಜೊತೆಗೆ ಗೃಹ ಲಕ್ಷ್ಮಿ ಯೋಜನೆಯ ಮೊಬೈಲ್ ಆ್ಯಪ್ ಮೂಲಕವೂ ಹೆಸರು ನೋಂದಾಯಿಸಿಕೊಳ್ಳಬಹುದು. ಆದರೆ ಯೋಜನೆಗೆ ಚಾಲನೆ ದೊರೆತು ಮೂರು ದಿನವಾದರೂ ಸರ್ವರ್ ಸಮಸ್ಯೆಯಿಂದ ಮಹಿಳೆಯರು ಹೆಸರು ನೋಂದಾಯಿಸಿಕೊಳ್ಳಲು ಪರದಾಡುತ್ತಿದ್ದಾರೆ. ಮೈಸೂರಿನ ಗೋಕುಲಂ, ಜಯನಗರ ಸೇರಿದಂತೆ ಮೈಸೂರು ಒನ್ ಹಾಗೂ ಕರ್ನಾಟಕ ಒನ್‌ನ ಇತರೆ ಸೇವಾ ಕೇಂದ್ರದಲ್ಲಿ ಫಲಾನುಭವಿಗಳಿಗೆ ಇದರಿಂದ ತೀವ್ರ ತೊಂದರೆ ಆಗಿದೆ. ಮೊಬೈಲ್ ಆ್ಯಪ್ ಮೂಲಕವೂ ಹೆಸರು ನೋಂದಾಯಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಸೇವಾ ಕೇಂದ್ರಗಳಿಗೆ ಬಂದರೆ ಇಲ್ಲೂ ಇದೇ ಸಮಸ್ಯೆ.

ಫಲಾನುಭವಿಗಳು ಮೊದಲು ತಮ್ಮ ಮೊಬೈಲ್ ನಂಬರ್‌ನಿಂದ ಹೆಸರು ಹಾಗೂ ರೇಷನ್ ಕಾರ್ಡ್ ಸಂಖ್ಯೆಯನ್ನು 8147500500 ಇಲ್ಲವೇ 8277000555 ನಂಬರ್‌ಗೆ ಮೆಸೇಜ್ ಮಾಡಬೇಕು. ಆ ಕ್ಷಣ ಅಥವಾ 24 ಗಂಟೆಯೊಳಗೆ ನಿಮ್ಮ ಸನಿಹದ ಸೇವಾ ಕೇಂದ್ರಗಳಿಗೆ ಹೋಗಿ ಹೆಸರು ನೋಂದಾಯಿಸಿಕೊಳ್ಳಿ ಎಂಬ ಮೆಸೇಜ್ ಬರುತ್ತದೆ.

ತರುವಾಯ ಫಲಾನುಭವಿಗಳು ಸೇವಾ ಕೇಂದ್ರಗಳಿಗೆ ಹೋಗಿ ರೇಷನ್ ಕಾರ್ಡ್, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಬುಕ್ ಅನ್ನು ನೀಡಿ ಗೃಹ ಲಕ್ಷ್ಮಿ ಯೋಜನೆಯ ಪೋರ್ಟಲ್‌ನಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು. ಆದರೆ ಸರ್ವರ್ ಡೌನ್ ಆಗಿರುವ ಕಾರಣ ಒಂದು ಹೆಸರು ನೋಂದಾಯಿಸಲು ಕನಿಷ್ಠ 5 ರಿಂದ 10 ನಿಮಿಷ ಸಮಯ ಹಿಡಿಯುತ್ತಿದೆ. ಅಲ್ಲದೆ ಪ್ರತಿಯೊಂದು ಸೇವಾ ಕೇಂದ್ರಕ್ಕೂ 60 ಫಲಾನುಭವಿಗಳ ಹೆಸರು ನೋಂದಾಯಿಸಲು ಟಾರ್ಗೆಟ್ ನೀಡಲಾಗಿದೆ. ಆದರೆ ಸರ್ವರ್ ಡೌನ್ ಆಗಿರುವ ಕಾರಣ ಟಾರ್ಗೆಟ್ ತಲುಪಲೂ ಸಾಧ್ಯವಾಗುತ್ತಿಲ್ಲ. ಒಬ್ಬ ಫಲಾನುಭವಿಯ ಹೆಸರು ನೋಂದಾಯಿಸಲು 10 ನಿಮಿಷ ಕಾಲಾವಕಾಶ ತೆಗೆದುಕೊಂಡರೆ ಕರ್ನಾಟಕದಲ್ಲಿರುವ 1.01 ಕೋಟಿ ಫಲಾನುಭವಿಗಳ ಹೆಸರನ್ನು ತಿಂಗಳಲ್ಲಿ ನೋಂದಾಯಿಸಲು ಸಾಧ್ಯವೇ ಇಲ್ಲ.

ಈಗ ಗೃಹಲಕ್ಷ್ಮಿ ಯೋಜನೆಯ ಪೋರ್ಟಲ್ ಸಮಸ್ಯೆ ಅಂತು ಸರ್ಕಾರ ಪರ್ಯಾಯ ವ್ಯವಸ್ಥೆ ಮಾಡಬೇಕು. ಇಲ್ಲವೆ ಸರ್ವರ್ ಸುಧಾರಿಸಲು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ದೊಡ್ಡ ಪ್ರಮಾಣದ ಫಲಾನುಭವಿಗಳ ಹೆಸರನ್ನು ಒಂದು ತಿಂಗಳ ಅವಧಿಯಲ್ಲಿ ನೋಂದಾಯಿಸಲು ಸಾಧ್ಯವಿಲ್ಲ ಎಂಬುದು ಮಹಿಳೆಯರ ಅಳಲು.

ಯೋಜನೆಗೆ ಹೆಸರು ನೋಂದಾಯಿಸಿಕೊಳ್ಳಲು ರೇಷನ್ ಕಾರ್ಡ್ ಹಾಗೂ ಪಾಸ್ ಬುಕ್‌ಗೆ ಆಧಾರ್ ಲಿಂಕ್ ಆಗಿರಲೇಬೇಕು. ಆದಾಯ ತೆರಿಗೆ ಹಾಗೂ ಜಿಎಸ್‌ಟಿ ಪಾವತಿದಾರರು ಯೋಜನೆಗೆ ಅರ್ಹರಲ್ಲ. ಒಂದು ವೇಳೆ ನಾವು ಆದಾಯ ತೆರಿಗೆ ಹಾಗೂ ಜಿಎಸ್‌ಟಿ ಪಾವತಿದಾರರಲ್ಲ ಎಂದು ಸುಳ್ಳು ಹೇಳಿ ಹೆಸರು ನೋಂದಾಯಿಸಲು ಸಾಧ್ಯವೇ ಇಲ್ಲ.

ಬಿಪಿಎಲ್ ಕಾರ್ಡ್‌ದಾರರು ಮಾತ್ರವಲ್ಲದೆ ಎಪಿಎಲ್ ಕಾರ್ಡ್‌ದಾರರು ಕೂಡ ಗೃಹ ಲಕ್ಷ್ಮಿ ಯೋಜನೆಯಲ್ಲಿ ಎರಡು ಸಾವಿರ ರೂಪಾಯಿ ಪಡೆಯಲು ಅರ್ಹರಾಗಿದ್ದಾರೆ. ದಾಖಲೆ ಕ್ರಮ ಬದ್ಧವಾಗಿದ್ದರೆ ಆಗಸ್ಟ್ ತಿಂಗಳಿಂದ ಎರಡು ಸಾವಿರ ರೂಪಾಯಿ ಫಲಾನುಭವಿಗಳ ಖಾತೆಗೆ ಜಮಾ ಆಗಲಿದೆ.



ಗೃಹ ಜ್ಯೋತಿ ಯೋಜನೆಯಲ್ಲಿ ಹೆಸರು ನೋಂದಾಯಿಸುವಾಗಲೂ ಆರಂಭದ ದಿನಗಳಲ್ಲಿ ಇದೇ ಪರಿಸ್ಥಿತಿ ಎದುರಾಗಿತ್ತು. ಸರ್ವರ್ ಡೌನ್ ಆಗಿದ್ದ ಕಾರಣ ತೀವ್ರ ವಿಳಂಬ ಆಗುತ್ತಿರುವುದನ್ನು ಮನಗಂಡ ಸರ್ಕಾರ ಮತ್ತೊಂದು ಪೋರ್ಟಲ್ ತೆರೆದಿತ್ತು. ಆಗ 10 ನಿಮಿಷದಲ್ಲಿ ಆಗುತ್ತಿದ್ದ ಕೆಲಸ ಕೇವಲ 2 ನಿಮಿಷದಲ್ಲಿ ಮುಗಿಯುತ್ತಿದೆ. ಗೃಹ ಜ್ಯೋತಿ ಯೋಜನೆಯ ಸೇವಾ ಸಿಂಧು ಪೋರ್ಟಲ್‌ನಲ್ಲಿ ಈಗ ಕೇವಲ 2 ನಿಮಿಷದಲ್ಲಿ ಫಲಾನುಭವಿಗಳು ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದು.

ಹೆಚ್ಚು ಅಂಕ ಪಡೆಯುವಂತೆ ಒತ್ತಡ ಹೇರಬೇಡಿ: ಶಾಸಕ ಹರೀಶ್‌ಗೌಡ



ಮೈಸೂರು, ಜು.21(ಸಿಎನ್)– ಪೋಷಕರು ಮಕ್ಕಳಿಗೆ ಹೆಚ್ಚು ಅಂಕ ಪಡೆಯುವಂತೆ ಒತ್ತಡ ಹೇರಿ ಅವರ ವಿದ್ಯಾಭ್ಯಾಸಕ್ಕೆ ತೊಂದರೆ ಮಾಡಬಾರದು. ಅವರಿಗೆ ಇಷ್ಟವಾದ ವಿಷಯದ ಬಗ್ಗೆ ಆಯ್ಕೆ ಮಾಡಿಕೊಳ್ಳುವ ಸ್ವಾತಂತ್ರ್ಯ ಕೊಡಿ. ಆಗ ಆಸಕ್ತಿಯಾನುಸಾರ ಉತ್ತಮವಾದ ಶೈಕ್ಷಣಿಕ ಜೀವನ ಕಟ್ಟಿಕೊಳ್ಳುತ್ತಾರೆ ಎಂದು ಚಾಮರಾಜ ಕ್ಷೇತ್ರ ಶಾಸಕ ಕೆ.ಹರೀಶ್‌ಗೌಡ ಸಲಹೆ ನೀಡಿದರು.

ನಗರದ ನ್ಯೂ ಸಯ್ಯಾಜಿರಾವ್ ರಸ್ತೆಯ ಹೈವೇ ಸರ್ಕಲ್ ಬಳಿಯ ರಿಯೋ ಮೆರಿಡಿಯನ್ ಸಭಾಂಗಣದಲ್ಲಿ, ಗುತ್ತಿಗೆದಾರರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ವತಿಯಿಂದ ಶುಕ್ರವಾರ ಆಯೋಜಿಸಲಾಗಿದ್ದ ಗುತ್ತಿಗೆದಾರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಮೈಸೂರು ಶೈಕ್ಷಣಿಕವಾಗಿ ಪ್ರಮುಖ ಕೇಂದ್ರವಾಗಿದೆ. ಉನ್ನತ ಮಟ್ಟದ ಕಾಲೇಜುಗಳು ನಮ್ಮಲ್ಲಿದೆ ಇವೆ. ಇತ್ತೀಚೆಗೆ ಯಾವುದೇ ತರಬೇತಿಯಿಲ್ಲದೆ ಕುವೆಂಪುನಗರದ ಪೂಜಾ ಎಂಬುವರು ಯುಪಿಎಸ್‌ಸಿ ಪರೀಕ್ಷೆಯಲ್ಲಿ 390ನೇ ರ್‍ಯಾಂಕ್ ಬಂದಿರುವುದು ಇತರ ವಿದ್ಯಾರ್ಥಿನಿಯರಿಗೆ ಮಾದರಿಯಾಗಿದೆ ಎಂದರು.

ಸೊಸೈಟಿಯು ವಿದ್ಯಾರ್ಥಿಗಳನ್ನು ಪುರಸ್ಕರಿಸುತ್ತಿರುವುದು ಶ್ಲಾಘನೀಯ. ಸರ್ಕಾರಿ ಸೇವೆ ಸೇರಲು ಪ್ರಯತ್ನಿಸುವ ಅಭ್ಯರ್ಥಿಗಳಿಗೆ ಧನ ಸಹಾಯ ಕಾರ್ಯಕ್ರಮ ರೂಪಿಸಿದರೆ ಜಿಲ್ಲೆಯಲ್ಲಿ ಇನ್ನಷ್ಟು ಸಾಧಕರು ಹೊರಹೊಮ್ಮಲಿದ್ದಾರೆ ಎಂದರು.

ಸೊಸೈಟಿ ಅಧ್ಯಕ್ಷ ಮಹಾಲಿಂಗಂ ಮಾತನಾಡಿ, ರಾಜ್ಯ ಸರ್ಕಾರ ನಮ್ಮ ಸೊಸೈಟಿಗೆ 6 ಬಾರಿ ಅತ್ಯುತ್ತಮ ಸಹಕಾರ ಸಂಘ ಪ್ರಶಸ್ತಿ ನೀಡಿದೆ. ನಾವು 20 ವರ್ಷಗಳಿಂದ ಲಾಭದಲ್ಲಿ ಸಾಗಿ ಬಂದಿದ್ದು, ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದೇವೆ ಎಂದು ತಿಳಿಸಿದರು.

ಕನ್ನಡ ಪ್ರಾಧ್ಯಾಪಕ ಮೈಸೂರು ಕೃಷ್ಣಮೂರ್ತಿ ಮಾತನಾಡಿ, ಪ್ರತಿಭಾ ಪುರಸ್ಕಾರ ಪಡೆದ ಮಕ್ಕಳ ಮೊಗದಲ್ಲಿ ಖುಷಿ ಮೂಡಿದ್ದನ್ನು ಗಮನಿಸಿದ ಅವರ ಪೋಷಕರ ಸಾರ್ಥಕತೆ ನೋಡಲು ಸಂತಸವಾಗುತ್ತದೆ. 'ತಂದೆ ತಾಯಿಗೆ ಸಂತೋಷ ತಂದರೆ ಸಾಕು ಬೇರೆ ದೇವರ ಪೂಜೆ ಏತಕೆ ಬೇಕು' ಎಂಬ ಹಾಡಿನ ಸಾಲನ್ನು ಹಾಡುವ ಮೂಲಕ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಎಸ್ಸೆಸ್ಸೆಲ್ಸಿಯ 16 ಮತ್ತು ಪಿಯು ವಿಭಾಗದ 10 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಇದೇ ವೇಳೆ ಪುರಸ್ಕಾರಕ್ಕೆ ಸಹಕರಿಸಿದ ದಾನಿಗಳನ್ನೂ ಸನ್ಮಾನಿಸಲಾಯಿತು.

ಕೆ.ಆರ್.ನಗರ ಸರ್ಕಾರಿ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಮೈಸೂರು ಕೃಷ್ಣಮೂರ್ತಿ ಮಾತನಾಡಿದರು.

ಆದಿಚುಂಚನಗಿರಿ ಮಠದ ಮೈಸೂರು ಶಾಖೆ ಮುಖ್ಯಸ್ಥ ಸೋಮೇಶ್ವರನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಸಮಾರಂಭದಲ್ಲಿ ಸೊಸೈಟಿ ಉಪಾಧ್ಯಕ್ಷ ಗೋವಿಂದೇಗೌಡ, ನಿರ್ದೇಶಕ ಎಸ್.ಗೋಪಾಲರಾಜು, ವಿ.ಕುಮಾರ್, ಬಿ.ಪುಟ್ಟಸ್ವಾಮಿ, ಚಂದ್ರಶೇಖರಯ್ಯ, ಕೆ.ವಿ.ಚಿನ್ನಯ್ಯ, ಸಿ.ಡಿ.ಕೃಷ್ಣ, ಎಚ್.ಎಂ.ಪರಶಿವಮೂರ್ತಿ, ರಾಚೇಗೌಡ, ಕೆ.ರವಿ, ಕೆ.ನಾಗರಾಜು, ಎಸ್.ಜೆ.ಜಗದೀಶ್, ದೇವೇಂದ್ರ, ಕೆ.ದಶರಥ, ಅನುಸೂಯ, ಜಯಲಕ್ಷ್ಮಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಚ್.ಕುಮಾರ್ ಇದ್ದರು.

ಮೈಸೂರು ವಿವಿ ಅಂತರ ಕಾಲೇಜು ಕ್ರೀಡಾಕೂಟ: ಮಹಾಜನ ಕಾಲೇಜಿಗೆ ಸಮಗ್ರ ತಂಡ ಪ್ರಶಸ್ತಿ



ಮೈಸೂರು, ಜು. 21(ಸಿಎನ್)–ಕಳೆದ ಮೂರು ದಿನಗಳಿಂದ ನಡೆಯುತ್ತಿದ್ದ ಮೈಸೂರು ವಿಶ್ವವಿದ್ಯಾನಿಲಯ ಅಂತರ ಕಾಲೇಜು, ಅಂತರ ವಲಯ ಪುರುಷರ ಕ್ರೀಡಾಕೂಟದಲ್ಲಿ ಮಹಾಜನ ಕಾಲೇಜು ಸಮಗ್ರ ತಂಡ ಪ್ರಶಸ್ತಿ ಬಾಚಿಕೊಂಡಿದೆ. ಮಹಾರಾಜ ಕಾಲೇಜು ದ್ವಿತೀಯ ಸ್ಥಾನ ಪಡೆದರೆ, ಮೈಕಾ ಕಾಲೇಜು ತೃತೀಯ ಸ್ಥಾನ ಪಡೆದಿದೆ.

ಈ ಕ್ರೀಡಾಕೂಟದಲ್ಲಿ 40 ಕಾಲೇಜುಗಳ ಸುಮಾರು 800 ಕ್ರೀಡಾಪಟುಗಳು ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಂಡಿದ್ದರು.

ನಗರದ ಮೈಸೂರು ವಿಶ್ವವಿದ್ಯಾನಿಲಯ ಸ್ಪೋರ್ಟ್ಸ್ ಪೆವಿಲಿಯನ್‌ನಲ್ಲಿ ಶುಕ್ರವಾರ ನಡೆದ ಸಮಾರೋಪ ಸಮಾರಂಭದಲ್ಲಿ ಪರೀಕ್ಷಾಂಗ ಕುಲಸಚಿವ ಪ್ರೊ.ಕೆ.ಎಂ. ಮಹದೇವನ್, ಸಿಂಡಿಕೇಟ್ ಸದಸ್ಯೆ ಡಾ. ಚೈತ್ರಾ ನಾರಾಯಣ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಬಹುಮಾನ ವಿತರಿಸಿದರು. ದೈಹಿಕ ಶಿಕ್ಷಣ ನಿರ್ದೇಶಕ ಡಾ.ಸಿ. ವೆಂಕಟೇಶ್, ಉಪ ನಿರ್ದೇಶಕ ಡಾ.ಪಿ. ಕೃಷ್ಣಯ್ಯ ಮತ್ತಿತರರು ಉಪಸ್ಥಿತರಿದ್ದರು.

ವಿವಿಧ ಕ್ರೀಡೆಗಳಲ್ಲಿ ಪ್ರಶಸ್ತಿ ಪಡೆದ ಕಾಲೇಜುಗಳ ಪಟ್ಟಿ: ಬ್ಯಾಡ್ಮಿಂಟನ್: ಸೇಪಿಯಂಟ್ ಮೈಸೂರು (ಪ್ರಥಮ), ಪಿಇಎಸ್ ವಿಜ್ಞಾನ ಹಾಗೂ ಕಲಾ ಮತ್ತು ವಾಣಿಜ್ಯ ಕಾಲೇಜು– ಮಂಡ್ಯ (ದ್ವಿತೀಯ), ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು– ಮೈಸೂರು (ತೃತೀಯ).

ಬಾಲ್ ಬ್ಯಾಡ್ಮಿಂಟನ್: ಮಹಾರಾಜ ಕಾಲೇಜು– ಮೈಸೂರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು– ಕೆ.ಆರ್. ನಗರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು– ನಂಜನಗೂಡು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು– ಭಾರತೀನಗರ

ಬ್ಯಾಸ್ಕೆಟ್ ಬಾಲ್: ಮೈಕಾ– ಮೈಸೂರು, ಮಹಾಜನ – ಮೈಸೂರು, ಪಿಇಎಸ್– ಮಂಡ್ಯ, ಸೆಂಟ್ ಜೋಸೆಫ್– ಹಾಸನ

ಚೆಸ್: ಮಹಾಜನ–ಮೈಸೂರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು– ನಂಜನಗೂಡು, ಯುವರಾಜ– ಮೈಸೂರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು– ಕೆ.ಆರ್. ನಗರ.

ಕ್ರಿಕೆಟ್: ಮಹಾರಾಜ–ಮೈಸೂರು, ಮಹಾಜನ–ಮೈಸೂರು, ಸರ್ಕಾರಿ ವಿಜ್ಞಾನ ಕಾಲೇಜು– ಹಾಸನ, ಪಿಇಎಸ್– ಮಂಡ್ಯ

ಫುಟ್‌ಬಾಲ್: ಸೆಂಟ್ ಫಿಲೋಮಿನಾ– ಮೈಸೂರು, ಪಿಇಎಸ್– ಮಂಡ್ಯ ಸೇಪಿಯಂಟ್, ದೇವರಾಜ ಅರಸ್ ಕಾಲೇಜು– ಹುಣಸೂರು.

ಹ್ಯಾಂಡ್‌ಬಾಲ್: ಸೆಂಟ್ ಜೋಸೆಫ್– ಪ್ರಥಮ ದರ್ಜೆ ಕಾಲೇಜು–ಮೈಸೂರು, ಯುವರಾಜ–ಮೈಸೂರು, ಸೆಂಟ್ ಜೋಸೆಫ್– ಹಾಸನ, ಎಚ್‌ಆರ್‌ಐಎಚ್‌ಇ–ಹಾಸನ.

ಕಬಡ್ಡಿ: ವಿದ್ಯಾವಿಕಾಸ್– ಮೈಸೂರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು–ಚನ್ನರಾಯಪಟ್ಟಣ, ಎಸ್‌ಎಫ್‌ಜಿಸಿ– ಚನ್ನರಾಯಪಟ್ಟಣ, ವಿಜಯ ಕಾಲೇಜು– ಪಾಂಡವಪುರ.

ಖೋಖೋ: ಸರ್ಕಾರಿ ಕಲಾ, ವಾಣಿಜ್ಯ ಮತ್ತು ಪಿಜಿ ಕಾಲೇಜು–ಹಾಸನ, ಮಹಾರಾಜ–ಮೈಸೂರು, ಜಿಎಫ್‌ಜಿಸಿ– ಕ್ಯಾತನಹಳ್ಳಿ, ವಿಶ್ವಕವಿ ಕುವೆಂಪು ಕಾಲೇಜು–ಮೈಸೂರು

ಟೇಬಲ್ ಟೆನ್ನಿಸ್: ಮಹಾಜನ–ಮೈಸೂರು, ಜಿಎಫ್‌ಜಿಸಿ–ಕೆ.ಆರ್. ನಗರ, ಪಿಇಎಸ್– ಮಂಡ್ಯ, ಜಿಎಫ್‌ಜಿಸಿ–ನಂಜನಗೂಡು

ಥ್ರೋಬಾಲ್: ಮಹಾರಾಜ–ಮೈಸೂರು, ಭಾರತೀ ಕಾಲೇಜು–ಭಾರತೀನಗರ, ಜಿಎಫ್‌ಜಿಸಿ– ಗುಂಡ್ಲುಪೇಟೆ, ಜಿಎಫ್‌ಜಿಸಿ– ನಂಜನಗೂಡು.

ವಾಲಿಬಾಲ್: ಪಿಜಿಎಸ್‌ಸಿ, ಎಂಜಿ– ಮೈಸೂರು, ಮಹಾಜನ– ಮೈಸೂರು, ಎಸ್‌ಎಫ್‌ಜಿಸಿ– ಚನ್ನರಾಯಪಟ್ಟಣ, ಎಚ್‌ಆರ್‌ಐಎಚ್‌ಇ– ಹಾಸನ.


ಹಾಕಿ: ಡಿಪೌಲ್– ಬೆಳಗೊಳ (ಪ್ರಥಮ), ಮೈಕಾ– ಮೈಸೂರು (ದ್ವಿತೀಯ).

ಟೆನಿಸ್: ಪಿಜಿಎಸ್‌ಸಿ ಎಂಜಿ–ಮೈಸೂರು (ಪ್ರಥಮ), ಸೆಂಟ್ ಜೋಸೆಫ್–ಹಾಸನ (ದ್ವಿತೀಯ), ಡಿಪೌಲ್– ಬೆಳಗೊಳ (ತೃತೀಯ).

ಸಾಫ್ಟ್‌ಬಾಲ್: ಮೈಕಾ– ಮೈಸೂರು (ಪ್ರಥಮ), ಮಹಾಜನ–ಮೈಸೂರು (ದ್ವಿತೀಯ), ಜೆಎಸ್‌ಎಸ್–ನಂಜನಗೂಡು (ತೃತೀಯ) ಸ್ಥಾನ ಪಡೆದವು.

ಮಣಿಪುರ ಘಟನೆಗೆ ಪೇಜಾವರ ಶ್ರೀಗಳ ವಿಷಾದ

ಶಾಂತಿ ಕಾಯ್ದುಕೊಳ್ಳಲು ಮನವಿ



ಮೈಸೂರು, ಜು. 21(ಎಸ್‌ಬಿಡಿ)– ಮಣಿಪುರ ರಾಜ್ಯದಲ್ಲಿನ ಹಿಂಸಾತ್ಮಕ ಬೆಳವಣಿಗೆಯಿಂದ ಮನಸ್ಸಿಗೆ ತುಂಬ ವಿಷಾದವಾಗಿದೆ. ಆಕ್ರೋಶದ ಕೈಗೆ ಬುದ್ಧಿಕೊಟ್ಟು ಅನರ್ಥಕ್ಕೆ ಅವಕಾಶ ಮಾಡಿಕೊಡುವುದು ಬೇಡ. ಅಲ್ಲಿನ ಜನತೆ ಸಂಯಮದಿಂದ ವರ್ತಿಸಿ ಶಾಂತಿ ಕಾಪಾಡಬೇಕು ಎಂದು ಮನವಿ ಮಾಡಿರುವ ಉಡುಪಿ ಶ್ರೀ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದರು, ಮಣಿಪುರದ ಒಳಿತಿಗಾಗಿ ಅವಶ್ಯವಿದ್ದರೆ ಯಾವುದೇ ಸಂಧಾನ ಮಾತುಕತೆಗೆ ಮಧ್ಯಸ್ಥಿಕೆ ವಹಿಸಲು ಸಿದ್ಧರಿದ್ದೇವೆ ಎಂದು ತಿಳಿಸಿದ್ದಾರೆ.

ಜಗತ್ತಿಗೇ ಅಹಿಂಸೆ, ಶಾಂತಿಯ ಮಂತ್ರವನ್ನು ಅತ್ಯಂತ ಪರಿಣಾಮಕಾರಿಯಾಗಿ ಬೋಧಿಸಿದ ದೇಶ ಭಾರತ. ನಮ್ಮ ದೇಶದ ಯಾವುದೇ ಭಾಗದಲ್ಲಿ ಇಂತಹ ವಿಲಕ್ಷಣ ಬೆಳವಣಿಗೆಗಳು ನಡೆಯಬಾರದು. ಅದು ಬದುಕು ಕೊಟ್ಟ ನೆಲಕ್ಕೆ ನಾವು ಮಾಡುವ ಅವಮಾನವಾಗುತ್ತದೆ. ಪ್ರಪಂಚದ ಸಮಗ್ರ ಇತಿಹಾಸವನ್ನು ಗಮನಿಸಿದರೆ ಹಿಂಸೆ, ಆಕ್ರಮಣ, ಅತ್ಯಾಚಾರದಂತಹ ದುಷ್ಕೃತ್ಯಗಳಿಂದ ಯಾರೂ ಏನನ್ನೂ ಸಾಧಿಸಿಲ್ಲ ಈ ಸಂದೇಶವನ್ನು ನಮ್ಮ ರಾಮಾಯಣ, ಮಹಾಭಾರತ ಸಾರಿ ಹೇಳಿವೆ. ಮಣಿಪುರದ ನೆಲದಲ್ಲಿ ಅನಾದಿ ಕಾಲದಿಂದ ಬದುಕುತ್ತಿರುವ ಎರಡು ಸಮುದಾಯಗಳ ನಡುವೆ ಯಾವುದೋ ಅಭಿಪ್ರಾಯ ಬೇಧಗಳಿಂದ ಹುಟ್ಟಿಕೊಂಡ ಈ ಗಲಭೆ, ದಂಗೆಗಳಿಂದ ಏನನ್ನು ಸಾಧಿಸಲು ಹೊರಟಿದ್ದೇವೆ? ನಮ್ಮ ಮುಂದಿನ ಪೀಳಿಗೆಗೆ ಯಾವ ಸಂದೇಶವನ್ನು ಕೊಡಲು ಹೊರಟಿದ್ದೇವೆ ಎನ್ನುವುದನ್ನು ಯೋಚಿಸಬೇಕು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.


ಭಗವದ್ಗೀತೆಯಲ್ಲಿ ಭಗವಾನ್ ಶ್ರೀ ಕೃಷ್ಣ, ಆಕ್ರೋಶದ ಕೈಗೆ ಬುದ್ಧಿಯನ್ನು ಕೊಟ್ಟರೆ ವಿನಾಶಕ್ಕೆ ಕಾರಣವಾಗುತ್ತದೆ ಎಂದು ಸಾರಿರುವುದನ್ನು ಗಮನಿಸಬೇಕು. ಆದ್ದರಿಂದ ಇಂಥಹ ವಿನಾಶಕಾರಿ ಬೆಳವಣಿಗೆಗಳು ಅವಶ್ಯವೇ ಎಂದು ಅತ್ಯಂತ ತಾಳ್ಮೆ ಸಹನೆಯಿಂದ ವಿವೇಚಿಸಬೇಕು. ಓರ್ವ ವ್ಯಕ್ತಿ ಅಥವಾ ಸಮುದಾಯದ ಮೇಲೆ ದಾಳಿ ಮಾಡಿ ಹಿಂಸಿಸಿ, ಸಾರ್ವಜನಿಕ ಸ್ವತ್ತನ್ನು ನಾಶಮಾಡಿ ಏನನ್ನೋ ಸಾಧಿಸಿದ್ದೇವೆ ಎಂದು ಹೆಮ್ಮೆ ಪಡಬಹುದು. ಆದರೆ ಆ ಹೆಮ್ಮೆ ಶಾಶ್ವತವೇ? ನೂರಕ್ಕೆ ನೂರು ಅಲ್ಲ. ಇದು ಮುಂದೆ ಮತ್ತಷ್ಟು ಅನರ್ಥಕಾರಿ ಬೆಳವಣಿಗೆಗಳಿಗೆ ದಾರಿಯಾದೀತು ಎಂದು ಎಚ್ಚರಿಕೆ ನೀಡಿದ್ದಾರೆ.

ಎರಡು ಸಮುದಾಯಗಳ ನಡುವಿನ ಜಗಳದ ಲಾಭವನ್ನು ಪಡೆಯಲು ಮತ್ಯಾರೋ ಹವಣಿಸಬಹುದು. ಮಣಿಪುರದ ಜನತೆ ತಕ್ಷಣ ಹಿಂಸೆಯ ಮಾರ್ಗವನ್ನು ಬಿಟ್ಟು ಪರಸ್ಪರ ಸಮಾಲೋಚಿಸಬೇಕು. ಮಣಿಪುರ ಮಾತ್ರವಲ್ಲ ಭಾರತದ ಭವ್ಯ ಭವಿಷ್ಯದ ದೃಷ್ಟಿಯಿಂದ ಕೂಡಲೇ ಭಿನ್ನಾಭಿಪ್ರಾಯ ಪರಿಹರಿಸಿಕೊಂಡು ಒಳ್ಳೆಯ ಸಂದೇಶ ನೀಡಬೇಕು. ಶಾಂತಿ, ಸುಭಿಕ್ಷೆ, ಪ್ರಗತಿಗೆ ಮಾರಕವಾಗಿರುವ ಇಂಥ ಅಹಿತಕರ ಬೆಳವಣಿಗೆಗಳಿಗೆ ಆಸ್ಪದ ಕೊಡುವುದಿಲ್ಲ ಎಂದು ಎಲ್ಲರೂ ಒಟ್ಟಾಗಿ ಶಪಥಮಾಡಬೇಕು. ನಮ್ಮ ಒಗ್ಗಟ್ಟು ನಮ್ಮ ಶಕ್ತಿ; ನಮ್ಮ ವಿಘಟನೆ ಮತ್ತೊಬ್ಬನ ಶಕ್ತಿಯಾಗುತ್ತದೆ ಎನ್ನುವುದನ್ನು ಅರಿತುಕೊಳ್ಳಬೇಕು. ಮಣಿಪುರ ರಾಜ್ಯದ ಒಳಿತಿಗಾಗಿ ಎಲ್ಲರೂ ಒಟ್ಟಾಗಿ ಹೆಜ್ಜೆ ಹಾಕಬೇಕು ಎಂದು ಆಶಿಸಿದ್ದಾರೆ.

ನಮ್ಮ ಪ್ರೀತಿಯ ಮಣಿಪುರ ರಾಜ್ಯದ ಜನತೆಗೆ ಸಪ್ರೇಮ ನಾರಾಯಣ ಸ್ಮರಣೆಗಳು. ಓಂ ಶಾಂತಿಃ ಶಾಂತಿಃ ಶಾಂತಿಃ ಇತ್ಯನೇಕನಾರಾಯಣ ಸ್ಮರಣೆಗಳು ಎಂದು ಶ್ರೀಗಳು ತಿಳಿಸಿದ್ದಾರೆ.

ಜ್ಞಾನವ್ಯಾಪಿ ಆವರಣದಲ್ಲಿ ವೈಜ್ಞಾನಿಕ ಸಮೀಕ್ಷೆಗೆ ವಾರಣಾಸಿ ಕೋರ್ಟ್ ಆದೇಶ

ಆಗಸ್ಟ್ 4ರ ಡೆಡ್‌ಲೈನ್



ವಾರಣಾಸಿ, ಜು.21– ತೀವ್ರ ವಿವಾದಕ್ಕೆ ಕಾರಣವಾಗಿದ್ದ ಜ್ಞಾನವ್ಯಾಪಿ ದೇಗುಲ ಪ್ರಕರಣಕ್ಕೆ ಸಂಬಂಧಿಸಿದಂತೆ ವಾರಣಾಸಿ ಕೋರ್ಟ್ ಮಹತ್ವದ ಆದೇಶ ನೀಡಿದ್ದು, ಜ್ಞಾನವ್ಯಾಪಿ ಆವರಣದಲ್ಲಿ ವೈಜ್ಞಾನಿಕ ಸಮೀಕ್ಷೆಗೆ ಆದೇಶ ನೀಡಿದೆ.

ಉತ್ತರ ಪ್ರದೇಶದ ವಾರಾಣಸಿಯಲ್ಲಿರುವ ಜ್ಞಾನವಾಪಿ ಮಸೀದಿ ಆವರಣದ ವೈಜ್ಞಾನಿಕ ಸಮೀಕ್ಷೆಗೆ ವಾರಣಾಸಿ ಕೋರ್ಟ್ ಶುಕ್ರವಾರ ಅನುಮತಿ ನೀಡಿದ್ದು, ಆರ್ಕಿಯಾಲಾಜಿಕಲ್ ಸರ್ವೆ ಆಫ್ ಇಂಡಿಯಾ ಸಮೀಕ್ಷೆ ನಡೆಸಿ ಅಂತಿಮ ವರದಿಯನ್ನು ಆಗಸ್ಟ್ 4 ರೊಳಗೆ ಸಲ್ಲಿಸಬೇಕು ಎಂದು ನ್ಯಾಯಾಲಯ ಹೇಳಿದೆ.

ಬ್ಯಾರಿಕೇಡ್ ಹಾಕಿರುವ 'ವಜೂಖಾನಾ' ಹೊರತುಪಡಿಸಿ, ಹಿಂದೂ ದಾವೆಗಳು 'ಶಿವಲಿಂಗ' ಎಂದು ಹೇಳಿಕೊಳ್ಳುವ ರಚನೆಯು ಅಸ್ತಿತ್ವದಲ್ಲಿದೆ, ಇದು ಸಮೀಕ್ಷೆಯ ಭಾಗವಾಗಿರುವುದಿಲ್ಲ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ. ಈ ಆದೇಶವನ್ನು ಉನ್ನತ ನ್ಯಾಯಾಲಯಗಳಲ್ಲಿ ಪ್ರಶ್ನಿಸುವ ಸಾಧ್ಯತೆ ಇದೆ. 'ವಜೂಖಾನಾ' ಪ್ರದೇಶವನ್ನು ಸೀಲಿಂಗ್ ಮಾಡುವಂತೆ ಸುಪ್ರೀಂ ಕೋರ್ಟ್ ಈ ಹಿಂದೆ ಸೂಚಿಸಿತ್ತು.

ಜ್ಞಾನ, ಪ್ರತಿಭೆಯಿದ್ದರೆ ಯಾವ ಉನ್ನತ ಸ್ಥಾನವನ್ನೂ ಪಡೆಯಬಹುದು

ನಿವೃತ್ತ ಪ್ರಾಧ್ಯಾಪಕ ಡಾ.ಕೃಷ್ಣೇಗೌಡ ಕಿವಿಮಾತು



ಮೈಸೂರು, ಜು.21(ಎಸ್‌ಬಿಡಿ)– ಹಣ, ಶಿಫಾರಸ್ಸು ಇಲ್ಲದೆಯೇ ಸಾಕಷ್ಟು ಯುವಕರು ತಮ್ಮ ಜ್ಞಾನದಿಂದಲೇ ದೊಡ್ಡ ಸಾಧನೆ ಮಾಡಿದ್ದಾರೆ ಎಂದು ನಿವೃತ್ತ ಪ್ರಾಧ್ಯಾಪಕ, ಸಾಹಿತಿ ಪ್ರೊ.ಎಂ.ಕೃಷ್ಣೇಗೌಡ ಹೇಳಿದರು.

ಮೈಸೂರಿನ ಜ್ಞಾನಬುತ್ತಿ ಸಂಸ್ಥೆಯಲ್ಲಿ ನಡೆದ ಎಫ್‌ಡಿಎ, ಎಸ್‌ಡಿಎ ಹಾಗೂ ಪಿಸಿ ಪರೀಕ್ಷಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಹಣ, ಶಿಪಾರಸ್ಸಿನ ಪ್ರಭಾವದ ನಡುವೆಯೂ ಜ್ಞಾನದ ಮೂಲಕ ಉನ್ನತ ಹುದ್ದೆ ಪಡೆಯಬಹುದು ಎಂದು ಶಿಬಿರಾರ್ಥಿಗಳ ಆತ್ಮವಿಶ್ವಾಸ ಹೆಚ್ಚಿಸಿದರು.

ಹಿಂದೆ ರಾಜಕಾರಣಿಗಳು ಮತ್ತು ಅಧಿಕಾರಿಗಳ ಶಿಫಾರಸ್ಸು ಅಥವಾ ಹಣಬಲದಿಂದ ಉದ್ಯೋಗ ಪಡೆಯುತ್ತಿದ್ದರು. ಆದರೆ ಈಗಿನದ್ದು ಜ್ಞಾನಧಾರಿತ ಪ್ರಪಂಚ. ಹಣ, ಶಿಫಾರಸ್ಸು ಇಲ್ಲದ ಬಡ ಯುವಜನರು ತಮ್ಮ ಜ್ಞಾನದಿಂದಲೇ ಪವಾಡ ಸೃಷ್ಟಿಸಿದ್ದಾರೆ. ಇಂತಹ ನಿದರ್ಶನಗಳ ಬಗ್ಗೆ ತಿಳಿದುಕೊಂಡು ನಿರಂತರ ಅಧ್ಯಯನದಲ್ಲಿ ತೊಡಗಬೇಕು. ಆಗ ನಿಮ್ಮಿಷ್ಟದ ಹುದ್ದೆ ಪಡೆಯಬಹುದು ಎಂದು ಕಿವಿಮಾತು ಹೇಳಿದರು.

ಮೈಸೂರು ಆಡಳಿತ ತರಬೇತಿ ಸಂಸ್ಥೆಯ ಜಂಟಿ ನಿರ್ದೇಶಕ ಡಾ.ಬಿ.ಸಿ.ಸತೀಶ್ ಮಾತನಾಡಿ, ಅವಕಾಶಗಳ ಬಾಗಿಲು ಪದೇ ಪದೆ ತೆರೆಯುವುದಿಲ್ಲ. ಹಾಗಾಗಿ ಜೀವನದಲ್ಲಿ ಯಾವ ಅವಕಾಶವನ್ನೂ ಕಳೆದುಕೊಳ್ಳಬಾರದು. ಅದರ ಬೆನ್ನು ಬಿಡದೆ ಸಾಧನೆ ಮಾಡಬೇಕು. ತಮ್ಮನ್ನು ಬೇರೆಯವರೊಂದಿಗೆ ಹೋಲಿಕೆ ಮಾಡಿಕೊಂಡು ಕೊರಗುವುದು ನಿರರ್ಥಕ. ನಿಮ್ಮ ಬಗ್ಗೆ ವಿಶ್ವಾಸ ಕಳೆದುಕೊಳ್ಳದೆ ಗುರಿ ಸಾಧನೆಗೆ ಪ್ರಯತ್ನ ಮುಂದುವರೆಸಬೇಕು ಎಂದು ಸಲಹೆ ನೀಡಿದರು.

ಅಧ್ಯಯನ ಪುಸ್ತಕ ಬಿಡುಗಡೆ ಮಾಡಿದ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ ವಿ.ಆರ್.ಶೈಲಜ ಮಾತನಾಡಿ, ದೃಢ ಸಂಕಲ್ಪ ಮಾಡಿದರೆ ಜಗತ್ತಿನಲ್ಲಿ ಯಾವುದೂ ಅಸಾಧ್ಯವಲ್ಲ. ಕಾಣದ ಅದೃಷ್ಟವನ್ನು ನೆಚ್ಚಿಕೊಳ್ಳದೆ ತಮ್ಮ ಪರಿಶ್ರಮದ ಬಗ್ಗೆ ನಂಬಿಕೆ ಇಡಬೇಕು. ಆಗ ಮಾತ್ರ ಅದ್ಭುತಗಳನ್ನು ಸೃಷ್ಟಿಸಲು ಸಾಧ್ಯ ನಾನು ಕೂಡ ನಿಮ್ಮಂತೆ ಜ್ಞಾನಬುತ್ತಿ ಸಂಸ್ಥೆಯ ವಿದ್ಯಾರ್ಥಿನಿಯಾಗಿದ್ದೆ. ಇಲ್ಲಿ ದೊರೆತ ಮಾರ್ಗದರ್ಶನ, ವಿಷಯ ಜ್ಞಾನದಿಂದ ನಿರಂತರ ಅಧ್ಯಯನ ಸಾಧ್ಯವಾಯಿತು ಎಂದು ಸಂಸ್ಥೆಗೆ ಕೃತಜ್ಞತೆ ಸಲ್ಲಿಸಿದರು.

ಇಂದಿನ ಜ್ಞಾನಯುಗದಲ್ಲಿ ದಡ್ಡನಿಗೆ ಯಾವುದೇ ಬೆಲೆಯಿಲ್ಲ. ಈಗ ಅವಕಾಶಗಳು ಜಾಣನ ಮನೆ ಬಾಗಿಲಿಗೆ ಬಂದು ನಿಲ್ಲುತ್ತವೆ. ಹಿಂದಿನ ಕಾಲದಲ್ಲಿ ತಾಯಿ ತನ್ನ ಮೂವರು ಮಕ್ಕಳಲ್ಲಿ ದಡ್ಡನಾದವನ ಪರವಾಗಿ ನಿಂತು, ಆತನನ್ನು ಬುದ್ಧಿವಂತನನ್ನಾಗಿ ಮಾಡುವ ಛಲದಿಂದ ಶ್ರಮಿಸುತ್ತಿದ್ದಳು. ಆದರೆ ಪ್ರಸ್ತುತ ಜ್ಞಾನಾಧಾರಿತ ಸ್ಪರ್ಧಾತ್ಮಕ ಪ್ರಪಂಚದಲ್ಲಿ ತಾಯ್ತನವೂ ಮರೆಯಾಗುತ್ತಿದೆ. ಸೋತವರನ್ನು ಸಂತೈಸಿ, ಆತ್ಮಸ್ಥೈರ್ಯ ತುಂಬುವ ಮೂಲಕ ಮುಂದಿನ ಹೋರಾಟಕ್ಕೆ ಸಜ್ಜುಗೊಳಿಸುವ ಮನಸ್ಸುಗಳು ಕಡಿಮೆಯಾಗುತ್ತಿವೆ.

-ಪ್ರೊ.ಎಂ.ಕೃಷ್ಣೇಗೌಡ ನಿವೃತ್ತ ಪ್ರಾಧ್ಯಾಪಕ

ಸಮಾರಂಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಡಾ.ಈ.ಶಿವಪ್ರಸಾದ್, ಪ್ರೊ.ವಿ.ಜಯಪ್ರಕಾಶ್, ಡಾ.ಉಮೇಶ್ ಬೇವಿನಹಳ್ಳಿ, ಹೇಮಚಂದ್ರ ಎಸ್.ಗಣೇಶ, ರೋಹನ್ ರವಿಕುಮಾರ್, ಯು.ಎಂ.ಶರದ್ ರಾವ್, ಕೆ.ವಿಜಯ್ ಕುಮಾರ್, ಎಚ್.ಎಂ.ಸ್ಫೂರ್ತಿ ರಾಜ್, ಕೆ.ವೈ.ನಾಗೇಂದ್ರ, ಸಂಸ್ಥೆಯ ಎಚ್.ಬಾಲಕೃಷ್ಣ, ಪ್ರೊ.ಕೃ.ಪ.ಗಣೇಶ ಹಾಗೂ ಜೈನಹಳ್ಳಿ ಸತ್ಯನಾರಾಯಣಗೌಡರು ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ಗಂಡ : ತಗೋ... ಚಿನ್ನದ ನೆಕ್ಲೆಸ್ ತಂದಿದ್ದೀನಿ... ಖುಷಿನಾ...?
ಹೆಂಡತಿ : ಅಯ್ಯೋ... ನಾನ್ ಕಾರ್ ತರ್ತೀರಿ ಅಂದ್ಕೊಂಡಿದ್ದೆ!
ಗಂಡ : ಅಯ್ಯೋ ಹುಚ್ಚಿ... ಕಾರು ಡೂಪ್ಲಿಕೇಟ್ ಸಿಗಲ್ಲ ಕಣೇ...!

ಮೈಸೂರು ಮಿತ್ರ

ಶನಿವಾರ, 22 ಜುಲೈ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಶ್ರೀಮಂತಿಕೆಯ ಸ್ವಾರ್ಥ ಎಂತಹದ್ದೆಂದರೆ ನಾವು ಹೆಚ್ಚು ಹೆಚ್ಚು ಸಂಪಾದಿಸುವುದಷ್ಟೇ ಅಲ್ಲ, ಇತರರು ಕಡಿಮೆ ಉಳ್ಳವರಾಗಿರುವಂತೆಯೂ ಯತ್ನಿಸುವುದು. –ಜಾನ್‌ರಸ್ಕಿನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕಾಸಿದ್ದಾಗ ಹಬ್ಬ ಮಾಡು

ನಿಮ್ಮ ಪತ್ರಗಳು

ಡಾ. ಸುಧಾಮೂರ್ತಿಯವರಿಗೆ ಅಭಿನಂದನೆಗಳು

ಮಾನ್ಯರೇ,

ಕೇಂದ್ರ ಸಾಹಿತ್ಯ ಅಕಾಡೆಮಿಯು ಡಾ.ಸುಧಾಮೂರ್ತಿ, ವಿಜಯಶ್ರೀ ಹಾಲಾಡಿ ಮತ್ತು ಮಂಜು ನಾಯಕ್ ಅವರಿಗೆ ಯುವ ಪುರಸ್ಕಾರ ಪ್ರಶಸ್ತಿ ನೀಡಿದೆ. ಇದು ಕನ್ನಡಿಗರಿಗೆ ಸಂತಸ ಹಾಗೂ ಹೆಮ್ಮೆ ತಂದಿದೆ. ಪುರಸ್ಕೃತರಿಗೆ ಅಭಿನಂದನೆಗಳು.

ಡಾ. ಸುಧಾಮೂರ್ತಿಯವರು ಕನ್ನಡಿಗರಿಗೆ ಮಾತ್ರವಲ್ಲದೆ ವಿಶ್ವಕ್ಕೆ ಚಿರ ಪರಿಚಿತರು. ಇನ್ಫೋಸಿಸ್ ಫೌಂಡೇಷನ್ಸ್ ನ ಮುಖ್ಯಸ್ಥೆ, ಲೇಖಕಿ ಹಾಗೂ ಸಮಾಜ ಸೇವಕಿ. ಅವರ ಜನಪರ ಕಾಳಜಿ, ಉನ್ನತ ಸಮಾಜ ಸೇವೆಗಳಿಂದ ಎಲ್ಲರಿಗೂ ಅಚ್ಚುಮೆಚ್ಚಿನ ಸ್ತ್ರೀ ಚೇತನವಾಗಿದ್ದಾರೆ. ಅನೇಕ ಕಥೆ, ಕಾದಂಬರಿ, ಲೇಖನಗಳು, ವ್ಯಕ್ತಿತ್ವ ವಿಕಸನ ಬರಹಗಳಿಂದ ಸಾಹಿತ್ಯ ಕ್ಷೇತ್ರಕ್ಕೆ ತಮ್ಮದೇ ಆದ ಉನ್ನತ ಕೊಡುಗೆ ನೀಡಿದ್ದಾರೆ. ಅವರು ಬರೆದಿರುವ "ಗ್ರಾಂಡ್ ಪರೆಂಟ್ಸ್ ಬ್ಯಾಗ್ ಆಫ್ ಸ್ಟೋರಿಸ್" ಕೃತಿಗೆ ಕೇಂದ್ರ ಬಾಲ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ದೊರೆತಿರುವುದು ಬಹಳ ಸಂತೋಷದ ವಿಚಾರ.

ಇತ್ತೀಚೆಗೆ ಮಕ್ಕಳ ಸಾಹಿತ್ಯದಲ್ಲಿ ಒಲವಿರುವವರು ಬಹಳ ಕಡಿಮೆ, ಮಕ್ಕಳಿಗೂ ಕೂಡ ಆಂಗ್ಲ ಭಾಷೆಯ ವ್ಯಾಮೋಹ ಹೆಚ್ಚು. ಸಾಹಿತ್ಯದ ಕಡೆಗೆ ಆಸಕ್ತಿ ತೀರ ಕಡಿಮೆ. ಅಜ್ಜಿಯ ಕಥೆಗಳನ್ನು ಕೇಳುವ ವ್ಯವಧಾನ ಸಮಯ ಎರಡೂ ಇಲ್ಲ. ಹೊಸ ಮಾದರಿಯ ಕಥೆಗಳು ನವೀನ ಮಾದರಿಯಲ್ಲಿ ಆಕರ್ಷಿತವಾಗಿ ಮಕ್ಕಳ ಸಾಹಿತ್ಯದ ಪುಸ್ತಕ ಗಳು ಹೆಚ್ಚು ಪ್ರಕಟಗೊಂಡರೆ, ಮಕ್ಕಳಲ್ಲೂ ಓದುವ, ಬರೆಯುವ ಹವ್ಯಾಸ ವೃದ್ಧಿಯಾಗಬಹುದು, ಎಂಬ ಸದಾಶಯ.

–ಪುಷ್ಪಲತಾ ಫಣಿರಾಜ್, ಅಗ್ರಹಾರ ಮೈಸೂರು.

ಬಾಲ ಕಿತ್ತು ಬಾಯಿಗೆ ಇಟ್ಟಂತಾಗಿದೆ ರೈತರ ಸ್ಥಿತಿ

ಮಾನ್ಯರೆ,

ರಾಜ್ಯಾದ್ಯಂತ ಮುಂಗಾರು ಮಳೆ ವಿಳಂಬವಾಗಿದ್ದು, ಜಲಾಶಯ ತುಂಬದೆ ಕಾಲುವೆಗಳಿಗೆ ನೀರು ಹರಿಯದೆ ರೈತರು ಕಂಗಾಲಾಗಿದ್ದಾರೆ. ರೈತರ ಆತ್ಮಹತ್ಯೆಗಳು ನಡೆಯುತ್ತಿವೆ. ಈ ಸಮಯದಲ್ಲಿ ರೈತರ ಕೈ ಹಿಡಿಯಬೇಕಿದ್ದ ಸರ್ಕಾರ ಕಿಸಾನ್ ಸಮ್ಮಾನ್ ಯೋಜನೆ (4000 ರೂ.) ನಿಲ್ಲಿಸುವ ಮೂಲಕ ರೈತರಿಗೆ ಕೈಕೊಟ್ಟಿದೆ. ಬೇರೆ ಗ್ಯಾರಂಟಿ ಈಡೇರಿಸಲು ಇದನ್ನು ಯಾವುದೋ ಕಾರಣ ಹೇಳಿ ನಿಲ್ಲಿಸಲಾಗಿದೆ. ಇದು, ಹೇಗೆಂದರೆ ಬಾಲ ಕಿತ್ತು ಬಾಯಿಗೆ ಇಟ್ಟಂತಾಗಿದೆ. ರೈತ ನಾಯಕರೆನಿಸಿಕೊಂಡವರು, ಪ್ರಗತಿಪರ ಚಿಂತಕರು, ಪ್ರತಿಪಕ್ಷದವರ ಸದ್ದು ಎಲ್ಲಿ ಹೋಯಿತೋ ಗೊತ್ತಿಲ್ಲ. ಇನ್ನಾದರೂ ರೈತರು ಬುದ್ಧಿ ಕಲಿಯಬೇಕಿದೆ.

–ಸಂತೋಷ, ಮೈಸೂರು

ಸದನದ ಅಮೂಲ್ಯ ಸಮಯ ವ್ಯರ್ಥ ಮಾಡಬೇಡಿ

ಮಾನ್ಯರೆ,

ಇತ್ತೀಚೆಗೆ ಕರ್ನಾಟಕದ ವಿಧಾನಸಭೆಯ ಅಧಿವೇಶನದ ಸಂದರ್ಭದಲ್ಲಿ ವಿರೋಧ ಪಕ್ಷದ ಧರಣಿ ನಡುವೆಯೇ ಮಸೂದೆಗಳನ್ನು ಪಾಸ್ ಮಾಡಿದ್ದನ್ನು ವಿರೋಧಿಸಿ ಬಿಜೆಪಿ ಶಾಸಕರು ಕಾಗದ ಪತ್ರಗಳನ್ನು ಹರಿದು ಎಸೆಯುವುದರ ಮೂಲಕ ಸ್ಪೀಕರ್ ಸ್ಥಾನಕ್ಕೆ ಅಗೌರವವನ್ನು ತೋರಿಸಿರುವುದು ಶಾಸಕರಿಗೆ ಶೋಭೆ ತರುವಂತದ್ದಲ್ಲ. ಈ ನಡೆ ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ. ಅಧಿವೇಶನ ನಡೆಯುವುದು ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದಂತೆ ಚರ್ಚಿಸುವುದಕ್ಕೆ ಎಂಬುದನ್ನು ಜನಪ್ರತಿನಿಧಿಗಳೇ ಮರೆತಿದ್ದಾರೆ. ಅಧಿವೇಶನದ ಅಮೂಲ್ಯವಾದ ಸಮಯವನ್ನು ಅನಗತ್ಯ ಚಟಾಪಟಿ, ವೈಯಕ್ತಿಕ ದೋಷಾರೋಪಣೆ ಮಾಡುವುದರ ಮೂಲಕವೇ ವ್ಯರ್ಥ ಮಾಡುವುದು ಇಂದಿನ ಜನಪ್ರತಿನಿಧಿಗಳ ಕಾಯಕವಾಗಿಬಿಟ್ಟಿದೆ. ವಿಧಾನಸಭೆ ಕಲಾಪಗಳನ್ನು ಮಾಧ್ಯಮಗಳ ಮೂಲಕ ವೀಕ್ಷಿಸುವ ಸಾರ್ವಜನಿಕರು ಎಂತಹ ಚರಿತ್ರೆವುಳ್ಳ ಶಾಸಕರನ್ನು ಆಯ್ಕೆ ಮಾಡಿ ಕಳಿಸಿದ್ದೇವೆ ಎಂದು ಥೂ...ಛೀ... ಎಂದು ತೆಗಳುತ್ತಿದ್ದಾರೆ.

ವಿಧಾನಸಭೆ ಕಲಾಪದಲ್ಲಿ ಉಪಸ್ಥಿತಿ ಇರುವಾಗ ಶಾಸಕರು ಹೇಗಿರಬೇಕೆಂದು ಸ್ಪಷ್ಟವಾದ ನಿಯಮಗಳಿವೆ. ಅದನ್ನು ಎಲ್ಲಾ ಶಾಸಕರು ಕಟ್ಟುನಿಟ್ಟಾಗಿ ಶಿಸ್ತಿನಿಂದ ಪಾಲಿಸಿ ಸದನದ ಗೌರವವನ್ನು ಕಾಪಾಡಬೇಕು. ಅಧಿವೇಶನಕ್ಕಾಗಿ ಕೋಟ್ಯಾಂತರ ರೂಪಾಯಿಗಳನ್ನು ವ್ಯಯ ಮಾಡಲಾಗುತ್ತದೆ. ಸುಮ್ಮನೆ ಕಾಲಹರಣ ಮಾಡುತ್ತಾ ಸಾರ್ವಜನಿಕರ ತೆರಿಗೆ ಹಣ ಪೋಲಾಗುವುದು ಬೇಡ. ಈ ರೀತಿ ಸದನಕ್ಕೆ ಆಡಳಿತ ಮತ್ತು ವಿರೋಧ ಪಕ್ಷಗಳ ಯಾವುದೇ ಸದಸ್ಯರು ಅಗೌರವದಿಂದ ವರ್ತಿಸುವುದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಶೋಭೆ ತರುವಂತದ್ದಲ್ಲ. ಇನ್ನಾದರೂ ಎಚ್ಚೆತ್ತುಕೊಂಡು ಜನಪ್ರತಿನಿಧಿಗಳು ಶಿಸ್ತಿನಿಂದ ಅಧಿವೇಶನದಲ್ಲಿ ಪಾಲ್ಗೊಂಡು ಜನರ ಸಮಸ್ಯೆಗಳನ್ನು ಚರ್ಚಿಸಿ, ಸೂಕ್ತ ನಿರ್ಧಾರಗಳನ್ನು ಕೈಗೊಂಡು ಇನ್ನಿತರ ಶಾಸಕರಿಗೆ ಮಾದರಿ ಮತ್ತು ಸ್ಫೂರ್ತಿಯಾಗಿ ಭಾಗವಹಿಸಿ ಎಂಬುದೇ ನನ್ನ ಕಳಕಳಿಯ ಮನವಿ.

–ಪರಶಿವಮೂರ್ತಿ ಎನ್.ಪಿ, ನಂಜೇಪುರ, ಸರಗೂರು ತಾ.

ರಸ್ತೆಯಲ್ಲಿರುವ ಕಲ್ಲುಗಳನ್ನು ತೆರವುಗೊಳಿಸಿ

ಮಾನ್ಯರೆ,

ಮೈಸೂರಿನ ವಿವಿಧ ಪ್ರಮುಖ ರಸ್ತೆಗಳಲ್ಲಿ ಫುಟ್‌ಪಾತ್ ಒತ್ತುವರಿ ಮಾಡಿಕೊಂಡು ವ್ಯಾಪಾರ ಮಾಡುವವರನ್ನು ತೆರವುಗೊಳಿಸಲು ನಗರ ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ತೀರ್ಮಾನಿಸಿರುವುದು ಸ್ವಾಗತಾರ್ಹ.

ಮೈಸೂರು ನಗರದ ಡಾ. ಅಂಬೇಡ್ಕರ್ ಮುಖ್ಯ ರಸ್ತೆ ಆರ್‌ಟಿಓ ಆಫೀಸ್ ಪಕ್ಕದ ರಸ್ತೆಯಲ್ಲಿ ಕಲ್ಲುಗಳನ್ನು ಹಾಕಿರುತ್ತಾರೆ. ಈ ಮಾರ್ಗದಲ್ಲಿ ವಾಹನ ಸಂಚಾರ ದಟ್ಟವಾಗಿದ್ದು, ಪಕ್ಕದಲ್ಲಿ ಶಾಲಾ–ಕಾಲೇಜು, ಕಚೇರಿಗಳಿದ್ದು, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ಬೆಳಗ್ಗೆ ಮತ್ತು ರಾತ್ರಿ ಸಮಯದಲ್ಲಿ ಓಡಾಡುವುದಕ್ಕೆ ಮತ್ತು ಸಂಚಾರಕ್ಕೆ ಅಡ್ಡಿಯಾಗಿದೆ. ಅಪಘಾತಗಳು ಸಂಭವಿಸುವ ಮುನ್ನ ಸಂಬಂಧಪಟ್ಟ ಪಾಲಿಕೆ ಅಧಿಕಾರಿಗಳು ರಸ್ತೆಯಲ್ಲಿರುವ ಕಲ್ಲುಗಳನ್ನು ತೆರವುಗೊಳಿಸಲು ಮನವಿ.

–ಎಂ. ರವೀಂದ್ರ ರಾಜಣ್ಣ, ಅಶೋಕಪುರಂ, ಮೈಸೂರು.

ಅಂಬೇಡ್ಕರ್ ಭವನ ಶೀಘ್ರ ಪೂರ್ಣಗೊಳ್ಳಲಿ

ಮಾನ್ಯರೆ,

ಮೈಸೂರಿನಲ್ಲಿ ನಿರ್ಮಾಣವಾಗುತ್ತಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದೆ. ಸರ್ಕಾರಗಳು ಕೆಲಸಕ್ಕೆ ಬಾರದೆ ಇರುವ ಅಭಿವೃದ್ಧಿಗಳಿಗೆ ಹಣವನ್ನು ಪೋಲು ಮಾಡುತ್ತಿದೆ. ಜನರಿಗೆ ಉಪಯುಕ್ತವಾಗಿರುವ ಸಾರ್ವಜನಿಕ ಆಸ್ಪತ್ರೆ, ಗ್ರಂಥಾಲಯಗಳು, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಉಪಯೋಗಿಸಿದಲ್ಲಿ ಮಹಾನ್ ವ್ಯಕಿಗಳಿಗೆ ಗೌರವ ಕೊಟ್ಟಂತಾಗುತ್ತದೆ. ಕೂಡಲೇ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕರ ಉಪಯೋಗಕ್ಕೆ ಅನುವು ಮಾಡಿಕೊಡಬೇಕೆಂದು ಜಿಲ್ಲಾಡಳಿತ, ಜನಪ್ರತಿನಿಧಿಗಳಲ್ಲಿ ಮನವಿ.

–ಮಣಿಕಂಠ, ಚೆಟ್ಟಿಹುಂಡಿ, ಮೈಸೂರು.



ಕಾರ್ಕಳ ಆನಂದ ಭಟ್
ಮೊ : 7676554198
ಫ್ಲಾಟ್ ನಂ.204, ಮೂರನೇ ಮಹಡಿ,
ಕಾರ್ಕಳ– 574 104, ಉಡುಪಿ ಜಿಲ್ಲೆ

ದಿಕ್ಕುದೆಸೆ

ಭಾರತದಲ್ಲಿ ಬಡತನ ದಿನೇ ದಿನೆ ನಶಿಸುತ್ತಿದೆ...!

ಬಡತನದಲ್ಲಿ ವಾಸಿಸುವ ಜನರು ಅಥವಾ ಪರಿವಾರಗಳು ಸಮರ್ಪಕವಾದ ವಸತಿ, ಶುದ್ಧ ನೀರು, ಪೌಷ್ಟಿಕ ಆಹಾರದ ಕೊರತೆ, ವೈದ್ಯಕೀಯ ಚಿಕಿತ್ಸಾ ವೆಚ್ಚ ಭರಿಸಲಾಗದ ಸ್ಥಿತಿಯಲ್ಲಿದ್ದರೆ ಅದನ್ನು ಬಡತನವೆಂದು ವ್ಯಾಖ್ಯಾನಿಸುತ್ತಾರೆ. ಸರಳವಾಗಿ ಹೇಳುವದಾದರೆ ವ್ಯಕ್ತಿ ಅಥವಾ ಪರಿವಾರಗಳಿಗೆ ತಮ್ಮ ಸ್ವಸಾಮರ್ಥ್ಯದಲ್ಲಿ ಮೂಲಭೂತ ಅವಶ್ಯಕತೆಗಳನ್ನು ಪಡೆಯಲಾಗದ ಸ್ಥಿತಿಯನ್ನು ಬಡತನವೆಂದು ಕರೆಯಬಹುದು. ಪ್ರತಿಯೊಂದು ದೇಶವು ಬಡತನದ ರೇಖೆಯನ್ನು (ಮಟ್ಟವನ್ನು) ನಿರ್ಧರಿಸಲು ತಮ್ಮದೇ ಆದ ಮಾನದಂಡಗಳನ್ನು ಹೊಂದಿವೆ. ಬಡತನವು ಒಂದು ಸಾಮಾಜಿಕ, ಆರ್ಥಿಕ ಸ್ಥಿತಿಯಾಗಿದ್ದು ಕೇವಲ ಆದಾಯ ಮಾತ್ರವಲ್ಲ ಬಹು ಅಂಶಗಳ ಪರಿಣಾಮವಾಗಿದೆ.

ಕೇವಲ ಹದಿನೈದು ವರ್ಷಗಳ (2005–06 ರಿಂದ 2019–21) ಅವಧಿಯಲ್ಲಿ 415 ಮಿಲಿಯನ್ (41.5 ಕೋಟಿ) ಭಾರತೀಯರು ಬಡತನದ ರೇಖೆಯಿಂದ ಮೇಲಕ್ಕೆ ಬಂದಿದ್ದಾರೆಂದು ವಿಶ್ವಸಂಸ್ಥೆ ಕಳೆದ ಮಂಗಳವಾರದಂದು (ದಿ. 11.7.23) ಮಾಹಿತಿ ನೀಡಿತು. ವಿಶ್ವದ ಅತ್ಯಂತ ಜನನಿಬಿಡ ದೇಶವಾದ ಭಾರತದಲ್ಲಿ ಮಾನವ ಅಭಿವೃದ್ಧಿ ಮಾನದಂಡದಲ್ಲಿ ಗಮನಾರ್ಹ ಸಾಧನೆ ಎಂದು ತಿಳಿಸಿದೆ. ವಿಶ್ವಸಂಸ್ಥೆಯ ಅಭಿವೃದ್ಧಿ ಕಾರ್ಯಕ್ರಮ (ಯುಎನ್‌ಡಿಪಿ) ಮತ್ತು ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲಯದ ಬಡತನ ಮತ್ತು ಮಾನವ ಅಭಿವೃದ್ಧಿ ಉಪಕ್ರಮ (ಒಪಿಎಚ್‌ಐ) ನಡೆಸಿದ ಬಹು ಆಯಾಮಿಯ ಬಡತನ ಸೂಚ್ಯಂಕ (ಎಂಪಿಐ) ಜಂಟಿ ಅಧ್ಯಯನ ವರದಿಯಲ್ಲಿ ಬಹಿರಂಗಗೊಂಡಿದೆ ವರದಿಯ ಪ್ರಕಾರ 2005–06ರಲ್ಲಿ ದೇಶದಲ್ಲಿ 64.5 ಕೋಟಿ ಜನರು ಬಹು ಆಯಾಮಗಳ ಬಡತನದ ಸಮಸ್ಯೆಯಿಂದ ಬಳಲುತ್ತಿದ್ದರು. 2015–16ರಲ್ಲಿ ಈ ಪ್ರಮಾಣ 37 ಕೋಟಿಗಿಳಿಯಿತು. 2019–21 ರಲ್ಲಿ ಈ ಸಂಖ್ಯೆ 23 ಕೋಟಿಗೆ ಇಳಿದಿದೆ. 2005ರ ಏಪ್ರಿಲ್‌ನಿಂದ 2020ರ ಮಾರ್ಚ್ ಅವಧಿಯಲ್ಲಿ 41.5 ಕೋಟಿ ಭಾರತೀಯರು ಬಡತನದ ರೇಖೆಯಿಂದ ಮೇಲಕ್ಕೆ ಬಂದಿದ್ದಾರೆ. 2005–06ರಲ್ಲಿ ದೇಶದಲ್ಲಿ ಶೇ. 55.1 ರಷ್ಟಿದ್ದ ಬಡತನ 2019–21ರ ಅವಧಿಯಲ್ಲಿ ಶೇ. 16.4ಕ್ಕೆ ಇಳಿಕೆ ಕಂಡಿದೆ.

ಭಾರತವಲ್ಲದೇ ಚೀನಾದಲ್ಲಿ 2010–14ರಲ್ಲಿ 69 ಮಿಲಿಯನ್ 2012–17ರ ಅವಧಿಯಲ್ಲಿ ಇಂಡೋನೇಷ್ಯಾದಲ್ಲಿ 8 ಮಿಲಿಯನ್ ಜನರು ಬಡತನದಿಂದ ಹೊರಕ್ಕೆ ಬಂದಿದ್ದಾರೆ. ನಮ್ಮ ನೆರೆಯ ದೇಶಗಳಾದ ಬಾಂಗ್ಲಾ ಮತ್ತು ಪಾಕಿಸ್ತಾನದಲ್ಲಿ ಅನುಕ್ರಮವಾಗಿ 2015–19ರಲ್ಲಿ 19 ಮಿಲಿಯನ್ ಮತ್ತು 2012–18ರ ಅವಧಿಯಲ್ಲಿ 7 ಮಿಲಿಯನ್ ಜನರು ಬಡತನದಿಂದ ಮುಕ್ತರಾಗಿದ್ದಾರೆಂದು ವಿಶ್ವಸಂಸ್ಥೆ ಮಾಹಿತಿ ನೀಡಿದೆ. ಆದರೆ ಆಹಾರಕ್ಕಾಗಿ ಹಾಹಾಕಾರವಿರುವ ಪಾಕಿಸ್ತಾನದ ವಿಷಯದಲ್ಲಿ ಈ ವರದಿ ಪ್ರಶ್ನೆಗಳನ್ನು ಮೂಡಿಸಿದೆ. ಸ್ಥೂಲವಾಗಿ ವಿಶ್ವಸಂಸ್ಥೆಯ ವರದಿಯು ಬಡತನ ನಿವಾರಣೆ ಸಾಧ್ಯವಿದೆ ಎನ್ನುತ್ತದೆ. 2000 ದಿಂದ 2022 ರಲ್ಲಿ 81 ದೇಶಗಳಲ್ಲಿನ ಬಡತನದ ಬಗ್ಗೆ ಮಾಡಲಾದ ಅಧ್ಯಯನದಲ್ಲಿ ಭಾರತವು ಸೇರಿದಂತೆ 25 ದೇಶಗಳು ವೈಶ್ವಿಕ ಎಂಪಿಐ ಪ್ರಮಾಣಗಳನ್ನು 15 ವರ್ಷಗಳಲ್ಲಿ ಅರ್ಧಕ್ಕೆ ಇಳಿಸುವಲ್ಲಿ ಯಶಸ್ವಿಯಾಗಿವೆ ಕೆಲವು ಪ್ರದೇಶಗಳು ಕೇವಲ ನಾಲ್ಕರಿಂದ ಹನ್ನೆರಡು ವರ್ಷಗಳಲ್ಲಿ ಎಂಪಿಐಯನ್ನು ಅರ್ಧಕ್ಕೆ ಇಳಿಸಿದ್ದಾರೆ ಇವುಗಳಲ್ಲಿ ಭಾರತ, ಕಾಂಬೋಡಿಯಾ, ಚೀನಾ, ಕಾಂಗೋ, ಹೊಂಡುರಾಸ್, ಇಂಡೋನೇಷ್ಯಾ, ಮೊರಾಕ್ಕೊ, ಸರ್ಬಿಯಾ ಮತ್ತು ಮೊರಾಕ್ಕೊಗಳು ಅದ್ಭುತ ರೀತಿಯಲ್ಲಿ ಅಭಿವೃದ್ಧಿ ಸಾಧಿಸಿದ್ದಾರೆ. ಪೆರು ಮತ್ತು ನೈಜೀರಿಯಾಗಳು ಉತ್ತಮ ಸಾಧನೆ ಮಾಡಿವೆ. ಕಾಂಬೋಡಿಯಾದ ಬಡತನದ ವಿರುದ್ಧದ ಹೋರಾಟ ಜಗತ್ತಿಗೆ ಮಾದರಿಯಾಗಲಿದೆ. ಮಾಹಿತಿಯಂತೆ ಇಲ್ಲಿ ಬಡತನದ ಪ್ರಮಾಣ ಶೇ.36.7 ರಿಂದ 16.6ಕ್ಕೆ ಇಳಿದಿದೆ. ಅಂದರೆ ಕೊರೊನಾ ಅವಧಿ ಸೇರಿ ಕಳೆದ ಏಳೂವರೆ ವರ್ಷಗಳಲ್ಲಿ ಕಾಂಬೋಡಿಯಾದಲ್ಲಿ ಬಡಜನರ ಸಂಖ್ಯೆ 5.6 ಮಿ. ದಿಂದ 2.8 ಮಿಲಿಯನ್‌ಗೆ ಇಳಿದಿದೆ.

ಬಡತನದ ವ್ಯಾಖ್ಯಾನ

ಬಡತನದ ಬಗ್ಗೆ ಅನೇಕ ವ್ಯಾಖ್ಯಾನಗಳು ಇವೆ. ಇದು ಕೇವಲ ಹಣದ ಕೊರತೆಗೆ ಮಾತ್ರ ಸೀಮಿತವಾಗಿಲ್ಲ. ಸಾಮಾನ್ಯವಾಗಿ ಬಡತನವೆಂದರೆ ಜನರು ಅಥವಾ ಸಮುದಾಯಗಳ ಕನಿಷ್ಠ ಜೀವನ ಮಟ್ಟಕ್ಕೆ ಆರ್ಥಿಕ ಸಂಪನ್ಮೂಲಗಳು ಮತ್ತು ಅಗತ್ಯ ವಸ್ತುಗಳ ಕೊರತೆಯಿರುವ ಸ್ಥಿತಿಯನ್ನು ಸೂಚಿಸುತ್ತದೆಂದು ಕೆಲವು ತಜ್ಞರ ಅಭಿಮತವಾಗಿದೆ. ಬಡತನದಲ್ಲಿ ವಾಸಿಸುವ ಜನರು ಅಥವಾ ಪರಿವಾರಗಳು ಸಮರ್ಪಕವಾದ ವಸತಿ, ಶುದ್ಧ ನೀರು, ಪೌಷ್ಟಿಕ ಆಹಾರದ ಕೊರತೆ, ವೈದ್ಯಕೀಯ ಚಿಕಿತ್ಸಾ ವೆಚ್ಚ ಭರಿಸಲಾಗದ ಸ್ಥಿತಿಯಲ್ಲಿದ್ದರೆ ಬಡತನವೆಂದು ವ್ಯಾಖ್ಯಾನಿಸುತ್ತಾರೆ. ಸರಳವಾಗಿ ಹೇಳುವುದಾದರೆ ವ್ಯಕ್ತಿ ಅಥವಾ ಪರಿವಾರಗಳಿಗೆ ತಮ್ಮ ಸ್ವಸಾಮರ್ಥ್ಯದಲ್ಲಿ ಮೂಲಭೂತ ಅವಶ್ಯಕತೆಗಳನ್ನು ಪಡೆಯಲಾಗದ ಸ್ಥಿತಿಯನ್ನು ಬಡತನವೆಂದು ಕರೆಯಬಹುದು. ಪ್ರತಿಯೊಂದು ದೇಶವು ಬಡತನದ ರೇಖೆಯನ್ನು (ಮಟ್ಟವನ್ನು) ನಿರ್ಧರಿಸಲು ತಮ್ಮದೇ ಆದ ಮಾನದಂಡಗಳನ್ನು ಹೊಂದಿವೆ. ಬಡತನವು ಒಂದು ಸಾಮಾಜಿಕ, ಆರ್ಥಿಕ ಸ್ಥಿತಿಯಾಗಿದ್ದು ಕೇವಲ ಆದಾಯ ಮಾತ್ರವಲ್ಲ ಬಹು ಅಂಶಗಳ ಪರಿಣಾಮವಾಗಿದೆ.

ಖರೀದಿ ಶಕ್ತಿ ಸಮಾನತೆ

1990ರಲ್ಲಿ ಸ್ವತಂತ್ರ ಸಂಶೋಧಕರ ಗುಂಪು ಮತ್ತು ವಿಶ್ವ ಬ್ಯಾಂಕ್ ವಿಶ್ವದ ಬಡದೇಶಗಳ ಬಡತನದ ಮಾನದಂಡಗಳನ್ನು ಬಳಸಿಕೊಂಡು, ವಿಶ್ವದ ಬಡವರನ್ನು ಅಳೆಯಲು ಪ್ರಸ್ತಾಪಿಸಿತು. ಅವರು ವಿಶ್ವದ ಕೆಲವು ಬಡ ದೇಶಗಳ ರಾಷ್ಟ್ರೀಯ ಬಡತನ ರೇಖೆ ಪರಿಶೀಲಿಸಿ ನಂತರ ಪರ್ಚೇಸಿಂಗ್ ಪವರ್ ಪ್ಯಾರಿಟಿ (ಪಿಪಿಪಿ) ವಿನಿಮಯ ದರಗಳನ್ನು ಬಳಸಿ ರೇಖೆಗಳನ್ನು ಸಾಮಾನ್ಯ ಕರೆನ್ಸಿಗೆ ಪರಿವರ್ತಿಸಿದರು. ಒಮ್ಮೆ ಸಾಮಾನ್ಯ ಕರೆನ್ಸಿಗೆ ಪರಿವರ್ತಿಸಿದಾಗ ಈ ಬಡ ದೇಶಗಳಲ್ಲಿ ರಾಷ್ಟ್ರೀಯ ಬಡತನ ರೇಖೆಯ ಮೌಲ್ಯವು ಪ್ರತಿವ್ಯಕ್ತಿಗೆ ಸುಮಾರು ಒಂದು ಡಾಲರ್ ಎಂದು ಕಂಡುಕೊಂಡರು ಮತ್ತು ಇದನ್ನು ಮೊದಲ ಡಾಲರ್ ದಿನವೆಂದು ಅಂತರರಾಷ್ಟ್ರೀಯ ಬಡತನ ರೇಖೆಗೆ ಆಧಾರವಾಗಿದೆ.

ಅಂತರರಾಷ್ಟ್ರೀಯ ಬಡತನ ರೇಖೆ ನವೀಕರಣ

ವಿಶ್ವದಾದ್ಯಂತ ಜೀವನ ವೆಚ್ಚದಲ್ಲಿ ವ್ಯತ್ಯಾಸಗಳಾಗುತ್ತಿದ್ದಂತೆ ಜಾಗತಿಕ ಬಡತನ ರೇಖೆಯನ್ನು ನಿಯಮಿತವಾಗಿ ನವೀಕರಿಸಲಾಗಿದೆ. 2005ರಲ್ಲಿ ಪರಿಷ್ಕರಿಸಿದ ನಂತರ ಪ್ರತಿ ವ್ಯಕ್ತಿಗೆ 1.25 ಡಾಲರ್ ಅನ್ನು ಜಾಗತಿಕ ಬಡತನದ ರೇಖೆಯಾಗಿ ಬಳಸಲಾಯಿತು. ಹೊಸ ಜಾಗತಿಕ ಬಡತನದ ರೇಖೆಯನ್ನು 2011ರ ಬೆಲೆ ಆಧಾರಿಸಿ 1.90 ಡಾಲರ್‌ಗೆ ಹೊಂದಾಣಿಕೆ ಮಾಡಲಾಗಿದೆ. 2012 ರಲ್ಲಿ ಜಾಗತಿಕವಾಗಿ 900 ಮಿಲಿಯನ್ ಜನರು ಈ ರೇಖೆ ಕೆಳಗೆ ಜೀವಿಸುತ್ತಿದ್ದರೆ, 2015ರಲ್ಲಿ 700 ಮಿಲಿಯನ್ ಜನರು ತೀವ್ರ ಬಡತನದಲ್ಲಿ ವಾಸಿಸುತ್ತಿದ್ದಾರೆಂದು ವಿಶ್ವ ಬ್ಯಾಂಕ್ ಅಭಿಪ್ರಾಯಪಟ್ಟಿತ್ತು.

ಸ್ವಾತಂತ್ರ್ಯ ಪೂರ್ವ ಭಾರತದಲ್ಲಿ ಬಡತನದ ಲೆಕ್ಕಾಚಾರ

ಗ್ರ್ಯಾಂಡ್ ಓಲ್ಡ್ ಮ್ಯಾನ್ ಆಫ್ ಇಂಡಿಯಾ ಮತ್ತು ಭಾರತದ ಅನಧಿಕೃತ ರಾಯಭಾರಿ ಎಂದು ಕರೆಯಲ್ಪಡುವ ಸರ್ ದಾದಾಬಾಯಿ ನವರೋಜಿ ದೋರ್ಡಿಯವರು 1902 ರಲ್ಲಿ ಬರೆದ 'ಭಾರತದಲ್ಲಿ ಬಡತನ ಮತ್ತು ಬ್ರಿಟಿಷರ ಆಡಳಿತ' ಎಂಬ ಪುಸ್ತಕದಲ್ಲಿ ಬಡತನದ ರೇಖೆಯ ಆರಂಭಿಕ ಅಂದಾಜು ಮಾಡಿದರು. ಅವರು ಅಂದಾಜು ಪ್ರತಿವರ್ಷಕ್ಕೆ ತಲಾ ರೂ.16 ರಿಂದ 35 ಎಂದು ನಿಗದಿಪಡಿಸಿದ್ದರು. ಅವರು ಪ್ರಸ್ತಾಪಿಸಿದ ಬಡತನ ರೇಖೆಗೆ ಜೀವನಾಧಾರ ಮತ್ತು ಕನಿಷ್ಠ ಮೂಲ ಆಹಾರಗಳಾದ ಅಕ್ಕಿ, ಹಿಟ್ಟು, ಬೇಳೆ ಕಾಳುಗಳು, ತರಕಾರಿ, ಮಾಂಸ ಇತ್ಯಾದಿಗಳ ವೆಚ್ಚ ಪರಿಗಣಿಸಲಾಗಿತ್ತು. ರಾಷ್ಟ್ರೀಯ ಯೋಜನಾ ಸಮಿತಿಯು (1938) ಬಡತನದ ರೇಖೆಯನ್ನು ಕನಿಷ್ಠ ಮಟ್ಟದ ಜೀವನ ಕ್ರಮ ಆಧರಿಸಿ ಪ್ರತಿ ತಿಂಗಳು ರೂ. 15 ರಿಂದ ರೂ. 20 ರವರೆಗೆ ನಿಗದಿಪಡಿಸಿತು. 1944 ರಲ್ಲಿ ಬಾಂಬೆ ಯೋಜನೆ ಪ್ರತಿಪಾದಕರು ವರ್ಷಕ್ಕೆ ತಲಾ ರೂ. 75ಕ್ಕೆ ಬಡತನದ ರೇಖೆ ಸೂಚಿಸಿದ್ದರು.

ಸ್ವಾತಂತ್ರ್ಯೋತ್ತರ ಬಡತನದ ಅಂದಾಜು

1962ರಲ್ಲಿ ಯೋಜನಾ ಆಯೋಗ ಘಟಿಸಿದ ಕಾರ್ಯನಿರತ ಗುಂಪು ಗ್ರಾಮೀಣ ಮತ್ತು ನಗರ ಪ್ರದೇಶಗಳಿಗೆ ಪ್ರತ್ಯೇಕ ಬಡತನದ ರೇಖೆಗಳನ್ನು ರೂಪಿಸಿತು. 1971ರಲ್ಲಿ ವಿ.ಎಂ. ದಾಂಡೇಕರ್ ಮತ್ತು ಎನ್.ರಾತ್ ಸಮಿತಿಯೂ ರಾಷ್ಟ್ರೀಯ ಮಾದರಿ ಸಮೀಕ್ಷೆ (ಎನ್‌ಎಸ್‌ಎಸ್)ಯ ಅಂಕಿ ಅಂಶಗಳನ್ನು ಆಧರಿಸಿ ದೇಶದಲ್ಲಿ ಬಡತನದ ಬಗ್ಗೆ ಮೊದಲ ಬಾರಿ ವ್ಯವಸ್ಥಿತ ಮೌಲ್ಯಮಾಪನವನ್ನು ಮಾಡಿದರು. ಇವರು ಬಡತನ ರೇಖೆಯನ್ನು ಗ್ರಾಮೀಣ ಭಾಗಗಳಲ್ಲಿ ದಿನಕ್ಕೆ 2250 ಕ್ಯಾಲೋರಿಗಳನ್ನು ಒದಗಿಸಲು ಬೇಕಾಗುವ ವೆಚ್ಚದಿಂದ ಪಡೆಯಬೇಕೆನ್ನುವ ಮೂಲಕ ಕನಿಷ್ಠ ಕ್ಯಾಲೋರಿ ಬಳಕೆಯ ಮಾನದಂಡಗಳ ಮೇಲೆ ಚರ್ಚೆ ಹುಟ್ಟು ಹಾಕಿದರು. 2009ರಲ್ಲಿ ಯೋಜನಾ ಆಯೋಗವು ಬಡತನದ ಮಾದರಿ ಮತ್ತು ಹಿಂದಿನ ವಿಧಾನಗಳ ನ್ಯೂನತೆಗಳನ್ನು ಪರಿಹರಿಸಲು ಸುರೇಶ್ ತೆಂಡೂಲ್ಕರ್ ಸಮಿತಿ ರಚಿಸಿತು. ಈ ಸಮಿತಿ ಜನರ ದೈನಂದಿನ ಮತ್ತು ಮೂಲಭೂತ ಅವಶ್ಯಕತೆಗಳನ್ನು ಆಧರಿಸಿ ಗ್ರಾಮೀಣ ಪ್ರದೇಶಗಳಲ್ಲಿ ತಿಂಗಳಿಗೆ ತಲಾ ರೂ. 446.68 ಮತ್ತು ನಗರ ಪ್ರದೇಶಗಳಿಗೆ ರೂ.578.80 ಬಡತನದ ರೇಖೆಯ ಮೂಲಾಧಾರವಾಗಿರಬೇಕೆಂದು ಶಿಫಾರಸು ಮಾಡಿತು. ಈ ರೇಖೆ ಬಗ್ಗೆ ಟೀಕೆ ಬಂದ ಕಾರಣ ನೇಮಕವಾದ ರಂಗರಾಜನ್ ಸಮಿತಿಯು ನಗರದಲ್ಲಿ ರೂ.47 ಮತ್ತು ಗ್ರಾಮಗಳಲ್ಲಿ ರೂ.32 ಕ್ಕಿಂತ ಹೆಚ್ಚು ಖರ್ಚು ಮಾಡುವ ಸಾಮರ್ಥ್ಯವಿಲ್ಲದವರನ್ನು ಬಡವರೆಂದು ಪರಿಗಣಿಸಿತು. ಆದರೆ ರಾಜ್ಯಗಳ ಮಧ್ಯೆ ಒಮ್ಮತ ಮೂಡದ ಕಾರಣ ಈ ಸಮಿತಿಗಳ ವರದಿ ಅಂಗೀಕಾರವಾಗಲಿಲ್ಲ. ಅರ್ಥಶಾಸ್ತ್ರಜ್ಞರು ದಿನಕ್ಕೆ ಕನಿಷ್ಠ 3.20 ಡಾಲರ್‌ನ ಬಡತನ ರೇಖೆಯು ಕುಟುಂಬವೊಂದಕ್ಕೆ ಎರಡು ಹೊತ್ತಿನ ಊಟ ಮತ್ತು ಕನಿಷ್ಠ ಮೂಲ ಜೀವನಾವಶ್ಯಕತೆಗಳನ್ನು ಪಡೆಯಲು ಅನುಮತಿಸುವ ಮಟ್ಟದಲ್ಲಿದೆ ಎನ್ನುತ್ತಾರೆ. ಕೊರೊನಾ ಮಹಾಮಾರಿಯವರೆಗೆ ಜಗತ್ತಿನ ಹೆಚ್ಚಿನ ದೇಶಗಳಲ್ಲಿ ಎಂಪಿಐಗೆ ಸಂಬಂಧಿಸಿದಂತೆ ಸುಸ್ಥಿರ ಅಭಿವೃದ್ಧಿಯಾಗಿತ್ತು. ಆದರೆ ಕೊರೊನಾ ಅವಧಿ ಮತ್ತು ನಂತರವೂ ದೂರಗಾಮಿ ನಕಾರಾತ್ಮಕ ಪರಿಣಾಮ ಬೀರಿದೆ ಎಂದು ಮಾನವ ಅಭಿವೃದ್ಧಿ ಕಚೇರಿಯ ನಿರ್ದೇಶಕರಾದ ಕಾನ್ಸಿಕಾವೋ ಅಭಿಪ್ರಾಯಪಟ್ಟಿದ್ದಾರೆ.

ವಿಶ್ವದ 110 ದೇಶಗಳ 610 ಕೋಟಿ ಜನರಲ್ಲಿ 101 ಕೋಟಿ ಜನರು (ಶೇ.18) ಈಗಲೂ ಬಹುಸ್ತರದ ಕಡುಬಡತನದಲ್ಲಿದ್ದಾರೆ. ಜಗತ್ತಿನ ಪ್ರತಿ ಆರು ಬಡವರಲ್ಲಿ ಐದು ಮಂದಿ ಆಫ್ರಿಕಾದ ಸಹರಾ ಹಾಗೂ ದಕ್ಷಿಣ ಏಷ್ಯಾ ದೇಶಗಳಲ್ಲಿದ್ದಾರೆ. ಅಂದರೆ ಆಫ್ರಿಕಾ–ಸಬ್ ಸಹಾರನ್ ಪ್ರದೇಶದಲ್ಲಿ 534 ಮಿಲಿಯನ್ ಮತ್ತು ದಕ್ಷಿಣ ಏಷ್ಯಾದಲ್ಲಿ 389 ಮಿಲಿಯನ್ ಕಡುಬಡವರಿದ್ದಾರೆ. ಮೂರನೇ ಎರಡರಷ್ಟು (730 ಮಿಲಿಯನ್) ಬಡವರು ಮಧ್ಯಮ ಆದಾಯವುಳ್ಳ ದೇಶಗಳಲ್ಲಿದ್ದಾರೆ.

ಬಡತನದ ವಿರುದ್ಧ ಭಾರತದ ಸಾಧನೆ

ಭಾರತವು ಕಳೆದ ಹದಿನೈದು ವರ್ಷಗಳಲ್ಲಿ ಜಾರಿಗೊಳಿಸಿದ ಜನ ಕಲ್ಯಾಣ ಯೋಜನೆಗಳಿಂದ ಸುಮಾರು 4.15 ಮಿಲಿಯನ್ ಜನರು ಬಡತನದ ರೇಖೆಯಿಂದ ಹೊರಕ್ಕೆ ಬಂದಿದ್ದಾರೆ. ಹಿಂದಿನ ಯುಪಿಎ ಅಧಿಕಾರಾವಧಿಯಲ್ಲಿ ಉದ್ಯೋಗ ಖಾತ್ರಿಯಂತಹ ಯೋಜನೆಗಳಿಂದ ಆಹಾರ ಭದ್ರತೆಯೊಂದಿಗೆ ಕನಿಷ್ಠ ಜೀವನಾವಶ್ಯಕತೆಗಳಿಗೆ ಬೇಕಾದ ಹಣಕಾಸು ಭದ್ರತೆ ದೊರೆಯಿತು. ಆದರೆ ಸುಸ್ಥಿರ ಜೀವನಕ್ಕೆ ಅನಿವಾರ್ಯವಾದ ಮೂಲ ಸೌಕರ್ಯಗಳನ್ನು ನೀಡುವುದರೊಂದಿಗೆ ಪ್ರಸ್ತುತ ಪ್ರಧಾನಿ ನರೇಂದ್ರ ಮೋದಿ ಸರಕಾರ ಆಹಾರ ಭದ್ರತೆ ಮುಂದುವರಿಸಿದೆ. ಕೊರೊನಾ ಕಾಲದಲ್ಲಿ 80 ಕೋಟಿ ಜನರಿಗೆ ಆಹಾರ ಭದ್ರತೆಯಡಿ ಆರಂಭವಾದ ಪ್ರತಿ ತಿಂಗಳು 5 ಕೆ.ಜಿ. ಅಕ್ಕಿ ನೀಡುತ್ತಿದ್ದ ಯೋಜನೆ ಮುಂದುವರಿಸಿದೆ. ಕಳೆದ ಒಂಬತ್ತು ವರ್ಷಗಳ ಮೋದಿ ಆಡಳಿತದಲ್ಲಿ ಬಡಜನರ ಆರೋಗ್ಯಕ್ಕಾಗಿ ಆಯುಷ್ಮಾನ್ ಯೋಜನೆಯಡಿ 50 ಕೋಟಿ ಜನರಿಗೆ 5 ಲಕ್ಷ ರೂ.ವರೆಗೆ ಚಿಕಿತ್ಸಾ ವೆಚ್ಚದ ಖಾತ್ರಿ, 12 ಕೋಟಿ ಶೌಚಾಲಯ ಗಳು, 3.5 ಕೋಟಿ ಮನೆಗಳ ನಿರ್ಮಾಣ, 12 ಕೋಟಿ ಮನೆಗಳಿಗೆ ಶುದ್ಧ ಪೇಯ ಜಲ ಸಂಪರ್ಕ, ರೈತರಿಗೆ ಕಿಸಾನ್ ಸಮ್ಮಾನ್ ನಿಧಿ, 2.4 ಲಕ್ಷ ಕಿ.ಮೀ. ಗ್ರಾಮೀಣ ಹಾಗೂ 78 ಸಾವಿರ ಕಿ.ಮೀ. ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣದೊಂದಿಗೆ ದೇಶದಲ್ಲಿ ಬಡತನ ನಿವಾರಣಾ ಕಾರ್ಯಕ್ರಮ ಯಶಸ್ವಿಯಾಗಿ ಮುಂದುವರಿಯುತ್ತಿದೆ.

ಬಿಜೆಪಿ ಶಾಸಕರ ಅಮಾನತು ಸಂವಿಧಾನ ಬಾಹಿರ ನಡೆ



ಮೈಸೂರು, ಜು.21(ಸಿಎನ್)– ವಿಧಾನಸಭೆ ಅಧಿವೇಶನವು ಮುಗಿಯುವ ಮೂರು ದಿನ ಮೊದಲೇ ವಿರೋಧ ಪಕ್ಷದ ಹತ್ತು ಶಾಸಕರನ್ನು ಅಮಾನತುಗೊಳಿಸಿರುವುದು ಸಂವಿಧಾನ ಬಾಹಿರ ಮತ್ತು ಪ್ರಜಾಪ್ರಭುತ್ವ ವಿರೋಧಿ ನಡೆ ಎಂದು ಜಿಲ್ಲಾ ಬಿಜೆಪಿ ವಕ್ತಾರ ಎಂ.ಎ. ಮೋಹನ್ ಕಿಡಿಕಾರಿದರು.

ನಗರದ ರಾಮಸ್ವಾಮಿ ವೃತ್ತದ ಬಳಿಯ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಇದೇ ತಿಂಗಳು 16 ಮತ್ತು 17ನೇ ತಾರೀಖು ಬೆಂಗಳೂರಿನಲ್ಲಿ ರಾಷ್ಟ್ರದ ವಿವಿಧ ವಿರೋಧ ಪಕ್ಷಗಳನ್ನು ಒಗ್ಗೂಡಿಸುವ ನಾಟಕವನ್ನು ಕಾಂಗ್ರೆಸ್ ಆಡಿರುವುದಲ್ಲದೇ, ಇದಕ್ಕೆ ಹಿರಿಯ ಐಎಎಸ್ ಅಧಿಕಾರಿಗಳನ್ನು ಬಳಸಿಕೊಂಡಿರುವುದನ್ನು ನಗರ ಬಿಜೆಪಿ ಬಲವಾಗಿ ಖಂಡಿಸುತ್ತದೆ ಎಂದರು.

ಪ್ರೋಟೋಕಾಲ್ ಹೆಸರಿನಲ್ಲಿ ಐಎಎಸ್ ಅಧಿಕಾರಿಗಳ ಸೆಕ್ಯೂರಿಟಿ ಗಾರ್ಡ್‌ಗಳಂತೆ ಬಳಸಿಕೊಂಡಿರುವುದನ್ನು, ವಿಧಾನಸಭೆಯಲ್ಲಿ ಬಿಜೆಪಿ ಪ್ರಶ್ನಿಸಿತ್ತು. ಸಮರ್ಪಕ ಉತ್ತರ ನೀಡಲು ಕಾಂಗ್ರೆಸ್‌ನಿಂದ ಸಾಧ್ಯವಾಗದಿದ್ದಾಗ, ಪ್ರಜಾಪ್ರಭುತ್ವದ ನೀತಿಯಂತೆ ಧರಣಿ ಸತ್ಯಾಗ್ರಹವನ್ನು ನಡೆಸಿದ್ದೇವೆ. ಆದರೆ ಶಾಸಕರನ್ನು ಅಮಾನತು ಮಾಡುವುದರ ಮೂಲಕ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ನೀತಿಗಳನ್ನು ಗಾಳಿಗೆ ತೂರಿದೆ ಎಂದರು.

ಕಾಂಗ್ರೆಸ್ ವಕ್ತಾರ ಎಂ. ಲಕ್ಷ್ಮಣ್ ಸರ್ಕಾರದ ಕ್ರಮವನ್ನು ಸಮರ್ಥಿಸಿಕೊಳ್ಳುತ್ತ ಶಾಶ್ವತವಾಗಿ ಸದಸ್ಯರುಗಳನ್ನು ಅಮಾನತು ಗೊಳಿಸಬೇಕು ಎಂಬ ಸಲಹೆಯನ್ನು ಸ್ಪೀಕರ್‌ರವರಿಗೆ ನೀಡಿರುವುದನ್ನು ನೋಡಿದರೆ ಅವರಿಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲದಿರುವುದು ಸ್ಪಷ್ಟವಾಗುತ್ತದೆ. ವಿಧಾನಸಭೆಯಲ್ಲಿ ಎಲ್ಲಾ ಶಾಸಕರು ಒಂದೇ. ಆದರೆ ಇಲ್ಲಿ ದಲಿತ ಮತ್ತು ಮುಸ್ಲಿಂ ಎಂಬ ಪದಗಳನ್ನು ಉಪಯೋಗಿಸಿ ತಮ್ಮ ಡೋಂಗಿ ಜಾತ್ಯತೀತ ನಿಲುವನ್ನು ಪ್ರದರ್ಶಿಸಿದ್ದಾರೆ. ವಿಧಾನಸಭೆಯಲ್ಲಿ ಬಹಳ ಮಂದಿ ರೌಡಿಗಳಿದ್ದಾರೆ ಎಂಬ ಹೇಳಿಕೆ ನಿಜವಾಗಿಯೂ ಜನಪ್ರತಿನಿಧಿಗಳು ಮತ್ತು ಮತದಾರರಿಗೆ ಮಾಡಿದ ಅಪಚಾರವಾಗಿರುತ್ತದೆ. ಹಾಗಾಗಿ ಕೂಡಲೇ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಸೋಮಸುಂದರ್ ಮಹೇಶ್‌ರಾಜೇ ಅರಸ್, ಜೋಗಿ ಮಂಜು, ಪ್ರದೀಪ್ ಕುಮಾರ್, ಮಂಜುನಾಥ್ ಹಾಜರಿದ್ದರು.

ಆಟೋ ಚಾಲಕರಿಗೆ ರಸ್ತೆ ಸುರಕ್ಷತೆ ಜಾಗೃತಿ



ಮೈಸೂರು, ಜು.21(ಎಸ್‌ಪಿಎನ್)– ಮೈಸೂರು ರೈಲ್ವೆ ನಿಲ್ದಾಣದ ಮುಂಭಾಗ ಎನ್.ಆರ್.ಸಂಚಾರ ಠಾಣೆ ಸಬ್ ಇನ್ಸ್‌ಪೆಕ್ಟರ್ ನೇತೃತ್ವದಲ್ಲಿ ಆಟೋ ಚಾಲಕರಿಗೆ ರಸ್ತೆ ಸುರಕ್ಷತೆ ಕುರಿತು ಶುಕ್ರವಾರ ಜಾಗೃತಿ ಮೂಡಿಸಲಾಯಿತು.

ಆಟೋ ಚಾಲಕರು ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಹೊಂದಿರಬೇಕು. ಸಂಚಾರಿ ಪೊಲೀಸರು ತಪಾಸಣೆ ಕೈಗೊಂಡಾಗ ಅಗತ್ಯ ದಾಖಲಾತಿಗಳಾದ ಡಿಎಲ್, ವಾಹನ ವಿಮೆ, ವಾಹನ ದಾಖಲಾತಿಗಳನ್ನು ಕಡ್ಡಾಯವಾಗಿ ತೋರಿಸಬೇಕು ಹಾಗೂ ಸಾರ್ವಜನಿಕರೊಂದಿಗೆ ಆಟೋ ಚಾಲಕರು ದುಂಡಾವರ್ತನೆ ತೋರಬಾರದು. ಒಂದು ವೇಳೆ ಸಾರ್ವಜನಿಕರಿಂದ ದೂರುಗಳು ಬಂದಲ್ಲಿ ಚಾಲಕರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಪ್ರಯಾಣಿಕರಿಂದ ದುಪ್ಪಟ್ಟು ಹಣ ಪೀಕ ಬಾರದು. ಪ್ರಯಾಣಿಕರು ಕರೆದಲ್ಲಿಗೆ ಆಟೋ ಚಾಲಕರು ತಮ್ಮ ಸೇವೆ ಒದಗಿಸಬೇಕು. ರಸ್ತೆ ನಿಯಮಗಳ ಬಗ್ಗೆ ಚಾಲಕರು ತಿಳಿದುಕೊಳ್ಳಬೇಕು. ಆಟೋ ಚಾಲಕರು ಪ್ರವಾಸಿಗರ ಜೊತೆ ಸೌಜನ್ಯದಿಂದ ವರ್ತಿಸಿ, ಇಲ್ಲಿನ ಪ್ರವಾಸಿತಾಣಗಳನ್ನು ವೀಕ್ಷಣೆ ಮಾಡುವಂತಹ ವಾತಾವರಣ ನಿರ್ಮಿಸುವುದು ವೃತ್ತಿಯ ಭಾಗವಾಗಬೇಕು ಎಂದು ಆಟೋ ಚಾಲಕರಿಗೆ ಸಲಹೆ ನೀಡಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಬೇಕಾಗಿದ್ದಾರೆ

ಸೆಕ್ಯೂರಿಟಿ ಗಾರ್ಡುಗಳು – 10 ಮಂದಿ
ಸ್ಥಳ: 1) ಗುಂಡ್ಲುಪೇಟೆ 2) ಕೊಳ್ಳೇಗಾಲ
3) ಕೆ.ಆರ್.ಎಸ್ ಸುತ್ತಮುತ್ತ
4) ಮೈಸೂರು ಸಿಟಿ ಸುತ್ತಮುತ್ತ

9686422400
9242406261

ಪ್ಲಾಟ್ ಮಾರಾಟಕ್ಕಿದೆ

1150 ಚದುರ ಅಡಿ 2 ರೂಂ ಉಳ್ಳ ಪ್ಲಾಟ್ ನಗರದ ವಿವಿ ಮೊಹಲ್ಲಾ ಗೋಕುಲಂ ಮುಖ್ಯ ರಸ್ತೆಯ ಅಪಾರ್ಟ್‌ಮೆಂಟ್‌ನಲ್ಲಿ ಮಾರಾಟಕ್ಕಿದೆ. (ಎಸ್‌ಪಿಆರ್ ಹೋಟೆಲ್ ಎದುರು)
ಆಸಕ್ತರು ಸಂಪರ್ಕಿಸಿ:

9986853367

WANTED

Wanted Science (CBZ) Teaching Staff Send your Resume Through Whatsapp / Message

8971577685
9980631121

ಬೇಕಾಗಿದ್ದಾರೆ

ಮೈಸೂರಿನಲ್ಲಿ
ಮಾರ್ಕೆಟಿಂಗ್–ಹುಡುಗರು
ಆಫೀಸ್ ಕೆಲಸಕ್ಕೆ–ಯುವಕ

7892827899
9343906090

HOUSE FOR RENT

1 BHK Near KC Layout Suitable for Small Family

9841074214

---

1) 20x30 ಸೈಟು, ಕ್ರೈಸ್ಟ್ ಪಬ್ಲಿಕ್ ಸ್ಕೂಲ್ ಹತ್ತಿರ –23 ಲಕ್ಷ
2) 20x30 Ground, 1st Floor ಮನೆ ದಟ್ಟಗಳ್ಳಿ – 55 ಲಕ್ಷ
3) 20x30 ಡ್ಯೂಪ್ಲೆಕ್ಸ್ ಹೊಸ ಮನೆ 3 Bedroom, Italian, Kitchen & Fully Furnished ದಟ್ಟಗಳ್ಳಿ –75 ಲಕ್ಷ,
ಮೈಸೂರಿನ ಎಲ್ಲಾ ಬಡಾವಣೆಗಳಲ್ಲಿ ಸೈಟು ಮತ್ತು ಹಳೆ ಮನೆ ಹೊಸಮನೆ, ಮಾರುವವರು, ಕೊಳ್ಳುವವರು

9945042875

ಮಾರಾಟಕ್ಕಿದೆ

ಹೆಬ್ಬಾಳ್ 2ನೇ ಸ್ಟೇಜ್
20x30 ಡ್ಯುಪ್ಲೆಕ್ಸ್
ಹೊಸ ಮನೆ

9900501309
9742791967

FOR SALE

Old Property measuring 2250 Sq.ft. Area Located in Mysore City Center Close to Mysore Palace & Chamaraja Double Road, No Brokers Only Direct Buyers Contact

6364026397

WANTED TEACHERS

SDET-SCHOOL - Siddalingapura
M.A., Bed- English Any degree in English medium, M.Sc, Bed, Ded, NST

9535587045
9845924194

Commercial Spaces for Rent

Ground Floor-850Sqft
First Floor-920Sqft
Suitable for Office Purpose
Prime Location
North East Corner
Devegowda Circle
Bannur - Malavalli Ring Road Junction
S.D. Jayaram Layout
Mysuru

Contact : 8147821168, 7760968403

ಟಿವಿ ರಿಪೇರಿ

ಎಲ್‌ಸಿಡಿ,
ಎಲ್‌ಇಡಿ ಟಿವಿ
Service at your doorstep.

Mob: 9880066886

WANTED ACCOUNTANT

MALE B.COM. GRADUATE WITH 3 - 4 YRS EXPERIENCE IN ACCOUNTS, BILLING, PARTY FOLLOWUP, BANK ENTRIES etc & WITH KNOWLEDGE OF ENGLISH, KANNADA & HINDI SEND YOUR RESUME TO
srichamundeshwariplywood@gmail.com

CONT.: 94486 08680

ದೈವ ಕೃಪಾ

ಲಿಂಗಾಯಿತ, ಮರಾಠ, ಒಕ್ಕಲಿಗ, ಕುರುಬಾಸ್, ಗಾಣಿಗ, ಈಡಿಗ, ದೇವಾಂಗ, ವೈಷ್ಣವ, ಅರಸು ಗೌಂಡರ್ ಮೊದಲಿಯಾರ್ ಬ್ರಾಹ್ಮಿನ್ SC. ST ವಿಶ್ವಕರ್ಮ, ತೆಲುಗು, ತಮಿಳು, ಕನ್ನಡ, ವಾಣಿಯಾರ್ ಹಾಗೂ ಎರಡನೇ ಸಂಬಂಧಕ್ಕೆ ಕೂಡಲೇ ಸಂಪರ್ಕಿಸಿ
ಪುಟ್ಟಸ್ವಾಮಿ OIC Rtd. ಬಿ.ಎಂ. ಶ್ರೀನಗರ, ಮೇಟಗಳ್ಳಿ, ಮೈಸೂರು–16

9902802154

SITE FOR SALE

30X40 East Dattagalli
30x40 north Somanatha Nagar
(Buyer's Only Call)

9880273834

ತಕ್ಷಣ ಬೇಕಾಗಿದ್ದಾರೆ

ಸೆಕ್ಯೂರಿಟಿ ಗಾರ್ಡ್‌ಗಳು ಕೂಡಲೇ ಬೇಕಾಗಿದ್ದಾರೆ ಮೈಸೂರಿನ ದಟ್ಟಗಳ್ಳಿ, ಬೋಗಾದಿ, ಬೆಳವಾಡಿ, ಕುವೆಂಪುನಗರ, ಏರಿಯಾಗಳಲ್ಲಿ ಹಗಲು ಮತ್ತು ರಾತ್ರಿ ಪಾಳಿಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.

9663958939

NGO SERVICES

School, Club, Temple Trust
- Income Tax Returns
- Regn. (NGO) Society / Trust
- Renewal & Accs Documents.
- IT Regn (NGO 12AA & 80 G)

Business Solutions:

9901807052

ಉಚಿತ ತರಬೇತಿ

ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:

7406375196, 9880548596

SITE FOR SALE

30X50,
North Face, KBL Gardenia, Vijayanagara 4th Stage, Near SVEI School, Mysore

9972571123

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್

ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.

Mob: 9008711654

DTCP SITES FOR SALE

DTCP Sites
Rs. 699 per sq.ft.,
Near Jayapura,
H.D. Kote Road, Mysore.

9590491194,9606783264

JANATHA TRUST

Basic to Advanced Beautician Class
1 Day Bridal Makeup
Demo at 99/-

9353394878

HOUSE FOR SALE

20X30 North facing, MUDA Approved
(2BHK -2 units)
Opposite to St. Joseph Central School, Yelwala, Mysore

9513330007

ಬೇಕಾಗಿದ್ದಾರೆ

SLN. ಅಗ್ರಿಟೆಕ್

ಮೈಸೂರು, ಚಾಮರಾಜನಗರ, ಹುಣಸೂರು ಶೋರೂಂಗೆ
1) ಸೇಲ್ಸ್ ಎಕ್ಸಿಕ್ಯೂಟಿವ್ – 10Nos.
2) ಸಹಾಯಕರು– 10Nos.
(ಹುಡುಗರು ಮಾತ್ರ)

9844039455

ಸೈಟು ಮಾರಾಟಕ್ಕಿದೆ

ಮೈಸೂರಿನ ಪ್ರತಿಷ್ಠಿತ ಬಡಾವಣೆ ಶ್ರೀರಾಂಪುರದಲ್ಲಿ ಪಟ್ಟಣ ಪಂಚಾಯ್ತಿ ವ್ಯಾಪ್ತಿ ನಮೂನೆ–3 ಒಳಗೊಂಡ 44 X 55 ಅಡಿ N/F ನಿವೇಶನ ಮಾರಾಟಕ್ಕಿದೆ
Rs. 65 LAKHS- ಮಧ್ಯವರ್ತಿಗಳಿಗೆ ಅವಕಾಶವಿಲ್ಲ

RAJU .P : 9886100816

INDUSTRIAL PLOT FOR SALE

4392 Sq Ft
50 HP Power
2 Big Sheds C-Type,
Behind Ford Showroom, Hebbal

Call : 98450 62888 / 95352 26225

ಬರವಣಿಗೆ ಕೆಲಸ

ಮನೆಯಿಂದಲೇ ಫಾರಂ ಭರ್ತಿ ಮಾಡುವ ಉದ್ಯೋಗ ಮಾಡಿ ಪ್ರತಿ 1 ಫಾರಂಗೆ 30 ರೂ.ಗಳನ್ನು ಪಡೆಯಿರಿ.

97318 91409

ಬೇಕಾಗಿದ್ದಾರೆ

ಆಫೀಸ್ ಕೆಲಸಕ್ಕೆ ಹುಡುಗ/ ಹುಡುಗಿಯರು ಬೇಕಾಗಿದ್ದಾರೆ
ಸಂಬಳ 10000-12000/-

Ph.8073827335
ಶಿವರಾಂಪೇಟೆ, ಮೈಸೂರು

*** ಆರ್.ಎಸ್ ಕನ್ಸ್ಟ್ರಕ್ಷನ್ಸ್ & ಡೆವಲಪರ್ಸ್ ***

"ನಿಮ್ಮ ಕನಸಿನ ಮನೆ ನಮ್ಮ ಹೊಣೆ"

100 ಸಿಮೆಂಟ್ ಬ್ಯಾಗ್ ಉಚಿತ

10 ಚದರಕ್ಕಿಂತ ಹೆಚ್ಚಿನ ಮನೆಯ ನಿರ್ಮಾಣಕ್ಕಾಗಿ ಎಲ್ಲ ಸಾಮಗ್ರಿಗಳನ್ನು ಒಳಗೊಂಡು ಅತ್ಯುತ್ತಮ ಗುಣಮಟ್ಟದೊಂದಿಗೆ ಮನೆಯನ್ನು ವಾಸ್ತು ಪ್ರಕಾರ ನಿರ್ಮಾಣ ಮಾಡಿಕೊಡಲಾಗುವುದು

ಕೂಡಲೇ ಸಂಪರ್ಕಿಸಿ 7022211622

FOR SALE

BUY & SELL SITE, HOUSE, LAND
1) 20x30,30x40,40x60 Sites in H D Kote Road and Bogadi Road
2) 30x40 and 40x60 Site Dattagalli
3) 100x150 Industrial area JP Nagar
4) 14x100 East and West Road RAMAVILAS Road Near

9538690359
9035990359

ಮೈತ್ರಿ ಟ್ರಾವೆಲ್ಸ್

ಶಿರಡಿ ಪ್ರವಾಸ 14/08/23, 3 ದಿನಗಳು. ಜ್ಯೋತಿರ್ಲಿಂಗ ಸಮೇತ ಎಲ್ಲೋರ, ನಾಸಿಕ್, ಶನಿಸಿಂಗನಾಪುರ
25/08/23, ಪುರಿ ಕೊನಾರ್ಕ್, ಭುವನೇಶ್ವರ್ ಪ್ರವಾಸ.

6360422209

ವಿ.ಕೆ. ಎಂಟರ್‌ಪ್ರೈಸಸ್
(SINCE 2005)

(ಗ್ಯಾಸ್ ಪೈಪ್‌ಲೈನ್ ಮತ್ತು ಗ್ಯಾಸ್ ಸುರಕ್ಷತೆ ಸೇವೆ)
ನಿಮ್ಮ ಹಾಗೂ ನಿಮ್ಮ ಮನೆಯ ಸುರಕ್ಷತೆಗಾಗಿ ಗ್ಯಾಸ್ ಪೈಪ್‌ಲೈನ್ ಮಾಡಿಸಿ.
ಸಂಪರ್ಕಿಸಿ: ಬಿ.ವಿ. ಗಿರೀಶ್‌ಗೌಡ

9686594241 / 9019094163
www.gaspipelinemysore.com

ಶ್ರೀ ಮಹಾಲಕ್ಷ್ಮೀ ಟ್ರಾವೆಲ್ಸ್

10–8–23: ರಾಮೇಶ್ವರಂ, ಕನ್ಯಾಕುಮಾರಿ, ಮಧುರೈ.
14–8–23: ಪುರಿ ಜಗನ್ನಾಥ, ಕೊನಾರ್ಕ್, ಚಂದ್ರಭಾಗ ಬೀಚ್.
28–8–2023: ಶಿರಡಿ, 3 ಜ್ಯೋತಿರ್ಲಿಂಗ ದರ್ಶನ.
29–8–2023: ಕಾಶಿ, ಜಾರ್ಖಂಡ್ ಬಾಬಾ ಬೈದ್ಯನಾಥ್, ಜ್ಯೋತಿರ್ಲಿಂಗ.
21–9–2023: ಚಾರ್‌ಧಾಮ್ ಯಾತ್ರ, ಕೇದಾರ್‌ನಾಥ್, ಬದ್ರಿನಾಥ್, ಗಂಗೋತ್ರಿ, ಯಮುನೋತ್ರಿ
4–9–2023: ನೇಪಾಳ, ಮುಕ್ತಿನಾಥ, ಪಶುಪತಿನಾಥ.

9591017782, 9964527782

Leo Security Services

Required urgent Security, 8 hours, Jayalakshmipuram, Vijayanagar, Sathagalli, Rammanahalli, Rajivnagar.

8951212305, 9972910382

ಕಳೆದಿದೆ

ಸೋಮಶೇಖರ್ ಐ.ಸಿ., ನಂ. 259, ವಿವೇಕಾನಂದ ಬ್ಲಾಕ್, ರಾಜ್‌ಕುಮಾರ್ ರಸ್ತೆ, ಟೀಚರ್ಸ್ ಲೇಔಟ್, ಮೈಸೂರು, ದೇವೇಗೌಡ ವೃತ್ತದ ಬಳಿ ಜೆರಾಕ್ಸ್ ಮಾಡಿಸಲು ಹೋದಾಗ ನಮ್ಮ ಮನೆ ಕ್ರಯ ಪತ್ರ 259 ಸ್ವತ್ತಿನ ಮೂಲ ಪತ್ರ, 1ನೇ ದಸ್ತಾವೇಜು ಸಂಖ್ಯೆ: MYN-1-06849-2008-2009 ಸಿ.ಡಿ. ನಂ. MYCD-179 ಕಳೆದುಹೋಗಿದೆ.
ಸಿಕ್ಕಿದವರು ಸಂಪರ್ಕಿಸಿ:

Mob: 9141306148

ಬೇವಿನ ಹಿಂಡಿ

ಉತ್ತಮ ದರ್ಜೆಯ ಪರಿಶುದ್ಧವಾದ ಗಾಣದ ಬೇವಿನ ಹಿಂಡಿ (Cold Pressed) ನಿಮ್ಮ ಸಮಕ್ಷಮ ಮಾಡಿಕೊಡಲಾಗುತ್ತದೆ.
ಶ್ರೀ ಕಾಮಾಕ್ಷಿ ಬಯೋ–ನೀಮ್
#203, ಬನ್ನಿಮಂಟಪ ಬಡಾವಣೆ, ಮೈಸೂರು–570 015

Mob: 80888-87802

40x60 ಅಳತೆಯ DTCP 'A' ಖಾತೆಯುಳ್ಳ ಸೈಟು ಮಾರಾಟಕ್ಕಿದೆ.
23 ಲಕ್ಷದ 50 ಸಾವಿರಗಳು,
ಟಿ.ವಿ.ಎಸ್ ಫ್ಯಾಕ್ಟರಿ ಹತ್ತಿರ, ಮೈಸೂರು
20x30 KHB ಸೈಟು ಮಾರಾಟಕ್ಕಿದೆ
7 ಲಕ್ಷದ 50 ಸಾವಿರಗಳು
ಇಲವಾಲದ ಹತ್ತಿರ, ಮೈಸೂರು

9742198093

NISARGA ENTERPRISES LOAN OFFICE

MOB: 8296400433
9880436288

New Start of Business Loan Industrial Loan, Machinery Loan, Garments Loan, Business Loan, Home Loan, Home Mortgage Loan, Site Mortgage Loan, Personal Loan 12,000/- Salary above

---

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ

NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.

8884439666

ನಿರ್ಮಲ ಸರ್ವೀಸ್

ಸಂಪು
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:

6364079244



V-GUARD
V-GUARD GEYSER
BEST OFFER PRIZE
Solar Water Heater SALES & SERVICE
SUNZONE SOLAR SYSTEM
VN Double Road, Kuvempunagar, Mysuru

9845175443

ಸಂಪು
ಕ್ಲೀನಿಂಗ್‌ಗಾಗಿ
ಸಂಪರ್ಕಿಸಿ:

8861612486

ಉದ್ಯೋಗ ಅವಕಾಶ

ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ/ ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿಯಿರುತ್ತದೆ.
ಸಂಬಳ+ಓಟಿ 15,200/- to 86,000/-

9740733021, 9535028750

ಸೈಟು ಮಾರಾಟಕ್ಕಿದೆ

40x60, 30x50, 30x40
ಜೆಎಸ್‌ಎಸ್ 2ನೇಹಂತ,
ಸಪ್ತಮಾತೃಕ 30x40

9164309011

MAXIMUM LOAN

FOR
* Industrial Projects
* Hi-Tech Poultry Farms

9738640162

ಮಾರಾಟಕ್ಕಿದೆ

ಜೆಟ್ಟಿಹುಂಡಿ ಗ್ರಾಮದಲ್ಲಿ, ಸ.ನಂ 8/4 0.10 ಗುಂಟೆ ಮಾರಾಟಕ್ಕಿದೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಜೆಟ್ಟಿಹುಂಡಿ ಗ್ರಾಮ

97319 37223

ಸೈಟ್ ಫಾರ್ ಸೇಲ್

30x40 East
ವಿಶ್ವಪ್ರಜ್ಞ ಮರಟಿ ಕ್ಯಾತನಹಳ್ಳಿ

97319 37223

S.K.CONSTRUCTION

ಹೊಸ ಮನೆ ಕಟ್ಟಬೇಕೆ ಚಿಂತೆ ಬೇಡ ಲೋನ್ ಮಾಡಿಸಿ ಪ್ರಾರಂಭ 25% ನಾವೇ ಹಾಕಿ Plan 3D Elevation ಸಹಿತ ಉತ್ತಮ ಗುಣ ಮಟ್ಟದಲ್ಲಿ ಮನೆ ಮಾಡಿ ಕೊಡುತ್ತೇವೆ.

9620528490

ಮನೆ ಮಾರಾಟಕ್ಕಿದೆ

ಪೂರ್ವ ದಿಕ್ಕು, 3 ಅಂತಸ್ತಿನ ಮನೆ, ಅಳತೆ: 35x15, 3 ಅಂತಸ್ತು ಕೂಡ ಪ್ರತ್ಯೇಕ, 3 ಮನೆಗಳು ಕೂಡ ಬಾಡಿಗೆ ಕೊಡಬಹುದು. ತಿಂಗಳಿಗೆ 24 ಸಾವಿರ ಬಾಡಿಗೆ ಬರುತ್ತದೆ. ಬೆಲೆ.65 ಲಕ್ಷ. ಸ್ಥಳ: NIE ಕಾಲೇಜು ಹತ್ತಿರ, ವಿದ್ಯಾರಣ್ಯ ಪುರಂ, ಮೈಸೂರು. ಆಸಕ್ತರು ಸಂಪರ್ಕಿಸಿ:

9900299714

ಮಳಿಗೆ ಬಾಡಿಗೆಗೆ

ನ್ಯೂ ಕಾಂತರಾಜ ಅರಸು ರಸ್ತೆ, ಶಾರದಾದೇವಿ ನಗರ (ಬಸವೇಶ್ವರ ನಗರ) ದಲ್ಲಿ ಪೂರ್ವಾಭಿಮುಖವಾಗಿರುವ 10x12 ಅಳತೆಯ ಅಂಗಡಿ ಮಳಿಗೆ ಬಾಡಿಗೆಗೆ ಲಭ್ಯವಿದೆ. ಸಂಪರ್ಕಿಸಿ:

9448679146
7483824007

ಸೈಟುಗಳು ಮಾರಾಟಕ್ಕಿವೆ ಮುಡಾ ಅಪ್ರೂವ್ಡ್

30x40 - North West, 40x60 N/F, 40x60-W/F 58x60 - North East Corner ರಿಂಗ್ ರಸ್ತೆ ಹತ್ತಿರ ಯೂನಿವರ್ಸಿಟಿ ಲೇಔಟ್ ಎದುರು, 30x50 E/F ATME Engineering ಕಾಲೇಜ್ ಪಕ್ಕ 40x60 East Face ವರಣ ಹತ್ತಿರ

9900372792

SITE FOR SALE

40x60 W/F
KBL Silicon City
50x80 N/W Corner
Pragati / Anand Sagar

8792207164

SITE FOR SALE

30X40
KBL SILICON CITY

9620615226
9980770644

ಕೇರಳ ಶ್ರೀ ಪ್ರಸಿದ್ಧ ಜ್ಯೋತಿಷ್ಯರು
Famous Astrologer
ಪಂಡಿತ್ ಸಂತೋಷ್. 9741250896

ಕಾಣತೂರ್ ನಾಲ್ವರ ದೈವ, ಕಲ್ಲುಟಿ ಭಗವತಿ ಶಕ್ತಿಯಿಂದ ದಾಂಪತ್ಯ ಸಮಸ್ಯೆ, ಲೈಂಗಿಕ ಸಮಸ್ಯೆ, ಸ್ತ್ರೀ ಪುರುಷ ಪ್ರೇಮ ವಿಚಾರ, ಶತ್ರು ಬಾಧೆ, ಹಣಕಾಸಿನ ತೊಂದರೆ, ಮಾನಸಿಕ ಚಿಂತೆ, ಪ್ರೇತ ಬಾಧೆ, ವಿದೇಶ ಪ್ರಯಾಣ ಇನ್ನೂ ಮುಂತಾದ ಯಾವುದೇ ಕಠಿಣ ಸಮಸ್ಯೆಗಳಿಗೆ 3 ದಿನದಲ್ಲಿ ಶಾಶ್ವತ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ವಿನಯ ಮಾರ್ಗ ರಸ್ತೆ,, ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಎದುರು, ಬ್ಯಾಂಕ್ ಆಫ್ ಬರೋಡ ಪಕ್ಕ, ಸಿದ್ಧಾರ್ಥ ನಗರ, ಮೈಸೂರು

A TO Z WE-BUY

WE-BUY-OLD FURNITURES OLD VESSELS, ELECTRIC ITEMS, UPS, BATTERIES, OLD GENERATOR AND OTHER SCRAP ITEMS. Anand

9900945675

ಕೇರಳ ಶ್ರೀ ಪ್ರಸಿದ್ಧ ಮಹಾ ಮಾಂತ್ರಿಕ ಜ್ಯೋತಿಷ್ಯರು, ನಂ.1 ಮೋಡಿ ತಜ್ಞರು
ಪಂಡಿತ್ ಕೆ.ಎಸ್.ಕೃಷ್ಣಮೂರ್ತಿ
ಮೊ.: 9741806990

ತಾಯಿ ಚಾಮುಂಡೇಶ್ವರಿ ಕಾಣತೂರೆ ನಾಲ್ವರ ದೈವ ಚೌಡಮ್ ಕರೆ ಭಗವತಿ ಮಹಾ ಮಾಂತ್ರಿಕ ಶಕ್ತಿಯಿಂದ ಲೈಂಗಿಕ, ದಾಂಪತ್ಯ, ಸ್ತ್ರೀ ಪುರುಷ ಪ್ರೇಮ ವಿಚಾರ, ಕೋರ್ಟ್ ಕಚೇರಿ, ಹಣಕಾಸಿನ ತೊಂದರೆ, ವಿವಾದ, ಮನೆಯಲ್ಲಿ ಅಶಾಂತಿ, ಮಾನಸಿಕ ಚಿಂತೆ, ಇನ್ನೂ ಮುಂತಾದ ಸಮಸ್ಯೆಗಳಿಗೆ 3 ದಿನದಲ್ಲಿ ಪರಿಹಾರ ಶತಸಿದ್ಧ. ಖಾಯಂ ವಿಳಾಸ: ಸಬರ್ಬ್ ಬಸ್‌ಸ್ಟ್ಯಾಂಡ್ ಪಕ್ಕ, ಇರ್ವಿನ್ ರೋಡ್, ಆಂಧ್ರ ಶೈಲಿ ನಂದಿನಿ ಹೋಟೆಲ್ ಹಿಂಭಾಗ, ಮಾರುತಿ ಸುಜುಕಿ ಆಟೋ ಮೊಬೈಲ್ ಪಕ್ಕ ಮನೆಯಲ್ಲಿ ನೆಲೆಸಿದ್ದಾರೆ. ಹಳ್ಳಕೇರಿ, ಮೈಸೂರು ಇಲ್ಲಿ ಹೇಳುವ ವಿಚಾರಗಳನ್ನು ಗುಪ್ತವಾಗಿ ಇಡಲಾಗುತ್ತದೆ.

HOUSE FOR SALE

Duplex House Built on 40x68 or 2720 Sqft In Vivekananda Nagar (Near Bus Depot) No Brokers

8792720395

FOR LEASE / RENT

BPO CALL CENTER FOR LEASE OR RENT CONTACT

9845830203

ಬೇಕಾಗಿದ್ದಾರೆ

ಹೆಬ್ಬಾಳು, ಮೇಟಗಳ್ಳಿ ಕೈಗಾರಿಕಾ ಪ್ರದೇಶಗಳಲ್ಲಿ ಕೆಲಸ ಮಾಡಲು ಹುಡುಗ, ಹುಡುಗಿಯರು ಬೇಕಾಗಿದ್ದಾರೆ. ವಿದ್ಯಾರ್ಹತೆ B.Com, BSc, ITI, 2nd PUC (ಕೆಮೆಸ್ಟ್ರಿ) ವರೆಗೆ. ಊಟ ವಸತಿ ESI, PF ಸೌಲಭ್ಯವಿರುತ್ತದೆ.
ಸಂಬಳ: 13,000 ರಿಂದ 20,000 ಇರುತ್ತದೆ.

8951869646
9902645646

ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ (ಮೋಡಿ ಮಾಂತ್ರಿಕರು)
MOB: 9880583804

ಇವರು ಕೊಳ್ಳೇಗಾಲದ ಚೌಡಿ, ಭೂತರಾಯ ಅಘೋಚರ ಶಕ್ತಿಯಿಂದ ಸ್ತ್ರೀ ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ದೋಷ, ಸಾಲ ಬಾಧೆ, ಯಾವುದೇ ಸಮಸ್ಯೆಗಳಿಗೆ ಮೋಡಿ ಮಾಂತ್ರಿಕ ಶಕ್ತಿಯಿಂದ ಚೌಡಿ ಮತ್ತು ಭೂತರಾಯನ ಪ್ರಯೋಗ ದಿಂದ ಎರಡೇ ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಾಯನ್ಸ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟ್ಯಾಂಡ್, ಮೈಸೂರು–1

Document Lost

S.P. Bhushan, No. A-02-05, 6th Main, AIISH Layout, Bogadi 2nd Stage, South Mysore, Mysore-570 026, I have lost approved plan drawing No. LWCH493/02-03.
Finders please contact:

Mob: 6361585304

SITEs FOR SALE

20x30, 30x30, SITES FOR SALE, 3 KM FROM BOGADI RING ROAD 2500/ SQFT

7026901111

ಇಂದೇ ಸಂಪರ್ಕಿಸಿ

ಬೆಂಗಳೂರು ಹಾಗೂ ಮೈಸೂರು ಜಿಲ್ಲೆಗಳಲ್ಲಿ ಹೊಸದಾಗಿ ತೆರೆದಿರುವ ಕಂಪನಿಯೊಂದಕ್ಕೆ 156 ವಿವಿಧ ಹುದ್ದೆಗಳಿಗೆ SSLC, PUC, ITI, Degree ಆಗಿರುವ ಉತ್ಸಾಹಿ ಯುವಕ /ಯುವತಿಯರು ಬೇಕಾಗಿದ್ದಾರೆ. ಉಚಿತ ವಸತಿಂಊಟದೊಂದಿಗೆ
14,000–30,000/-(ESI+PF+OT)

6364103418,6366141586

ಮುಡಾ ಖಾತಾ ಸೈಟ್ ಸೇಲ್

30x40 ಈಸ್ಟ್ ಫೇಸಿಂಗ್ ದಡದಹಳ್ಳಿ, ಜ್ಞಾನಭಾರತಿ ಲೇಔಟ್, ಜೆಪಿನಗರದ ರಿಂಗ್ ರೋಡ್ ನಿಂದ 5 ಕಿ.ಮೀ.ದೂರ
ಡೈರೆಕ್ಟ್ ಓನರ್

9342123373

ಸೈಟು ಬೇಕಾಗಿದೆ

ಲಾಲ್ ಬಹದ್ದೂರ್ ಶಾಸ್ತ್ರಿನಗರ, ವಸಂತನಗರ, ಶಾಂತವೇರಿ ಗೋಪಾಲಗೌಡ ನಗರ, ಸಪ್ತಮಾತೃಕ ಲೇಔಟ್, ಪೊಲೀಸ್ ಲೇಔಟ್

9844436672

SITE FOR SALE

50×80
SOUTH FACING
SIDDARTHA NAGAR MYSORE

9740015350

ಕೆಲಸಕ್ಕೆ ಬೇಕಾಗಿದ್ದಾರೆ

ವಿದ್ಯಾರಣ್ಯಪುರಂ, ಜೆ.ಪಿ.ನಗರ, ಕುವೆಂಪುನಗರ, ಸರಸ್ವತಿಪುರಂ, ಮೇಟಗಳ್ಳಿ, ಕೂರ್ಗಳ್ಳಿ ಇಲ್ಲಿ ಕೆಲಸ ಮಾಡಲು 8th, 9th, 10th Any Degree & ITI, Deplom Pass & Fail (Mechine Operatore, Medicale Field. Helper) ಹುಡುಗರು & ಹುಡುಗಿಯರು ವಯಸ್ಸು 18 ರಿಂದ 35ರ ವರೆಗೆ ಮಾತ್ರ ಬೋಗಾದಿ ತಾಂಡವಪುರ ಇಲ್ಲಿ ರೆಸಾರ್ಟ್‌ಗಳಲ್ಲಿ House Keeping Helper, Stewards, Front Office Manager Security's) ವಿದ್ಯಾಭ್ಯಾಸವುಳ್ಳ & ವಿದ್ಯಾಭ್ಯಾಸ ಇಲ್ಲದೆ ಇರುವ ಮಹಿಳೆಯರು & ಪುರುಷರು ವಯಸ್ಸು 18 ರಿಂದ 55ರ ವರೆಗೆ ಮಾತ್ರ ಕೆಲಸಕ್ಕೆ ಬೇಕಾಗಿದ್ದಾರೆ

9036461347
9606226036, 9148319337

ಬೇಕಾಗಿದ್ದಾರೆ

ಅಡುಗೆ ಮನೆ ಕೆಲಸ ಮಾಡಿಕೊಂಡು ಮನೆಯಲ್ಲೇ ಇರುವಂತಹ ಮಹಿಳೆ ಊಟ ವಸತಿ ಉಚಿತ

9008779793

ಮೈಸೂರು ಮ್ಯಾರೇಜ್ ಬ್ಯೂರೋ

ಎಲ್ಲಾ ಜಾತಿಯ ವಧು ವರರು, ವಿಧುರರು, ವಿಧವೆಯರು, ವಿಚ್ಛೇದಿತರು ನೇರ ಸಂಪರ್ಕಿಸಿ. ಮದುವೆ ವಿಳಂಬವಾದಲ್ಲಿ ಪರಿಹಾರ ಶತಸಿದ್ಧ.
ಡಾ. ಗುರೂಜಿ

9448229184
7899625268

SC ಆದಿಕರ್ನಾಟಕ (ಬಲಗೈ)

BE, MTech, MBBS, MD, MS, BAMS, MSc, MBA, MCA, MCom, MA Phd, BSc, B.Com, BCA, BA Bed
ವಧುವರರಿಗೆ ಸಂಪರ್ಕಿಸಿ:
ನವಿಲೂರು ರಂಗಸ್ವಾಮಿ
ಮೈಸೂರು ಸಿಟಿ, ವಧುವರರ ಮಾಹಿತಿ ಕೇಂದ್ರ, ಎನ್.ಆರ್.ಮೊಹಲ್ಲಾ, ಮೈಸೂರು

8711974172

ಖಾಲಿ ನಿವೇಶನ /ಹಳೆ ಮನೆ ಬೇಕಾಗಿದೆ

15x30, 14x40, 13x50, 18x30
ಇಂತಹ ನಿವೇಶನ ಮೈಸೂರಿನಲ್ಲಿ ಬೇಕಾಗಿದೆ ಕಾರ್ನರ್‌ಗೆ ಮೊದಲ ಆದ್ಯತೆ

7353443366

SITE FOR SALE

30×40 West Facing Green Valley Park Shyadanahalli Near to Kusuma Chandrashekar Choultry KRS Road Mysore

9886527971

ಅಲಿನೇಷನ್ ಸೈಟ್

ಮಂಡ್ಯದಲ್ಲಿ ಡಿ.ಸಿ. ಅಲಿನೇಷನ್ ನಂ. ALN 303/ 08=09 ಅಸಮಾನ ಅಳತೆಯ ಸೈಟುಗಳು ಸರ್ಕಾರದ ಬೆಲೆಗಿಂತ 40% ಕಡಿಮೆ ದರದಲ್ಲಿ ಮಾರಾಟಕ್ಕಿದೆ.

9901234073

ಕೃಷ್ಣಮೂರ್ತಿಪುರಂನಲ್ಲಿ ಮನೆ ಮಾರಾಟಕ್ಕಿದೆ

ಮೈಸೂರು ನಗರ, ಕೃಷ್ಣಮೂರ್ತಿಪುರಂ, 4ನೇ ಕ್ರಾಸ್, ಮನೆ ನಂ. 1299, ನಿವೇಶನ 32x70+3x40 (ಪ್ಯಾಸೇಜ್) ಒಟ್ಟು 2360 ಚದರ ಅಡಿಯಲ್ಲಿ ಕಟ್ಟಿರುವ ಕೆಳ ಅಂತಸ್ತಿನಲ್ಲಿ 2 ಮನೆಗಳು 1ನೇ ಮಹಡಿಯಲ್ಲಿ 2 ಮನೆಗಳು, ಒಟ್ಟು 4 ಮನೆಗಳು, ತಿಂಗಳಿಗೆ ಬಾಡಿಗೆ ರೂ. 55000/– ಬರುತ್ತಿದೆ. ಬೆಲೆ ಚದರ ಅಡಿಗೆ 7400/– (ನೆಗೋಷಿಯೆಬಲ್). ಮಾಲೀಕರು

9845120632,9591408008

ಹೊಸ ಮನೆ ಮಾರಾಟಕ್ಕಿದೆ

ಪೂರ್ವ ದಿಕ್ಕು 1400 ಅಡಿ ಹಾಗೂ ಸೈಟುಗಳು ಮಾರಾಟಕ್ಕಿವೆ ಶ್ರೀನಗರ ಹಿಂಭಾಗ ಮತ್ತು ಶ್ರೀರಾಂಪುರ ರಿಂಗ್ ರಸ್ತೆ, ಮೈಸೂರು

8050345574

ಮನೆ ಬಾಡಿಗೆಗೆ ಇದೆ

3BHK, ಕಾರ್ ಪಾರ್ಕಿಂಗ್, 3 ರೂಂಗಳುಳ್ಳ ವರಾಂಡ, ಹಾಲ್, ಎಲ್ಲಾ ಅನುಕೂಲ ಇರುವ ಮನೆ ಸುಭಾಶ್‌ನಗರದಲ್ಲಿ (ಎನ್.ಆರ್.ಮೊಹಲ್ಲಾ ಹತ್ತಿರ) ಇದೆ. 2 ಲಕ್ಷ ಅಡ್ವಾನ್ಸ್, ಬಾಡಿಗೆ 16 ಸಾವಿರ

7348831599

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 6 ರಲ್ಲಿ

ಚಾಲಕ ಆತ್ಮಹತ್ಯೆ ಯತ್ನ ಪ್ರಕರಣ

ನಾಗಮಂಗಲ ಮಾಜಿ ಶಾಸಕರ ವಿರುದ್ಧ ಕಾನೂನು ಕ್ರಮಕ್ಕೆ ಸಿಐಡಿ ಶಿಫಾರಸು

ವಿಧಾನಸಭೆಯಲ್ಲಿ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಮಾಹಿತಿ

ಬೆಂಗಳೂರು, ಜು.21– ನಾಗಮಂಗಲ ಕೆಎಸ್ಆರ್‌ಟಿಸಿ ಬಸ್ ಚಾಲಕ ಹಾಗೂ ನಿರ್ವಾಹಕ ಜಗದೀಶ್ ಆತ್ಮಹತ್ಯೆಗೆ ಯತ್ನಿಸಿದ ಪ್ರಕರಣ ಕುರಿತು ಸಿಐಡಿ ವರದಿ ಹಾಗೂ ಶಿಫಾರಸ್ಸುಗಳ ಬಗ್ಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನಸಭೆಗೆ ಮಾಹಿತಿ ನೀಡಿದರು.



ಚಾಲಕನ ಆತ್ಮಹತ್ಯೆಗೆ ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಅವರೇ ಹೊಣೆ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಆರೋಪಿಸಿದ್ದರು. ಈ ಪ್ರಕರಣವನ್ನು ಸರ್ಕಾರ ಸಿಐಡಿ ತನಿಖೆಗೆ ನೀಡಿದ್ದು, ಅಧಿಕಾರಿಗಳು ಸರ್ಕಾರಕ್ಕೆ ಸಲ್ಲಿಸಿದ್ದ ವರದಿಯನ್ನು ಗುರುವಾರ ಗೃಹ ಸಚಿವರು ವಿಧಾನಸಭೆಯಲ್ಲಿ ಮಂಡಿಸಿದರು. ವರದಿಯಲ್ಲಿ ನಾಗಮಂಗಲ ಜೆಡಿಎಸ್ ಮಾಜಿ ಶಾಸಕ ಸುರೇಶ್ ಗೌಡ ವಿರುದ್ಧ ಕಾನೂನು ಕ್ರಮಕ್ಕೆ ಸಿಐಡಿ ಶಿಫಾರಸು ಮಾಡಿದೆ. ಅಲ್ಲದೆ, ಚಾಲಕ ವೈಯಕ್ತಿಕ ಕಾರಣಗಳಿಂದ ಆತ್ಮಹತ್ಯೆಗೆ ಯತ್ನಿಸಿದ್ದ ಎಂದು ಸಿಐಡಿ ತಿಳಿಸಿದೆ ಎಂದು ಹೇಳಿದರು.

ನಿಗಮದ ವಿಭಾಗೀಯ ನಿಯಂತ್ರಕರು ಜಗದೀಶ್ ಅವರನ್ನು ಮದ್ದೂರು ಘಟಕಕ್ಕೆ ವರ್ಗಾವಣೆ ಮಾಡಿದ್ದರು. ಅಲ್ಲಿಗೆ ಹೋಗಲು ಇಷ್ಟವಿಲ್ಲದೆ ಆತ್ಮಹತ್ಯೆಗೆ ಯತ್ನಿಸಿದ್ದರು. ವರ್ಗಾವಣೆ ತಪ್ಪಿಸಿಕೊಳ್ಳಲು ಈ ಪ್ರಯತ್ನ ಮಾಡಿದ್ದರು ಎಂಬುದು ಸಿಐಡಿ ತನಿಖೆಯಲ್ಲಿ ಪತ್ತೆಯಾಗಿದೆ. ಆತ್ಮಹತ್ಯೆಗೆ ಯತ್ನಿಸಿದ್ದ ಜಗದೀಶ್ ಮತ್ತು ಆತ್ಮಹತ್ಯೆಗೆ ಅನುಮತಿ ಕೋರುವ ಪತ್ರ ಬರೆದುಕೊಟ್ಟಿದ್ದ ಮತ್ತೊಬ್ಬ ಚಾಲಕ ಎಂ.ಎಸ್. ನವೀನ್‌ಕುಮಾರ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ನಿಗಮದ ನಾಗಮಂಗಲ ಘಟಕದ ಸಹಾಯಕ ಕಾರ್ಯ ಅಧೀಕ್ಷಕ ಎಸ್.ಎಲ್. ಮಂಜುನಾಥ್ ಕರ್ತವ್ಯಲೋಪ ಎಸಗಿರುವುದು ಪತ್ತೆಯಾಗಿದೆ. ಈ ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸದೇ ನಿರ್ಲಕ್ಷ್ಯ ವಹಿಸಿದ್ದ ಠಾಣಾಧಿಕಾರಿ ಅಶೋಕ್ ಕುಮಾರ್ ಮತ್ತು ಪೊಲೀಸ್ ಇನ್‌ಸ್ಪೆಕ್ಟರ್ ಕೂಡ ಲೋಪ ಎಸಗಿದ್ದಾರೆ. ಅವರ ವಿರುದ್ಧವೂ ಕ್ರಮಕ್ಕೆ ಶಿಫಾರಸು ಮಾಡಲಾಗಿದೆ ಎಂದು ವಿವರ ನೀಡಿದರು.

ಆತ್ಮಹತ್ಯೆಗೆ ಯತ್ನಿಸಿದ್ದ ಚಾಲಕನನ್ನು ಆಸ್ಪತ್ರೆಗೆ ಕರೆದೊಯ್ಯುವಾಗ ಮಾಜಿ ಶಾಸಕ ಸುರೇಶ್ ಗೌಡ ಅವರು ಆಂಬುಲೆನ್ಸ್ ತಡೆದಿರುವುದು ತನಿಖೆಯಲ್ಲಿ ದೃಢಪಟ್ಟಿದೆ. ಅವರ ವಿರುದ್ಧವೂ ಕ್ರಮ ಕೈಗೊಳ್ಳಲಾಗುವುದು, ಪ್ರಕರಣ ಸಂಬಂಧ 38 ಸಾಕ್ಷಿಗಳನ್ನು ವಿಚಾರಣೆಗೆ ಒಳಪಡಿಸಲಾಗಿದ್ದು, ಆತ್ಮಹತ್ಯೆಗೆ ಯತ್ನಕ್ಕೆ ಯಾವುದೇ ಪ್ರಚೋದನೆಗಳೂ ಕಂಡುಬಂದಿಲ್ಲ ಎಂದು ಹೇಳಿದರು.

ಸಿಐಡಿ ವರದಿಗೆ ಶಾಸಕ ಪಿ.ಎಂ. ನರೇಂದ್ರಸ್ವಾಮಿ ಅವರು ಆಕ್ಷೇಪ ವ್ಯಕ್ತಪಡಿಸಿದರು. ಈ ಪ್ರಕರಣವನ್ನು ಜೆಡಿಎಸ್‌ನ ಹೆಚ್.ಡಿ.ಕುಮಾರಸ್ವಾಮಿ ರಾಜಕೀಯಕ್ಕೆ ಬಳಸಿಕೊಂಡಿದ್ದಾರೆ. ಕಾಂಗ್ರೆಸ್ ಶಾಸಕರನ್ನು ಕೆಟ್ಟದಾಗಿ ಬಿಂಬಿಸುವ ಪ್ರಯತ್ನ ನಡೆದಿದೆ. ಈ ಸಂಚಿನ ಹಿಂದಿರುವವರನ್ನು ರಕ್ಷಿಸಲಾಗುತ್ತಿದೆ ಎಂದು ಆರೋಪಿಸಿದರು.

ರೈತರ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ



ಮಂಡ್ಯ, ಜು.21– 43ನೇ ವರ್ಷದ ರೈತ ಹುತಾತ್ಮರ ಹೊತ್ತಿನಲ್ಲಿ ರೈತರ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ (ಮೂಲ ಸಂಘಟನೆ) ಕಾರ್ಯಕರ್ತರು ನಗರದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು.

ನಗರದ ಸರ್‌ಎಂವಿ ಪ್ರತಿಮೆ ಬಳಿ ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆಯಲ್ಲಿ ಹೊರಟು ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು. ಬೆಳೆದು ನಿಂತಿರುವ ಬೆಳೆಗಳಿಗೆ ಕೆಆರ್‌ಎಸ್‌ನಿಂದ ನೀರು ಬಿಡುಗಡೆ ಮಾಡಬೇಕು. ಅಚ್ಚುಕಟ್ಟು ಪ್ರದೇಶದ ಕೆರೆಗಳ ಹೂಳು ತೆಗೆಸಿ ಕೆರೆಗಳಿಗೆ ನೀರು ತುಂಬಿಸಬೇಕು ಎಂದು ಆಗ್ರಹಿಸಿದರು.

ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ದೊರಕಿಸಿಕೊಡಲು ಡಾ.ಸ್ವಾಮಿನಾಥನ್ ವರದಿ ಆಧಾರಿತ ಬೆಲೆ ನೀತಿ ಜಾರಿ ಮಾಡಬೇಕು, ಸಕ್ಕರೆ ಕಾರ್ಖಾನೆಗೆ ಸರಬರಾಜು ಮಾಡುವ ಕಬ್ಬಿಗೆ ದರ ನಿಗದಿ ಮಾಡುವಾಗ ಉಪ ಉತ್ಪನ್ನ ಲಾಭಾಂಶ ಪರಿಗಣಿಸಬೇಕು, ಸಕ್ಕರೆ ಇಳುವರಿ ಆಧಾರಿತ ದರ ನಿಗದಿ ಕೈಬಿಟ್ಟು ರಾಜ್ಯಾದ್ಯಂತ ಏಕರೂಪ ದರ ನಿಗದಿ ಮಾಡಬೇಕು ಎಂದು ಒತ್ತಾಯಿಸಿದರು.

ಮನ್‌ಮುಲ್ ಹಾಲು ಖರೀದಿ ದರ ಕಡಿತ ಕೈಬಿಟ್ಟು ಪ್ರತಿ ಲೀಟರ್ ಹಾಲಿಗೆ 40 ರಿಂದ 42 ರೂ. ನೀಡಬೇಕು, ಕೊಬ್ಬರಿ ಕ್ವಿಂಟಾಲ್‌ಗೆ 18 ಸಾವಿರ ರೂ. ಬೆಲೆ ದೊರಕುವಂತೆ ಕ್ರಮ ವಹಿಸಬೇಕು, ರೇಷ್ಮೆ ಉತ್ಪಾದಕರಿಗೆ ಪ್ರೋತ್ಸಾಹಧನ ನೀಡಬೇಕು, ರೇಷ್ಮೆ ಇಲಾಖೆ ಜಮೀನನ್ನು ಬೇರೆ ಇಲಾಖೆಗೆ ವರ್ಗಾಯಿಸಬಾರದು ಎಂದು ಆಗ್ರಹಿಸಿದರು.

ಮುಚ್ಚಿರುವ ಸರ್ಕಾರಿ ಶಾಲೆಗಳನ್ನು ಪುನಶ್ಚೇತನಗೊಳಿಸಬೇಕು, ಮುಂಗಾರು ವೈಫಲ್ಯ ಕಂಡಿರುವುದರಿಂದ ರೈತರ ಸಂಕಷ್ಟ ತಡೆಯಲು ಪ್ರತಿ ಎಕರೆಗೆ 10 ಸಾವಿರ ರೂ. ಪರಿಹಾರ ನೀಡಬೇಕು. ಕೃಷಿ ಕಾರ್ಮಿಕರಿಗೆ ಜೀವನೋಪಾಯ ಪರಿಹಾರಕ್ಕೆ ಮುಂದಾಗಬೇಕು ಎಂದು ಒತಾಯಿಸಿದರು. ಪ್ರತಿಭಟನೆಯಲ್ಲಿ ಸಂಘದ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಕೆ.ರಾಮಲಿಂಗೇಗೌಡ, ಎಚ್.ಜಿ.ಪ್ರಭುಲಿಂಗ, ಬೋರಲಿಂಗೇ ಗೌಡ, ಯು.ಸಿ. ಉಮೇಶ್, ಬೋರೇಗೌಡ, ತಮ್ಮೇಗೌಡ ಇತರರಿದ್ದರು.

ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ


ಮಂಡ್ಯ, ಜು.21– ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಜು.22, 23 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಜು.22 ರಂದು ಬೆಳಗ್ಗೆ 9.30ಕ್ಕೆ ನಾಗಮಂಗಲದ ಬಿಜಿಎಸ್ ಕಾಲೇಜು ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆಳಗ್ಗೆ 11 ಗಂಟೆಗೆ ಮದ್ದೂರಿನ ಎಂ.ಹೆಚ್ ಚನ್ನೇಗೌಡ ವಿದ್ಯಾಲಯದಲ್ಲಿ ಕನ್ನಡ ಸಂಘ ಉದ್ಘಾಟನೆ ಮತ್ತು ಉಸ್ತುವಾರಿ ಸಚಿವರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬೆಳಗ್ಗೆ 11.45 ಮಂಡ್ಯದ ಸರ್ಕಾರಿ ಮಹಿಳಾ ಕಾಲೇಜಿನ ಕಾರ್ಯಕ್ರಮ, 12.30ಕ್ಕೆ ಕಾಸರವಾಡಿ ಮಹದೇವ ಅಭಿನಂದನಾ ಸಮಾರಂಭದಲ್ಲಿ ಭಾಗಿಯಾಗಿ ಸಂಜೆ ನಾಗಮಂಗಲದಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಜು.23 ರಂದು ಬೆಳಗ್ಗೆ 9.30 ರಿಂದ ಸಂಜೆ 4 ಗಂಟೆವರೆಗೆ ನಾಗಮಂಗಲದ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಸಂಜೆ 4 ಗಂಟೆಗೆ ಬೆಂಗಳೂರಿಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಲೆಗಳಿಗೆ ಮಧ್ಯರಾತ್ರಿಯಿಂದಲೇ ನೀರು



ಮಂಡ್ಯ, ಜು.21– ಕೆಆರ್‌ಎಸ್ ಅಣೆಕಟ್ಟೆಯಿಂದ ನಾಲೆಗಳಿಗೆ ಶುಕ್ರವಾರ ಮಧ್ಯರಾತ್ರಿಯಿಂದಲೇ ನೀರು ಹರಿಸಲಾಗುವುದು ಎಂದು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ.

ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಬೆಳೆದು ನಿಂತಿರುವ ಬೆಳೆಗಳ ರಕ್ಷಣೆಗಾಗಿ ರೈತರು ಕೂಡಲೇ ನೀರು ಬಿಡುಗಡೆ ಮಾಡುವಂತೆ ಹೋರಾಟ ನಡೆಸಿದ್ದರು. ಈ ಹೋರಾಟಕ್ಕೆ ಮಣಿದ ಸರ್ಕಾರ, ಕೆಆರ್‌ಎಸ್ ಅಚ್ಚುಕಟ್ಟು ಪ್ರದೇಶದ ಕೆರೆಗಳಲ್ಲಿ ಶೇ.20ಕ್ಕಿಂತಲೂ ಕಡಿಮೆ ನೀರಿನ ಸಂಗ್ರಹಣೆ ಇದ್ದು, ಈ ಹಿನ್ನೆಲೆಯಲ್ಲಿ ಮೈಸೂರು, ಮಂಡ್ಯ, ರಾಮನಗರ, ಬೆಂಗಳೂರಿನ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಕೆರೆ ಕಟ್ಟೆ ತುಂಬಿಸಲು ನಾಲೆ ಹಾಗೂ ನದಿ ಮೂಲಕ ಹತ್ತು ದಿನ ನೀರು ಹರಿಸಲಾಗುವುದು ಎಂದು ತಿಳಿಸಿದೆ.

ರೈತರು ಹೊಸದಾಗಿ ಯಾವುದೇ ಬೆಳೆ ಹಾಕದೇ ಜನ, ಜಾನುವಾರುಗಳ ಕುಡಿಯುವ ನೀರಿಗಾಗಿ ಮಾತ್ರ ಮಿತವಾಗಿ ಬಳಸಬೇಕೆಂದು ಕಾವೇರಿ ನೀರಾವರಿ ನಿಗಮದ ಅಧೀಕ್ಷಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗೌರವಧನಕ್ಕೆ ಆಗ್ರಹಿಸಿ ಅತಿಥಿ ಉಪನ್ಯಾಸಕರ ಪ್ರತಿಭಟನೆ



ಮಂಡ್ಯ, ಜು.21– ಗೌರವಧನ ಬಿಡುಗಡೆಗೆ ಆಗ್ರಹಿಸಿ ಅತಿಥಿ ಉಪನ್ಯಾಸಕರು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ರಾಜ್ಯ ಸಮನ್ವಯ ಸಮಿತಿ ಆಶ್ರಯದಲ್ಲಿ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದ ಉಪನ್ಯಾಸಕರು, ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಸರ್ಕಾರ ಸಂಪೂರ್ಣವಾಗಿ ಕಡೆಗಣಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರಸ್ತುತ ಶೈಕ್ಷಣಿಕ ಸಾಲಿನ ಫೆಬ್ರವರಿ ತಿಂಗಳ ಬಾಕಿ ಒಳಗೊಂಡಂತೆ 3 ತಿಂಗಳ ಗೌರವಧನ ವೇತನ ಪಾವತಿ ಮಾಡಿಲ್ಲ. ಇದರಿಂದ ಅತಿಥಿ ಉಪನ್ಯಾಸಕರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಕೂಡಲೇ ಗೌರವ ಧನ ಬಿಡುಗಡೆ ಮಾಡಬೇಕೆಂದು ಅವರು ಒತ್ತಾಯಿಸಿದರು. ಸಮಿತಿ ಮುಖಂಡರಾದ ಬಿ.ನಾಗರಾಜು, ವಿದ್ಯಾ, ಕೆ.ಸಿ.ಪ್ರಭಾ, ಎಂ.ಪಿ.ಆಯುಷಾ ಅಫ್ರಿನ್, ವಿದ್ಯಾಶ್ರೀ ಪ್ರತಿಭಟನೆ ನೇತೃತ್ವ ವಹಿಸಿದ್ದರು.

ಬೈಕ್‌ಗೆ ಟ್ರಾಕ್ಟರ್ ಡಿಕ್ಕಿ: ಇಬ್ಬರು ಯುವಕರ ಸಾವು

ಭಾರತೀನಗರ, ಜು.21– ಬೈಕ್‌ಗೆ ಟ್ರಾಕ್ಟರ್ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಯುವಕರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಇಲ್ಲಿಗೆ ಸಮೀಪದ ಮಾದರಹಳ್ಳಿ ಗ್ರಾಮದಲ್ಲಿ ನಡೆದಿದೆ.

ಮಂಡ್ಯ ಹೊರವಲಯದ ಎಸ್.ಡಿ. ಜಯರಾಂ ಬಡಾವಣೆ ನಿವಾಸಿಗಳಾದ ದಿಲೀಪ್ ಕುಮಾರ್(22), ಶ್ರೀನಿವಾಸ್ (21) ಮೃತಪಟ್ಟವರು. ಎಂದಿನಂತೆ ಕೆಲಸಕ್ಕೆ ತೆರಳಿದ್ದ ಇವರಿಬ್ಬರು ಗುರುವಾರ ರಾತ್ರಿ ಕೆ.ಎಂ.ದೊಡ್ಡಿಯಿಂದ ಮಂಡ್ಯದ ಎಸ್.ಡಿ.ಜಯರಾಂ ಬಡಾವಣೆಗೆ ಬೈಕ್‌ನಲ್ಲಿ ವಾಪಸ್ಸಾಗುತ್ತಿದ್ದ ವೇಳೆ ಮಾದರಹಳ್ಳಿ ಬಳಿ ಕಬ್ಬು ತುಂಬಿಕೊಂಡು ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆಗೆ ತೆರಳುತ್ತಿದ್ದ ಟ್ರಾಕ್ಟರ್ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ತೀವ್ರ ಗಾಯಗೊಂಡ ದಿಲೀಪ್‌ಕುಮಾರ್, ಶ್ರೀನಿವಾಸ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಕೆ.ಎಂ.ದೊಡ್ಡಿ ಪೊಲೀಸರು ಪರಿಶೀಲನೆ ನಡೆಸಿ ಮರಣೋತ್ತರ ಪರೀಕ್ಷೆಗಾಗಿ ಮಂಡ್ಯ ಜಿಲ್ಲಾಸ್ಪತ್ರೆಗೆ ರವಾನಿಸಿದರು. ಈ ಸಂಬಂಧ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಾಳೆ ಗೃಹರಕ್ಷಕರ ಸಂದರ್ಶನ

ಮಂಡ್ಯ, ಜು.21– ಜಿಲ್ಲಾ ಗೃಹರಕ್ಷಕ ದಳಕ್ಕೆ ಅರ್ಜಿ ಸಲ್ಲಿಸಿದ್ದ 107 ಅಭ್ಯರ್ಥಿಗಳ ಆಯ್ಕೆ ಸಂದರ್ಶನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಅಪರ ಜಿಲ್ಲಾಧಿಕಾರಿ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರ ಉಪಸ್ಥಿತಿಯಲ್ಲಿ ಜು. 23 ರಂದು ಬೆಳಗ್ಗೆ 8 ಗಂಟೆಗೆ ಜಿಲ್ಲಾ ಡಿಎಆರ್ ಮೈದಾನದಲ್ಲಿ ನಡೆಯಲಿದೆ ಎಂದು ಜಿಲ್ಲಾ ಗೃಹರಕ್ಷಕ ದಳದ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗಾಂಜಾ ಸಾಗಿಸುತ್ತಿದ್ದ ಯುವಕನ ಬಂಧನ

ಮದ್ದೂರು, ಜು.21– ಗಾಂಜಾ ಸಾಗಿಸುತ್ತಿದ್ದ ಯುವಕನನ್ನು ಅಬಕಾರಿ ಪೊಲೀಸರು ತಾಲೂಕಿನ ಹೊಸಗಾವಿಯಲ್ಲಿ ಬಂಧಿಸಿದ್ದಾರೆ.

ಗ್ರಾಮದ ನಿವಾಸಿ ಎ.ಸಿ.ಭರತ್ ಬಂಧಿತ ಆರೋಪಿ. ಈತನಿಂದ 310 ಗ್ರಾಂ ಒಣ ಗಾಂಜಾ ಸೊಪ್ಪನ್ನು ವಶಪಡಿಸಿಕೊಳ್ಳಲಾಗಿದೆ. ಗಾಂಜಾ ಸೊಪ್ಪು ಮಾರಾಟ ಮಾಡಲು ಸಾಗಿಸುತ್ತಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ಮೈಸೂರು ವಿಭಾಗದ ಜಂಟಿ ಆಯುಕ್ತ, ಉಪ ಆಯುಕ್ತರು ಹಾಗೂ ಮಂಡ್ಯ ವಿಭಾಗದ ಅಧೀಕ್ಷಕರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಿದ ಅಬಕಾರಿ ಪೊಲೀಸರು ಹೊಸಗಾವಿ ಗ್ರಾಮದ ದೇವಾಲಯದ ಬಳಿ ಭರತ್‌ನನ್ನು ವಶಕ್ಕೆ ಪಡೆದಿದ್ದಾರೆ. ಆರೋಪಿಯನ್ನು ಎನ್‌ಡಿಪಿಎಸ್ ಕಾಯ್ದೆ ನಿಯಮಾನುಸಾರ ಬಂಧಿಸಿದ್ದು, ಅಬಕಾರಿ ನಿರೀಕ್ಷಕ ಪ್ರೇಮ್ ಸಾಗರ್ ಆರೋಪಿ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಅಬಕಾರಿ ಇಲಾಖೆ ಸಿಬ್ಬಂದಿಗಳಾದ ಮುತ್ತುರಾಜು, ನವೀನ್ ಕುಮಾರ್, ಚಂದ್ರಶೇಖರ್, ವಾಹನ ಚಾಲಕ ಸತೀಶ್ ಭಾಗವಹಿಸಿದ್ದರು.

ಮೂರೂವರೆ ವರ್ಷದ ಹಸುಳೆ ಮೇಲೆ ಆಟೋ ಚಾಲಕನಿಂದ ಲೈಂಗಿಕ ದೌರ್ಜನ್ಯ

ಮಂಡ್ಯದಲ್ಲಿ ಪೈಶಾಚಿಕ ಕೃತ್ಯ

ಮಂಡ್ಯ, ಜು. 21– ಮೂರೂವರೆ ವರ್ಷದ ಹಸುಳೆ ಮೇಲೆ ಆಟೋ ಡ್ರೈವರ್ ಲೈಂಗಿಕ ದೌರ್ಜನ್ಯವೆಸಗಿದ ಪೈಶಾಚಿಕ ಕೃತ್ಯ ಸಕ್ಕರೆನಾಡು ಮಂಡ್ಯದಲ್ಲಿ ನಡೆದಿದ್ದು, ಕಾಮುಕ ಆಟೋ ಚಾಲಕನನ್ನು ಪೊಲೀಸರು ಬಂಧಿಸಿದ್ದಾರೆ. ಮಂಡ್ಯದ ಗಾಂಧಿನಗರ ನಿವಾಸಿ ಸುಂದರ್ ಬಂಧಿತ ಆಟೋ ಚಾಲಕ.

ಮಂಡ್ಯದ ಬಡಾವಣೆಯೊಂದರ ಮೂರೂವರೆ ವರ್ಷದ ಹಸುಳೆಯನ್ನು ಪ್ರತೀದಿನ ಬೇಬಿ ಕೇರ್‌ಗೆ ಬಿಟ್ಟು ವಾಪಸ್ ಕರೆತರಲು ಮಗುವಿನ ಪೋಷಕರು ಆಟೋ ಚಾಲಕ ಸುಂದರ್‌ನನ್ನು ನೇಮಿಸಿಕೊಂಡಿದ್ದರು. ಜುಲೈ 19ರಂದು ಬೆಳಗ್ಗೆ ಮಗುವನ್ನು ತನ್ನ ಆಟೋದಲ್ಲಿ ಕರೆದೊಯ್ದಿದ್ದ ಈತ, ಎಂದಿನಂತೆ ಸಂಜೆ 4.30ಕ್ಕೆ ಮನೆಗೆ ಕರೆತಂದು ಬಿಟ್ಟಿದ್ದ.

ರಾತ್ರಿ 8.30ರ ವೇಳೆಯಲ್ಲಿ ಮಗು ನೋವಿನಿಂದ ನರಳುತ್ತಾ, ಆಟೋ ಚಾಲಕ ಎಸಗಿದ ಕೃತ್ಯವನ್ನು ತಾಯಿಗೆ ತಿಳಿಸಿದೆ. ತಕ್ಷಣವೇ ಅವರು ಮಂಡ್ಯ ಪಶ್ಚಿಮ ಠಾಣೆಗೆ ದೂರು ಸಲ್ಲಿಸಿದ್ದು, ಅದೇ ದಿನ ರಾತ್ರಿ 10.35ಕ್ಕೆ ಪಶ್ಚಿಮ ಠಾಣೆಯ ಇನ್‌ಸ್ಪೆಕ್ಟರ್ ಬಿ. ದೇವರಾಜು ಮತ್ತು ಸಬ್‌ಇನ್‌ಸ್ಪೆಕ್ಟರ್ ಎಸ್.ಪ್ರಭಾ ಅವರು ಘಟನಾ ಸ್ಥಳಕ್ಕೆ ಭೇಟಿ ನೀಡಿ, ಆಟೋ ಚಾಲಕನನ್ನು ಪೋಕ್ಸೋ ಕಾಯ್ದೆಯಡಿ ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿ ಆತನನ್ನು ನ್ಯಾಯಾಂಗ ಬಂಧನಕ್ಕೊಳಪಡಿಸಲಾಗಿದೆ.

ನೇರ ಸಂದರ್ಶನ


ಮಂಡ್ಯ, ಜು.21– ಅಂಚೆ ಜೀವ ವಿಮಾ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ಅಂಚೆ ಜೀವ ವಿಮೆ ಪ್ರತಿನಿಧಿಗಳ ನೇಮಕಾತಿಗಾಗಿ ಆ.3 ರಂದು ಬೆಳಗ್ಗೆ 10 ಗಂಟೆಗೆ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯಲ್ಲಿ ವಾಸವಾಗಿರುವ ಅಭ್ಯರ್ಥಿಗಳಿಗೆ ಮಾತ್ರ ಅವಕಾಶವಿದ್ದು, ಹೆಚ್ಚಿನ ಮಾಹಿತಿಗೆ ಅಂಚೆ ವಿಮಾ ಅಧಿಕಾರಿ ನಾಗರಾಜ್ (9483658775) ಅವರನ್ನು ಸಂಪರ್ಕಿಸಬಹುದು ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಸ್‌ಐ ನೇಮಕಾತಿ ಅಕ್ರಮದ ತನಿಖೆಗೆ ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ನ್ಯಾಯಮೂರ್ತಿ ಬಿ. ವೀರಪ್ಪ ಏಕಸದಸ್ಯ ಆಯೋಗ ರಚನೆ

ಸರ್ಕಾರದ ಅಧಿಸೂಚನೆ; 3 ತಿಂಗಳಲ್ಲಿ ವರದಿಗೆ ಮನವಿ

ಬೆಂಗಳೂರು, ಜು.21– ಬಿಜೆಪಿ ಸರ್ಕಾರ ಅವಧಿಯಲ್ಲಿನ ಪಿಎಸ್‌ಐ ನೇಮಕಾತಿಯಲ್ಲಿ ನಡೆದಿದೆ ಎನ್ನಲಾಗಿರುವ ಅಕ್ರಮದ ಬಗ್ಗೆ ತನಿಖೆ ನಡೆಸಲು ಹೈ ಕೋರ್ಟ್ ನಿವೃತ್ತ ನ್ಯಾಯಾಧೀಶರಾದ ಬಿ.ವೀರಪ್ಪ ಅವರ ಏಕ ಸದಸ್ಯ ತನಿಖಾ ಆಯೋಗವನ್ನು ನೇಮಿಸಿ, ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ.



ಅಧಿಸೂಚನೆ ಸಂಖ್ಯೆ: 98/ನೇಮಕಾತಿ/2/2021, ದಿನಾಂಕ 21–01–2021 ರನ್ವಯ ಜರುಗಿದ 545 ಪಿಎಸ್‌ಐ ಆಯ್ಕೆ ಪ್ರಕ್ರಿಯೆಯಲ್ಲಿ ನೇಮಕಾತಿ ನಿಯಮ ಉಲ್ಲಂಘಿಸಲಾಗಿದೆಯೇ?. ಮೇಲಿನ ಆಯ್ಕೆ ಪ್ರಕ್ರಿಯೆಗಳಲ್ಲಿ ನೇಮಕಾತಿ ನಿಯಮಗಳು ಉಲ್ಲಂಘನೆಯಾಗಿದ್ದಲ್ಲಿ ಅಂತಹ ಉಲ್ಲಂಘನೆ, ಅಕ್ರಮಗಳು ಯಾವುವು?. ಆ ಅಕ್ರಮಗಳು ಯಾವ ಹಂತದಲ್ಲಿ ಜರುಗಿವೆ?. ಅಕ್ರಮಗಳಲ್ಲಿ ಭಾಗಿಗಳಾಗಿ ದುರ್ಲಾಭ ಪಡೆದಿರುವ ವ್ಯಕ್ತಿಗಳು ಯಾರು?. ಪಿಎಸ್‌ಐ ಹುದ್ದೆಗೆ ಅಭ್ಯರ್ಥಿಗಳ ನೇರ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಿಯಮಾನುಸಾರ, ಪಾರದರ್ಶಕವಾಗಿ ಮತ್ತು ಲೋಪರಹಿತವಾಗಿ ನಡೆಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳಾವುವು?. ಎಂಬುದರ ಬಗ್ಗೆ 3 ತಿಂಗಳೊಳಗೆ ವರದಿ ನೀಡುವಂತೆ ತನಿಖಾ ಆಯೋಗವನ್ನು ಕೋರಲಾಗಿದೆ.

ತನಿಖಾ ಆಯೋಗಕ್ಕೆ ಸಮಗ್ರ ಮಾಹಿತಿ ಹಾಗೂ ದಾಖಲೆಗಳನ್ನು ಒದಗಿಸುವ ಮೂಲಕ ತನಿಖೆಗೆ ಸಹಕರಿಸಬೇಕೆಂದು ಸಿಐಡಿ ಹಾಗೂ ಪೊಲೀಸ್ ನೇಮಕಾತಿ ವಿಭಾಗಗಳ ಅಧಿಕಾರಿಗಳಿಗೆ ಸರ್ಕಾರ ಸೂಚನೆ ನೀಡಿದೆ. ಈ ಸಂಬಂಧ ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು–ಎ) ಸರ್ಕಾರದ ಅಧೀನ ಕಾರ್ಯದರ್ಶಿ ಆರ್.ಬಾಣದರಂಗಯ್ಯ ಅಧಿಸೂಚನೆಯಲ್ಲಿ ತಿಳಿಸಿದ್ದಾರೆ.

ಪೊಲೀಸ್ ಸಬ್‌ಇನ್‌ಸ್ಪೆಕ್ಟರ್ (ಸಿವಿಲ್) 545 ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು 2021ರ ಅಕ್ಟೋಬರ್ 3ರಂದು 92 ಕೇಂದ್ರಗಳಲ್ಲಿ ಲಿಖಿತ ಪರೀಕ್ಷೆಯನ್ನು ನಡೆಸಲಾಗಿತ್ತು. ಲಿಖಿತ ಪರೀಕ್ಷೆಯಲ್ಲಿ ಅಕ್ರಮಗಳು ಕಂಡು ಬಂದ ಹಿನ್ನೆಲೆಯಲ್ಲಿ ಸಿಐಡಿ ತನಿಖೆಗೆ ಒಳಪಡಿಸಿ, ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ 52 ಅಭ್ಯರ್ಥಿಗಳು ಸೇರಿದಂತೆ ಇತರೆ ಆರೋಪಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಲಾಗಿದೆ. ಪ್ರಕರಣ ತನಿಖೆ ಮುಂದುವರೆದಿದ್ದು, ಆರೋಪಿತ ಅಭ್ಯರ್ಥಿ ಗಳು ಕಾನೂನುಬಾಹಿರವಾಗಿ ಪರೀಕ್ಷೆ ಬರೆದಿರುವುದು ದೃಢಪಟ್ಟಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ನಡೆಸುವ ಎಲ್ಲಾ ವೃಂದದ ಹುದ್ದೆಗಳ ನೇಮಕಾತಿಯಲ್ಲಿ ಅವರು ಭಾಗವಹಿಸಲು ಶಾಶ್ವತವಾಗಿ ನಿಷೇಧಿಸಲಾಗಿದೆ. ಇದರಲ್ಲಿ ಬಹು ಆಯಾಮದಲ್ಲಿ ಅಕ್ರಮ ನಡೆದಿರುವುದು ಕಂಡುಬಂದಿರುವುದರಿಂದ, ಇನ್ನು ಮುಂದೆ ಪೊಲೀಸ್ ನೇಮಕಾತಿಗಳು ಅತ್ಯಂತ ಪಾರದರ್ಶಕವಾಗಿ ನಡೆಸುವ ಅಗತ್ಯವಿದೆ. ಹಾಗಾಗಿ ಈ ಪ್ರಕರಣದಲ್ಲಿ ನ್ಯಾಯಾಂಗ ತನಿಖೆಯ ಅಗತ್ಯವಿರುವುದನ್ನು ಮನಗಂಡು ತನಿಖಾ ಆಯೋಗವನ್ನು ನೇಮಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ.





ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಮ್ಮ 82ನೇ ಹುಟ್ಟುಹಬ್ಬವನ್ನು ಶುಕ್ರವಾರ ಬೆಂಗಳೂರಿನ ನಿವಾಸದಲ್ಲಿ ಕೇಕ್ ಕತ್ತರಿಸುವ ಮೂಲಕ ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಕೆಪಿಸಿಸಿ ಕಾರ್ಯದರ್ಶಿ ಹಾಗೂ ಅಖಿಲ ಕರ್ನಾಟಕ ಡಾ. ಮಲ್ಲಿಕಾರ್ಜುನ ಖರ್ಗೆ ಅಭಿಮಾನಿಗಳ ಸಂಘದ ರಾಜ್ಯಾಧ್ಯಕ್ಷ ಸಿ.ನರೇಂದ್ರ ಇತರರು ಹಾಜರಿದ್ದರು.

ಜೈಹಿಂದ್–ದೇಶಭಕ್ತಿಗೀತೆಗಳ ಗಾಯನ ಸ್ಪರ್ಧೆ

ಮೈಸೂರು, ಜು. 21– ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ವತಿಯಿಂದ 'ಜೈಹಿಂದ್' ದೇಶಭಕ್ತಿಗೀತೆಗಳ ಗಾಯನ ಸ್ಪರ್ಧೆಯನ್ನು ಆಯೋಜಿಸಲಾಗಿದೆ.

ಸ್ಪರ್ಧೆಯಲ್ಲಿ ಮೂರರಿಂದ ಐದನೇ ತರಗತಿಯವರೆಗಿನ ಪ್ರಾಥಮಿಕ ಶಾಲಾ ವಿಭಾಗ, ಪ್ರೌಢಶಾಲಾ ವಿಭಾಗ, ಕಾಲೇಜು ವಿಭಾಗ, ಮಹಿಳೆಯರ ವಿಭಾಗ, ಪುರುಷರ ವಿಭಾಗ ಹಾಗೂ ಹಿರಿಯ ನಾಗರೀಕರ ವಿಭಾಗಗಳಲ್ಲಿ ನಡೆಯಲಿದೆ.

ಸ್ಪರ್ಧಿಗಳು 3 ನಿಮಿಷದ ಒಳಗಿನ ಹಾಡುಗಳನ್ನು ಆಯ್ಕೆಮಾಡಿಕೊಂಡು ಒಬ್ಬರು ಒಂದು ಹಾಡನ್ನು ಮಾತ್ರ ಹಾಡಲು ಅವಕಾಶವಿರುತ್ತದೆ. ಭಾಗವಹಿಸುವ ಎಲ್ಲಾ ಸ್ಪರ್ಧಿಗಳಿಗೂ ಪ್ರಮಾಣ ಪತ್ರ ನೀಡಲಾಗುತ್ತದೆ. ಜಯಲಕ್ಷ್ಮಿದೇವಿ ಪದವಿಪೂರ್ವ ಕಾಲೇಜು, ರಾಮಕೃಷ್ಣನಗರ, ಮೈಸೂರು ಇಲ್ಲಿ ಆ.6 ರ ಭಾನುವಾರದಂದು ಬೆಳಗ್ಗೆ 10 ಗಂಟೆಯಿಂದ ಸ್ಪರ್ಧೆ ನಡೆಯಲಿದೆ. ಮಾಹಿತಿಗಾಗಿ ಹಾಗೂ ನೋಂದಣಿಗಾಗಿ ಸಂಪರ್ಕಿಸಿ 8310306882 ಅಥವಾ 9964790442



ಮೈಸೂರಿನ ನಾದಬ್ರಹ್ಮ ಸಂಗೀತ ಸಭಾದಲ್ಲಿ ಶುಕ್ರವಾರ ಏರ್ಪಡಿಸಲಾಗಿದ್ದ ಡಾ. ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್‌ನ 21ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಮೈಸೂರು ಮೇಯರ್ ಶಿವಕುಮಾರ್ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಇಳೈ ಆಳ್ವಾರ್ ಸ್ವಾಮೀಜಿ, ವೈ.ಡಿ. ರಾಜಣ್ಣ, ಗ್ರೂಪ್‌ನ ಜಯರಾಂ ಇತರರು ಉಪಸ್ಥಿತರಿದ್ದಾರೆ.

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 5ರಲ್ಲಿ

ಮೈಸೂರು ಅರಮನೆ ಮಂಡಳಿ ಕಚೇರಿಯಲ್ಲಿ ದಾಂಧಲೆ; ಉಪ ನಿರ್ದೇಶಕರಿಗೆ ಕೊಲೆ ಬೆದರಿಕೆ

ಆರ್‌ಟಿಐ ಕಾರ್ಯಕರ್ತ ಯಶವಂತ ಕುಮಾರ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲು

ಮೈಸೂರು, ಜು.21–ಮೈಸೂರು ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್. ಸುಬ್ರಹ್ಮಣ್ಯ ಮತ್ತು ಸಿಬ್ಬಂದಿಗೆ ಕೊಲೆ ಬೆದರಿಕೆ ಹಾಕಿ ಕಚೇರಿಯ ಗ್ಲಾಸ್ ಒಡೆದು ಹಾಕಿದ ಆರೋಪದ ಮೇರೆಗೆ ಮಾಹಿತಿ ಹಕ್ಕು ಕಾರ್ಯಕರ್ತ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಾಗಿದೆ.

ಮೈಸೂರಿನ ಎಂ.ಕೆ.ಯಶವಂತ ಕುಮಾರ್ ಆರೋಪಕ್ಕೆ ಗುರಿಯಾದವರಾಗಿದ್ದು, ಈತ ಅರಮನೆ ಮಂಡಳಿ ಉಪ ನಿರ್ದೇಶಕರ ವಿರುದ್ಧ ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದ್ದ. ಈ ದೂರಿಗೆ ಸಂಬಂಧಿಸಿದಂತೆ ಜು.19ರಂದು ಬೆಳಗ್ಗೆ 10.30ರ ಸುಮಾರಿನಲ್ಲಿ ಅಪರ ಜಿಲ್ಲಾಧಿಕಾರಿಗಳು ಅರಮನೆ ಮಂಡಳಿ ಕಚೇರಿಯಲ್ಲಿ ವಿಚಾರಣೆ ನಡೆಸುತ್ತಿದ್ದ ವೇಳೆ ಯಶವಂತ ಕುಮಾರ್ ಏಕಾಏಕಿ ಅರಮನೆ ಮಂಡಳಿ ಉಪ ನಿರ್ದೇಶಕರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ, ಕೊಲೆ ಬೆದರಿಕೆ ಹಾಕಿದ್ದಲ್ಲದೇ, ಟೇಬಲ್ ಮೇಲೆ ಇದ್ದ ಗ್ಲಾಸ್ ಅನ್ನು ಒಡೆದು ಹಾಕಿದ್ದಾನೆ. ಈ ವೇಳೆ ಅರಮನೆ ಮಂಡಳಿಯ ಹೊರ ಗುತ್ತಿಗೆ ಭದ್ರತಾ ಸಿಬ್ಬಂದಿಗಳಾದ ಜಿ.ವೆಂಕಟೇಶ್ ಮತ್ತು ಯುವರಾಜ ಎಂಬುವರು ತಡೆಯಲು ಬಂದಾಗ ಅವರಿಗೂ ಕೂಡ ಕೊಲೆ ಬೆದರಿಕೆ ಹಾಕಿದ್ದಾನೆ ಎಂದು ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಲಾಗಿದೆ.

ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ದೇವರಾಜ ಠಾಣೆಗೆ ದೂರು ಸಲ್ಲಿಸಿರುವ ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ, ಮಾಹಿತಿ ಹಕ್ಕು ಕಾರ್ಯಕರ್ತ ಎನ್ನಲಾದ ಯಶವಂತ ಕುಮಾರ್ ಅರಮನೆ ಆವರಣದಲ್ಲಿರುವ ಮಳಿಗೆಗಳಿಂದ ಕಾನೂನು ಬಾಹಿರವಾಗಿ ಹಣ ವಸೂಲಿ ಮಾಡುವ ವಿಡಿಯೋವನ್ನು ಕೂಡ ತಮ್ಮ ದೂರಿನಲ್ಲಿ ಲಗತ್ತಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಯಶವಂತ ಕುಮಾರ್‌ಗಾಗಿ ಹುಡುಕಾಟ ನಡೆಸಿದ್ದಾರೆ.

ನಾಲ್ಕು ದ್ವಿಚಕ್ರ ವಾಹನಗಳ ಕಳವು

ಮೈಸೂರು, ಜು.21–ಮೈಸೂರಿನ ವಿವಿಧೆಡೆ ನಾಲ್ಕು ದ್ವಿಚಕ್ರ ವಾಹನಗಳನ್ನು ಕಳವು ಮಾಡಲಾಗಿದೆ. ಕುಂಬಾರ ಕೊಪ್ಪಲು ನಿವಾಸಿ ಟೈಲರ್ ಎಂ.ಆರ್. ಶಿವಕುಮಾರ್(41) ಎಂಬುವರು ಜು.19ರಂದು 4.30ರ ಸುಮಾರಿನಲ್ಲಿ ತಮ್ಮ ಮನೆ ಮುಂದೆ ಹೋಂಡಾ ಆಕ್ಟೀವಾ ಸ್ಕೂಟರ್ (ಕೆಎ 09 ಹೆಚ್‌ಇ 8496) ನಿಲ್ಲಿಸಿ ಅರ್ಧ ಗಂಟೆ ಬಿಟ್ಟು ನೋಡಿದಾಗ ಅವರ ಸ್ಕೂಟರ್ ಅನ್ನು ಕಳವು ಮಾಡಿರುವುದು ಗೊತ್ತಾಗಿದೆ.

ಆನಂದನಗರದ ನಿವೇದಿತಾ ಪಾರ್ಕ್ ಹಿಂಭಾಗ ವಾಸವಿರುವ ಮೈಸೂರಿನ ಜಸ್ಟ್‌ಡಯಲ್ ಕಂಪನಿಯ ಸಿಬ್ಬಂದಿ ಜೆನೀತ್ ಕುಮಾರ್(31) ಎಂಬುವರು ಜು.18ರಂದು ಸಂಜೆ 7 ಗಂಟೆ ಸುಮಾರಿನಲ್ಲಿ ಹೂಟಗಳ್ಳಿಯ ಕೆಇಬಿ ಎದುರಿಗಿರುವ ಡಾಲ್ಫಿನ್ ಬೇಕರಿ ಬಳಿ ಹೋಂಡಾ ಸಿಟಿ ಯೂನಿಕಾರ್ನ್ ಬೈಕ್ ಅನ್ನು (ಕೆಎ 45 ಆರ್4150) ನಿಲ್ಲಿಸಿ ಸಮೀಪದ ಅಂಗಡಿಯೊಂದಕ್ಕೆ ಹೋಗಿದ್ದು, 8 ಗಂಟೆ ಸುಮಾರಿನಲ್ಲಿ ಹಿಂತಿರುಗಿದಾಗ ಅವರ ಬೈಕ್ ಕಳುವಾಗಿರುವುದು ಗೊತ್ತಾಗಿದೆ.

ಚಾಮರಾಜ ಮೊಹಲ್ಲಾ ಕುಂಬರಗೇರಿಯಲ್ಲಿ ವಾಸವಿರುವ ಸಿವಿಲ್ ಕಾಂಟ್ರಾಕ್ಟರ್ ಎಂ. ಅಭಿಷೇಕ್(29) ಎಂಬುವರು ಜು.16ರಂದು ರಾತ್ರಿ 8 ಗಂಟೆ ಸುಮಾರಿನಲ್ಲಿ ನ್ಯೂ ಕಾಂತರಾಜ ಅರಸ್ ರಸ್ತೆಯಲ್ಲಿ ವೈಷ್ಣವಿ ಸ್ವೀಟ್ಸ್ ಎದುರು ಹೋಂಡಾ ಆಕ್ಟೀವಾ ಸ್ಕೂಟರ್ (ಕೆಎ 09 ಹೆಚ್‌ಟಿ 4578) ನಿಲ್ಲಿಸಿ ಸಮೀಪದ ತಮ್ಮ ಪರಿಚಯಸ್ಥನಾದ ಮೋಹನ್ ಕುಮಾರ್ ಎಂಬುವರ ಮನೆಗೆ ಹೋಗಿ 8.30ರ ವೇಳೆಗೆ ಹಿಂತಿರುಗುವಷ್ಟರಲ್ಲಿ ಅವರ ಸ್ಕೂಟರ್ ಕಳವು ಮಾಡಲಾಗಿದೆ.

ಎನ್.ಆರ್.ಮೊಹಲ್ಲಾದ ಶಿವಾಜಿ ರಸ್ತೆಯಲ್ಲಿ ವಾಸವಿರುವ ಗೃಹಿಣಿ ಸಲ್ಮಾಬಾನು (36) ಅವರು ತಮ್ಮ ಸುಜುಕಿ ಬರ್ಗ್‌ಮನ್ ಸ್ಕೂಟರ್ ಅನ್ನು (ಕೆಎ 09 ಜೆಜೆ 5471) ಜು.18ರಂದು ರಾತ್ರಿ ಮನೆ ಮುಂದೆ ನಿಲ್ಲಿಸಿದ್ದು, ಮರುದಿನ ಬೆಳಗ್ಗೆ ನೋಡಿದಾಗ ಸ್ಕೂಟರ್ ಕಳುವಾಗಿರುವುದು ಗೊತ್ತಾಗಿದೆ. ಈ ಸಂಬಂಧ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆ. ಮೈಸೂರು ನಗರದಲ್ಲಿ ದ್ವಿಚಕ್ರ ವಾಹನಗಳ ಕಳವು ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿದ್ದು, ವಾಹನ ಕಳುವಾದ ನಂತರ ತಡವಾಗಿ ಪೊಲೀಸ್ ಠಾಣೆಗಳಲ್ಲಿ ದೂರುಗಳು ದಾಖಲಾಗುತ್ತಿವೆ.

ಲಾಭದ ಆಸೆ ತೋರಿಸಿ 4.26 ಲಕ್ಷ ವಂಚನೆ

ಮೈಸೂರು, ಜು.21–ಕ್ರಿಪ್ಟೋ ಕರೆನ್ಸಿಯಲ್ಲಿ ಹೂಡಿಕೆ ಮಾಡಿದರೆ ಕಮಿಷನ್ ನೀಡುವುದಾಗಿ ನಂಬಿಸಿ ಆನ್‌ಲೈನ್ ಮೂಲಕ ಯುವತಿಗೆ 4.26 ಲಕ್ಷ ರೂ. ವಂಚಿಸಲಾಗಿದೆ.

ಮೈಸೂರಿನ ವಿದ್ಯಾಶಂಕರ ಲೇಔಟ್ ನಿವಾಸಿ ಆರ್.ಕಾವ್ಯಾ(25) ವಂಚನೆಗೊಳಗಾದವರಾಗಿದ್ದು, ಇವರಿಗೆ 8801715094977 ಸಂಖ್ಯೆಯಿಂದ ಪಾರ್ಟ್ ಟೈಮ್ ಜಾಬ್ ಇರುವುದಾಗಿ ವಾಟ್ಸಾಪ್ ಸಂದೇಶ ಬಂದಿದೆ. ಸಂದೇಶ ಬಂದ ಸಂಖ್ಯೆಯನ್ನು ಸಂಪರ್ಕಿಸಿದಾಗ ವಂಚಕರು ಅಮೆಜಾನ್ ಪ್ರಾಡಕ್ಟ್‌ಗಳನ್ನು ಮಾರಾಟ ಮಾಡಿದರೆ ಲಾಭ ದೊರೆಯುತ್ತದೆ ಎಂದು ತಿಳಿಸಿ ಟೆಲಿಗ್ರಾಂ ಆ್ಯಪ್‌ನಲ್ಲಿ ಅಮೆಜಾನ್ ಗ್ರೂಪ್ ಎಂದು ಇವರನ್ನು ಸೇರಿಸಿದ್ದಾರೆ. ನಂತರ ಕ್ರಿಪ್ಟೋ ಕರೆನ್ಸಿಯಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಕಮಿಷನ್ ದೊರೆಯುತ್ತದೆ ಎಂದು ನಂಬಿಸಿ 4.26 ಲಕ್ಷ ರೂ.ಗಳನ್ನು ವರ್ಗಾವಣೆ ಮಾಡಿಸಿಕೊಂಡು ವಂಚಿಸಲಾಗಿದೆ. ಈ ಸಂಬಂಧ ಮೈಸೂರು ನಗರ ಸೆನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಸಾಯಿ ಖಾನೆಗೆ ಸಾಗಿಸುತ್ತಿದ್ದ 13 ಜಾನುವಾರುಗಳ ರಕ್ಷಣೆ

ಕೆ.ಆರ್.ಪೇಟೆ, ಜು.21–ಕಸಾಯಿ ಖಾನೆಗೆ ಸಾಗಿಸುತ್ತಿದ್ದ 13 ಜಾನುವಾರುಗಳನ್ನು ರಕ್ಷಿಸಿರುವ ಕೆ.ಆರ್.ಪೇಟೆ ಗ್ರಾಮಾಂತರ ಠಾಣೆ ಪೊಲೀಸರು, ಅಶೋಕ ಲೇಲ್ಯಾಂಡ್ ಮಿನಿ ಗೂಡ್ಸ್ ವಾಹನ ವಶಪಡಿಸಿಕೊಂಡು ಇಬ್ಬರನ್ನು ಬಂಧಿಸಿದ್ದಾರೆ.

ಠಾಣೆಯ ಸಬ್ ಇನ್ಸ್‌ಪೆಕ್ಟರ್ ಬಿ.ಪ್ರಮೋದ್ ಅವರು ಜು.19ರಂದು ಬೆಳಗ್ಗೆ ಗಸ್ತಿನಲ್ಲಿದ್ದ ವೇಳೆ ಬಂದ ಖಚಿತ ಮಾಹಿತಿ ಮೇರೆಗೆ ವಡ್ಡರಗುಡಿ ಗ್ರಾಮದ ಬಳಿ ಬರುತ್ತಿದ್ದ ಅಶೋಕ ಲೇಲ್ಯಾಂಡ್ ಮಿನಿ ಗೂಡ್ಸ್ ವಾಹನವನ್ನು (ಕೆಎ 45 ಎ 2868) ತಡೆದು ತಪಾಸಣೆ ನಡೆಸಿದಾಗ ಅದರಲ್ಲಿ 13 ಜಾನುವಾರುಗಳು ಪತ್ತೆಯಾಗಿವೆ.

ವಾಹನದ ಚಾಲಕ ಪಿರಿಯಾಪಟ್ಟಣ ತಾಲೂಕು ದೊಡ್ಡ ಬ್ಯಾಲಾಳ ಗ್ರಾಮದ ಬಸವರಾಜು(22) ಮತ್ತು ವಾಹನದಲ್ಲಿದ್ದ ಚಿಂತಾಮಣಿ ತಾಲೂಕು ಬೀಚೇನಹಳ್ಳಿ ಗ್ರಾಮದ ಎನ್.ಲೋಕೇಶ್(42) ಎಂಬುವರನ್ನು ಬಂಧಿಸಿ ವಿಚಾರಣೆಗೊಳಪಡಿಸಿದಾಗ ಇವರುಗಳು ಜಾನುವಾರುಗಳನ್ನು ಸಾಲಿಗ್ರಾಮ ತಾಲೂಕು ಚುಂಚನಕಟ್ಟೆ ಸಂತೆಯಲ್ಲಿ ಖರೀದಿ ಮಾಡಿದ್ದು, ಅದನ್ನು ಮೈಸೂರು ಕಸಾಯಿ ಖಾನೆಗೆ ಅಡ್ಡ ದಾರಿಯಲ್ಲಿ ಸಾಗಿಸುತ್ತಿದ್ದರು ಎಂಬುದು ತಿಳಿದು ಬಂದಿದೆ. ಈ ಸಂಬಂಧ ಕೆ.ಆರ್.ಪೇಟೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೆಆರ್‌ಎಸ್ ನೀರಿನ ಮಟ್ಟ



ಗರಿಷ್ಠ ಮಟ್ಟ	124.80 ಅಡಿ
ಶುಕ್ರವಾರ	90.42 ಅಡಿ
ಒಳಹರಿವು	2726 ಕ್ಯುಸೆಕ್
ಹೊರಹರಿವು	403 ಕ್ಯುಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284.00 ಅಡಿ
ಶುಕ್ರವಾರ	2273.26 ಅಡಿ
ಒಳ ಹರಿವು	5222 ಕ್ಯುಸೆಕ್
ಹೊರ ಹರಿವು	800 ಕ್ಯುಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಶುಕ್ರವಾರ	2851.41 ಅಡಿ
ಒಳ ಹರಿವು	4743 ಕ್ಯುಸೆಕ್
ಹೊರ ಹರಿವು	50 ಕ್ಯುಸೆಕ್

ಮೈಷುಗರ್‌ನಲ್ಲಿ ಸಕ್ಕರೆ ಕದ್ದವನ ಹಿಡಿದು ಪೊಲೀಸರಿಗೆ ಒಪ್ಪಿಸಿದ ಸೆಕ್ಯೂರಿಟಿಗಳು

ಮಂಡ್ಯ, ಜು.21–ಮೈಷುಗರ್ ಕಾರ್ಖಾನೆಯಲ್ಲಿ ಸಕ್ಕರೆ ಕಳವು ಮಾಡಿದ್ದ ಖದೀಮನೋರ್ವನನ್ನು ಕಾರ್ಖಾನೆಯ ಭದ್ರತಾ ಸಿಬ್ಬಂದಿ ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಜು.20ರಂದು ಬೆಳಗಿನ ಜಾವ 3 ಗಂಟೆ ಸಮಯದಲ್ಲಿ ಭದ್ರತಾ ಸಿಬ್ಬಂದಿಗಳಾದ ಭರತ್ ಮತ್ತು ಸ್ವಾಮಿ ಎಂಬುವರು ಕರ್ತವ್ಯನಿರತರಾಗಿದ್ದ ವೇಳೆ ವ್ಯಕ್ತಿಯೋರ್ವ ಸಕ್ಕರೆ ಮೂಟೆ ಹೊತ್ತೊಯ್ಯುತ್ತಿರುವುದು ಕಂಡು ಬಂದಿದೆ. ತಕ್ಷಣವೇ ಆತನನ್ನು ಹಿಡಿದು ಪರಿಶೀಲಿಸಿದಾಗ 20 ಕೆ.ಜಿ. ತೂಕದ ಸಕ್ಕರೆಯನ್ನು ಆತ ಕದ್ದೊಯ್ಯುತ್ತಿದ್ದುದು ಗೊತ್ತಾಗಿದೆ. ಕೋಣೇನಹಳ್ಳಿ ತಿಟ್ಟು ಗ್ರಾಮದ ನವಲಯ್ಯ(53)ನನ್ನು ಮಂಡ್ಯ ಸೆಂಟ್ರಲ್ ಠಾಣೆಗೆ ಒಪ್ಪಿಸಲಾಯಿತು. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

ಹಸಿರು ನಮ್ಮ ಉಸಿರು

ಮೈಸೂರು ತಾಲೂಕು ಸೇರಿ ಜಿಲ್ಲೆಯಾದ್ಯಂತ

ಸರ್ಕಾರಿ ಭೂಮಿ ಒತ್ತುವರಿ ತೆರವು ಕಾರ್ಯಾಚರಣೆ ಆರಂಭ

ಆರ್‌ಐ, ಗ್ರಾಪಂ ಪಿಡಿಓ, ಭೂಮಾಪಕರು, ಗ್ರಾಮ ಆಡಳಿತ ಅಧಿಕಾರಿಗಳ ಜಂಟಿ ಸರ್ವೆ ನಂತರ ಸರ್ಕಾರಿ ಆಸ್ತಿಗಳ ಒತ್ತುವರಿ ತೆರವು



ಮೈಸೂರು, ಜು. 21(ಆರ್‌ಕೆ)– ಮೈಸೂರು ಮಹಾ ನಗರಪಾಲಿಕೆ ಅಧಿಕಾರಿಗಳು ನಗರದಲ್ಲಿ ಫುಟ್‌ಪಾತ್ ಅಂಗಡಿಗಳನ್ನು ತೆರವುಗೊಳಿಸುತ್ತಿರುವ ಬೆನ್ನಲ್ಲೇ ಜಿಲ್ಲಾಡಳಿತವು ಜಿಲ್ಲೆಯಾದ್ಯಂತ ಸರ್ಕಾರಿ ಆಸ್ತಿಗಳನ್ನು ರಕ್ಷಿಸಲು ಮುಂದಾಗಿದೆ.

ಸರ್ಕಾರಿ ಕೆರೆ, ಕಟ್ಟೆ, ಸ್ಮಶಾನಗಳಂತಹ ಆಸ್ತಿಗಳನ್ನು ಅನಧಿಕೃತವಾಗಿ ಒತ್ತುವರಿ ಮಾಡಿ ಕೆಲವರು ಸ್ವಾಧೀನಾನುಭವದಲ್ಲಿದ್ದಾರೆ ಎಂಬ ದೂರುಗಳು ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಜುಲೈ 6ರಂದು ಸಭೆ ನಡೆಸಿದ ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ನೀಡಿದ ದೂರಿನನ್ವಯ ಕಂದಾಯ ಇಲಾಖೆಯ ತಹಸೀಲ್ದಾರ್, ರೆವಿನ್ಯೂ ಇನ್ಸ್‌ಪೆಕ್ಟರ್‌ಗಳು, ಭೂಮಾಪಕರು, ಗ್ರಾಮ ಆಡಳಿತ ಅಧಿಕಾರಿಗಳು, ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು ಜಂಟಿ ಕಾರ್ಯಾಚರಣೆ ಆರಂಭಿಸಿದ್ದಾರೆ.

ಮೈಸೂರು ತಾಲೂಕು ತಹಸೀಲ್ದಾರ್ ಬಿ.ಎನ್. ಗಿರೀಶ್, ತಾಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿ ಗಿರೀಶ್ ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕ ಎಂ.ಜಿ. ಚಿಕ್ಕಣ್ಣ ನೇತೃತ್ವದ ಅಧಿಕಾರಿಗಳು ಹಾಗೂ ಸಿಬ್ಬಂದಿ ಜು. 20 ಮತ್ತು 21ರಂದು ತಾಲೂಕಿನಾದ್ಯಂತ ಕಸಬಾ, ಇಲವಾಲ, ವರುಣ, ಜಯಪುರ ಹೋಬಳಿ ವ್ಯಾಪ್ತಿಯ ಗ್ರಾಮಗಳಲ್ಲಿ ಜಂಟಿ ಸರ್ವೆ ನಡೆಸಿ ಸರ್ಕಾರಿ ಆಸ್ತಿಗಳನ್ನು ಒತ್ತುವರಿ ತೆರವುಗೊಳಿಸಿದರು.

ರಾಜಸ್ವ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು, ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು, ಭೂ ಮಾಪಕರು ಸ್ಥಳಕ್ಕೆ ಹಾಜರಾಗಿ ಕೆರೆ, ಕಟ್ಟೆ, ಸ್ಮಶಾನಗಳಂತಹ ಸರ್ಕಾರಿ ಆಸ್ತಿಗಳನ್ನು ಸರ್ವೆ ಮಾಡಿ ಒತ್ತುವರಿಯಾಗಿದ್ದರೆ ತೆರವುಗೊಳಿಸಿ ಹದ್ದುಬಸ್ತಿಗೆ ಕಲ್ಲುಗಳನ್ನು ನೆಟ್ಟು ರಕ್ಷಣೆ ಮಾಡಿ ಗ್ರಾಮಸ್ಥರ ಮಹಜರ್‌ನೊಂದಿಗೆ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಸ್ತಾಂತರಿಸಿದ್ದಾರೆ.

ಕಸಬಾ ಹೋಬಳಿಯ ನಾಗನಹಳ್ಳಿ, ಕೆಸರೆ, ಸಿದ್ದಲಿಂಗಪುರ, ಇಲವಾಲ ಹೋಬಳಿಯ ನಾಗವಾಲ, ಬೊಮ್ಮೇನಹಳ್ಳಿ, ಹುಯಿಲಾಳು, ಮೈದನಹಳ್ಳಿ, ಚಿಕ್ಕನಹಳ್ಳಿ, ದೊಡ್ಡಮಾರಗೌಡನಹಳ್ಳಿ, ಗುಂಗ್ರಾಲ್ ಛತ್ರ ಮೇಗಳಾಪುರ, ಕರಕನಹಳ್ಳಿ, ಜಯಪುರ ಹೋಬಳಿಯ ಬರಡನಪುರ, ಗೋಹಳ್ಳಿ, ಕೆಂಚಲಗೂಡು, ಚಿಕ್ಕಕಾಟೂರು, ಅಣಗಳ್ಳಿ, ಮುಳ್ಳೂರು, ಉದ್ಬೂರು, ಕಳಲವಾಡಿ, ತಳೂರು, ದೊಡ್ಡಕಾನ್ಯ, ವರುಣ ಹೋಬಳಿಯ ಕುಂಬ್ರಹಳ್ಳಿ, ಅರೇಗೌಡನಹಳ್ಳಿ, ಚಿಕ್ಕಹಳ್ಳಿ, ಭುಗತಹಳ್ಳಿ, ಹಾರೋಹಳ್ಳಿ ಹಾಗೂ ವಾಜಮಂಗಲ ಗ್ರಾಮಗಳಲ್ಲಿ ಜಂಟಿ ಸರ್ವೆ ನಡೆಸಿದ ಅಧಿಕಾರಿಗಳು, ಒತ್ತುವರಿಯಾಗಿದ್ದ 40 ಸರ್ಕಾರಿ ಆಸ್ತಿಗಳನ್ನು ತೆರವುಗೊಳಿಸಿ ಅಗತ್ಯ ದಾಖಲೆಗಳೊಂದಿಗೆ ಆಯಾ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಸ್ತಾಂತರ ಮಾಡಿದ್ದಾರೆ.

ಅದೇ ರೀತಿ ಮೈಸೂರು ಜಿಲ್ಲೆಯ ತಿ.ನರಸೀಪುರ, ನಂಜನಗೂಡು, ಹೆಚ್.ಡಿ. ಕೋಟೆ, ಸರಗೂರು, ಹುಣಸೂರು, ಪಿರಿಯಾಪಟ್ಟಣ, ಕೆ.ಆರ್.ನಗರ ಹಾಗೂ ಸಾಲಿಗ್ರಾಮ ತಾಲೂಕುಗಳಲ್ಲೂ ಆಯಾ ತಹಸೀಲ್ದಾರ್, ತಾಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಭೂ ದಾಖಲೆಗಳ ಸಹಾಯಕ ನಿರ್ದೇಶಕರ ನೇತೃತ್ವದಲ್ಲಿ ಸರ್ಕಾರಿ ಆಸ್ತಿಗಳ ಒತ್ತುವರಿ ತೆರವುಗೊಳಿಸಿ ಸಂರಕ್ಷಿಸುವ ಕಾರ್ಯ ಪ್ರಗತಿಯಲ್ಲಿದೆ.

ಜನ, ವಾಹನ ದಟ್ಟಣೆಯ ಹುಣಸೂರು ರಸ್ತೆಯಲ್ಲಿ ಮುರಿದು ಬಿದ್ದ ಮರದ ಕೊಂಬೆ

ಅದೃಷ್ಟವಶಾತ್ ತಪ್ಪಿದ ಅನಾಹುತ



ಮೈಸೂರು, ಜು.21(ಎಸ್‌ಬಿಡಿ)– ಭಾರೀ ಗಾಳಿಗೆ ಮೈಸೂರು–ಹುಣಸೂರು ರಸ್ತೆಯಲ್ಲಿ ಗುಲ್‌ಮೊಹರ್ ಮರದ ಕೊಂಬೆಯೊಂದು ಮುರಿದು ಬಿದ್ದಿದ್ದು, ಅದೃಷ್ಟವಶಾತ್ ಯಾವುದೇ ಅಪಾಯ ಸಂಭವಿಸಿಲ್ಲ.

ಮೈಸೂರು–ಹುಣಸೂರು ರಸ್ತೆ, ಜೆಸಿಇ ಕಾಲೇಜು ರಸ್ತೆ ಜಂಕ್ಷನ್ ಬಳಿ ಫುಟ್‌ಪಾತ್‌ನಲ್ಲಿರುವ ಗುಲ್‌ಮೊಹರ್ ಮರದ ಕೊಂಬೆ ಶುಕ್ರವಾರ ಸಂಜೆ 5.15ರ ವೇಳೆಯಲ್ಲಿ ಭಾರೀ ಗಾಳಿಗೆ ಮುರಿದು ರಸ್ತೆಗೆ ಅಡ್ಡಲಾಗಿ ಬಿದ್ದಿದೆ. ಅದೃಷ್ಟವಶಾತ್ ಕೂದಲೆಳೆ ಅಂತರದಲ್ಲಿ ವಾಹನ ಸವಾರರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮರದ ಸಮೀಪದಲ್ಲೇ ಇರುವ ಪ್ರಯಾಣಿಕರ ತಂಗುದಾಣ ಬಳಿ ನಿಂತಿದ್ದ ಹತ್ತಾರು ವಿದ್ಯಾರ್ಥಿಗಳು ಬಚಾವಾಗಿದ್ದಾರೆ.

ಈ ರಸ್ತೆಯಲ್ಲಿ ಸದಾ ವಾಹನ ಸಂಚಾರವಿರುತ್ತದೆ. ಹೂಟಗಳ್ಳಿ, ಇಲವಾಲ, ಬಿಳಿಕೆರೆ, ಹುಣಸೂರು, ಕೆ.ಆರ್.ನಗರ ಇನ್ನಿತರ ಊರುಗಳಿಂದ ಬರುವ ವಿದ್ಯಾರ್ಥಿಗಳು ತಂಗುದಾಣದ ಬಳಿ ಬಸ್ಸಿಗಾಗಿ ಕಾದು ನಿಲ್ಲುತ್ತಾರೆ. ಹೆಚ್ಚು ವಿದ್ಯಾರ್ಥಿಗಳು ಓಡಾಡುವ ಸಂದರ್ಭದಲ್ಲೇ ಕೊಂಬೆ ಮುರಿದು ಬಿದ್ದಿದ್ದರೂ ಸದ್ಯ ಯಾರಿಗೂ ತೊಂದರೆಯಾಗಿಲ್ಲ. ಜನರ ಮೇಲೆ ಬಿದ್ದಿದ್ದರೆ ಭಾರೀ ಅನಾಹುತವೇ ಸಂಭವಿಸುತ್ತಿತ್ತು.

ತೆರವಿಗೆ ನೆರವು: ಕೊಂಬೆ ರಸ್ತೆಗೆ ಅಡ್ಡಲಾಗಿ ಬಿದ್ದಿದ್ದರಿಂದ ಕೆಲಕಾಲ ಸಂಚಾರಕ್ಕೆ ಅಡ್ಡಿಯುಂಟಾಗಿತ್ತು. ಸ್ವಲ್ಪ ಜಾಗದಲ್ಲೇ ಒಂದರ ಹಿಂದೊಂದು ಸಂಚರಿಸುತ್ತಿದ್ದ ಕಾರಣ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಸಿಗ್ನಲ್ ಬಳಿ ಕಾರ್ಯ ನಿರ್ವಹಿಸುತ್ತಿದ್ದ ಹೋಂ ಗಾರ್ಡ್ ಸಿಬ್ಬಂದಿ ಕೂಡಲೇ ಸ್ಥಳಕ್ಕೆ ಬಂದು, ಪೊಲೀಸರಿಗೆ ಮಾಹಿತಿ ನೀಡಿದರು. ಬಳಿಕ ಕೊಂಬೆಯನ್ನು ಪಕ್ಕಕ್ಕೆ ಸರಿಸಲು ಯತ್ನಿಸಿದರಾದರೂ ಸಾಧ್ಯವಾಗಲಿಲ್ಲ. ಆಗ ವಾಹನದಲ್ಲಿ ಹೋಗುತ್ತಿದ್ದ ಕೆಲ ಯುವಕರು ಹಾಗೂ ತಂಗುದಾಣದ ಬಳಿ ನಿಂತಿದ್ದ ವಿದ್ಯಾರ್ಥಿಗಳು ಹೋಂಗಾರ್ಡ್‌ಗೆ ಕೈಜೋಡಿಸಿ, ರಸ್ತೆಯಲ್ಲಿ ಬಿದ್ದಿದ್ದ ಕೊಂಬೆಯನ್ನು ಪಕ್ಕಕ್ಕೆ ಸರಿಸಿ, ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ನಂತರ ಕೊಂಬೆಯನ್ನು ತೆರವುಗೊಳಿಸಲಾಯಿತು.

ಬಿರುಗಾಳಿ; ಎಚ್ಚರವಿರಲಿ: ಮುಂಗಾರು ದುರ್ಬಲವಾಗಿದ್ದು, ಬಿರುಗಾಳಿ ಜೋರಾಗಿದೆ. ಕೆಲವೊಮ್ಮೆ ಗಾಳಿಯ ರಭಸಕ್ಕೆ ದ್ವಿಚಕ್ರ ವಾಹನಗಳನ್ನು ಓಡಿಸುವುದೂ ಕಷ್ಟವಾಗುತ್ತದೆ. ರಸ್ತೆಯಲ್ಲಿರುವ ಧೂಳು ಮೇಲೇಳುವುದರಿಂದ ಇತರೆ ವಾಹನ ಸವಾರರಿಗೂ ತೊಂದರೆಯಾಗುತ್ತದೆ. ಮುಖ್ಯವಾಗಿ ಮರಗಳ ಬಳಿ ನಿಲ್ಲದಿರುವುದು ಒಳ್ಳೆಯದು. ಅದರಲ್ಲೂ ಗುಲ್‌ಮೊಹರ್ ಮರಗಳ ಬಗ್ಗೆ ತುಂಬಾ ಎಚ್ಚರವಹಿಸಬೇಕು. ಗಾಳಿಯ ರಭಸ ಸ್ವಲ್ಪ ಮಟ್ಟಿಗೆ ಹೆಚ್ಚಾದರೂ ಕೊಂಬೆಗಳು ಮುರಿದು ಬೀಳುತ್ತವೆ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕು. ರಸ್ತೆ ಬದಿ ಮರಗಳ ಪರಿಶೀಲನೆ ನಡೆಸಿ, ದುರ್ಬಲ ಕೊಂಬೆಗಳನ್ನು ತ್ವರಿತವಾಗಿ ತೆರವುಗೊಳಿಸಬೇಕು. ಕೆಲವೆಡೆ ಮರಗಳೇ ಬೀಳುವ ಸ್ಥಿತಿಯಲ್ಲಿವೆ. ಅಪಾಯ ಸಂಭವಿಸುವ ಮುನ್ನ ಈ ಬಗ್ಗೆ ಎಚ್ಚೆತ್ತುಕೊಳ್ಳಬೇಕಿದೆ.



ಅಂತರಾಷ್ಟ್ರೀಯ ವೈದ್ಯರ ದಿನಾಚರಣೆಯಂದು ಮುಖ್ಯಮಂತ್ರಿಗಳಿಂದ ಡಾಕ್ಟರ್ ಬಿ.ಸಿ. ರಾಯ್ ಪ್ರಶಸ್ತಿ ಪಡೆದ ಮೈಸೂರಿನ ಆರೋಗ್ಯ ಇಲಾಖೆಯ ತರಬೇತಿ ಕೇಂದ್ರದ ಪ್ರಾಂಶುಪಾಲ ಡಾ. ರವಿ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಮೈಸೂರು ನಗರ ಪತ್ರಿಕಾ ವಿತರಕ ಸಂಘದ ಉಪಾಧ್ಯಕ್ಷ ನಾಗೇಶ್ ಮೂರ್ತಿ, ನಗರ ಪಾಲಿಕೆ ಮಾಜಿ ಸದಸ್ಯರಾದ ಎಂ.ರಮೇಶ್, ಪಿ.ಎಸ್.ಭರತೇಶ್, ಪಿ.ವಿ.ಮಂಜುನಾಥ್ ಹಾಜರಿದ್ದರು.

ಮೂರನೇ ದಿನವೂ ಮೈಸೂರಲ್ಲಿ ಫುಟ್‌ಪಾತ್ ವ್ಯಾಪಾರಿಗಳ ತೆರವು


ಮೈಸೂರು, ಜು. 21 (ಆರ್‌ಕೆ)– ಅನಧಿಕೃತವಾಗಿ ಫುಟ್‌ಪಾತ್ ಮೇಲೆ ನಡೆಯುತ್ತಿರುವ ವ್ಯಾಪಾರ–ವಹಿವಾಟನ್ನು ಮೂರನೇ ದಿನ ಕೂಡ ಮೈಸೂರು ಮಹಾ ನಗರಪಾಲಿಕೆ ಅಧಿಕಾರಿಗಳು ತೆರವುಗೊಳಿಸಿದರು.

ಜು.20ರಂದು 50ಕ್ಕೂ ಹೆಚ್ಚು ಫುಟ್‌ಪಾತ್ ವ್ಯಾಪಾರಿಗಳು ಮೇಯರ್ ಅವರನ್ನು ಭೇಟಿ ಮಾಡಿ ಮನವಿ ಮಾಡಿಕೊಂಡಿದ್ದರಾದರೂ, ಆದರೆ ಅವರಿಗೆ ಕಾನೂನುಬದ್ಧ ಕಾರ್ಯಾಚರಣೆ ಬಗ್ಗೆ ಮನವರಿಕೆ ಮಾಡಿಕೊಡಲಾಗಿತ್ತು. ಯಥಾ ಪ್ರಕಾರ ಅಧಿಕಾರಿಗಳು ಕಾರ್ಯಾಚರಣೆ ಮುಂದುವರಿಸಿದ್ದು, ಅರಮನೆ ಸುತ್ತಲಿನ ರಸ್ತೆ, ಸಯ್ಯಾಜಿರಾವ್ ರಸ್ತೆಗಳಲ್ಲಿ ಫುಟ್‌ಪಾತ್ ಅಂಗಡಿಗಳನ್ನು ತೆರವುಗೊಳಿಸಿದರು. ಜು. 22ರಿಂದ ಇನ್ನೂ ಎರಡು ಹೆಚ್ಚುವರಿ ತಂಡಗಳನ್ನು ನಿಯೋಜಿಸಿ ಕಾರ್ಯಾಚರಣೆಯನ್ನು ತೀವ್ರಗೊಳಿಸಲಾಗುವುದು ಎಂದು ಪಾಲಿಕೆ ಹಿರಿಯ ಆರೋಗ್ಯಾಧಿಕಾರಿ ಡಾ. ಡಿ.ಜಿ. ನಾಗರಾಜ್ ತಿಳಿಸಿದ್ದಾರೆ.

ಬಿ.ಎನ್. ರಸ್ತೆಯ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಎದುರು, ಅಶೋಕ ರಸ್ತೆಯ ಸೇಂಟ್ ಫಿಲೋಮಿನಾ ಚರ್ಚ್ ಎದುರು, ಮಂಡಿ ಮೊಹಲ್ಲಾದ ಮಿಷನ್ ಆಸ್ಪತ್ರೆ ರಸ್ತೆ, ಸಿ.ವಿ. ರಸ್ತೆ, ಸಾಡೇ ರಸ್ತೆ, ಧನ್ವಂತರಿ ರಸ್ತೆ, ನಾರಾಯಣಶಾಸ್ತ್ರಿ ರಸ್ತೆ ಸೇರಿದಂತೆ ಪಾಲಿಕೆಯ ಎಲ್ಲಾ 9 ವಲಯ ಕಚೇರಿ ವ್ಯಾಪ್ತಿಯಲ್ಲಿ ಅಧಿಕಾರಿಗಳು ಫುಟ್‌ಪಾತ್ ಅಂಗಡಿ, ಒತ್ತುವರಿಯನ್ನು ತೆರವುಗೊಳಿಸಲಿದ್ದಾರೆ ಎಂದು ಅವರು ತಿಳಿಸಿದರು.

ಒಮ್ಮೆ ತೆರವುಗೊಳಿಸಿದ ನಂತರ ಮತ್ತೆ ಅದೇ ಜಾಗದಲ್ಲಿ ವ್ಯಾಪಾರ ನಡೆಸುವುದು ಕಂಡು ಬಂದರೆ, ವೀಡಿಯೋ ರೆಕಾರ್ಡ್ ಮಾಡಿ ಅಂತಹವರ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಿಧಿಸಬೇಕಾಗುತ್ತದೆ ಎಂದು ಡಾ. ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.

ಧರ್ಮಸ್ಥಳ, ವೀರೇಂದ್ರ ಹೆಗ್ಗಡೆ ವಿರುದ್ಧ ವರದಿಗಳಿಗೆ ನಿರ್ಬಂಧ



ಬೆಂಗಳೂರು: ಧರ್ಮಸ್ಥಳ ಹಾಗೂ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆಯವರ ವಿರುದ್ಧ ಯಾವುದೇ ಮಾಧ್ಯಮದ ಮೂಲಕ ಅವಹೇಳನಕಾರಿ ವರದಿ ಮಾಡದಂತೆ ಮತ್ತು ಈಗಾಗಲೇ ಸಾಮಾಜಿಕ ಮಾಧ್ಯಮಗಳೂ ಸೇರಿದಂತೆ ಇನ್ನಿತರೆ ಮಾಧ್ಯಮಗಳು ಮಾಡಿರುವ ಅವಹೇಳನಕಾರಿ ವರದಿಗಳನ್ನು ಅಳಿಸಿ ಹಾಕುವಂತೆ ಬೆಂಗಳೂರಿನ ಸಿಟಿ ಸಿವಿಲ್ ಕೋರ್ಟ್ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಲಯ ಆದೇಶಿಸಿದೆ.

ಈ ಸಂಬಂಧ ವಾದಿಗಳಾದ ಶೀನಪ್ಪ ಮತ್ತಿತರರು ಸಲ್ಲಿಸಿರುವ ಅಸಲು ದಾವೆಯನ್ನು ಸಿಸಿಎಚ್–11ನೇ ನ್ಯಾಯಾಲಯ ವಿಚಾರಣೆ ನಡೆಸಿ ಇದೇ 19ರಂದು ಈ ಕುರಿತಂತೆ ಆದೇಶಿಸಿದೆ.

ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಧೀಶರು ಶ್ರೀ ಕ್ಷೇತ್ರ ಧರ್ಮಸ್ಥಳ, ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ನಡೆಸುತ್ತಿರುವಂತಹ ಸಂಸ್ಥೆಗಳು ಹಾಗೂ ಅವರ ಕುಟುಂಬಸ್ಥರ ವಿರುದ್ಧ ಸಾಮಾಜಿಕ ಜಾಲತಾಣಗಳಾದ ವಾಟ್ಸಾಪ್, ಫೇಸ್ ಬುಕ್, ಇನ್‌ಸ್ಟಾಗ್ರಾಮ್, ಯೂಟ್ಯೂಬ್, ಟಿ.ವಿ.ಚಾನೆಲ್ ಹಾಗೂ ಇತರೆ ಯಾವುದೇ ರೀತಿಯ ಮಾಧ್ಯಮ ಪ್ರಕಾರಗಳಲ್ಲಿ ಸೌಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಅವಹೇಳನಕಾರಿ ವರದಿ ಅಥವಾ ಮಾತನಾಡಬಾರದು ಎಂದು ನಿರ್ಬಂಧಿಸಿ ಆದೇಶಿಸಿದೆ.

ಅಂತೆಯೇ, ಈಗಾಗಲೇ ಈ ಸಂಬಂಧ ಪ್ರಕಟಿಸಲಾಗಿರುವ ವರದಿಗಳನ್ನು ಅಳಿಸಿ ಹಾಕಬೇಕು' ಎಂದು ಆದೇಶಿಸಿರುವ ನ್ಯಾಯಾಧೀಶರು, 61 ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿದ್ದು ವಿಚಾರಣೆ ಮುಂದೂಡಿದ್ದಾರೆ. ಅರ್ಜಿದಾರರ ಪರ ಹೈಕೋರ್ಟ್ ವಕೀಲ ರಾಜಶೇಖರ ಎಸ್.ಹಿಲ್ಯಾರು ಮತ್ತು ಮಂಗಳೂರಿನ ಮಯೂರ ಕೀರ್ತಿ ವಾದ ಮಂಡಿಸಿದ್ದು.

ಮೈಸೂರಿನ ಕರಕುಶಲ ವಹಿವಾಟಿನಲ್ಲಿ ಭಾರೀ ಕುಸಿತ

● ಆರ್ಥಿಕ ಸಂಕಷ್ಟದಲ್ಲಿ ಕರಕುಶಲ ಕರ್ಮಿಗಳು ● 1270 ಕುಟುಂಬಗಳಿಗೆ ಇದೇ ಮೂಲ ವೃತ್ತಿ ● ವಾರ್ಷಿಕ 40 ಕೋಟಿ ವಹಿವಾಟು ● ರಫ್ತು ವಹಿವಾಟು 10 ರಿಂದ 4 ಕೋಟಿಗೆ ಕಡಿತ ● ರೋಸ್‌ವುಡ್ ಕರಕುಶಲ ವಸ್ತುಗಳ ರಫ್ತು ಸ್ಥಗಿತ

ಮೈಸೂರು, ಜು.21(ಬಿಎಲ್‌ಯು)– ಮೈಸೂರಿನ ಕುಶಲಕರ್ಮಿಗಳು ತಯಾರು ಮಾಡುವ ಕುಶಲಕಲೆಯ ವಸ್ತುಗಳಿಗೆ ದೇಶ–ವಿದೇಶದಲ್ಲಿ ಭಾರೀ ಬೇಡಿಕೆ ಇದೆ. ಭಾರತ ಮಾತ್ರವಲ್ಲದೆ ವಿದೇಶಗಳಿಗೆ ರಫ್ತಾಗುವ ಕರಕುಶಲ ವಸ್ತುಗಳ ವಹಿವಾಟು ಕೋಟಿಗೂ ಮೀರಿದೆ. ಆದರೆ ಈಗ ಮರದ ಬೆಲೆ ಹೆಚ್ಚಳ ಸೇರಿದಂತೆ ಹಲವು ಕಾರಣಗಳಿಂದ ಕರಕುಶಲ ವಸ್ತುಗಳ ವಹಿವಾಟು ಕುಸಿದಿದೆ. ಇದರಿಂದ ಇದನ್ನೇ ನಂಬಿ ಜೀವನ ಮಾಡುತ್ತಿದ್ದ ಕರಕುಶಲ ಕರ್ಮಿಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಮೈಸೂರಿನ ಬಿ.ಎಂ.ಶ್ರೀ ನಗರದ ಕರಕುಶಲ ನಗರದಲ್ಲಿ ಕುಶಲಕರ್ಮಿಗಳ ಕೈಚಳಕದಲ್ಲಿ ವಿಶಿಷ್ಟವಾದ ಕರಕುಶಲ ವಸ್ತುಗಳು ರೂಪ ಪಡೆಯುತ್ತವೆ. ನಗರದಲ್ಲಿ 1270 ಕರಕುಶಲ ಕುಟುಂಬಗಳು ಇದನ್ನೇ ಮೂಲ ವೃತ್ತಿ ಮಾಡಿಕೊಂಡಿವೆ. ಒಂದು ಮನೆಗೆ ಕನಿಷ್ಠ ಇಬ್ಬರು, ಮೂವರು ಅಂದರೂ 5 ಸಾವಿರಕ್ಕೂ ಹೆಚ್ಚು ಜನರು ಕರಕುಶಲ ವಸ್ತುಗಳನ್ನು ತಯಾರು ಮಾಡುತ್ತಾರೆ.

ವಿಶ್ವ ವಿಖ್ಯಾತ ಮೈಸೂರು ಅರಮನೆಯ ಮಾಡೆಲ್, ವಾಲ್ ಪ್ಲೇಟ್, ದೇವರ ಪ್ರತಿಮೆಗಳು ಸೇರಿದಂತೆ ಹಲವು ವಸ್ತುಗಳನ್ನು ಕರಕುಶಲ ಕರ್ಮಿಗಳು ಇಲ್ಲಿ ತಯಾರಿಸುತ್ತಾರೆ. ಈ ಕೆಲಸವನ್ನು ಎಲ್ಲರೂ ಮಾಡಲು ಸಾಧ್ಯವಿಲ್ಲ. ಸೃಜನಶೀಲತೆ ಇರುವ ಕಲಾಕಾರರಿಗೆ ಮಾತ್ರ ಈ ಕೆಲಸ ಮಾಡಲು ಸಾಧ್ಯ.



ಮೈಸೂರಿನಲ್ಲಿ 50 ಕರಕುಶಲ ತಯಾರಿಕಾ ಕೇಂದ್ರಗಳಿವೆ. ವರ್ಷಕ್ಕೆ ವಾರ್ಷಿಕ 40 ಕೋಟಿ ರೂಪಾಯಿ ವಹಿವಾಟು ನಡೆಯುತ್ತದೆ. ಬೆಂಗಳೂರು, ಕೊಲ್ಕತ್ತಾ, ದೆಹಲಿ, ಮುಂಬೈ ಸೇರಿದಂತೆ ಹಲವು ನಗರಗಳಿಗೆ ಇಲ್ಲಿನ ಕರಕುಶಲ ವಸ್ತುಗಳು ಮಾರಾಟವಾಗುತ್ತಿವೆ. ಆದರೆ ಮರದ ದುಬಾರಿ ಬೆಲೆ ಸೇರಿದಂತೆ ಹಲವು ಕಾರಣಗಳಿಂದ ಕರಕುಶಲ ವಸ್ತುಗಳ ತಯಾರಿಕೆ ಸುಮಾರು 35 ರಿಂದ 40 ರಷ್ಟು ಕಡಿಮೆಯಾಗಿದೆ ಎಂದು ಕರ್ನಾಟಕ ಕರಕುಶಲಕರ್ಮಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಸ್.ಅಶೋಕ್ ಕುಮಾರ್ ತಿಳಿಸಿದ್ದಾರೆ.

ಈ ಮೊದಲು ಬೆಲೆ ಕಡಿಮೆ ಇತ್ತು, ಹಾಗಾಗಿ ವಹಿವಾಟು ಹೆಚ್ಚಾಗಿತ್ತು. ಆದರೆ ಈಗ ಬೆಲೆ ಹೆಚ್ಚಾಗಿ, ವಹಿವಾಟು ಕಡಿಮೆಯಾಗಿದೆ. ಇದರಿಂದ ಕುಶಲಕರ್ಮಿಗಳು ಸಂಕಷ್ಟಕ್ಕೀಡಾಗಿದ್ದಾರೆ. ಈ ಮೊದಲು ಸರ್ಕಾರ ಮರವನ್ನು ಹರಾಜು ಹಾಕುತ್ತಿತ್ತು. ಜೊತೆಗೆ ಸಬ್ಸಿಡಿಯಲ್ಲಿ ಮರ ನೀಡುತ್ತಿತ್ತು. ಆದರೆ ಈಗ ಮರ ಖರೀದಿಗೆ ಆನ್‌ಲೈನ್ ವ್ಯವಸ್ಥೆ ಮಾಡಿರುವ ಕಾರಣ ಕೆಲವು ಸಮಸ್ಯೆಗಳು ಎದುರಾಗಿವೆ ಎಂದು ಅಶೋಕ್ ಕುಮಾರ್ ಹೇಳಿದರು.



ಬೀಟೆ ಅಥವಾ ರೋಸ್‌ವುಡ್‌ನಲ್ಲಿ ಮಾಡಿರುವ ಕರಕುಶಲ ವಸ್ತುಗಳಿಗೆ ತುಂಬಾ ಬೇಡಿಕೆ ಇತ್ತು. ರೋಸ್‌ವುಡ್‌ನಲ್ಲಿ ತಯಾರು ಮಾಡುತ್ತಿದ್ದ ಕರಕುಶಲ ವಸ್ತುಗಳನ್ನು ಅಮೆರಿಕಾ, ಫ್ರಾನ್ಸ್ ಸೇರಿದಂತೆ ಹಲವು ದೇಶಗಳಿಗೆ ರಫ್ತು ಮಾಡಲಾಗುತ್ತಿತ್ತು. ವಾರ್ಷಿಕ 20 ಕೋಟಿಗೂ ಮೀರಿ ವಹಿವಾಟು ನಡೆಯುತ್ತಿತ್ತು ಆದರೆ 2017 ರಲ್ಲಿ ಆಫ್ರಿಕಾ ಹೊರತುಪಡಿಸಿ ಭಾರತ ಸೇರಿದಂತೆ ವಿಶ್ವದ ಎಲ್ಲಾ ದೇಶಗಳು ರೋಸ್‌ವುಡ್ ಅನ್ನು ಬ್ಯಾನ್ ಮಾಡಿವೆ.

ಒಂದು ವೇಳೆ ರೋಸ್‌ವುಡ್‌ನಲ್ಲಿ ಕರಕುಶಲ ವಸ್ತುಗಳನ್ನು ತಯಾರಿಸಬೇಕಾದರೆ ಸರ್ಕಾರದಿಂದ ವೃಕ್ಷ ಸರ್ಟಿಫಿಕೇಟ್ ಪಡೆಯಬೇಕು. ಅದು ಇದ್ದವರಿಗೆ ಮಾತ್ರ ರೋಸ್‌ವುಡ್ ದೊರೆಯುತ್ತದೆ. ಆದರೆ ಈ ಸರ್ಟಿಫಿಕೇಟ್ ಪಡೆಯಲು 1.35 ಲಕ್ಷ ರೂಪಾಯಿ ಪಾವತಿಸಬೇಕು. ಜೊತೆಗೆ ನವೀಕರಣಕ್ಕೆ ಪ್ರತೀ ಸಲ 40 ಸಾವಿರ ರೂಪಾಯಿ ಪಾವತಿ ಮಾಡಬೇಕು. ಈ ನಿಯಮ ಪಾಲಿಸಿ ರೋಸ್ ವುಡ್ ಖರೀದಿಸಿ ಕರಕುಶಲ ವಸ್ತುಗಳನ್ನು ತಯಾರು ಮಾಡಿದರೆ ಇಂಚಿಂಚು ಮರಕ್ಕೂ ಅರಣ್ಯ ಇಲಾಖೆಗೆ ಲೆಕ್ಕ ಕೊಡಬೇಕು. ಈ ಕಾರಣದಿಂದ ಆ ಮರದ ಕರಕುಶಲ ವಸ್ತುಗಳ ತಯಾರಿಕೆಯನ್ನು ಸಂಪೂರ್ಣವಾಗಿ ನಿಲ್ಲಿಸಲಾಗಿದೆ. ಇದರಿಂದ ಸಹಜವಾಗಿಯೇ 20 ಕೋಟಿ ರೂಪಾಯಿಗಳ ರಫ್ತು ವಹಿವಾಟು ಸ್ಥಗಿತವಾಗಿದೆ.

ಆದರೆ ಬೀಟೆ ಮರ ಹೊರತುಪಡಿಸಿ ಸಾಗುವಾನಿ, ಶಿವಾನಿ ಮರಗಳಿಂದ ತಯಾರಾದ ಕರಕುಶಲ ವಸ್ತುಗಳನ್ನು ವಿದೇಶಗಳಿಗೆ ರಫ್ತು ಮಾಡಲಾಗುತ್ತಿದೆ. ಈ ಮೊದಲು ಇದರ ವಹಿವಾಟು 10 ಕೋಟಿಗೂ ಮೀರಿತ್ತು ಆದರೆ ಈಗ ವಾರ್ಷಿಕ ವಹಿವಾಟು 4 ಕೋಟಿ ರೂಪಾಯಿಗೆ ಕುಸಿದಿದೆ.

> ಮರ ಖರೀದಿಗೆ ಸರ್ಕಾರ ಸಬ್ಸಿಡಿ ನೀಡಬೇಕು. ಆರ್ಥಿಕ ಸಂಕಷ್ಟದಲ್ಲಿರುವ ಕುಶಲ ಕರ್ಮಿಗಳಿಗೆ ಸಾಲ ಸೌಲಭ್ಯ ನೀಡಬೇಕು. ಜೊತೆಗೆ ಮೈಸೂರಿನಲ್ಲಿ ತಯಾರಾದ ಕರಕುಶಲ ವಸ್ತುಗಳಿಗೆ ಉತ್ತಮ ಮಾರುಕಟ್ಟೆ ಸೌಲಭ್ಯ ಒದಗಿಸಬೇಕು. ಹೀಗಾದಾಗ ಭವಿಷ್ಯದಲ್ಲಿ ಕರಕುಶಲ ವಸ್ತುಗಳ ತಯಾರಿಕೆ ಜೀವ ಪಡೆಯುತ್ತದೆ. ಇಲ್ಲವೆಂದರೆ ಮುಂದಿನ ತಲೆಮಾರಿಗೆ ಈ ಕುಶಲ ಕಲೆಗಾರಿಕೆ ನಶಿಸುವ ಸಾಧ್ಯತೆ ಇದೆ.
>
> – ಕರಕುಶಲಕರ್ಮಿಗಳ ಆಗ್ರಹ

ಪೊನ್ನಂಪೇಟೆ ಬಳಿ ಮನೆ ಮೇಲೆ ಗುಂಡಿನ ದಾಳಿ

ಮನೆಯಲ್ಲಿದ್ದವರು ಪಾರು, ಕಿಟಕಿ, ಮರದ ಪಟ್ಟಿಗೂ ಹಾನಿ

ಮಡಿಕೇರಿ, ಜು.21– ಮನೆಯೊಂದರ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ ಘಟನೆ ಪೊನ್ನಂಪೇಟೆ ತಾಲೂಕಿನಿಂದ ವರದಿಯಾಗಿದೆ.



ಪೊನ್ನಂಪೇಟೆ ತಾಲೂಕಿನ ಬಲ್ಯ ಮುಂಡೂರು ಗ್ರಾಪಂ ವ್ಯಾಪ್ತಿಯ ಕೊಡ್ಜೆ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಅಲ್ಲಿನ ನಿವಾಸಿ ಮಾಚಿಮಾಡ ಡಿ.ಮಾಚಯ್ಯ ಎಂಬುವರ ಮನೆ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿದ್ದಾರೆ.

ಶುಕ್ರವಾರ ಮುಂಜಾನೆ 3.15 ಗಂಟೆಗೆ ಗುಂಡಿನ ದಾಳಿ ನಡೆಸಲಾಗಿದ್ದು, ಗಾಢ ನಿದ್ದೆಯಲ್ಲಿದ್ದ ಮನೆ ಮಂದಿ ಗುಂಡಿನ ಸದ್ದಿಗೆ ಬೆಚ್ಚಿ ಬಿದ್ದಿದ್ದಾರೆ. ಮನೆಯ ಬಲಭಾಗದ ಕಿಟಕಿಗೆ 2 ಗುಂಡುಗಳು ತಗುಲಿವೆ. ಗುಂಡಿನಿಂದ ಸಿಡಿಯಲ್ಪಟ್ಟ ಚಿಲ್ಲುಗಳು ಕಿಟಕಿಯ ಮರದ ಪಟ್ಟಿಗಳಿಗೆ ತಗುಲಿ, ಗಾಜುಗಳು ಒಡೆದಿವೆ. ಮಾತ್ರವಲ್ಲದೇ, ಬೆಡ್ ರೂಮ್‌ನ ಗೋಡೆಗಳಿಗೂ ಚಿಲ್ಲುಗಳು ತಗುಲಿವೆ. ದಾಳಿಯಲ್ಲಿ ಮನೆ ಮಂದಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಒಂದು ವಾರದ ಹಿಂದೆ ಮನೆಯವರು ಇಲ್ಲದ ಸಮಯದಲ್ಲಿ ಆವರಣದಲ್ಲಿ ನಿಂತಿದ್ದ ಡಿ. ಮಾಚಯ್ಯ ಅವರ ಕಾರಿನ ಮೇಲೆ ಮೊಳೆ ಹೊಡೆದು, ಕಲ್ಲಿನಿಂದ ಜಜ್ಜಿ ಜಖಂಗೊಳಿಸಿ, ಸೀಟ್ ಮೇಲೆ ವಾಹನಗಳ ಆಯಿಲ್ ಸುರಿದು ನಷ್ಟಗೊಳಿಸಲಾಗಿತ್ತು. ಇದೀಗ ಮನೆಯ ಮೇಲೆ ಗುಂಡು ಹಾರಿಸಿ ಭಯದ ವಾತಾವರಣ ಸೃಷ್ಟಿಸಲಾಗಿದೆ. ಮಾಹಿತಿ ಅರಿತ ಕುಟ್ಟ ವೃತ್ತ ನಿರೀಕ್ಷಕ ಮತ್ತು ಶ್ರೀಮಂಗಲ ಠಾಣಾಧಿಕಾರಿ ಹಾಗೂ ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲಿಸಿ, ಮಹಜರು ನಡೆಸಿದ್ದಾರೆ. ವಿಷಯ ತಿಳಿದ ಗ್ರಾಮಸ್ಥರು ಘಟನಾ ಸ್ಥಳಕ್ಕೆ ಆಗಮಿಸಿ ಜಮಾಯಿಸಿದ್ದರು. ಈ ಘಟನೆ ಕುರಿತು ಶ್ರೀಮಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರ ತನಿಖೆಯಿಂದ ಕೃತ್ಯದ ಹಿಂದಿರುವ ಕೈಗಳು ಮತ್ತು ನಿಖರ ಕಾರಣ ತಿಳಿದು ಬರಬೇಕಿದೆ.

ರೈತರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸಿ

ಫಸಲ್ ಭೀಮಾ, ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ ಸಮರ್ಪಕ ಅನುಷ್ಠಾನಕ್ಕೆ ಡಿಸಿ ಸೂಚನೆ



ಮಡಿಕೇರಿ, ಜು.21– ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಮತ್ತು ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ ಅನುಷ್ಠಾನ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ಪೂರ್ವಭಾವಿ ಸಭೆ ನಡೆಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು ಕೃಷಿ ಹಾಗೂ ತೋಟಗಾರಿಕೆ ಇಲಾಖೆ ವತಿಯಿಂದ ರೈತರಿಗೆ ಇರುವ ಸರ್ಕಾರದ ಯೋಜನೆಗಳನ್ನು ತಲುಪಿಸುವಲ್ಲಿ ಶ್ರಮಿಸುವಂತೆ ಸೂಚಿಸಿದರು.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಹಾಗೂ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ ಅನುಷ್ಠಾನ ಸಂಬಂಧಿಸಿದಂತೆ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳು ತೊಡಗಿಸಿಕೊಂಡು ವಿಮಾ ಯೋಜನೆಯನ್ನು ತಲುಪಿಸುವಂತಾಗಬೇಕು ಎಂದು ಅವರು ನಿರ್ದೇಶನ ನೀಡಿದರು.

ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಮತ್ತು ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ಸಂಬಂಧಿಸಿದಂತೆ ಕೃಷಿಕರಿಗೆ ಹೆಚ್ಚಿನ ಮಾಹಿತಿ ನೀಡುವಂತಾಗಬೇಕು. ಅರ್ಹ ಕೃಷಿಕರೆಲ್ಲರಿಗೂ ಸರ್ಕಾರದ ಸೌಲಭ್ಯ ತಲುಪುವಂತಾಗಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಬಾನಾ ಎಂ.ಶೇಕ್ ಅವರು ಮಾಹಿತಿ ನೀಡಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯು 2023–24 ನೇ ಸಾಲಿನಲ್ಲಿಯೂ ಜಾರಿಯಲ್ಲಿದೆ. ಅತಿವೃಷ್ಟಿ, ಅನಾವೃಷ್ಟಿ ಅಕಾಲಿಕ ಮಳೆ ಮತ್ತಿತರ ಪ್ರಾಕೃತಿಕ ವಿಕೋಪಗಳು ಸೇರಿದಂತೆ ಹಲವಾರು ಕಾರಣಗಳಿಂದ ಬೆಳೆ ನಷ್ಟ ಉಂಟಾದಾಗ ರೈತರಿಗೆ ವಿಮಾ ರಕ್ಷಣೆ ಮತ್ತು ಆರ್ಥಿಕ ಬೆಂಬಲ ನೀಡುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಈ ಯೋಜನೆಯಡಿಯಲ್ಲಿ ರೈತರ ವಿಮಾ ಕಂತನ್ನು ಆಹಾರ ಮತ್ತು ಎಣ್ಣೆಕಾಳು ಬೆಳೆಗಳಿಗೆ ಮುಂಗಾರು ಹಂಗಾಮಿಗೆ ಶೇ.2 ಎಂದು ಪರಿಗಣಿಸಲಾಗಿದೆ. ಮುಖ್ಯ ಬೆಳೆಗಳಿಗೆ ಯೋಜನೆಯನ್ನು ಗ್ರಾಮ ಪಂಚಾಯಿತಿ ಮಟ್ಟಕ್ಕೆ ಅಳವಡಿಸಲಾಗುವುದು. ಈ ಯೋಜನೆಯು ಸಾಲ ಪಡೆದ ಹಾಗೂ ಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿದ್ದು, ವಿಮಾ ಮೊತ್ತವು ಒಂದೇ ಆಗಿರುತ್ತದೆ. ಬಿತ್ತನೆ ಅಥವಾ ನಾಟಿ ಕಾಲಕ್ಕೆ, ಬೆಳವಣಿಗೆ ಹಂತದಲ್ಲಿ ಹಾಗೂ ಕಟಾವಿನ ನಂತರದ ನಷ್ಟವನ್ನು ಸಹ ಪರಿಗಣಿಸಲಾಗುವುದು ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕರು ಮಾಹಿತಿ ನೀಡಿದರು.

ಪ್ರಸಕ್ತ ಸಾಲಿನಲ್ಲಿ ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ, ಕೃಷಿ ವಿಮಾ ಕಂಪನಿಯನ್ನು ಬೆಳೆ ವಿಮೆ ಕಾರ್ಯಕ್ಕೆ ಆಯ್ಕೆ ಮಾಡಲಾಗಿದೆ. ವಿಮಾ ಅರ್ಜಿಗಳು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಲಭ್ಯವಿದ್ದು, ಈ ಯೋಜನೆಯಡಿ ಅರ್ಜಿಯನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಸಲ್ಲಿಸಿ ನೋಂದಾಯಿಸಿಕೊಳ್ಳಬಹುದು ಎಂದರು.

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ವಿಮಾ ಮೊತ್ತ ಮತ್ತು ರೈತರ ವಿಮಾ ಕಂತಿಗೆ ಸಂಬಂಧಿಸಿದಂತೆ ಭತ್ತ (ನೀರಾವರಿ) ಸಾಮಾನ್ಯ (ಪ್ರತಿ ಹೆಕ್ಟೇರ್‌ಗೆ) ವಿಮಾ ಮೊತ್ತ ರೂ.93,250, ರೈತರ ವಿಮಾ ಕಂತು ಶೇ.2, ರೈತರ ವಿಮಾ ಕಂತು ಮೊತ್ತ ರೂ.1865 ಆಗಿದ್ದು, ಕೃಷಿಕರು ಹೆಸರು ನೋಂದಾಯಿಸಿಕೊಳ್ಳಲು ಆಗಸ್ಟ್ 16 ಕೊನೆಯ ದಿನವಾಗಿದೆ ಎಂದು ವಿವರಿಸಿದರು.


ಹಾಗೆಯೇ ಭತ್ತ(ಮಳೆಯಾಶ್ರಿತ) ವಿಮಾ ಮೊತ್ತ ರೂ.63,750 ಆಗಿದ್ದು, ರೈತರ ವಿಮಾ ಕಂತು ಶೇ.2 ಆಗಿದೆ. ಆ ನಿಟ್ಟಿನಲ್ಲಿ ರೈತರ ವಿಮಾ ಕಂತು ಮೊತ್ತ ರೂ.1275 ಪಾವತಿಸಿ ಹೆಸರು ನೋಂದಾಯಿಸಿಕೊಳ್ಳಲು ಆಗಸ್ಟ್, 16 ಕೊನೆಯ ದಿನವಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಮಾಹಿತಿ ನೀಡಿದರು.

ಮುಸುಕಿನಜೋಳ(ಮಳೆಯಾಶ್ರಿತ) ಸಾಮಾನ್ಯ ವಿಮಾ(ಪ್ರತಿ ಹೆಕ್ಟೇರ್‌ಗೆ) ವಿಮಾ ಮೊತ್ತ ರೂ.56,500, ರೈತರ ವಿಮಾ ಕಂತು ಶೇ.22 ಆಗಿದ್ದು, ರೈತರ ವಿಮಾ ಕಂತು ಮೊತ್ತ ರೂ.12,430 ಆಗಿದೆ. ರೈತರು ಹೆಸರು ನೋಂದಾಯಿಸಿಕೊಳ್ಳಲು ಜುಲೈ 31 ಕೊನೆಯ ದಿನವಾಗಿದೆ ಎಂದರು.

ಹೆಚ್ಚಿನ ಮಾಹಿತಿಗೆ ಕೃಷಿ ವಿಮಾ ಕಂಪನಿಯ ದೂ.ಸಂ. 18004250505, ವಿಮಾ ಕಂಪನಿಯ ಪ್ರತಿನಿಧಿಗಳಾದ ಸ್ಮಿತಾ ಸಿ.ಡಿ, ದೂ.ಸಂ. 7019969942 ಹಾಗೂ ಸತೀಶ್ ಎಚ್.ಆರ್ ದೂರವಾಣಿ ಸಂ: 8618234069 ಸಂಪರ್ಕಿಸಬಹುದು. ಈ ಯೋಜನೆಯಲ್ಲಿ ರೈತರು ಅರ್ಜಿಯೊಂದಿಗೆ ಪಹಣಿ, ಬ್ಯಾಂಕ್ ಪಾಸ್ ಪುಸ್ತಕ ಮತ್ತು ಆಧಾರ್ ಸಂಖ್ಯೆ ನೀಡಿ ನೋಂದಾಯಿಸಿಕೊಳ್ಳಬೇಕು ಎಂದು ಶಬನಾ ಎಂ.ಶೇಕ್ ಅವರು ವಿವರಿಸಿದರು.

ಕೊಡಗಲ್ಲಿ ಭಾರೀ ಗಾಳಿಯೊಂದಿಗೆ ಸಾಧಾರಣ ಮಳೆ

ಮುರಿದು ಬಿದ್ದ ಮರಗಳು, ವಿದ್ಯುತ್ ಕಂಬಗಳು, ವಿದ್ಯುತ್ ವ್ಯತ್ಯಯ





ಮಡಿಕೇರಿ, ಜು.21– ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಸಹಿತ ಸಾಧಾರಣ ಮಳೆ ಮುಂದುವರೆದಿದೆ. ಭಾರೀ ಗಾಳಿಗೆ ಮರಗಳು ಮುರಿದು ಬಿದ್ದ ಪರಿಣಾಮ ಮನೆ ಹಾಗೂ ವಾಹನಗಳಿಗೆ ಹಾನಿಯಾದ ಘಟನೆಗಳು ನಡೆದಿದೆ. ಇನ್ನು ಮರಗಳು ವಿದ್ಯುತ್ ತಂತಿಗಳ ಮೇಲೆ ಬಿದ್ದ ಪರಿಣಾಮ ಕೆಲವು ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಿದ್ದು, ದುರಸ್ಥಿ ಕಾರ್ಯವೂ ಸಾಗುತ್ತಿದೆ.

ನಗರದ ಜಿಲ್ಲಾಧಿಕಾರಿ ಬಂಗ್ಲೆ ಹಿಂಭಾಗ ಬೃಹತ್ ಮರವೊಂದು ರಸ್ತೆಗೆ ಉರುಳಿ ಬಿದ್ದಿದೆ. ಈ ವೇಳೆ ರಸ್ತೆ ಬದಿಯಲ್ಲಿ ನಿಲ್ಲಿಸಲಾಗಿದ್ದ 3 ದ್ವಿಚಕ್ರ ವಾಹನಗಳು ಮರದ ಅಡಿಯಲ್ಲಿ ಸಿಲುಕಿಕೊಂಡಿವೆ. ಆದರೆ ಯಾವುದೇ ವಾಹನಗಳಿಗೆ ಅದೃಷ್ಟವಶಾತ್ ಹಾನಿ ಸಂಭವಿಸಿಲ್ಲ. ಅರಣ್ಯ ಇಲಾಖೆ ಮರವನ್ನು ತೆರವುಗೊಳಿಸಿ ವಾಹನಗಳ ಸಂಚಾರ ಅನುವು ಮಾಡಿದ್ದಾರೆ.

ಸುಂಟಿಕೊಪ್ಪ ಸಮೀಪದ ಕೆದಕಲ್ ಗ್ರಾಮ ಪಂಚಾಯತಿಗೆ ಸೇರಿದ 7ನೇ ಮೈಲು ವಿಕ್ರಂ ಬಡಾವಣೆಯ ನಿವಾಸಿ ವಸಂತಿ ಎಂಬುವರ ಮನೆಯ ಮೇಲೆ ಭಾರೀ ಗಾತ್ರದ ಮರ ಮುರಿದು ಬಿದ್ದು ಹಾನಿ ಸಂಭವಿಸಿದೆ. ಶುಕ್ರವಾರ ಮುಂಜಾನೆ 3.30 ಗಂಟೆಯ ವೇಳೆಗೆ ಭಾರಿ ಗಾಳಿಗೆ ಬೀಟೆ ಮರವೊಂದು ಮುರಿದು ಬಿದ್ದಿದೆ. ಮರ ಬಿದ್ದ ಪರಿಣಾಮ ಅಡುಗೆ ಕೋಣೆ, ಶೌಚಾಲಯ ಹಾನಿಯಾಗಿದೆ. ಮಾತ್ರವಲ್ಲದೇ, ಮನೆಯ ಪಕ್ಕ ನಿಲ್ಲಿಸಿದ್ದ ಕಾರು ಅಲ್ಪ ಪ್ರಮಾಣದಲ್ಲಿ ಜಖಂಗೊಂಡಿದೆ. ಸ್ಥಳಕ್ಕೆ ನಾಡ ಕಚೇರಿ ಗ್ರಾಮ ಲೆಕ್ಕಿಗ ಜಯಂತ್, ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಭಾರೀ ಗಾಳಿಗೆ ಹಾರಿದ ಶೀಟುಗಳು

ನಾಪೋಕ್ಲು, ಜು.21– ಸಮೀಪದ ಕಕ್ಕಬೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಭಾರೀ ಗಾಳಿ ಮಳೆಗೆ ಗ್ರಾಮದ ನಿವಾಸಿ ನಸೀಮ ಎಂಬುವರ ಮನೆಯ ಚಾವಣಿಗೆ ಅಳವಡಿಸಿದ್ದ ಶೀಟ್‌ಗಳು ಹಾರಿ ಹೋಗಿ ನಷ್ಟ ಸಂಭವಿಸಿದೆ. ಸ್ಥಳಕ್ಕೆ ಗ್ರಾಪಂ ಅಧ್ಯಕ್ಷ ಕಲಿಯಂಡ ಸಂಪನ್ ಅಯ್ಯಪ್ಪ, ಕಂದಾಯ ಪರಿವೀಕ್ಷಕ (ಅರ್.ಐ) ರವಿಕುಮಾರ ಶುಕ್ರವಾರ ಭೇಟಿ ನೀಡಿ ಪರಿಶೀಲಿಸಿ ಮಾಹಿತಿ ಸಂಗ್ರಹಿಸಿ ಸೂಕ್ತ ಕ್ರಮ ಕೈಗೊಂಡಿದ್ದಾರೆ.



ಕುಂಟುತ್ತಾ ಸಾಗುತ್ತಿರುವ ಭಾಗಮಂಡಲ ಮೇಲ್ಸೇತುವೆ ಕಾಮಗಾರಿ ಬಗ್ಗೆ ವರದಿ ತರಿಸಿಕೊಂಡು ಕ್ರಮ

ವಿಧಾನಸಭೆಯಲ್ಲಿ ಶಾಸಕ ಎ.ಎಸ್. ಪೊನ್ನಣ್ಣ ಪ್ರಶ್ನೆಗೆ ಡಿಸಿಎಂ ಡಿಕೆಶಿ ಉತ್ತರ





ಮಡಿಕೇರಿ, ಜು.21– ಕುಂಟುತ್ತಾ ಸಾಗಿರುವ ಭಾಗಮಂಡಲ ಮೇಲ್ಸೇತುವೆ ಕಾಮಗಾರಿ ಬಗ್ಗೆ ವರದಿ ತರಿಸಿಕೊಂಡು ಕ್ರಮ ಕೈಗೊಳ್ಳುವುದಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದಾರೆ. ಭಾಗಮಂಡಲದ ಮೇಲ್ಸುತುವೆ ಕಾಮಗಾರಿ ವಿಳಂಬ ಕುರಿತು ವಿಧಾನ ಸಭೆಯಲ್ಲಿ ವಿರಾಜಪೇಟೆ ಕ್ಷೇತ್ರದ ಶಾಸಕ ಎ.ಎಸ್. ಪೊನ್ನಣ್ಣ ವಿಷಯ ಪ್ರಸ್ತಾಪಿಸಿ ಸರಕಾರದ ಗಮನ ಸೆಳೆದಾಗ ಡಿ.ಕೆ. ಶಿವಕುಮಾರ್ ಈ ಉತ್ತರ ನೀಡಿದರು.

ಭಾಗಮಂಡಲ ಮೇಲ್ಸೆತುವೆ ಕಾಮಗಾರಿ ಕಳೆದ ಐದೂವರೆ ವರ್ಷಗಳಿಂದ ಆಮೆಗತಿಯಲ್ಲಿ ಸಾಗುತ್ತಿದೆ. ಇಷ್ಟು ಸುದೀರ್ಘವಾಗಿ ಕಾಮಗಾರಿ ನಡೆದರೂ ಇಂದಿಗೂ ಪೂರ್ಣಗೊಂಡು ಸಾರ್ವಜನಿಕ ಸೇವೆಗೆ ಲಭ್ಯವಾಗಿಲ್ಲ. ಈ ವಿಳಂಬ ಕಾಮಗಾರಿಯ ಕುರಿತು ಗುತ್ತಿಗೆದಾರನಿಗೆ ನೋಟೀಸ್ ಕೂಡ ನೀಡಿಲ್ಲ. ಕಾಮಗಾರಿಯ ಕುರಿತು ತನಿಖೆ ನಡೆಸಬೇಕೆಂದು ಶಾಸಕ ಪೊನ್ನಣ್ಣ ಸರಕಾರವನ್ನು ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಮಗಾರಿ ವಿಳಂಬದ ಕುರಿತು ವರದಿ ತರಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳುವುದಾಗಿ ಹೇಳಿದರು. ಮಾತ್ರವಲ್ಲದೇ, ಮೇಕೆದಾಟು ಪಾದ ಯಾತ್ರೆಯನ್ನು ಭಾಗಮಂಡಲದಿಂದಲೇ ಆರಂಭಿಸಿದ ಬಗ್ಗೆ ನೆನಪಿಸಿಕೊಂಡ ಡಿಸಿಎಂ ಡಿ.ಕೆ.ಶಿವಕುಮಾರ್, ತಾವು ಅಲ್ಲಿಗೆ ಖುದ್ದು ಭೇಟಿ ನೀಡುವುದಾಗಿ ಭರವಸೆ ನೀಡಿದರು.

ಪಾರ್ವತಿ ಚೋಂದಮ್ಮ ನಿಧನ

ಗೋಣಿಕೊಪ್ಪ, ಜು.21– ಮಾಯಮುಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಾಳಾಜಿ ಗ್ರಾಮದ ದಿ. ಮಲ್ಲಂಡ ಸುಬ್ಬಯ್ಯ ಅವರ ಪತ್ನಿ ಪಾರ್ವತಿ ಚೋಂದಮ್ಮ (89) ಶುಕ್ರವಾರ ಮುಂಜಾನೆ ನಿಧನರಾದರು. ಅಂತ್ಯಕ್ರಿಯೆ ಶನಿವಾರ ಬೆಳಗ್ಗೆ 10.30 ಗಂಟೆಗೆ ಸ್ವಗ್ರಾಮದಲ್ಲಿ ನಡೆಯಲಿದೆ.

ಚೆನಿಯಾ (ಮಾನು)

ವಿರಾಜಪೇಟೆ, ಜು.21– ವಿರಾಜಪೇಟೆಯ ಅರಸು ನಗರ ನಿವಾಸಿ ಚೆನಿಯಾ (ಮಾನು) ಶುಕ್ರವಾರ ತಮ್ಮ ನಿವಾಸದಲ್ಲಿ ನಿಧನ ಹೊಂದಿದ್ದಾರೆ. ಅವರಿಗೆ 82 ವರ್ಷ ವಯಸ್ಸಾಗಿತ್ತು.



ನಗರದ ಮೀನುಪೇಟೆಯಲ್ಲಿರುವ ಹಿಂದೂ ರುದ್ರಭೂಮಿಯಲ್ಲಿ ಶನಿವಾರ (ಜು.22) ಅಂತ್ಯಕ್ರಿಯೆ ನಡೆಯಲಿದೆ. ಮೃತರು ಪತ್ನಿ, ಪುತ್ರಿ ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ.

ಕಬ್ಬಿನ ಬಾಕಿ ಹಣ ಪಾವತಿಗೆ ಆಗ್ರಹಿಸಿ ಪ್ರತಿಭಟನೆ

ಚಾಮರಾಜನಗರ, ಜು.21– ಸಕ್ಕರೆ ಕಾರ್ಖಾನೆಗಳು ಕಬ್ಬಿನ ಬಾಕಿ ಹಣ ಪಾವತಿಸಿದ ಬಳಿಕ ಕಾರ್ಖಾನೆ ಪುನಾರಂಭಿಸಬೇಕು ಎಂದು ಆಗ್ರಹಿಸಿ ನಗರದಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.



ನಗರದ ಜಿಲ್ಲಾಡಳಿತ ಭವನದ ಪ್ರವೇಶ ದ್ವಾರದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಅಲ್ಲಿಂದ ಜಿಲ್ಲಾಡಳಿತ ಭವನದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಕೆಲಕಾಲ ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರ ಮತ್ತು ಕೃಷಿ ಸಚಿವರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಬಳಿಕ ಮಾತನಾಡಿದ ಪ್ರತಿಭಟನಾಕಾರರು, ಜಿಲ್ಲೆಯ ಬಣ್ಣಾರಿ ಸಕ್ಕರೆ ಕಾರ್ಖಾನೆ ಪ್ರಾರಂಭವಾಗುವುದರಿಂದ ರೈತರ ಹಕ್ಕು ಮತ್ತು ಬೇಡಿಕೆಗಳ ಬಗ್ಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆದು ಚರ್ಚಿಸಬೇಕು. ಕಳೆದ ವರ್ಷ ಪ್ರತಿ ಟನ್ ಕಬ್ಬಿಗೆ ಹೆಚ್ಚುವರಿ 150 ರೂ. ನಿಗದಿ ಮಾಡಿದ್ದು, ಅದನ್ನು ತಕ್ಷಣ ರೈತರಿಗೆ ಪಾವತಿಸಿ ಕಾರ್ಖಾನೆ ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು.

ಕೇಂದ್ರ ಸರ್ಕಾರ ಪ್ರಸಕ್ತ ಸಾಲಿಗೆ ಎಫ್‌ಆರ್‌ಪಿ ದರವನ್ನು ಪ್ರತಿ ಕೆಜಿಗೆ 10 ಪೈಸೆ, ಕ್ವಿಂಟಾಲ್‌ಗೆ 10 ರೂ. ನಂತೆ, ಟನ್‌ಗೆ ಕೇವಲ 100 ರೂ. ಹೆಚ್ಚಿಸಿರುವುದನ್ನು ಮರು ಪರಿಶೀಲಿಸಬೇಕು. ರಾಜ್ಯ ಸರ್ಕಾರ ಪ್ರತಿ ಟನ್‌ಗೆ ಕೇಂದ್ರದ ಎಫ್‌ಆರ್‌ಪಿ ಜೊತೆ ಹೆಚ್ಚುವರಿ 500 ರೂ. ನೀಡಬೇಕು ಎಂದರು.

ತೂಕವಾದ ತಕ್ಷಣ ಎಸ್‌ಎಂಎಸ್ ಅಲರ್ಟ್ ರೀತಿ ರೈತರಿಗೆ ಮೆಸೇಜ್ ಬರಬೇಕು. ನೋಂದಾಯಿತ ಜೇಷ್ಠತೆ ಆಧಾರದ ಮೇಲೆ ಕಬ್ಬು ಕಟಾವು ಪಟ್ಟಿ ಪ್ರಕಟಿಸಬೇಕು. ರೈತರಿಗೆ ಬೇಕಾದ ತಳಿ ನಾಟಿ ಮಾಡಿ ಕೊಡಬೇಕು. ರೈತರಿಗೆ ಬಿತ್ತನೆ ಕಬ್ಬನ್ನು ನೀಡಿ ಶೇ.14ರಷ್ಟು ಬಡ್ಡಿ ವಸೂಲಿ ಮಾಡುವುದನ್ನು ನಿಲ್ಲಿಸಬೇಕು. ಜಿಲ್ಲೆಯ ಕೆರೆಕಟ್ಟೆಗಳಿಗೆ ನದಿ ಮೂಲಕ ನೀರು ತುಂಬಿಸುವ ಕಾರ್ಯ ಪ್ರಾರಂಭವಾಗಬೇಕು, ರಸಗೊಬ್ಬರದ ಅಕ್ರಮ ಮಾರಾಟ ಮತ್ತು ಹೆಚ್ಚಿನ ಬೆಲೆಗೆ ಮಾರಾಟವಾಗುವುದನ್ನು ತಡೆಯಬೇಕು ಎಂದರು.

ತೋಟಗಾರಿಕೆ ಇಲಾಖೆಯಲ್ಲಿ ಕಳೆದ 10 ವರ್ಷಗಳಿಂದ ನಡೆದಿರುವ ಹನಿ ನೀರಾವರಿ ಯೋಜನೆ ಅಕ್ರಮಗಳು ತನಿಖೆಯಾಗಬೇಕು, ಜಿಲ್ಲೆಯಲ್ಲಿ ಖಾಸಗಿ ಫೈನಾನ್ಸ್ ಕಂಪನಿಗಳು ಅಧಿಕ ಬಡ್ಡಿ ವಸೂಲಿ ಮಾಡುತ್ತಿದ್ದು, ಪಾನ್ ಬ್ರೋಕರ್ಸ್‌ಗಳು ಹೆಚ್ಚುವರಿ ಬಡ್ಡಿ ವಸೂಲಿ ಮಾಡುತ್ತಿದ್ದಾರೆ. ಇದು ನಿಲ್ಲಬೇಕು, ಬ್ಯಾಂಕ್‌ಗಳಲ್ಲಿ ಕೃಷಿಗೆ ಸಾಲ ನೀಡುವಲ್ಲಿ ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ತೆಂಗು ಬೆಳೆಗಾರರು ತೀವ್ರ ಸಂಕಷ್ಟದಲ್ಲಿದ್ದು, ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಿ ತೆಂಗು ಖರೀದಿ ಕೇಂದ್ರಗಳನ್ನು ತೆರೆಯಬೇಕು, ಕಾಡು ಪ್ರಾಣಿಗಳಿಂದ ರೈತರಿಗೆ ಆದ ನಷ್ಟಕ್ಕೆ ಪರಿಹಾರ ನೀಡಬೇಕು ಎಂಬುದು ಸೇರಿದಂತೆ ನಮ್ಮ ಇತರೆ ಬೇಡಿಕೆಗಳ ಬಗ್ಗೆ ಕ್ರಮ ಕೈಗೊಳ್ಳದಿದ್ದರೆ ಚಳವಳಿ ಆರಂಭಿಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸಂಘದ ರಾಜ್ಯ ಸಂಚಾಲಕ ಹಳ್ಳಿಕೆರೆಹುಂಡಿ ಭಾಗ್ಯರಾಜ್, ಪಿ.ಸೋಮಶೇಖರ್, ಎಚ್.ಮೂಕಹಳ್ಳಿ ಮಹದೇವಸ್ವಾಮಿ, ಕುರುಬೂರು ಸಿದ್ದೇಶ್, ಹಾಲಿನ ನಾಗರಾಜ್, ಪಟೇಲ್ ಶಿವಮೂರ್ತಿ, ಕಿರಗಸೂರು ಶಂಕರ್, ರಾಜೇಂದ್ರ, ಶಿವಸ್ವಾಮಿ, ಸಿದ್ದರಾಜು ಇತರರಿದ್ದರು.

ಕರ್ನಾಟಕ ಸೇನಾಪಡೆ ಅರೆಬೆತ್ತಲೆ ಪ್ರತಿಭಟನೆ



ಚಾಮರಾಜನಗರ, ಜು.21– ಮಣಿಪುರ ದಲ್ಲಿ ಮಹಿಳೆಯರ ಬೆತ್ತಲೆ ಮೆರವಣಿಗೆ ಖಂಡಿಸಿ ನಗರದಲ್ಲಿ ಕರ್ನಾಟಕ ಸೇನಾಪಡೆ ಯಿಂದ ಅರೆಬೆತ್ತಲೆ ಪ್ರತಿಭಟನೆ ನಡೆಸಲಾಯಿತು.

ನಗರದ ಜಿಲ್ಲಾಡಳಿತ ಭವನದ ಗೇಟ್ ಮುಂಭಾಗ ಜಮಾಯಿಸಿದ ಪ್ರತಿಭಟನಾ ಕಾರರು, ಮಣಿಪುರ ಸರ್ಕಾರ ಮತ್ತು ಕಿಡಿಗೇಡಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಮಾತನಾಡಿ, ಮಣಿಪುರದಲ್ಲಿ ಮಹಿಳೆಯರ ಮೇಲಿನ ದುಷ್ಕೃತ್ಯ ಅಮಾನವೀಯ. ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಿ ಹಿಂಸಾಚಾರ ನಿಲ್ಲಿಸಬೇಕು. ಇಂತಹ ಕೃತ್ಯ ಎಸಗಿರುವ ಆರೋಪಿಗಳಿಗೆ ಮರಣ ದಂಡನೆ ವಿಧಿಸಬೇಕು. ಮುಂದಿನ ದಿನಗಳಲ್ಲಿ ಇಂತಹ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಶಾ.ಮುರಳಿ, ನಿಜಧ್ವನಿ ಗೋವಿಂದರಾಜು, ಪಣ್ಯದಹುಂಡಿ ರಾಜು, ಗಡಿನಾಡು ಕನ್ನಡ ರಕ್ಷಣಾ ವೇದಿಕೆ ಅಧ್ಯಕ್ಷ ಚಾ.ರಾ.ಕುಮಾರ್, ಮಹೇಶ್‌ಗೌಡ, ಚಾ.ಸಿ. ಸಿದ್ದರಾಜು, ಶಿವಶಂಕರ ನಾಯಕ, ವೀರಭದ್ರ ತಾಂಡವಮೂರ್ತಿ, ಮಹೇಶ್ ಗೌಡ, ಗು. ಪುರುಷೋತ್ತಮ್, ಲಿಂಗರಾಜು, ಪ್ರತಾಪ್, ಆಟೋ ನಾಗೇಶ್ ಇತರರಿದ್ದರು.

2,32,478 ಪಡಿತರದಾರರಿಗೆ ನಗದು ವರ್ಗಾವಣೆ

ಚಾಮರಾಜನಗರ, ಜು.21– ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿಯಾಗಿ ವಿತರಿಸುವ 5 ಕೆಜಿ ಆಹಾರ ಧಾನ್ಯದ ಬದಲಾಗಿ ಪ್ರತಿ ಕೆಜಿಗೆ 34 ರೂ. ನಂತೆ ಜಿಲ್ಲೆಯ 2,32,478 ಪಡಿತರ ಚೀಟಿದಾರರ ಖಾತೆಗೆ 11,71,93,750 ರೂ. ಸಂದಾಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ತಿಳಿಸಿದ್ದಾರೆ.

ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ ವಿತರಿಸುವ 5 ಕೆಜಿ ಆಹಾರ ಧಾನ್ಯದ ಬದಲಾಗಿ ಪ್ರತಿ ಕೆಜಿಗೆ 34 ರೂ. ನಂತೆ ಪಡಿತರ ಚೀಟಿಯ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಹಣ ವರ್ಗಾಯಿಸಲಾಗುತ್ತಿದೆ.

24,572 ಪಡಿತರ ಖಾತೆಗೆ ಹಣವಿಲ್ಲ: ಚಾಮರಾಜನಗರ ತಾಲೂಕಿನಲ್ಲಿ 7,707,



ಗುಂಡ್ಲುಪೇಟೆ 4,716, ಹನೂರು 5,268, ಕೊಳ್ಳೇಗಾಲ 5,216, ಯಳಂದೂರು 1,665 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 24,572 ಪಡಿತರದಾರರ ಖಾತೆಗಳು ಸರಿ ಇಲ್ಲದ ಕಾರಣ ಹಣ ವರ್ಗಾವಣೆಯಾಗಿಲ್ಲ. ಇಂತಹ ಪಡಿತರ ಚೀಟಿದಾರರ ವಿವರವನ್ನು ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿ ಮುಂದೆ ಪ್ರದರ್ಶಿಸಲಾಗಿದೆ.

ಐಪಿಪಿಬಿಯಿಂದ ಖಾತೆ ತೆರೆಯಲು ಅವಕಾಶ: ಉಳಿತಾಯ ಖಾತೆ ತೆರೆಯದ ಪಡಿತರ ಚೀಟಿದಾರರಿಗೆ ಅನುಕೂಲವಾಗಲು ಎಲ್ಲಾ ತಾಲೂಕು ಕಚೇರಿಗಳಲ್ಲಿ ಅಂಚೆ ಕಚೇರಿ ಮೂಲಕ ಐಪಿಪಿಬಿ (ಇಂಡಿಯನ್ ಪೋಸ್ಟಲ್ ಪೇಮೆಂಟ್ ಬ್ಯಾಂಕಿಂಗ್) ಅಂಚೆ ಖಾತೆ ತೆರೆಯುವ ಕೇಂದ್ರ ತೆರೆಯಲಾಗಿದೆ. ಎಲ್ಲಾ ಅಂಚೆ ಕಚೇರಿಯಲ್ಲಿಯೂ ಐಪಿಪಿಬಿ ಮೂಲಕ ಖಾತೆ ತೆರೆಯಬಹುದಾಗಿದೆ.

ಆಧಾರ್ ಸಂಖ್ಯೆಯನ್ನು ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಗೆ ಲಿಂಕ್ ಮಾಡದಿರುವವರು, ಪಡಿತರ ಚೀಟಿಯಲ್ಲಿ ಒಂದಕ್ಕಿಂತ ಹೆಚ್ಚು ಮುಖ್ಯಸ್ಥರಿದ್ದಾಗ ಅಥವಾ ಮುಖ್ಯಸ್ಥರೇ ಇಲ್ಲದಿದ್ದ ಸಂದರ್ಭ ಆಧಾರ್ ಸಂಖ್ಯೆ ತಪ್ಪಾಗಿ ನಮೂದಾಗಿರುವುದು, ಬ್ಯಾಂಕ್‌ನಲ್ಲಿ ಇ–ಕೆವೈಸಿ ಪೂರ್ಣಗೊಳಿಸದಿರುವುದು, ಕಳೆದ 3 ತಿಂಗಳಲ್ಲಿ ಒಂದು ತಿಂಗಳು ಸಹ ಪಡಿತರ ಪಡೆಯದಿರುವ ಪಡಿತರ ಚೀಟಿದಾರರಿಗೆ ಹಣ ಜಮೆಯಾಗಿರುವುದಿಲ್ಲ.

ಇಂತಹ ಫಲಾನುಭವಿಗಳು ಬ್ಯಾಂಕ್‌ಗೆ ಭೇಟಿ ನೀಡಿ ಅವರ ಮೊಬೈಲ್ ಮತ್ತು ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ಲಿಂಕ್ ಮಾಡಿಸಿ, ಖಾತೆ ಸಕ್ರಿಯಗೊಳಿಸಿದ್ದಲ್ಲಿ ಮಾತ್ರ ಆಗಸ್ಟ್ ಮಾಹೆಗೆ ಸಂಬಂಧಿಸಿದಂತೆ ಹಣವನ್ನು ಬ್ಯಾಂಕ್ ಖಾತೆಗೆ ವರ್ಗಾಯಿಸಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಶಿಲ್ಪಾನಾಗ್ ತಿಳಿಸಿದ್ದಾರೆ.

ಸಹನ ನಿಧನ

ಚಾಮರಾಜನಗರ, ಜು.21– ನಗರದ ನ್ಯಾಯಾಲಯ ರಸ್ತೆ ನಿವಾಸಿ ಬಿಜೆಪಿ ಮುಖಂಡ ಹೇಮಂತ್ ಕುಮಾರ್ ಪತ್ನಿ ಸಹನ (36) ಶುಕ್ರವಾರ ಬೆಳಗ್ಗೆ ನಿಧನರಾದರು. ಮೃತರು ಪತಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಗರದ ವೀರಶೈವ ರುದ್ರಭೂಮಿಯಲ್ಲಿ ಸಂಜೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಕರ್ತವ್ಯ ಲೋಪ: ಹರದನಹಳ್ಳಿ ಪಿಡಿಓ ಅಮಾನತು

ಚಾಮರಾಜನಗರ, ಜು.21– ಕರ್ತವ್ಯ ಲೋಪ ಹಿನ್ನೆಲೆಯಲ್ಲಿ ತಾಲೂಕಿನ ಹರದನಹಳ್ಳಿ ಪಿಡಿಓ ಆರ್.ಮಹೇಶ್ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಪಂ ಸಿಇಓ ಎಸ್.ಪೂವಿತಾ ಆದೇಶ ಹೊರಡಿಸಿದ್ದಾರೆ.

ಪಿಡಿಓ ಆರ್.ಮಹೇಶ್ ಚುನಾವಣಾ ನೀತಿ ಸಂಹಿತೆ ಸಂದರ್ಭ ರಾಜಕೀಯ ನಾಯಕರಿಗೆ ಸಂಬಂಧಿಸಿದ ಗೋಡೆ ಬರಹ, ಬ್ಯಾನರ್, ಪೋಸ್ಟರ್ ತೆರವುಗೊಳಿಸುವಲ್ಲಿ ಕ್ರಮವಹಿಸದಿರುವುದು, ನರೇಗಾ ಕೆಲಸದಲ್ಲಿ ಅಸಡ್ಡೆ ಹೊಂದಿರುವುದು, ಪೂರ್ವಾನುಮತಿ ಪಡೆಯದೇ ಗೈರು ಹಾಜರಾಗಿರುವುದು, ತೆರಿಗೆ ವಸೂಲಿಯಲ್ಲಿ ಪ್ರಗತಿ ಸಾಧಿಸುವಲ್ಲಿ ವಿಳಂಬ ಸೇರಿದಂತೆ ಇತರೆ ಕರ್ತವ್ಯ ಲೋಪದ ಬಗ್ಗೆ ವರದಿ ಸಲ್ಲಿಕೆಯಾಗಿತ್ತು. ಈ ಹಿನ್ನೆಲೆಯಲ್ಲಿ ಮುಂದಿನ ಆದೇಶದವರೆಗೆ ವಿಚಾರಣೆ ಕಾಯ್ದಿರಿಸಿ ಸೇವೆಯಿಂದ ಆರ್.ಮಹೇಶ್ ಅವರನ್ನು ಅಮಾನತು ಮಾಡಿ ಜಿಪಂ ಸಿಇಓ ಆದೇಶ ಹೊರಡಿಸಿದ್ದಾರೆ.

ಚಿಕ್ಕತುಪ್ಪೂರಲ್ಲಿ ಗೃಹಲಕ್ಷ್ಮಿ ಯೋಜನೆಗೆ ಚಾಲನೆ



ಗುಂಡ್ಲುಪೇಟೆ, ಜು.21– ಗೃಹಲಕ್ಷ್ಮಿ ಯೋಜನೆ ಲಾಭ ಪಡೆಯಲು ಹಾಗೂ ಅರ್ಜಿ ಸಲ್ಲಿಸಲು ಯಾವುದೇ ಶುಲ್ಕ ಪಾವತಿಸಬೇಕಿಲ್ಲ ಎಂದು ತಹಸೀಲ್ದಾರ್ ಶ್ರೀಶೈಲ ಯಮನಪ್ಪ ತಳವಾರ್ ತಿಳಿಸಿದರು.

ತಾಲೂಕಿನ ಬನ್ನಿತಾಳಪುರ ಗ್ರಾಪಂ ವ್ಯಾಪ್ತಿಯ ಚಿಕ್ಕತುಪ್ಪೂರು ಗ್ರಾಮದಲ್ಲಿ ಗೃಹಲಕ್ಷ್ಮಿ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ಈ ಯೋಜನೆಗೆ ನೋಂದಾಯಿಸಿಕೊಳ್ಳಲು ಯಾವುದೇ ಶುಲ್ಕ ಪಾವತಿಸಬೇಕಿಲ್ಲ. ತಮ್ಮ ಮೊಬೈಲ್‌ಗೆ ಸಂದೇಶ ಬಂದ ನಂತರ ಆ ದಿನ ಗ್ರಾಮ ಒನ್ ಕಚೇರಿಗೆ ಭೇಟಿ ನೀಡಬೇಕು. ಎಸ್‌ಎಂಎಸ್ ಬರದಿದ್ದರೇ ಸಹಾಯವಾಣಿ ನಂಬರ್‌ಗೆ ಕರೆ ಮಾಡಬಹುದು. ಜನರು ಈ ಯೋಜನೆ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಈ ವೇಳೆ ಬನ್ನಿತಾಳಪುರ ಗ್ರಾಪಂ ಅಧ್ಯಕ್ಷೆ ತಾಯಮಣಿ ಮಲ್ಲು ಯೋಜನೆಗೆ ಚಾಲನೆ ನೀಡಿದರು. ತಾಪಂ ಇಓ ಶ್ರೀಕಂಠ ರಾಜೇ ಅರಸ್, ಪಿಡಿಓ ಕೆ.ಎನ್.ಶಿವಸ್ವಾಮಿ, ಸದಸ್ಯರಾದ ಪಿನ್ನಮ್ಮ ರಂಗಸ್ವಾಮಿ, ನಿಂಗರಾಜು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಹೇಮಾವತಿ, ಅಂಗನವಾಡಿ ಕಾರ್ಯಕರ್ತರಾದ ನಿರ್ಮಲ, ಉಮಾ, ಗಂಗಮ್ಮ ಹಾಗೂ ಗ್ರಾಮಸ್ಥರು ಹಾಜರಿದ್ದರು.

ಮುಮ್ಮಡಿ ಕೃಷ್ಣರಾಜ ಒಡೆಯರ್ ಕೊಡುಗೆ ಶ್ಲಾಘನೀಯ

ಮೈಸೂರು ರಾಜವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಬಣ್ಣನೆ



ಹನೂರು, ಜು.21– ರಾಜ್ಯಕ್ಕೆ ಮುಮ್ಮಡಿ ಕೃಷ್ಣರಾಜ ಒಡೆಯರ್ ಕೊಡುಗೆ ಶ್ಲಾಘನೀಯ. ಪ್ರಕೃತಿ ಸಂರಕ್ಷಣೆಯಲ್ಲೂ ಅಪಾರ ಶ್ರಮವಹಿಸಿದ್ದರು ಎಂದು ಮೈಸೂರು ರಾಜವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಬಣ್ಣಿಸಿದರು.

ತಾಲೂಕಿನ ಎಲ್ಲೇಮಾಳ ಸರ್ಕಾರಿ ಪ್ರೌಢಶಾಲೆಯಲ್ಲಿ ಮುಮ್ಮಡಿ ಕೃಷ್ಣರಾಜ ಒಡೆಯರ್ ಪಟ್ಟಾಭಿಷೇಕದ ಸವಿನೆನಪಿಗಾಗಿ ಶುಕ್ರವಾರ ಸನಾತನ ಸಂಸ್ಕೃತಿ ಪುನರುತ್ಥಾನ ದಿನಾಚರಣೆ ಅಂಗವಾಗಿ ನಡೆದ ಕೋಟಿ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯದ ಉದ್ದಗಲಕ್ಕೂ ಮುಮ್ಮಡಿ ಕೃಷ್ಣರಾಜ ಒಡೆಯರ್ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಸಾಕಷ್ಟು ಕೊಡುಗೆ ನೀಡಿದ್ದಾರೆ. ಅದನ್ನು ಇಂದಿಗೂ ಮುಂದುವರೆಸಿಕೊಂಡು ಬರಲಾಗಿದೆ. ಮುಮ್ಮಡಿ ಕೃಷ್ಣರಾಜ ಒಡೆಯರ್ ಚಾಮರಾಜನಗರ ಸೇರಿದಂತೆ ರಾಜ್ಯದ ವಿವಿಧೆಡೆ ಸಾವಿರಾರು ಕೆರೆಕಟ್ಟೆ ನಿರ್ಮಿಸಿದ್ದಾರೆ. ಅಲ್ಲದೇ ಹಲವು ಅಣೆಕಟ್ಟೆ ನಿರ್ಮಿಸಿ ನಾಡಿಗೆ ಶಾಶ್ವತ ಕೊಡುಗೆ ನೀಡಿದ್ದಾರೆ. ಅಲ್ಲದೇ ಪ್ರಕೃತಿ ಸಂರಕ್ಷಣೆಯಲ್ಲೂ ಪ್ರಮುಖ ಪಾತ್ರ ವಹಿಸಿದ್ದಾರೆ. ಪ್ರಸ್ತುತ ಮಾನವ ಮತ್ತು ವನ್ಯಜೀವಿಗಳ ಸಂಘರ್ಷ ಹೆಚ್ಚಾಗುತ್ತಿದೆ. ಪ್ಲಾಸ್ಟಿಕ್ ಬಳಕೆ ಹೆಚ್ಚಾಗಿದ್ದು, ಅದಕ್ಕೆ ಕಡಿವಾಣ ಹಾಕುವ ಮೂಲಕ ಉತ್ತಮ ಪರಿಸರ ನಿರ್ಮಾಣ ಮಾಡಬೇಕಿದೆ. ಹೀಗಾಗಿ ಪ್ರತಿಯೊಬ್ಬರೂ ಪರಿಸರ ಉಳಿಸಲು ಮುಂದಾಗಬೇಕು ಎಂದರು.

ಮಾಜಿ ಶಾಸಕ ಆರ್.ನರೇಂದ್ರ ಮಾತನಾಡಿ, ಮೈಸೂರು ಸಂಸ್ಥಾನದ ರಾಜರಿಗೂ ಜಿಲ್ಲೆಗೂ ಬಹಳ ಹಿಂದಿನಿಂದಲೂ ಒಡನಾಟವಿದೆ. ಅಂದಿನ ಕಾಲದಲ್ಲೇ ಮಹಾರಾಜರು ಪರಿಸರದ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು. ನೀರು ಸಂಗ್ರಹಿಸಲು ಹೊಂಡ, ಕೆರೆಕಟ್ಟೆ ನಿರ್ಮಿಸಿದ್ದರು. ಆ ಮೂಲಕ ರೈತರ ಕೃಷಿಗೆ ಅನುಕೂಲ ಕಲ್ಪಿಸಿದ್ದರು. ಪ್ರಸ್ತುತ ಮೈಸೂರಿನ ಮಹಾರಾಜರ ಕೊಡುಗೆ ಸ್ಮರಿಸುವ ಜೊತೆಗೆ ಶಾಲಾ ಮಕ್ಕಳು ಸೇರಿದಂತೆ ಪ್ರತಿಯೊಬ್ಬರೂ ಖಾಲಿ ಇರುವ ಜಾಗಗಳಲ್ಲಿ ಸಸಿ ನೆಟ್ಟು ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಧಾರವಾಡ ಆನಂದ ಯೋಗ ಮಂದಿರದ ಪ್ರಜ್ಞಾನಂದ ಸ್ವಾಮೀಜಿ ಹಾಗೂ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಸಸಿ ನೆಡುವ ಕಾರ್ಯಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭ ಯದುವೀರ್ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಕೃತಿ ಸೇವಾ ವಾರಿದಿ–ಸಂಸೇವಾ ಕಾರ್ಯಕಾರಿ ಸಮಿತಿ ಅಧ್ಯಕ್ಷ ರಂ ಶಿವಶಂಕರು, ಕಾರ್ಯದರ್ಶಿ ಸುಷ್ಮ ಮಹದೇಶ್ವರ ಬೆಟ್ಟದ ಅರ್ಚಕ ಕೆ.ವಿ. ಮಹದೇಶ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ದತ್ತೇಶ್ ಕುಮಾರ್, ಮುಖ್ಯ ಶಿಕ್ಷಕಿ ನಾಗಕನ್ನಿಕ, ಸಂಶೋಧಕ ದುಂಡಯ್ಯ, ಮುಖಂಡರಾದ ರಂಗಸ್ವಾಮಿ, ಮಹದೇವ್, ನಾಗೇಶ್ ಮತ್ತಿತರರಿದ್ದರು.

ಮರ ಮುರಿದು ಬಿದ್ದು ಧರೆಗುರುಳಿದ ಐದು ವಿದ್ಯುತ್ ಕಂಬ



ಹುಣಸೂರು, ಜು.21– ಬಿರುಗಾಳಿಗೆ ಬೃಹತ್ ಮರ ವಿದ್ಯುತ್ ತಂತಿ ಮೇಲೆ ಉರುಳಿ ಬಿದ್ದ ಪರಿಣಾಮ 5 ವಿದ್ಯುತ್ ಕಂಬಗಳು ಧರೆಗುರುಳಿದ ಘಟನೆ ತಾಲೂಕಿನ ತಂತಿ ಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ವಿದ್ಯುತ್ ಕಂಬಗಳು ರಸ್ತೆಗೆ ಬಿದ್ದಿದ್ದು, ಅದೃಷ್ಟವಶಾತ್ ಪ್ರಾಣಾಪಾಯ ಸಂಭವಿಸಿಲ್ಲ. ಆದರೆ ಕೆಲಕಾಲ ರಸ್ತೆ ಸಂಚಾರಕ್ಕೆ ಅಡ್ಡಿಯಾಗಿತ್ತು. ಬಳಿಕ ಮರ ಹಾಗೂ ವಿದ್ಯುತ್ ಕಂಬಗಳನ್ನು ತೆರವುಗೊಳಿಸಿ, ಸಂಚಾರಕ್ಕೆ ಅನುವು ಮಾಡಿಕೊಡಲಾಯಿತು.



ಎಐಸಿಸಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನ ಖರ್ಗೆ ಅವರ 82ನೇ ಹುಟ್ಟು ಹಬ್ಬದ ಪ್ರಯುಕ್ತ ಅಖಿಲ ಕರ್ನಾಟಕ ಮಲ್ಲಿಕಾರ್ಜುನ ಖರ್ಗೆ ಅಭಿಮಾನಿಗಳ ಸಂಘ ಹಾಗೂ ಮೈಸೂರು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಶುಕ್ರವಾರ ಕಿವುಡ ಮತ್ತು ಅಂಧ ಮಕ್ಕಳ ಶಾಲೆಯಲ್ಲಿ ಕೇಕ್ ಕತ್ತರಿಸಿ, ಮಕ್ಕಳಿಗೆ ಸಿಹಿ ಹಂಚಲಾಯಿತು. ಈ ವೇಳೆ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಒಡೆಯರ್ ಮಂಜು, ಪ್ರಧಾನ ಕಾರ್ಯದರ್ಶಿಗಳಾದ ಧನಗಳ್ಳಿ ಪ್ರವೀಣ್, ಹೂಟಗಳ್ಳಿ ನವೀನ್ ಕುಮಾರ್, ಚಾಮುಂಡೇಶ್ವರಿ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಎಸ್.ಆರ್.ಎಸ್.ವಿನೋದ್, ರಾಘವೇಂದ್ರ, ಚಿಟ್ಟೆಹುಂಡಿ ರಾಚಪ್ಪ, ಶಾಲೆಯ ಮುಖ್ಯ ಶಿಕ್ಷಕ ಸತೀಶ್ ಮತ್ತಿತರರು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ನೀವೆಲ್ಲರೂ ಸದಾ ಎಚ್ಚರವಾಗಿರಿ...!

ನೀವುಗಳು ಎಚ್ಚೆತ್ತುಕೊಳ್ಳಬೇಕು. ಬಿಜೆಪಿ ಆಡಳಿತದ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡಿ, ನಾವು ಅಧಿಕಾರದ ಚುಕ್ಕಾಣಿ ಹಿಡಿದಿದ್ದೇವೆ. ನಮ್ಮ ಆಡಳಿತದ ಮೇಲೆ ಕಪ್ಪು ಚುಕ್ಕೆ ಬರುವುದು ಬೇಡ. ಅಧಿಕಾರಕ್ಕೆ ಬಂದ ಆರಂಭದಲ್ಲೇ ನಮ್ಮ ಮೇಲೆ ಪ್ರತಿಪಕ್ಷಗಳು ಆರೋಪಗಳ ಸುರಿಮಳೆಗೈದು ಜನರ ದಿಕ್ಕು ತಪ್ಪಿಸುವ ಕೆಲಸ ನಡೆದಿದೆ. ಇಂತಹ ಸನ್ನಿವೇಶದಲ್ಲಿ ಯಾವುದಾದರು ಒಂದು ಸಣ್ಣ ಪ್ರಕರಣ ಹೊರಬಂದರೂ ಇಡೀ ರಾಜ್ಯದಲ್ಲೇ ಪಕ್ಷದ ವಿರುದ್ಧ ಅಪಪ್ರಚಾರ ಮಾಡುತ್ತಾರೆ ಎಂಬುದು ನಿಮ್ಮ ಗಮನದಲ್ಲಿರಲಿ. ಇಂತಹ ಪ್ರಕರಣಗಳಲ್ಲಿ ಸಿಲುಕಿದರೆ ನಾನಂತೂ ನಿಮ್ಮ ರಕ್ಷಣೆಗೆ ಬರುವುದಿಲ್ಲ. ಯಾವ ಕಾರಣಕ್ಕೂ ಇದನ್ನು ಸಹಿಸಿಕೊಳ್ಳುವುದಿಲ್ಲ ಎಂದು ಎಚ್ಚರಿಸಿದ್ದಾರೆ.

ಈ ವಿಷಯದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆ ಇಲ್ಲ. ಹೀಗಾಗಿ ಸುಖಾಸುಮ್ಮನೆ ಇಂತಹ ಬಲೆಗೆ ಯಾರೂ ಸಿಲುಕಬೇಡಿ ಎಂದು ಕೆಲವು ಹಿಂದಿನ ಘಟನೆಗಳನ್ನು ಸ್ಮರಿಸಿದ್ದಾರೆ. ಕಳೆದ ಒಂದೂವರೆ ದಶಕಗಳ ಅವಧಿಯಲ್ಲಿ ಇಂತಹ ಕುಟುಕು ಕಾರ್ಯಾಚರಣೆ ಬೇಟೆಗಳು ವ್ಯಾಪಕವಾಗಿ ನಡೆಯುತ್ತಿದ್ದು, ಈಗ ಹಿಂದೆಂದಿಗಿಂತ ಹೆಚ್ಚಿನ ಪ್ರಮಾಣದಲ್ಲಿ ನಡೆಯಬಹುದು ಎಂಬುದು ಸಿದ್ದರಾಮಯ್ಯ ಅವರ ಮುಂದಾಲೋಚನೆ.

ಈ ಮಧ್ಯೆ ವಿವಿಧ ಸರ್ಕಾರಗಳ ಕಾಲದಲ್ಲಿ ಹಲವು ಕುಟುಕು ಕಾರ್ಯಾಚರಣೆಗಳು ನಡೆದಿದ್ದುವಲ್ಲದೆ ಲಂಚದಿಂದ ಹಿಡಿದು ಹಲವು ಬಗೆಯ ಆರೋಪಗಳು ಸಚಿವರು ಮತ್ತು ಶಾಸಕರ ಹೆಗಲ ಮೇಲೇರಿದ್ದವು. ಇವೇ ಮೂಲಗಳ ಪ್ರಕಾರ, ಕುಟುಕು ಕಾರ್ಯಾಚರಣೆ ನಡೆಸುವ ಹಲವು ಜಾಲಗಳು ಕೆಲಸ ಮಾಡುತ್ತಿದ್ದು, ಇಂತಹ ಜಾಲಗಳನ್ನು ಬಳಸಿಕೊಂಡು ವಿರೋಧಿಗಳು ಸರ್ಕಾರದಲ್ಲಿರುವ ಮಂತ್ರಿಗಳು ಮತ್ತು ಶಾಸಕರ ಮೇಲೆ ಕಣ್ಣಿಡಬಹುದು ಎಂದು ಸಿದ್ದರಾಮಯ್ಯ ಎಚ್ಚರಿಸಿದ್ದಾರೆ.

ಜೆಡಿಎಸ್–ಬಿಜೆಪಿ ಆಗ್ರಹ

ನೈಸ್ ಅಕ್ರಮಗಳನ್ನು ಎಳೆಎಳೆಯಾಗಿ ಬಿಡಿಸಿಟ್ಟ ಉಭಯ ನಾಯಕರು, ಜಂಟಿ ಸದನ ಸಮಿತಿ ವರದಿ ಹಾಗೂ ನ್ಯಾಯಾಲಯಗಳು ನೀಡಿರುವ ಆದೇಶದಂತೆ ಆ ಇಡೀ ಯೋಜನೆಯನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಒಂದು ವೇಳೆ ಯೋಜನೆಯನ್ನು ವಶಕ್ಕೆ ಪಡೆಯದಿದ್ದರೆ ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳು ಸದನದ ಒಳಗೆ – ಹೊರಗೆ ಜಂಟಿ ಹೋರಾಟ ನಡೆಸಲಿವೆ ಎಂದು ಇಬ್ಬರೂ ನಾಯಕರು ಸರಕಾರಕ್ಕೆ ಎಚ್ಚರಿಕೆ ನೀಡಿದರು. ನೈಸ್ ಅಕ್ರಮ ರಾಜ್ಯದಲ್ಲಿ ಹಾಡುಹಗಲೇ ನಡೆದಿರುವ ಲೂಟಿ. ಜನರ ಭೂಮಿ ಹಾಗೂ ಹಣವನ್ನು ಕೊಳ್ಳೆ ಹೊಡೆಯಲಾಗಿದೆ ಎಂದು ಕುಮಾರಸ್ವಾಮಿ ಅವರು ಹೇಳಿದರೆ, ಈ ಹೋರಾಟ ಇಲ್ಲಿಗೇ ನಿಲ್ಲುವುದಿಲ್ಲ. ನೈಸ್ ವಿರುದ್ಧದ ನಮ್ಮ ಹೋರಾಟ ಹಲವಾರು ಮಜಲುಗಳನ್ನು ಮುಟ್ಟಲಿದೆ ಎಂದರು.

ರಾಜ್ಯದ ಮುಖ್ಯಮಂತ್ರಿ ಭ್ರಷ್ಟಾಚಾರದ ಬಗ್ಗೆ ಉದ್ದುದ್ದವಾಗಿ ಮಾತನಾಡುತ್ತಾರೆ. ಆದರೆ ನೈಸ್ ರಸ್ತೆಯ ಅಕ್ರಮ ಬಗ್ಗೆ ಏಕೆ ಮಾತನಾಡುತ್ತಿಲ್ಲ. ಬಸವರಾಜ ಬೊಮ್ಮಾಯಿ ಅವರ ಸರಕಾರದ ಕಾಲದಲ್ಲಿ ಈ ಅಕ್ರಮಕ್ಕೆ ಸಂಬಂಧಿಸಿದಂತೆ ಅನೇಕ ಕ್ರಮಗಳು ಜರುಗಿವೆ. ನ್ಯಾಯಾಲಯಗಳಲ್ಲಿ ನೈಸ್ ವಿರುದ್ಧ, ಸರಕಾರದ ಪರವಾಗಿ ಅನೇಕ ಆದೇಶಗಳು ಬಂದಿವೆ. ಇದಕ್ಕೆ ಹಿಂದಿನ ಬಿಜೆಪಿ ಸರಕಾರ ಶ್ರಮಿಸಿದೆ. ಅದಕ್ಕಾಗಿ ಮಾಜಿ ಮುಖ್ಯಮಂತ್ರಿ ಬೊಮ್ಮಾಯಿ ಅವರನ್ನು ಅಭಿನಂದಿಸುತ್ತೇನೆ ಎಂದು ಕುಮಾರಸ್ವಾಮಿ ತಿಳಿಸಿದರು. ಈ ಬಗ್ಗೆ ಸದನದಲ್ಲಿ ಚರ್ಚೆಗೆ ಅವಕಾಶ ಕೇಳಿದ್ದೆವು. ಮೊದಲು ಸದನದಲ್ಲಿ ನಿಲುವಳಿ ಸೂಚನೆ ಮಂಡಿಸಿದೆವು. ಬಳಿಕ ಅದನ್ನು ನಿಯಮ 69ಕ್ಕೆ ಬದಲಿಸಿ ಚರ್ಚೆಗೆ ಅವಕಾಶ ಕೊಡುತ್ತೇವೆ ಎಂದರು. ಆದರೂ ಅವಕಾಶ ಸಿಗಲಿಲ್ಲ.

ನೈಸ್ ಅಕ್ರಮ ಇತಿಹಾಸದಲ್ಲಿ ಹಿಂದೆಂದೂ ಕಂಡೂ ಕೇಳರಿಯದ ಅಕ್ರಮ. ಇದರ ವಿರುದ್ಧ ಸದನದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕ ಟಿ.ಬಿ.ಜಯಚಂದ್ರ ದನಿ ಎತ್ತಿದ್ದಾರೆ. ಅಕ್ರಮವನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದ್ದಾರೆ. ಹೀಗಾಗಿ ಸರಕಾರ ಮೀನಾಮೇಷ ಎಣಿಸದೆ ಯೋಜನೆಯನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು ಹಾಗೂ ಇಡೀ ಯೋಜನೆಯ ತನಿಖೆಯನ್ನು ಸಿಬಿಐಗೆ ವಹಿಸಬೇಕು.

ಹಿಂದಿನ ಬಿಜೆಪಿ ಸರಕಾರದ ವೇಳೆ ಸಂಪುಟದ ಉಪ ಸಮಿತಿ ರಚನೆ ಮಾಡಲಾಗಿತ್ತು. ಸಮಿತಿಯು ಅನೇಕ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಶಿಫಾರಸು ಮಾಡಿದೆ. ರಸ್ತೆ ಕಾಮಗಾರಿಗೆ ರೈತರಿಂದ ಸ್ವಾಧೀನಕ್ಕೆ ಪಡೆದ ಭೂಮಿಯನ್ನು ಮಾರಾಟ ಮಾಡಿ ರಿಯಲ್ ಎಸ್ಟೇಟ್ ದಂಧೆ ನಡೆಸಲಾಗಿದೆ. ನೈಸ್ ಯೋಜನೆಯಲ್ಲಿ ಅಕ್ರಮದ ಬಗ್ಗೆ ನಮ್ಮ ಕಾಲದಲ್ಲಿ ಅನೇಕ ಕ್ರಮಗಳು ಆಗಿವೆ. ಆ ನಿಟ್ಟಿನಲ್ಲಿ ಜೆಡಿಎಸ್ – ಬಿಜೆಪಿ ಒಂದಾಗಿ ಹೋರಾಟ ಮಾಡಲು ನಿರ್ಧಾರ ಮಾಡಿವೆ. ಈ ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ, ಬದಲಿಗೆ ಅನೇಕ ತಿರುವುಗಳು ಇರುತ್ತವೆ ಎಂದು ಬೊಮ್ಮಾಯಿ ತಿಳಿಸಿದರು.

ಈಗಾಗಲೇ ಬೆಂಗಳೂರು–ಮೈಸೂರು ನಡುವೆ ಸುಸಜ್ಜಿತ ಎಕ್ಸ್ ಪ್ರೆಸ್ ಹೆದ್ದಾರಿ ನಿರ್ಮಾಣ ಆಗಿರುವುದರಿಂದ ನೈಸ್ ರಸ್ತೆ ಅಗತ್ಯ ಇಲ್ಲ. ರಿಂಗ್ ರಸ್ತೆಯಲ್ಲಿ ಟೋಲ್ ಕೂಡ ಹೆಚ್ಚುವರಿಯಾಗಿ ಸಂಗ್ರಹ ಆಗಿದ್ದು, ಅದರ ಲೆಕ್ಕಪರಿಶೋಧನೆ ನಡೆಸಿ ಹಣವನ್ನು ವಸೂಲಿ ಮಾಡಬೇಕು. ಸದನ ಸಮಿತಿ ವರದಿ, ಸಂಪುಟ ಉಪ ಸಮಿತಿ ವರದಿ, ಸುಪ್ರೀಂಕೋರ್ಟ್ ಆದೇಶದ ಆಧಾರದಲ್ಲಿ ಸರಕಾರ ಕ್ರಮ ಕೈಗೊಳ್ಳಬೇಕು. ಈ ವಿಚಾರದಲ್ಲಿ ರಾಜ್ಯ ಸರಕಾರದ ಸ್ಪಷ್ಟ ನಿಲುವು ತಿಳಿಸಬೇಕು. ಈ ಸರಕಾರದಲ್ಲಿ ಇರುವವರು ಈ ಹಿಂದೆ ಈ ಯೋಜನೆಗೆ ಸಂಬಂಧಿಸಿ ಹೇಗೆ ನಡೆದುಕೊಂಡಿದ್ದಾರೆ ಎನ್ನುವುದು ನಮಗೆ ಗೊತ್ತಿದೆ. ಈ ಸರಕಾರ ಭ್ರಷ್ಟಾಚಾರದ ವಿರುದ್ಧ ಇದೆಯೊ ಇಲ್ಲವೋ ಅನ್ನುವುದು ಈ ಪ್ರಕರಣದಿಂದ ತಿಳಿಯಲಿದೆ.

ಒಟ್ಟಾಗಿ ಕೆಲಸ ಮಾಡುವ ನಿರ್ಧಾರ

ಜಂಟಿ ಸುದ್ದಿಗೋಷ್ಠಿಯಲ್ಲಿ ಎಚ್‌ಡಿಕೆ, ಬೊಮ್ಮಾಯಿ

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಕಾನೂನು ಬಾಹಿರ ಚಟುವಟಿಕೆಗಳ ವಿರುದ್ಧ ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ಕೆಲಸ ಮಾಡುವ ನಿರ್ಧಾರ ಮಾಡಿವೆ ಎಂದು ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ಮತ್ತು ಎಚ್.ಡಿ. ಕುಮಾರಸ್ವಾಮಿ ಶುಕ್ರವಾರ ಹೇಳಿದ್ದಾರೆ.

ಇಂದು ಜೆಡಿಎಸ್ ಶಾಸಕಾಂಗ ಪಕ್ಷದ ಕಚೇರಿಯಲ್ಲಿ ಜಂಟಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಕುಮಾರಸ್ವಾಮಿ, ರಾಜ್ಯ ಸರ್ಕಾರದ ಕಾನೂನು ಬಾಹಿರ ಚಟುವಟಿಕೆಗಳ ವಿರುದ್ಧ ಸದನದ ಒಳಗೂ ಮತ್ತು ಹೊರಗೆ ನಾನು ಮತ್ತು ಬೊಮ್ಮಾಯಿ ಒಟ್ಟಾಗಿ ಹೋರಾಟ ಮಾಡುತ್ತೇವೆ ಎಂದರು. ಜೆಡಿಎಸ್ ಮತ್ತು ಬಿಜೆಪಿ ಎರಡೂ ವಿರೋಧ ಪಕ್ಷಗಳಾಗಿದ್ದು, ಒಟ್ಟಾಗಿ ಕೆಲಸ ಮಾಡುವ ನಿರ್ಧಾರ ಆಗಿದೆ. ಎಲ್ಲರ ಅಭಿಪ್ರಾಯ ಪಡೆದು ಪಕ್ಷದ ಸಂಘಟನೆಗೆ 10 ಜನರ ತಂಡ ರಚನೆ ಮಾಡಲಾಗಿದೆ. ಇಡೀ ರಾಜ್ಯದಲ್ಲಿ ಸರ್ಕಾರದ ಕಾನೂನುಬಾಹಿರ ಚಟುವಟಿಕೆಗಳ ವಿರುದ್ಧ ಧ್ವನಿ ಎತ್ತುವಂತೆ ದೇವಗೌಡರು ಸಂದೇಶ ನೀಡಿದ್ದಾರೆ. ದೇವೇಗೌಡರ ಮಾರ್ಗದರ್ಶನ, ಪಕ್ಷ ಸಂಘಟನೆ ಮೂಲಕ ಯುವಕರ ತಂಡ ರಚನೆ ಮಾಡಲಾಗುತ್ತದೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಕಾಂಗ್ರೆಸ್‌ನವರಿಗೆ ಸರ್ಕಾರ ಬೇಕಿಲ್ಲ. ಭೂಮಿ ಲಪಟಾಯಿಸೋದು ಬೇಕು. ಇದು ಒಂದು ರೀತಿ ಈಸ್ಟ್ ಇಂಡಿಯಾ ಕಂಪನಿಯ ಆಡಳಿತ. ಸರ್ಕಾರಕ್ಕೆ ನಿಜಕ್ಕೂ ಜನತೆಗೆ, ರೈತರಿಗೆ ಒಳ್ಳೆಯದು ಮಾಡಬೇಕು ಎಂಬ ಮನಸ್ಸಿದ್ದರೆ ಸರ್ಕಾರದ ಸುಪರ್ದಿಗೆ ಬರಬೇಕಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಿ. ನನ್ನ ಪಕ್ಷದವರ ಆಸ್ತಿ ಇದ್ದರೂ ಮುಟ್ಟುಗೋಲು ಹಾಕಿಕೊಳ್ಳಿ. ಅಕ್ರಮ ಭೂಕಬಳಿಕೆ ಬಯಲಿಗೆಳೆಯಬೇಕಾದರೆ ಈ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಮಾಜಿ ಸಿಎಂ ಒತ್ತಾಯಿಸಿದರು.

ಮಣಿಪುರದಲ್ಲಿ ಮಹಿಳೆಯರ ಬೆತ್ತಲೆ ಮೆರವಣಿಗೆ ಖಂಡಿಸಿ

ಮೈಸೂರಿನಲ್ಲಿ ವಿವಿಧ ಸಂಘಟನೆಗಳ ಪ್ರತಿಭಟನೆ



ಮಣಿಪುರದಲ್ಲಿ ಮಹಿಳೆಯರ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ, ಬೆತ್ತಲೆ ಮೆರವಣಿಗೆ ಖಂಡಿಸಿ ರಾಮಸ್ವಾಮಿ ವೃತ್ತದಲ್ಲಿ ಕರ್ನಾಟಕ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದ ಸದಸ್ಯರು ಪ್ರತಿಭಟನೆ ನಡೆಸಿದರು.



ಮೈಸೂರು ವಿವಿ ದಲಿತ ವಿದ್ಯಾರ್ಥಿ ಒಕ್ಕೂಟ ಮತ್ತು ಸಂಶೋಧಕರ ಸಂಘದ ವಿದ್ಯಾರ್ಥಿಗಳು ಮಾನಸಗಂಗೋತ್ರಿಯ ಕ್ಲಾಕ್ ಟವರ್ ಬಳಿ ಪ್ರತಿಭಟನೆ ನಡೆಸಿದರು.

ಮೈಸೂರು, ಜು.21(ಜಿಎ)–ಮಣಿಪುರದಲ್ಲಿ ಬುಡಕಟ್ಟು ಸಮುದಾಯದ ಮಹಿಳೆಯರ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ, ಬೆತ್ತಲೆ ಮೆರವಣಿಗೆ ಖಂಡಿಸಿ ಮೈಸೂರಿನಲ್ಲಿ ವಿವಿಧ ಸಂಘಟನೆಗಳ ಸದಸ್ಯರು ಪ್ರತಿಭಟನೆ ನಡೆಸಿದರು.

ನಗರದ ರಾಮಸ್ವಾಮಿ ವೃತ್ತದಲ್ಲಿ ಕರ್ನಾಟಕ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದ ಸದಸ್ಯರು, ಮಾನವ ಸರಪಳಿ ನಿರ್ಮಿಸಿ ಕೇಂದ್ರ ಮತ್ತು ಮಣಿಪುರ ಸರಕಾರ ವಿರುದ್ಧ ವಿವಿಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮಣಿಪುರದಲ್ಲಿ ಹಿಂಸೆ ಕೊನೆಗೊಳ್ಳಲಿ, ಮಣಿಪುರದ ಬಿಜೆಪಿ ಸರಕಾರವನ್ನು ವಜಾಗೊಳಿಸುವಂತೆ ಹಾಗೂ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಘೋಷಣೆಗಳನ್ನು ಕೂಗಿದರು.

ಈ ವೇಳೆ ಹಿರಿಯ ರಂಗಕರ್ಮಿ ಸಿ.ಬಸವಲಿಂಗಯ್ಯ ಮಾತನಾಡಿ, ಮಣಿಪುರದಲ್ಲಿ ನಡೆದಿರುವ ಕೃತ್ಯ ಪ್ರಪಂಚದ ಎದುರು ಭಾರತ ತಲೆತಗ್ಗಿಸುವಂತಾಗಿದೆ. ರಾಮಾಯಣ, ಮಹಾಭಾರತ, ಪುರಾಣದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ಕೇಳಿದ್ದೆವು. ದುಶ್ಯಾಸನ ದ್ರೌಪದಿ ಸೀರೆ ಹರಣ ಮಾಡಿದಾಗ ಕೃಷ್ಣ ಬಂದ. ಆಧುನಿಕ ಭಾರತದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮಧ್ಯಪ್ರವೇಶ ಮಾಡಬೇಕು ಎಂದು ಆಗ್ರಹಿಸಿದರು.

ಮೈತೇಯ ಮತ್ತು ಕುಕಿ ಸಮುದಾಯದ ನಡುವೆ ಸಂಘರ್ಷ ನಡೆದಿದೆ. ಇದು ನಾಚಿಕೆಗೇಡಿನ ಸಂಗತಿ. ಮಣಿಪುರದಲ್ಲಿ ಸಾವಿರಾರು ಅತ್ಯಾಚಾರ ಪ್ರಕರಣಗಳು ವರದಿಯಾದರೂ ಡಬಲ್ ಎಂಜಿನ್ ಸರಕಾರ ಯಾವುದೇ ಕ್ರಮ ಕೈಗೊಂಡಿಲ್ಲ, ಹಿಂಸಾತ್ಮಕ ಘಟನೆಗಳು ನಡೆಯುತ್ತಿದ್ದರೂ ಅಲ್ಲಿನ ಸರಕಾರ ಕಠಿಣ ಕ್ರಮ ಕೈಗೊಂಡಿಲ್ಲವೇಕೆ ಎಂದು ಪ್ರಶ್ನಿಸಿದರು.

ನರೇಂದ್ರ ಮೋದಿ ಅವರು ಸಂಸತ್ತಿನಲ್ಲಿ ಉತ್ತರ ಕೊಡದೇ ಸುದ್ದಿಗಾರರೊಂದಿಗೆ ಮಾತಾಡಿದ್ದಾರೆ. ಮುಂದಿನ ಚುನಾವಣೆಯಲ್ಲಿ ಜನರು ತಕ್ಕ ಉತ್ತರ ನೀಡಲಿದ್ದಾರೆ. ಮಹಿಳೆಯರಿಗೆ ಇಷ್ಟೊಂದು ಅನ್ಯಾಯವಾಗುತ್ತಿದ್ದರೂ ಸರಕಾರಗಳು ಸರಿಯಾದ ಕ್ರಮ ಕೈಗೊಳ್ಳುತ್ತಿಲ್ಲವೆಂದು ಕಿಡಿಕಾರಿದರು.

ಒಡನಾಡಿಯ ಸ್ಟ್ಯಾನ್ಲಿ ಮಾತನಾಡಿ, ಸರಕಾರದ ವಿರುದ್ಧ ಸುಪ್ರೀಂ ಕೋರ್ಟ್ ಚಾಟಿ ಬೀಸಿದೆ. ಮಣಿಪುರದಲ್ಲಿ ಹಿಂಸಾಚಾರ ನಿಯಂತ್ರಿಸಲು ಡಬಲ್ ಎಂಜಿನ್ ಸರಕಾರದಿಂದ ಏನು ಪ್ರಯೋಜನವಾಗಿಲ್ಲ. ಹಾಗಾಗಿ ಸುಪ್ರೀಂ ಕೋರ್ಟ್ ಮಧ್ಯ ಪ್ರವೇಶಿಸಬೇಕು ಎಂದರು.

ಪ್ರತಿಭಟನೆಯಲ್ಲಿ ರತಿರಾವ್, ರಾಮೇಶ್ವರಿ ವರ್ಮ, ಉಮಾದೇವಿ, ಪ್ರೊ.ಶ್ರೀದೇವಿ, ಪ್ರೊ.ಲತಾ ಕೆ.ಬಿದ್ದಪ್ಪ, ಶ್ರೀಮತಿ, ಸ್ವರ್ಣ ಮೂಲ ಶಿರಸಿ, ಕಲೀಂ, ಪಂಡಿತಾರಾಧ್ಯ, ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಕಾಳಚನ್ನೇಗೌಡ, ಸಮತಾ ವೇದಿಕೆಯ ಸುಶೀಲಾ, ಪ್ರೊ.ವನಜಾ, ನಾ.ದಿವಾಕರ, ಜಗನ್ನಾಥ್, ಚೌಡಳ್ಳಿ ಜವರಯ್ಯ, ಪಿ.ಪಿ.ಬಾಬುರಾಜು, ಉಗ್ರನರಸಿಂಹೇಗೌಡ, ಶಂಭುಲಿಂಗ ಸ್ವಾಮಿ, ಟಿ.ಆರ್.ಸುನಿಲ್‌ಕುಮಾರ್, ಮೈಸೂರು ಕೊಳಚೆ ನಿವಾಸಿಗಳ ಒಕ್ಕೂಟದ ಅಧ್ಯಕ್ಷ ಯತಿರಾಜ್, ನೆಲೆ ಹಿನ್ನೆಲೆ ಕೆಆರ್.ಗೋಪಾಲಕೃಷ್ಣ ಸಂಧ್ಯಾ ಮತ್ತಿತರರು ಪಾಲ್ಗೊಂಡಿದ್ದರು.

ವಿದ್ಯಾರ್ಥಿಗಳ ಪ್ರತಿಭಟನೆ : ಮಣಿಪುರ ಘಟನೆ ಖಂಡಿಸಿ ಮೈಸೂರು ವಿವಿ ದಲಿತ ವಿದ್ಯಾರ್ಥಿ ಒಕ್ಕೂಟ ಮತ್ತು ಸಂಶೋಧಕರ ಸಂಘದ ವಿದ್ಯಾರ್ಥಿಗಳು ಮಾನಸಗಂಗೋತ್ರಿಯ ಕ್ಲಾಕ್ ಟವರ್ ಬಳಿ ಮಾನವ ಸರಪಳಿ ರಚಿಸಿ ಪ್ರತಿಭಟನೆ ನಡೆಸಿದರು.

ಈ ವೇಳೆ ವಿದ್ಯಾರ್ಥಿಗಳು ದೇಶದ ಮಹಿಳೆಯರು ಮತ್ತು ಆದಿವಾಸಿಗಳಿಗೆ ರಕ್ಷಣೆ ಇಲ್ಲದಂತಾಗಿದೆ ದೇಶದ ಪ್ರಧಾನಿಗಳು ಇಂಥದ್ದನ್ನು ಗಂಭೀರವಾಗಿ ಪರಿಗಣಿಸಬೇಕು. ಮಣಿಪುರದಲ್ಲಿ ರಾಷ್ಟ್ರಪತಿ ಆಡಳಿತ ಜಾರಿಗೆ ತರಲು ರಾಷ್ಟ್ರಪತಿ ದ್ರೌಪದಿ ಮುರ್ಮು ಮುಂದಾಗಬೇಕು. ಆ ರಾಜ್ಯದಲ್ಲಿ ಶಾಂತಿ ನೆಲೆಸುವಂತೆ ಕ್ರಮವಹಿಸಬೇಕು. ಅತ್ಯಾಚಾರಿಗಳ ವಿರುದ್ಧ ಕೂಡಲೇ ಕಾನೂನು ಕ್ರಮವನ್ನು ಜರುಗಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಂಶೋಧಕರ ಸಂಘದ ಅಧ್ಯಕ್ಷ ಮಹೇಶ್.ಸಿ, ದಲಿತ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಪರಂಜ್ಯೋತಿ, ಸಂಶೋಧಕರ ಸಂಘದ ಮಾಜಿ ಅಧ್ಯಕ್ಷರಾದ ನಟರಾಜ್ ಶಿವಣ್ಣ, ಮಹೇಶ್ ಸೋಸಲೆ, ಕಲ್ಲಳ್ಳಿ ಕುಮಾರ್, ಪ್ರದೀಪ್ ಮುಮ್ಮಡಿ, ಲಿಂಗರಾಜು, ರಂಗಸ್ವಾಮಿ, ಶಿವಮೂರ್ತಿ, ಸಚಿನ್, ಅರುಣ್, ಶಿವಶಂಕರ್, ಪ್ರವೀಣ್, ಕಿರಣ್, ಮಂಜುನಾಥ್ ಶರ್ಮ, ಅರುಣ್, ಪ್ರಸನ್ನ ಮುಂತಾದವರು ಭಾಗಿಯಾಗಿದ್ದರು.

ಜಿಂಕೆ ಬೇಟೆಯಾಡಿ ಮಾಂಸ ಸಂಗ್ರಹಿಸಿದ್ದ ಇಬ್ಬರ ಬಂಧನ

● ಜಿಂಕೆಗಳ ಕೊಂದು ಜೋಳದ ಹೊಲದಲ್ಲಿ ಮಾಂಸ ಬಚ್ಚಿಟ್ಟಿದ್ದರು ● ಅರಣ್ಯ ಸಿಬ್ಬಂದಿಯ ಮಿಂಚಿನ ಕಾರ್ಯಾಚರಣೆ



ಮೈಸೂರು,ಜು.21 (ಎಂಟಿವೈ)– ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಕಾಡಂಚಿನ ಗ್ರಾಮವೊಂದರ ಜಮೀನಿನಲ್ಲಿ ಎರಡು ಜಿಂಕೆಯನ್ನು ಬೇಟೆಯಾಡಿ ಅಕ್ರಮವಾಗಿ ಮಾಂಸ ಸಂಗ್ರಹಿಸಿದ್ದ ಅಡ್ಡೆ ಮೇಲೆ ಅರಣ್ಯ ಸಿಬ್ಬಂದಿಗಳ ತಂಡ ದಾಳಿ ನಡೆಸಿ, ಎರಡು ಚೀಲಗಳಲ್ಲಿ ಸಂಗ್ರಹಿಸಿಟ್ಟಿದ್ದ ಜಿಂಕೆ ಮಾಂಸ, ಮಾರಕಾಸ್ತ್ರ ವಶಪಡಿಸಿಕೊಂಡು, ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

ಹುಣಸೂರು ತಾಲೂಕಿನ ಹನಗೂಡು ಹೋಬಳಿ ನೇಗತ್ತೂರು ಗ್ರಾಮದ ಸರ್ವೆ ನಂ.61ರಲ್ಲಿ ಜೋಳದ ಬೆಳೆ ನಡುವೆ ಜಿಂಕೆ ಮಾಂಸ ಬಚ್ಚಿಟ್ಟಿರುವ ಖಚಿತ ಮಾಹಿತಿ ಪಡೆದು ದಾಳಿ ನಡೆಸಿದ ಅರಣ್ಯ ಸಿಬ್ಬಂದಿಗಳ ತಂಡ ಸ್ಥಳ ಪರಿಶೀಲನೆ ನಡೆಸಿದಾಗ ರಕ್ತಸಿಕ್ತ 3 ಕತ್ತಿ, ಒಂದು ಚಾಕು ಸಿಕ್ಕಿದೆ. ಅನುಮಾನಗೊಂಡು ಶೋಧ ಕಾರ್ಯ ನಡೆಸಿದ ಅರಣ್ಯ ಸಿಬ್ಬಂದಿಗಳಿಗೆ ಜೋಳದ ಹೊಲದಲ್ಲಿ ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲ ಕಂಡು ಬಂದಿದೆ. ಅದನ್ನು ಪರಿಶೀಲಿಸಿದಾಗ ಎರಡು ಜಿಂಕೆ ತಲೆ, 8 ಕಾಲು ಹಾಗೂ ಎರಡು ಚೀಲ ಜಿಂಕೆ ಮಾಂಸ ಪತ್ತೆಯಾಗಿದೆ. ಈ ವೇಳೆ ಅರಣ್ಯ ಸಿಬ್ಬಂದಿಗಳ ದಾಳಿಯಿಂದ ಎಚ್ಚೆತ್ತುಕೊಂಡು ಆರೋಪಿಗಳು ಪರಾರಿಯಾಗುವ ವೇಳೆ ಇಬ್ಬರು ಸೆರೆ ಸಿಕ್ಕಿದ್ದು, ನಾಲ್ವರು ಸ್ಥಳದಿಂದ ಪರಾರಿಯಾಗಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಹುಣಸೂರು ತಾಲೂಕಿನ ಸಿಂಡೇನಹಳ್ಳಿ ಗ್ರಾಮದ ರಾಜು ಅಲಿಯಾಸ್ ದೊರೆ (27), ಪ್ರಸನ್ನ ಅಲಿಯಾಸ್ ಪಿಯ್ಯ (30), ಪ್ರದೀಪ್ ಅಲಿಯಾಸ್ ಕುಂಡ (35), ಅಬ್ಬೂರು ಗ್ರಾಮದ ಮಧು (24) ಹಾಗೂ ಮತ್ತೊಬ್ಬರು ಪಾಲ್ಗೊಂಡಿರುವುದು ಖಚಿತವಾಗಿದೆ. ಈ ಸಂಬಂಧ ಸಿಂಡೇನಹಳ್ಳಿಯ ಪ್ರದೀಪ್ ಹಾಗೂ ಅಬ್ಬೂರು ಗ್ರಾಮದ ಮಧು ಎಂಬುವರನ್ನು ಬಂಧಿಸಲಾಗಿದ್ದು, ತಲೆಮರೆಸಿಕೊಂಡಿರುವ ನಾಲ್ವರ ಪತ್ತೆಗೆ ಕ್ರಮ ಕೈಗೊಳ್ಳಲಾಗಿದೆ. ಈ ಆರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಹರ್ಷಕುಮಾರ್, ಎಸಿಎಫ್ ಸಿ.ದಯಾನಂದ ಮಾರ್ಗದರ್ಶನದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಹುಣಸೂರು ಆರ್‌ಎಫ್‌ಓ ಎಂ.ಎ.ರತನ್‌ಕುಮಾರ್, ವೀರನಹೊಸಳ್ಳಿ ಆರ್‌ಎಫ್‌ಓ ಗಣರಾಜ್ ಪಟಗಾರ್, ಡಿಆರ್‌ಎಫ್‌ಓಗಳಾದ ಹೆಚ್.ಎಸ್.ಸಿದ್ದರಾಜು, ಪ್ರಸನ್ನಕುಮಾರ್, ವೀರಭದ್ರಯ್ಯ, ಎಂ. ಮನೋಹರ್, ಹೆಚ್.ಕೆ.ರಾಮು, ಗಸ್ತು ಪಾಲಕರಾದ ಕೆ.ಜಿ.ವಸಂತ್‌ಕುಮಾರ್, ಕೆ.ಎಂ.ಲಿಂಗರಾಜು ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಕುರುಬ ಸಮುದಾಯ ಎಸ್ಟಿ ಸೇರ್ಪಡೆಗೆ ಶಿಫಾರಸು

ರಾಜ್ಯ ಸರ್ಕಾರಕ್ಕೆ ಕುರುಬರ ಸಂಘ ಅಭಿನಂದನೆ



ಮೈಸೂರು, ಜು.21– ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡ (ಎಸ್.ಟಿ.) ಪಟ್ಟಿಗೆ ಸೇರಿಸಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವ ಕ್ರಮವನ್ನು ಕರ್ನಾಟಕ ಪ್ರದೇಶ ಕುರುಬರ ಸಂಘ ಸ್ವಾಗತಿಸಿದೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಸಂಘದ ರಾಜ್ಯಾಧ್ಯಕ್ಷ ಬಿ. ಸುಬ್ರಹ್ಮಣ್ಯ, ಆದಷ್ಟು ಬೇಗ ಕೇಂದ್ರ ಸರ್ಕಾರ ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ನಿರ್ಧಾರ ಕೈಗೊಳ್ಳಬೇಕು. ಈ ಸಂಬಂಧ ಕುಲಶಾಸ್ತ್ರೀಯ ಅಧ್ಯಯನ ಮಾಡುವಂತೆ ಈ ಹಿಂದೆ ಸಿದ್ದರಾಮಯ್ಯ ಅವರು ಸಿಎಂ ಆಗಿದ್ದಾಗಲೇ ಯೋಜನೆ ರೂಪಿಸಿದ್ದರು. ಅದರಂತೆ ಮೈಸೂರಿನ ಬುಡಕಟ್ಟು ಅಧ್ಯಯನ ಸಂಸ್ಥೆ ಕುಲಶಾಸ್ತ್ರೀಯ ಅಧ್ಯಯನ ನಡೆಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿತ್ತು ಗುರುವಾರ ನಡೆದ ಸಚಿವ ಸಂಪುಟದಲ್ಲಿ ವರದಿ ಮಂಡಿಸಿ, ಚರ್ಚಿಸಿ ಕೇಂದ್ರಕ್ಕೆ ಶಿಫಾರಸ್ಸು ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಸಂಪುಟಕ್ಕೆ ಅಭಿನಂದನೆ ಸಲ್ಲಿಸುತ್ತೇನೆ ಎಂದಿದ್ದಾರೆ.

ಕೇಂದ್ರ ಸರ್ಕಾರ 2024ರ ಲೋಕಸಭೆ ಚುನಾವಣೆಗೂ ಮುನ್ನವೇ ಸಮುದಾಯವನ್ನು ಎಸ್ಟಿಗೆ ಸೇರಿಸಿದರೆ ಕುರುಬ ಸಮುದಾಯದ ಅಭ್ಯರ್ಥಿಗಳು ಮೀಸಲು ಕ್ಷೇತ್ರಗಳಲ್ಲಿ ಸ್ಪರ್ಧಿಸಲು ಅನುಕೂಲವಾಗುತ್ತದೆ. ಈವರೆಗೂ ಸೂಕ್ತ ಸ್ಥಾನಮಾನ ಸಿಗದೆ, ರಾಜಕೀಯ ಮೀಸಲಾತಿಯಿಂದ ವಂಚಿತವಾಗಿರುವ ಕುರುಬ ಸಮುದಾಯಕ್ಕೆ ಕೇಂದ್ರ ಸರ್ಕಾರ ನ್ಯಾಯ ದೊರಕಿಸಿ ಕೊಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಕಾಗಿನೆಲೆ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರಂಜನಾನಂದ ಪುರಿ ಸ್ವಾಮೀಜಿಗಳ ನೇತೃತ್ವದಲ್ಲಿ ಎಸ್ಟಿ ಮೀಸಲಾತಿಗಾಗಿ ಹೋರಾಟ ನಡೆಸಲಾಗಿತ್ತು. ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆದ ಅಧಿವೇಶನದ ಸಂದರ್ಭದಲ್ಲೂ ಕುರುಬ ಸಮುದಾಯ ಹೋರಾಟ ನಡೆಸಿ ಹಕ್ಕೊತ್ತಾಯ ಮಂಡಿಸಿತ್ತು. ನಮ್ಮ ಮನವಿಗೆ ಸ್ಪಂದಿಸಿದ ಸರ್ಕಾರಗಳಿಗೂ ಅಭಿನಂದನೆ ಸಲ್ಲಿಸುತ್ತೇವೆ. ಈಗಿನ ಕೇಂದ್ರ ಸರ್ಕಾರ ಕೂಡ ಶಿಫಾರಸ್ಸನ್ನು ಅಂಗೀಕರಿಸಿ ಕುರುಬ ಸಮುದಾಯಕ್ಕೆ ರಾಜಕೀಯ ಮೀಸಲಾತಿ ಕಲ್ಪಿಸಬೇಕೆಂದು ಕೋರುತ್ತೇನೆ ಎಂದಿದ್ದಾರೆ.

ಸುಳ್ಳು ದೂರು ನೀಡಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮನವಿ



ಮೈಸೂರು, ಜು.21(ಜಿಎ)–ನಕಲಿ ದಾಖಲೆ ಸೃಷ್ಟಿಸಿ ರಾಜ್ಯ ಸರ್ಕಾರಿ ನೌಕರರ ಸಂಘಕ್ಕೆ ಆಡಳಿತಾಧಿಕಾರಿ ನೇಮಿಸುವಂತೆ ಸುಳ್ಳು ದೂರು ನೀಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮೈಸೂರು ಜಿಲ್ಲಾ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಗೆ ಮನವಿ ಸಲ್ಲಿಸಿದರು.

ರಾಜ್ಯ ಸಂಘದ ಆದೇಶದಂತೆ ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿಗಳ ಕಚೇರಿಗೆ ಶುಕ್ರವಾರ ಭೇಟಿ ನೀಡಿದ ಮೈಸೂರು ಜಿಲ್ಲಾ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಅಪಪ್ರಚಾರ ಮಾಡುತ್ತಿರುವವರ ಮೇಲೆ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಸರ್ಕಾರಿ ನೌಕರರ ಶ್ರೇಯೋಭಿವೃದ್ಧಿಗಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘಟನೆ ಶ್ರಮಿಸುತ್ತಿದ್ದು ಸಂಘದಿಂದ ಸರ್ಕಾರಿ ನೌಕರರಿಗೂ ಸಾಕಷ್ಟು ಅನುಕೂಲಗಳು ಆಗಿದ್ದು, ಕೊರೊನಾ ಸೇರಿದಂತೆ ಅನೇಕ ಸಂದರ್ಭಗಳಲ್ಲಿ ಸಮಾಜಮುಖಿ ಕಾರ್ಯಗಳನ್ನು ಮಾಡುವ ಮೂಲಕ ರಾಷ್ಟ್ರಮಟ್ಟದಲ್ಲಿ ವಿಶೇಷ ಸ್ಥಾನ ಕಳಿಸಿದ್ದು, ಇಂತಹ ಸಂಘದ ಎಲ್ಲಾ ಹಂತದ ಪದಾಧಿಕಾರಿಗಳ ಮೇಲೆ ನಕಲಿ ದಾಖಲೆ ಸೃಷ್ಟಿಸಿ ಸಂಘಕ್ಕೆ ಆಡಳಿತಾಧಿಕಾರಿ ನೇಮಿಸುವಂತೆ ಸುಳ್ಳು ದೂರು ನೀಡಿದ್ದಾರೆ. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಂತರಾಮ, ಗುರುಸ್ವಾಮಿ, ಮೆಹಬೂಬ್ ಬಾಷ ಎಂ., ಶಿವರುದ್ರಯ್ಯ ವಿ.ವಿ ಮತ್ತು ನಿಂಗೇಗೌಡ್ರು ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ದೂರಿನಲ್ಲಿ ತಿಳಿಸಿದ್ದಾರೆ.

ಈ ವೇಳೆ ಜಿಲ್ಲಾಧ್ಯಕ್ಷ ಗೋವಿಂದರಾಜು, ಕಾರ್ಯದರ್ಶಿ ರೇವಣ್ಣ ಖಜಾಂಚಿ ರಮೇಶ್ ಕುಮಾರ್, ಹಿರಿಯ ಉಪಾಧ್ಯಕ್ಷ ಎಸ್.ಜಿ. ರಮೇಶ್, ಕಾರ್ಯಾಧ್ಯಕ್ಷ ಆನಂದ್, ಜಯಪ್ಪ, ನಾಗೇಶ್ ವಾಲ್ಮೀಕಿ, ನಾಗಲಿಂಗಪ್ಪ, ಉಮೇಶ್, ರಘು, ರವಿ ಸೇರಿದಂತೆ ಜಿಲ್ಲಾ ಸಂಘದ ಮಹಿಳಾ ಕಾರ್ಯಕಾರಿಣಿ ಸದಸ್ಯರು ಉಪಸ್ಥಿತರಿದ್ದರು.

ತಿ.ನರಸೀಪುರ: ಬೋನಿಗೆ ಬಿದ್ದ ಹೆಣ್ಣು ಚಿರತೆ



ಮೈಸೂರು,ಜು.21(ಎಂಟಿವೈ)– ತಿ.ನರಸೀಪುರ ತಾಲೂಕಿನ ಮುತ್ತತ್ತಿ ಗ್ರಾಮದ ಜಮೀನೊಂದರಲ್ಲಿ ಅರಣ್ಯ ಇಲಾಖೆ ಇಟ್ಟಿದ್ದ ಬೋನ್‌ಗೆ ಎರಡು ವರ್ಷದ ಹೆಣ್ಣು ಚಿರತೆಯೊಂದು ಸೆರೆ ಸಿಕ್ಕಿದೆ.

ಕಳೆದ ಕೆಲವು ದಿನಗಳಿಂದ ತಿ.ನರಸೀಪುರ ತಾಲೂಕಿನ ಮುತ್ತತ್ತಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಚಿರತೆ ಹಾವಳಿ ಕಂಡು ಬರುತ್ತಿದ್ದು, ಈ ಸಂಬಂಧ ಗ್ರಾಮಸ್ಥರು ನೀಡಿದ ದೂರಿನ ಮೇರೆಗೆ ಅರಣ್ಯ ಇಲಾಖೆ ಗ್ರಾಮದ ಜಮೀನೊಂದರಲ್ಲಿ ಬೋನ್ ಇಟ್ಟಿತ್ತು. ಬೋನ್‌ನಲ್ಲಿದ್ದ ಕೋಳಿಯನ್ನು ತಿನ್ನಲು ಬಂದ ಎರಡು ವರ್ಷದ ಹೆಣ್ಣು ಚಿರತೆಯೊಂದು ಕಳೆದ ರಾತ್ರಿ ಬೋನಿಗೆ ಬಿದ್ದಿದೆ. ಶುಕ್ರವಾರ ಬೆಳಗ್ಗೆ ಬೋನಿಗೆ ಚಿರತೆ ಬಿದ್ದಿರುವುದನ್ನು ಗಮನಿಸಿದ ಗ್ರಾಮಸ್ಥರು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಸ್ಥಳಕ್ಕಾಗಮಿಸಿದ ಅರಣ್ಯ ಸಿಬ್ಬಂದಿಗಳ ತಂಡ, ಬೋನ್‌ನಲ್ಲಿದ್ದ ಚಿರತೆಯನ್ನು ತಮ್ಮ ವಶಕ್ಕೆ ಪಡೆದು ಸುರಕ್ಷಿತ ಸ್ಥಳಕ್ಕೆ ಕೊಂಡೊಯ್ದು, ಪಶುವೈದ್ಯರಿಂದ ಆರೋಗ್ಯ ತಪಾಸಣೆ ಮಾಡಿಸಿದರು. ಸೆರೆ ಸಿಕ್ಕ ಚಿರತೆ ಆರೋಗ್ಯವಾಗಿದ್ದು, ಅದಕ್ಕೆ ಮೈಕ್ರೋ ಚಿಪ್ ಅಳವಡಿಸಿ, ಕಿವಿ ತುದಿಯನ್ನು ಕತ್ತರಿಸಿ, ಅರಣ್ಯಕ್ಕೆ ಕೊಂಡೊಯ್ದು ಬಿಡುಗಡೆ ಮಾಡಿದ್ದಾರೆ.

ಏಕರೂಪ ನಾಗರಿಕ ಸಂಹಿತೆಯಿಂದ ಆದಿವಾಸಿಗಳ ವೈವಿಧ್ಯತೆಗೆ ಧಕ್ಕೆ

ಡೀಡ್ ಸಂಸ್ಥೆಯ ನಿರ್ದೇಶಕ ಡಾ.ಎಸ್.ಶ್ರೀಕಾಂತ್ ವಿಷಾದ



ಮೈಸೂರು,ಜು.21(ಎಂಟಿವೈ)– ಕೇಂದ್ರ ಸರ್ಕಾರ ಜಾರಿಗೆ ತರಲು ಉದ್ದೇಶಿಸಿರುವ ಏಕರೂಪ ನಾಗರಿಕ ಸಂಹಿತೆ (ಯುಸಿಸಿ)ಯಿಂದ ಆದಿವಾಸಿಗಳ ಸಾಂಸ್ಕೃತಿಕ ವೈವಿಧ್ಯತೆಗೆ ಧಕ್ಕೆಯಾಗುತ್ತದೆ ಎಂದು ಹುಣಸೂರಿನ ಡೀಡ್ ಸಂಸ್ಥೆಯ ನಿರ್ದೇಶಕ ಡಾ.ಎಸ್.ಶ್ರೀಕಾಂತ್ ವಿಷಾದಿಸಿದ್ದಾರೆ.

ಮೈಸೂರಿನ ಕುವೆಂಪುನಗರದ ಬಾಸುದೇವ ಸೋಮಾನಿ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ 'ಆತ್ಮನಿರ್ಭರ ಭಾರತ: ಭಾರತದ ಆದಿವಾಸಿಗಳ ಜನಾಂಗೀಯ, ಪರಿಸರ ಮತ್ತು ಆರ್ಥಿಕ ಪರಿವರ್ತನೆ' ಕುರಿತು ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮಾತನಾಡಿದರು.

ದೇಶದ ಮೂಲ ನಿವಾಸಿಗಳಾದ ಆದಿವಾಸಿಗಳ ಬದುಕು ಮತ್ತು ಸಂಸ್ಕೃತಿ ಭಿನ್ನ. ಆಹಾರ ಪದ್ಧತಿ, ಆಚರಣೆ, ಸಾಂಸ್ಕೃತಿಕ ಹಿನ್ನೆಲೆ, ಪರಂಪರೆಯೂ ಸೇರಿದಂತೆ ಪ್ರತಿಯೊಂದು ಹೆಜ್ಜೆಯಲ್ಲೂ ವಿಭಿನ್ನತೆ ಹಾಗೂ ವಿಶಿಷ್ಟತೆ ಎದ್ದು ಕಾಣುತ್ತದೆ. ಆದರೆ, ಕೇಂದ್ರ ಸರ್ಕಾರವು ಜಾರಿಗೆ ತರಲು ಉದ್ದೇಶಿಸಿರುವ ಏಕರೂಪ ನಾಗರಿಕ ಸಂಹಿತೆಯಿಂದ ಆದಿವಾಸಿಗಳ ಸಂಸ್ಕೃತಿ ನಾಶವಾಗಲಿದೆ. ನಮ್ಮ ಮೂಲ ಸಂಸ್ಕೃತಿಯನ್ನು ಉಳಿಸಿ, ಬೆಳೆಸಬೇಕಾದ ಅನಿವಾರ್ಯತೆ ಎಂದು ತಿಳಿಸಿದರು.

ನಾಗರಿಕ ಸಂಹಿತೆ ಮೂಲಕ ದೇಶದುದ್ದಗಲಕ್ಕೂ ಒಂದು ಸಂಸ್ಕೃತಿ, ಒಂದು ಭಾಷೆ, ಒಂದು ಆಚರಣೆಯನ್ನು ಹೇರಲು ಪ್ರಯತ್ನಿಸಲಾಗುತ್ತಿದೆ. ಅದರ ಮುಂದುವರಿದ ಭಾಗವಾಗಿ ಏಕರೂಪ ನಾಗರಿಕ ಸಂಹಿತೆ ಆಗಿದೆ. ಬಹುಸಂಸ್ಕೃತಿಯ ಹಿನ್ನೆಲೆ ಹೊಂದಿರುವ ಭಾರತ ದೇಶಕ್ಕೆ ಇದು ಹೊಂದಾಣಿಕೆಯಾಗುವುದಿಲ್ಲ. ಸರ್ಕಾರ ಆದಿವಾಸಿಗಳಿಗೆ ನೀಡುತ್ತಿರುವ ಸೌಲಭ್ಯಗಳಿಂದ ಅನ್ಯ ಸಮುದಾಯವರಿಗೆ ಹೊಟ್ಟೆಕಿಚ್ಚು ಬಂದಂತೆ ಕಾಣುತ್ತಿದೆ. ಆ ಕಾರಣದಿಂದಲೇ ಆದಿವಾಸಿ ಗುಂಪಿಗೆ ಸೇರಲು ಹಲವು ಸಮುದಾಯಗಳು ಪೈಪೋಟಿಗೆ ಬಿದ್ದಂತೆ ವರ್ತಿಸುತ್ತಿವೆ ಎಂದು ಕಿಡಿಕಾರಿದರು.

ಉದ್ಯೋಗ ಮೀಸಲಾತಿ ಲಾಭ ಸಹ ಬುಡಕಟ್ಟು ಜನರಿಗೆ ಸಿಕ್ಕಿಲ್ಲ. ಈ ಸೌಲಭ್ಯ ಕಲ್ಪಿಸಿಕೊಡುವಲ್ಲಿ ಸರ್ಕಾರಗಳು ವಿಫಲವಾಗಿವೆ. ಇದರಿಂದಾಗಿ ಅತಂತ್ರ ಜೀವನ ನಡೆಸುತ್ತಿದ್ದಾರೆ. ಇತ್ತಅರಣ್ಯದಲ್ಲಿ ಇರಲು ಆಗದೇ? ಅತ್ತಸಮಾಜದ ನಡುವೆ ಬದುಕಲು ಆಗುತ್ತಿಲ್ಲ ಎಂದರು.

ಪ್ರಾಥಮಿಕ ಶಿಕ್ಷಣದಲ್ಲಿ ಆದಿವಾಸಿಗಳ ಭಾಷೆ ಕಲಿಕೆಗೆ ಅವಕಾಶವಿಲ್ಲ. ಇದು ಸರಿಯಲ್ಲ. ಕನ್ನಡ ಭಾಷೆಯೊಂದಿಗೆ ಬುಡಕಟ್ಟು ಭಾಷೆಯಲ್ಲಿ ಓದಲು ಸರ್ಕಾರಿ ಶಾಲೆಗಳಲ್ಲಿ ವ್ಯವಸ್ಥೆ ಮಾಡಬೇಕು. ಆದಿವಾಸಿಗಳು ಅರಣ್ಯದಲ್ಲಿ ಇರಬೇಕೇ? ಅಥವಾ ಅರಣ್ಯದ ಹೊರಗೆ ಇರಬೇಕೇ? ಎಂಬ ಪ್ರಶ್ನೆಯನ್ನು ಕೇಳಲಾಗುತ್ತಿದೆ. ಅವರ ಸ್ವಂತ ನೆಲೆ ಕಾಡನ್ನು ಬಿಟ್ಟು ಏಕೆ ಹೊರಗೆ ಬರಬೇಕು. ಅವರನ್ನು ಅರಣ್ಯದಲ್ಲೇ ವಾಸಿಸಲು ಅರಣ್ಯ ಹಕ್ಕು ಕಾಯ್ದೆಯನ್ನು ಪರಿಣಾಮಕಾರಿ ಜಾರಿಗೆ ತರಬೇಕು. ಆದಿವಾಸಿಗಳಿಗೆ ಪುನರ್ವಸತಿ ಕಲ್ಪಿಸಿಕೊಡುವ ಪ್ರೊ.ಮುಜಾಫರ್ ಅಸ್ಸಾದಿ ವರದಿಯನ್ನು ಯಥಾವತ್ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

> ದೇಶವನ್ನು ಆತ್ಮನಿರ್ಭರ ಮಾಡಲು ಕೇಂದ್ರ ಸರ್ಕಾರ ಮುಂದಾಗಿದೆ. ಆದರೆ, ಸ್ವಾತಂತ್ರ್ಯ ಬಂದು 75 ವರ್ಷವಾದರೂ ಆದಿವಾಸಿಗಳು ಇನ್ನೂ ಆತ್ಮನಿರ್ಭರವಾಗಿಲ್ಲ. ಸುಸ್ಥಿರ ಬದುಕು ಕಟ್ಟಿಕೊಳ್ಳಲೂ ಸಾಧ್ಯವಾಗಿಲ್ಲ. ಅವರನ್ನು ಅರಣ್ಯದಲ್ಲಿ ಇರಲು ಬಿಡುತ್ತಿಲ್ಲ. ಇವರಿಗೆ ರಾಜಕೀಯ ಪ್ರಾತಿನಿಧ್ಯ ನೀಡುವಲ್ಲಿ ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ಸೇರಿದಂತೆ ಯಾವುದೇ ಪಕ್ಷವೂ ಪ್ರಾಮಾಣಿಕವಾಗಿ ಪ್ರಯತ್ನಿಸಿಲ್ಲ.
> -ಡಾ.ಎಸ್.ಶ್ರೀಕಾಂತ್

ಕಾರ್ಯಕ್ರಮದಲ್ಲಿ ನಿವೃತ್ತ ಕುಲಪತಿ ಪ್ರೊ.ಪಿ.ವೆಂಕಟರಾಮಯ್ಯ, ದಿ ಇನ್ಸ್‌ಟಿಟ್ಯೂಟ್ ಆಫ್ ಎಜುಕೇಷನ್ ಟ್ರಸ್ಟ್‌ನ ಛೇರ್ಮನ್ ಡಾ.ಎಂ.ಪುಟ್ಟಸ್ವಾಮಿ, ಕಾರ್ಯದರ್ಶಿ ಕುಬೇರ್ ಪಿ.ಗೌಡ್, ಟ್ರಸ್ಟಿ ಎಸ್.ಪ್ರಭಾ, ಪತ್ರಕರ್ತ ವೀರಭದ್ರಪ್ಪ ಬಿಸ್ಲಳ್ಳಿ, ಪ್ರಾಂಶುಪಾಲ ಡಾ.ಎಂ. ಮಹದೇವಸ್ವಾಮಿ, ಮೈವಿವಿ ಡಾ.ಡಿ.ಸಿ. ನಂಜುಂಡ ಇನ್ನಿತರರು ಉಪಸ್ಥಿತರಿದ್ದರು.

ಹಿಮೊಫಿಲಿಯಾ ರೋಗ ವಾಸಿಯಾಗುವ ಖಾಯಿಲೆ



ಮೈಸೂರು, ಜು.21(ಬಿಎಲ್‌ಯು)– ಮೈಸೂರಿನ ಜಿಲ್ಲಾ ಆಸ್ಪತ್ರೆಯಲ್ಲಿ ಇಂದು ಹಿಮೊಫಿಲಿಯಾ ರೋಗದ ಬಗ್ಗೆ ಜಾಗೃತಿ ಹಾಗೂ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿತ್ತು. ಜಿಲ್ಲಾ ಆಸ್ಪತ್ರೆಯ ಸಭಾಂಗಣದಲ್ಲಿ ನಡೆದ ಚಿಕಿತ್ಸಾ ಶಿಬಿರವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೈಸೂರು ವಿಭಾಗೀಯ ಜಂಟಿ ನಿರ್ದೇಶಕರಾದ ಡಾ.ಹೆಚ್.ಆರ್. ರಾಜೇಶ್ವರಿದೇವಿ ಉದ್ಘಾಟಿಸಿದರು.

ಹಿಮೊಫಿಲಿಯಾ ರೋಗವನ್ನು ಔಷಧ ಹಾಗೂ ಫಿಸಿಯೊಥೆರಪಿಯಿಂದ ಗುಣಪಡಿಸಬಹುದು. ಹಿಮೊಫಿಲಿಯಾ ಚಿಕಿತ್ಸೆಯ ಒಂದು ಭಾಗವಾದ ಫಿಜಿಯೋಥೆರಪಿಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಆಧುನಿಕ ಉಪಕರಣಗಳಿವೆ. ಇದರ ಪ್ರಯೋಜನ ಪಡೆದು ರೋಗ ಗುಣಪಡಿಸಿಕೊಳ್ಳಬಹುದು ಎಂದು ಡಾ.ರಾಜೇಶ್ವರಿ ಸಲಹೆ ನೀಡಿದರು. ಇದೇ ವೇಳೆ ಮಾತನಾಡಿದ ಜಿಲ್ಲಾ ಸರ್ಜನ್ ಡಾ.ಟಿ.ಅಮರ್‌ನಾಥ್, ಕೆ.ಆರ್.ಆಸ್ಪತ್ರೆಯಲ್ಲಿರುವ ಹಿಮೊಫಿಲಿಯಾ ಪಿಜಿಯೋಥೆರಫಿ ವಿಭಾಗವನ್ನು ಜಿಲ್ಲಾ ಆಸ್ಪತ್ರೆಗೆ ಸ್ಥಳಾಂತರ ಮಾಡಲಾಗುವುದು. ಇಲ್ಲಿ ವಿಶಾಲ ಸ್ಥಳವಿದ್ದು, ರೋಗಿಗಳಿಗೆ ಚಿಕಿತ್ಸೆ ನೀಡಲು ಬಹಳ ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಮೈಸೂರು ಹಿಮೊಫಿಲಿಯಾ ಸೊಸೈಟಿಯ ಅಧ್ಯಕ್ಷ ಡಾ.ಎಸ್.ಕೆ.ಮಿತ್ತಲ್ ಮಾತನಾಡಿ, ಹಿಮೊಫಿಲಿಯಾ ರೋಗಗಳಿಗೆ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ವೈದ್ಯರಿಗೆ ಸೊಸೈಟಿ ಎಲ್ಲಾ ರೀತಿಯಲ್ಲೂ ಸಹಕಾರಿಯಾಗಲಿದೆ ಎಂದು ಭರವಸೆ ನೀಡಿದರು.

ಹಿಮೊಫಿಲಿಯಾ ರೋಗದಿಂದ ಬಳಲುವವರಿಗೆ ದೇಹದ ಹೊರ ಭಾಗದ ಸಂಧಿ, ಸ್ನಾಯು ಅಥವಾ ಒಳ ಭಾಗದಲ್ಲಿ ರಕ್ತಸ್ರಾವ ಆಗುತ್ತಿರುತ್ತದೆ. ರಕ್ತದ ಸಹಜ ಕರಣೆಗಟ್ಟುವಿಕೆಗೆ ಅವಶ್ಯವಿರುವ ಕೆಲವು ಕರೆಣೆಗಟ್ಟುವ ಅಂಶಗಳು ಅಥವಾ ಕ್ಲಾಟಿಂಗ್ ಫ್ಯಾಕ್ಟರ್ ಕೊರತೆ ಇದ್ದಾಗ ಹಿಮೊಫಿಲಿಯಾ ರೋಗ ಎದುರಾಗುತ್ತದೆ. ಇದು ಅನುವಂಶಿಕ ರಕ್ತಸ್ರಾವ ಸಂಬಂಧ ದೋಷವಾಗಿದೆ.

ಔಷಧ ಹಾಗೂ ಫಿಜಿಯೋಥೆರಪಿ ಮೂಲಕ ಈ ರೋಗವನ್ನು ಗುಣಪಡಿಸಬಹುದು ಎಂದು ವೈದ್ಯರು ಹೇಳಿದ್ದಾರೆ. ಮೈಸೂರು ಹಿಮೊಫಿಲಿಯಾ ಸೊಸೈಟಿಯ ಕಾರ್ಯನಿರ್ವಾಹಕ ಅಧ್ಯಕ್ಷ ಪ್ರತಾಪ್ ಕುಮಾರ್, ಜಿಲ್ಲಾ ಆಸ್ಪತ್ರೆಯ ವೈದ್ಯ ಡಾ.ಮೋಹನ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ವನ್ಯಜೀವಿಯಿಂದ ಜೀವಹಾನಿ: ಸ್ಥಳ ಭೇಟಿಗೆ ಈಶ್ವರ ಖಂಡ್ರೆ ಸೂಚನೆ

ಒತ್ತುವರಿ ತೆರವಿಗೆ ಆದೇಶ, ಡಿಸಿಎಫ್‌ಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ

ಬೆಂಗಳೂರು, ಜು. 21– ರಾಜ್ಯದ ಯಾವುದೇ ಭಾಗದಲ್ಲಿ ವನ್ಯಜೀವಿಗಳ ದಾಳಿಯಿಂದ ಮಾನವ ಪ್ರಾಣಿ ಹಾನಿ ಆದರೆ, ಆಯಾ ವಲಯದ ಉನ್ನತ ಅರಣ್ಯಾಧಿಕಾರಿಗಳು ಆದ್ಯತೆಯ ಮೇಲೆ ಸ್ಥಳಕ್ಕೆ ಭೇಟಿ ನೀಡಿ, ಸಾಂತ್ವನ ಹೇಳಿ, ಪರಿಹಾರ ನೀಡಬೇಕು ಮತ್ತು ಪ್ರಾಣಿಗಳ ಸೆರೆಗೆ ಅಥವಾ ಕಾಡಿಗೆ ಕಳುಹಿಸಲು ಕ್ರಮ ವಹಿಸಬೇಕು ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ತಮ್ಮ ಕಚೇರಿಯಲ್ಲಿ ಅರಣ್ಯ ವೃತ್ತಗಳ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಚಿವರು, ವನಮಹೋತ್ಸವದ ಅವಧಿಯಲ್ಲಿ ರಾಜ್ಯಾದ್ಯಂತ ಯಾವ ಯಾವ ವೃತ್ತದಲ್ಲಿ ಎಷ್ಟು ಸಸಿ ನಡೆಲಾಗಿದೆ, ಎಷ್ಟು ಸಸಿಗಳನ್ನು ರೈತರಿಗೆ



ನೀಡಲಾಗಿದೆ. ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಗುರಿ ಮೀರಿ ಸಾಧನೆ ಮಾಡಿ. ಮಳೆ ಕಡಿಮೆ ಇರುವ ಪ್ರದೇಶದಲ್ಲಿ ಈಗಾಗಲೇ ಬೆಳೆಸಿರುವ ಸಸಿಗಳನ್ನು ಮಳೆ ಹೆಚ್ಚಾಗಿ ಆಗಿರುವ ಪ್ರದೇಶದಲ್ಲಿ ನೆಟ್ಟು ಪೋಷಿಸಿ ಎಂದು ಸೂಚಿಸಿದರು. ಕಲ್ಯಾಣ ಕರ್ನಾಟಕ ಭಾಗ ದಲ್ಲಿ ಅರಣ್ಯ ವ್ಯಾಪ್ತಿ ಮತ್ತು ಹಸಿರು ವಲಯ ವ್ಯಾಪ್ತಿ ಕಡಿಮೆ ಇರುವ ಬಗ್ಗೆ ಕಳವಳ ವ್ಯಕ್ತಪಡಿಸಿದ



ಸಚಿವರು, ಈ ಭಾಗದಲ್ಲಿ ಸರ್ಕಾರಿ ಕಚೇರಿಗಳ ಆವರಣ, ರಸ್ತೆಯ ಬದಿಗಳಲ್ಲಿ ಮತ್ತು ಸರ್ಕಾರಿ ಜಮೀನಿನಲ್ಲಿ ಎಲ್ಲೆಲ್ಲಿ ಸಸಿ ನೆಡಲು ಅವಕಾಶ ಇದೆಯೋ ಅಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಗಿಡ ನೆಟ್ಟು ಅದರ ಪೋಷಣೆಗೆ ಇತರ ಇಲಾಖೆಗಳ ನೆರವು ಪಡೆಯುವಂತೆ ತಿಳಿಸಿದರು. ಕರಡಿ ದಾಳಿಯಿಂದ ಉತ್ತರ ಕನ್ನಡ ಜಿಲ್ಲೆ, ಯಲ್ಲಾಪುರ ವಿಭಾಗದ ಮರಗಡಿ ಗ್ರಾಮದಲ್ಲಿ ಜಮ್ಮು ಬಾಗು ಥೋರಟ್ (60) ಎಂಬುವವರು ಮೃತಪಟ್ಟಿರುವ ಬಗ್ಗೆ ಸಂತಾಪ ಸೂಚಿಸಿದ ಸಚಿವರು, ಕೂಡಲೇ ಪರಿಹಾರ ನೀಡುವಂತೆ ಆದೇಶ ನೀಡಿದರು.

ಒತ್ತುವರಿ ತೆರವಿಗೆ ಸೂಚನೆ: ಧಾರವಾಡ ವಲಯದ ಕಲಘಟಗಿ ಬಳಿ 50 ಎಕರೆ ಅರಣ್ಯ ಭೂಮಿ ಒತ್ತುವರಿಯನ್ನು ತೆರವು ಮಾಡಿರುವ ಅಧಿಕಾರಿಗಳ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಸಚಿವರು, ಸಣ್ಣ ಮನೆ ಕಟ್ಟಿಕೊಂಡಿರುವ, 3 ಎಕರೆಗಿಂತ ಕಡಿಮೆ ಪ್ರದೇಶದಲ್ಲಿ ಕೃಷಿ ಮಾಡುತ್ತಿರುವ ಬಡವರ ವಿಷಯದಲ್ಲಿ ಮಾನವೀಯತೆ ತೋರಿ, ಅರಣ್ಯವನ್ನು ದೊಡ್ಡ ಪ್ರಮಾಣದಲ್ಲಿ ಒತ್ತುವರಿ ಮಾಡಿದ್ದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಿ ಎಂದು ಸೂಚಿಸಿದರು. ಸಭೆಯಲ್ಲಿ ಅರಣ್ಯ, ವನ್ಯಜೀವಿ ಮತ್ತು ಪರಿಸರ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್, ಅರಣ್ಯ ಇಲಾಖೆಯ ಉನ್ನತಾಧಿಕಾರಿಗಳಾದ ಸಂಜಯ್ ಬಿಜ್ಜೂರ್, ರಾಜೀವ್ ರಂಜನ್ ಮತ್ತಿತರರು ಪಾಲ್ಗೊಂಡಿದ್ದರು.

ನಕಲಿ ದಾಖಲೆ ನೀಡಿ ಆರೋಪಿಗೆ ಜಾಮೀನು ನೀಡಿದ ಮಹಿಳೆ ವಿರುದ್ಧ ಕೇಸ್ ದಾಖಲು

ಮೈಸೂರು, ಜು.20– ನ್ಯಾಯಾಲಯಕ್ಕೆ ನಕಲಿ ದಾಖಲೆ ಹಾಗೂ ವಿಳಾಸ ನೀಡಿ ಆರೋಪಿಯೋರ್ವನಿಗೆ ಜಾಮೀನು ನೀಡಿದ್ದ ಆರೋಪದ ಮೇರೆಗೆ ಮಹಿಳೆ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಾಗಿದೆ.

ಮೈಸೂರಿನ ಫರಿದಾ ಬೀ(53) ಆರೋಪಕ್ಕೆ ಗುರಿಯಾದವರಾಗಿದ್ದು, ಈಕೆ ಇಮ್ರಾನ್ ಪಾಷ ಎಂಬ ಆರೋಪಿಗೆ ಮೈಸೂರಿನ 4ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯದಲ್ಲಿ ಜಾಮೀನು ನೀಡಿದ್ದರು. ಈ ವೇಳೆ ಆಕೆ ತಾನು ತಿಲಕ್‌ನಗರದ ಚಿಕ್ಕವೀರಣ್ಣ ರಸ್ತೆಯ ಮನೆ ಸಂಖ್ಯೆ 3318/16–4ರಲ್ಲಿ ವಾಸವಿರುವುದಾಗಿ ತಿಳಿಸಿದ್ದರಲ್ಲದೇ, 50 ಸಾವಿರ ರೂ. ಮುಚ್ಚಳಿಕೆಗೆ ಮೈಸೂರು ತಾಲೂಕು ಜಯಪುರ ಗ್ರಾಮದ ಜಮೀನೊಂದರ ದಾಖಲೆಯನ್ನು ನೀಡಿದ್ದರು.

ಆರೋಪಿ ಇಮ್ರಾನ್ ಪಾಷ ನ್ಯಾಯಾಲಯಕ್ಕೆ ಹಾಜರಾಗದ ಕಾರಣ ನ್ಯಾಯಾಲಯವು ಫರಿದಾ ಬೀ ವಿರುದ್ಧ ಪ್ರತ್ಯೇಕ ಕೇಸ್ ದಾಖಲಿಸಿಕೊಂಡಿತ್ತು. ಈ ಕೇಸ್‌ನಲ್ಲಿ ಆಕೆ ನ್ಯಾಯಾಲಯಕ್ಕೆ ಗೈರು ಹಾಜರಾದ ಕಾರಣ ಆರೋಪಿ ಇಮ್ರಾನ್ ಪಾಷಗೆ ಜಾಮೀನು ಮುಚ್ಚಳಿಕೆಗಾಗಿ 50 ಸಾವಿರ ರೂ. ವಸೂಲಾತಿಗಾಗಿ ಆಕೆ ನೀಡಿದ್ದ ಜಯಪುರ ಗ್ರಾಮದ ಆಸ್ತಿಯನ್ನು ಜಪ್ತಿ ಮಾಡುವಂತೆ ನ್ಯಾಯಾಲಯವು ಜಯಪುರ ಗ್ರಾಪಂನ ಪಿಡಿಓಗೆ ಆದೇಶಿಸಿತ್ತು. ಆದರೆ ಅವರು ಸದರಿ ಜಮೀನು ಫರಿದಾ ಬೀ ಹೆಸರಿನಲ್ಲಿ ಇಲ್ಲ. ಅಲ್ಲದೇ ಗ್ರಾಮ ಪಂಚಾಯ್ತಿ ಮತ್ತು ಕಾರ್ಯದರ್ಶಿಯ ಸೀಲ್‌ಗಳು ನಕಲಿಯಾಗಿವೆ ಎಂದು ನ್ಯಾಯಾಲಯಕ್ಕೆ ವರದಿ ಸಲ್ಲಿಸಿದ್ದರು. ಜೊತೆಗೆ ಮೈಸೂರು ನಗರ ಪಾಲಿಕೆಯು ಫರಿದಾ ಬೀ ವಾಸವಿದ್ದಾರೆ ಎಂದು ನ್ಯಾಯಾಲಯಕ್ಕೆ ತಿಳಿಸಿದ್ದ ಆಸ್ತಿಯು ನೆಲಸಮವಾಗಿದ್ದು, ಪ್ರಸ್ತುತ ಅದು ಖಾಲಿ ನಿವೇಶನವಾಗಿದೆ ಎಂದು ನ್ಯಾಯಾಲಯಕ್ಕೆ ವರದಿ ಸಲ್ಲಿಸಿತ್ತು. ಈ ಹಿನ್ನೆಲೆಯಲ್ಲಿ 5ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ ಮೈಸೂರು ನ್ಯಾಯಾಲಯದ ಆದೇಶದ ಮೇರೆಗೆ ನ್ಯಾಯಾಲಯದ ಮುಖ್ಯ ಲಿಪಿಕಾಧಿಕಾರಿಗಳಾದ ಎಸ್.ಎನ್. ಧರ್ಮೇಂದ್ರ ನೀಡಿರುವ ದೂರನ್ನು ದಾಖಲಿಸಿಕೊಂಡಿರುವ ಲಕ್ಷ್ಮೀಪುರಂ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಮಹಿಳೆಯರು ಕೆಲಸದ ಒತ್ತಡದ ನಡುವೆಯೂ ಆರೋಗ್ಯದ ಬಗ್ಗೆ ಗಮನ ನೀಡಬೇಕು

ಮೈಸೂರು ಮೆಡಿಕಲ್ ಕಾಲೇಜು ಪ್ರಾಧ್ಯಾಪಕಿ ಡಾ.ರಶ್ಮಿ ಮಂಜುನಾಥ್ ಸಲಹೆ



ಮೈಸೂರು, ಜು. 21– ಮಹಿಳೆಯರು ತಮ್ಮ ಮನೆಗೆಲಸದ ನಡುವೆ ತಮ್ಮ ಆರೋಗ್ಯದ ಬಗ್ಗೆಯೂ ಗಮನ ನೀಡಬೇಕಿದೆ. ನನಗೆ ವಯಸ್ಸಾಗಿದೆ ಎಂದು ಆರೋಗ್ಯವನ್ನು ಉದಾಸೀನ ಮಾಡಬೇಡಿ ಎಂದು ಮೈಸೂರು ಮೆಡಿಕಲ್ ಕಾಲೇಜು ಪ್ರಾಧ್ಯಾಪಕಿ ಡಾ.ರಶ್ಮಿ ಮಂಜುನಾಥ್ ಮಹಿಳೆಯರಿಗೆ ಕಿವಿ ಮಾತು ಹೇಳಿದರು.

ಮೈಸೂರಿನ ಜಯನಗರದಲ್ಲಿರುವ ನೇಗಿಲ ಯೋಗಿ ಸಭಾಂಗಣದಲ್ಲಿ ಚುಂಚಶ್ರೀ ಗೌಡತಿಯರ ಬಳಗದ ವತಿಯಿಂದ ನಡೆದ ವಿಶ್ವ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಮಹಿಳೆಯರ ಆರೋಗ್ಯದ ಬಗ್ಗೆ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಳೆಯರು ಮನೆಗೆಲಸ ಸೇರಿದಂತೆ ಇತರೆ ಕೆಲಸಗಳನ್ನು ಒತ್ತಡದಲ್ಲಿ ಮಾಡುತ್ತಾರೆ. ತಮ್ಮ ಆರೋಗ್ಯದ ಬಗ್ಗೆ ಗಮನವನ್ನು ನೀಡುವುದಿಲ್ಲ ಬೇರೆಯವರ ಆರೋಗ್ಯದ ಬಗ್ಗೆ ಗಮನವನ್ನು ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಗಮನ ನೀಡದೇ ಉದಾಸೀನವನ್ನು ಮಾಡುತ್ತಾರೆ. ಇದರಿಂದ ಮುಂದೆ ತೊಂದರೆಗೀಡಾಗುವ ಅಪಾಯವಿದೆ. ಆದ್ದರಿಂದ ಸದಾ ಆರೋಗ್ಯದ ಬಗ್ಗೆ ಎಚ್ಚರ ವಹಿಸುವಂತೆ ಸಲಹೆ ನೀಡಿದರು. ವೈದ್ಯರ ದಿನಾಚರಣೆ ಅಂಗವಾಗಿ ವಿಶೇಷವಾಗಿ ಮಹಿಳೆಯರು ಬಿಳಿ ಬಣ್ಣದ ಉಡುಪನ್ನು ಧರಿಸಿ ಹಾಜರಿದ್ದರು. ಬೃಂದಾ, ವಸಂತ್ ಮುನೀಶ್, ರೂಪ, ಸುನಂದ, ರಾಣಿ, ಹೇಮಾ, ಸವಿತಾ ಇನ್ನಿತರರು ಉಪಸ್ಥಿತರಿದ್ದರು.

ಪ್ರತಿ ತಿಂಗಳ ಮೊದಲ ಶನಿವಾರದಂದು ಪಾರಂಪರಿಕ ನಡಿಗೆ

ಮೈಸೂರು,ಜು.21– ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ವತಿಯಿಂದ ಪ್ರತಿ ತಿಂಗಳ ಮೊದಲನೇ ಶನಿವಾರದಂದು ವಿದ್ಯಾರ್ಥಿಗಳು ಇತಿಹಾಸ ಆಸಕ್ತರು ಹಾಗೂ ಸಾರ್ವಜನಿಕರಿಗೆ ನಡಿಗೆ ಮೂಲಕ ಪಾರಂಪರಿಕ ಕಟ್ಟಡಗಳ ಮಹತ್ವ, ಐತಿಹಾಸಿಕ ಹಿನ್ನೆಲೆ ಹಾಗೂ ವಾಸ್ತುಶಿಲ್ಪಗಳ ಕುರಿತು ಜಾಗೃತಿ ಮೂಡಿಸುವ ಸಂಬಂಧ ಸಂಪನ್ಮೂಲ ವ್ಯಕ್ತಿಗಳಿಂದ ಮಾಹಿತಿಯನ್ನು ತಿಳಿಸಿಕೊಡಲಾಗುವುದು. ಇದಕ್ಕೆ ಯಾವುದೇ ಶುಲ್ಕ ಇರುವುದಿಲ್ಲ. ಕಾರ್ಯಕ್ರಮವು ಬೆಳಗ್ಗೆ 6.30ರಿಂದ ಪ್ರಾರಂಭವಾಗಲಿದ್ದು, ಆಸಕ್ತರು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿರುವ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಉಪ ನಿರ್ದೇಶಕರ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು ಎಂದು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

ಜು.26, ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

ಮೈಸೂರು,ಜು.21– ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಾನಸ ಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ಸಹಯೋಗದೊಂದಿಗೆ ಡಾ. ಫ.ಗು. ಹಳಕಟ್ಟಿ ಜನ್ಮದಿನದ ಪ್ರಯುಕ್ತ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಹಾಗೂ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಜುಲೈ 26 ರಂದು ಬೆಳಗ್ಗೆ 10.30 ಗಂಟೆಗೆ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಬಿಎಂಶ್ರೀ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಸ್ಥಿತಿಯಲ್ಲಿ ಕಾರ್ಯಕ್ರಮದ ಉದ್ಘಾಟನೆಯನ್ನು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ನೆರವೇರಿಸಲಿದ್ದು, ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆಯ ಸಚಿವ ಕೆ. ವೆಂಕಟೇಶ್ ಉಪಸ್ಥಿತಿಯಲ್ಲಿ ಭಾಗವಹಿಸುವರು. ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆಹರೀಶ್‌ಗೌಡ ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮೇಯರ್ ಶಿವಕುಮಾರ್, ಲೋಕಸಭಾ ಸದಸ್ಯರಾದ ಪ್ರತಾಪ್‌ಸಿಂಹ, ವಿ.ಶ್ರೀನಿವಾಸ್ ಪ್ರಸಾದ್ ಹಾಗೂ ಸುಮಲತಾ ಅಂಬರೀಶ್ ಭಾಗ ವಹಿಸಲಿದ್ದಾರೆ. ಅತಿಥಿಗಳಾಗಿ ವಿಧಾನಸಭಾ ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಅನಿಲ್ ಕುಮಾರ್, ರವಿಶಂಕರ್.ಡಿ, ಜಿ.ಡಿ.ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ, ಟಿ.ಎಸ್ ಶ್ರೀವತ್ಸ ವಿಧಾನ ಪರಿಷತ್ ಸದಸ್ಯರಾದ ಮರಿತಿಬ್ಬೇಗೌಡ, ಹೆಚ್. ವಿಶ್ವನಾಥ್, ಡಾ. ಡಿ.ತಿಮ್ಮಯ್ಯ, ಮಧು ಜಿ.ಮಾದೇಗೌಡ, ಸಿ.ಎನ್.ಮಂಜೇಗೌಡ, ಉಪಮೇಯರ್ ಡಾ.ಜಿ.ರೂಪ ಭಾಗ ವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್ ತಿಳಿಸಿದ್ದಾರೆ.

ಬೆಲೆ ಏರಿಕೆಯಿಂದ ತತ್ತರಿಸಿರುವ ಜನರ ಜೇಬಿಗೆ ಹಣ ತುಂಬಲು ಗ್ಯಾರಂಟಿಗಳ ತಂದಿದ್ದೇವೆ



- ವಿಧಾನಪರಿಷತ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿವರಣೆ
- ಬಜೆಟ್ ಮೇಲಿನ ಚರ್ಚೆಗೆ ಸುದೀರ್ಘ ಉತ್ತರ

ಬೆಂಗಳೂರು, ಜು.21(ಕೆಎಂಶಿ)–ಬೆಲೆ ಏರಿಕೆಯಿಂದ ತತ್ತರಿಸಿರುವ ಜನರ ಕೈಗೆ ದುಡ್ಡು ನೀಡಲು ನಮ್ಮ ಸರ್ಕಾರ ಪಂಚ ಗ್ಯಾರಂಟಿಗಳನ್ನು ತಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ತಿಳಿಸಿದರು. ಬಜೆಟ್ ಮೇಲಿನ ಚರ್ಚೆಗೆ ಉತ್ತರಿಸುತ್ತಾ, ಇವರ ಅನುಕೂಲಕ್ಕಾಗಿ ಅನಿವಾರ್ಯವಾಗಿ 13500 ಕೋಟಿ ರೂ. ಹೆಚ್ಚುವರಿ ತೆರಿಗೆ ಸಂಗ್ರಹ ಮಾಡಲು ನಿರ್ಧರಿಸಿದ್ದೇನೆ. ಈ ಯೋಜನೆಗಳ ಅನುಷ್ಠಾನಕ್ಕೆ ಪ್ರಸಕ್ತ ವರ್ಷ 35410 ಕೋಟಿ ರೂ. ಅಗತ್ಯವಿದೆ. ತೆರಿಗೆ ಹಣದ ಜೊತೆಗೆ 8068 ಕೋಟಿ ರೂ. ಹೆಚ್ಚುವರಿ ಸಾಲ, ಬಂಡವಾಳ ಯೋಜನೆಗಳ ಮರು ಆದ್ಯತೆ ನಿಗದಿ ಮೂಲಕ 6086 ಕೋಟಿ ರೂ. ಹಾಗೂ ರಾಜಸ್ವ ಯೋಜನೆಗಳ ಮರು ಆದ್ಯತೆ ನಿಗದಿ ಪಡಿಸುವ ಮೂಲಕ 7000 ಕೋಟಿ ರೂ. ಸೇರಿದಂತೆ ಒಟ್ಟು 34,654 ಕೋಟಿ ರೂ. ಸಂಪನ್ಮೂಲ ಕ್ರೋಢೀಕರಣ ಮಾಡಲಾಗುವುದು ಎಂದು ತಿಳಿಸಿದರು.

ಸಾಮಾಜಿಕ ಸ್ವಾತಂತ್ರ್ಯ ಇಲ್ಲದಿದ್ದರೆ, ದೇಶಕ್ಕೆ ಸ್ವಾತಂತ್ರ್ಯ ಬಂದರೂ ಪ್ರಯೋಜನವಿಲ್ಲ . ರಾಜಕೀಯ ಪ್ರಜಾಪ್ರಭುತ್ವಯಿದ್ದರೆ ಸಾಲದು, ಸಾಮಾಜಿಕ ಪ್ರಜಾಪ್ರಭುತ್ವವಿರಬೇಕು. ಸಮಾಜಿಕ ಹಾಗೂ ಆರ್ಥಿಕ ಅಸಮಾನತೆಯಿಂದ ಕಷ್ಟದಲ್ಲಿರುವವರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಡಾ. ಅಂಬೇಡ್ಕರ್ ಹೇಳಿದ್ದರು. ಎಲ್ಲರಿಗೂ ಸಮಪಾಲು, ಸಮಬಾಳು ಎಂಬ ಧ್ಯೇಯವೇ ಸಮಾಜವಾದ. ನಮ್ಮ ಸರ್ಕಾರ ಜನರ ಜೇಬಿಗೆ ದುಡ್ಡು ಕೊಡುವ ಮೂಲಕ ಉದ್ಯೋಗ ಸೃಷ್ಟಿ , ಜಿಡಿಪಿ ಬೆಳವಣಿಗೆ, ತೆರಿಗೆ ಮೂಲಕ್ಕೂ ದಾರಿಯಾಗುತ್ತದೆ ಎಂದರು. ನಾವು ನುಡಿದಂತೆ ನಡೆದಿದ್ದೇವೆ. 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದೇವೆ. 2018 ಮಾರ್ಚ್ ಅಂತ್ಯಕ್ಕೆ 2,45,000 ಕೋಟಿ ಸಾಲ ಇತ್ತು. 2023ಕ್ಕೆ ಇದು 5,20,000 ಕೋಟಿ ರೂ. ಸಾಲವಿದೆ. ನಾವು ಬಡವರ ಪರವಾಗಿದ್ದೇವೆ. ಬೆಲೆ ಏರಿಕೆ ಹಾಗೂ ನಿರುದ್ಯೋಗದಿಂದ ತತ್ತರಿಸಿರುವ ಜನರ ಜೇಬಿಗೆ ಹಣ ತುಂಬುವ ಕೆಲಸ ಮಾಡಿದ್ದೇವೆ. ಸಾರ್ವತ್ರಿಕ ಮೂಲ ಆದಾಯವನ್ನು ಎಲ್ಲಾ ಅಭಿವೃದ್ಧಿಯಾಗಿರುವ ರಾಜ್ಯಗಳು ಮಾಡುತ್ತಿವೆ. 14 ಮತ್ತು 15ನೇ ಹಣಕಾಸು ಆಯೋಗಕ್ಕೆ ಹೋಲಿಸಿದರೆ ರಾಜ್ಯಕ್ಕೆ ಬರುವ ಅನುದಾನ ಕಡಿಮೆಯಾಗಿದೆ. 5495 ಕೋಟಿ ರೂ. ಮಧ್ಯಂತರ ಪರಿಹಾರ ನೀಡಲಿಲ್ಲ. 25 ಜನ ಸಂಸದರಿದ್ದರೂ ಇದರ ಬಗ್ಗೆ ಲೋಕಸಭೆಯಲ್ಲಿ ಪ್ರಶ್ನಿಸಲಿಲ್ಲ ಎಂದು ತಿಳಿಸಿದರು. ರಾಜ್ಯಗಳಿಗೆ ನೀಡುವ ಸಬ್ಸಿಡಿಗಳು ಕಡಿಮೆಯಾಗಿದೆ. ಯೋಜನೆಯಲ್ಲಿ ಶೇ.80ರಷ್ಟು ರಾಜ್ಯ ಹಾಗೂ ಶೇ.20 ರಷ್ಟು ಕೇಂದ್ರ ಸರ್ಕಾರ ಹಾಕಿ, ಕೇಂದ್ರ ಪುರಸ್ಕೃತ ಯೋಜನೆ ಎನ್ನಲಾಗುತ್ತದೆ. ಈ ವರ್ಷ ರಾಜ್ಯದಿಂದ ವಿವಿಧ ತೆರಿಗೆಗಳ ರೂಪದಲ್ಲಿ ಕೇಂದ್ರಕ್ಕೆ 4 ಲಕ್ಷ ಕೋಟಿ ರೂ. ಹೋಗುತ್ತಿದ್ದು, ಅದರಲ್ಲಿ ತೆರಿಗೆ ಪಾಲು ಹಾಗೂ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಸೇರಿ ಕೇವಲ 50257 ಕೋಟಿ ಬರುತ್ತದೆ ಎಂದರು.


ತೆರಿಗೆ ಸೋರಿಕೆಯನ್ನು ತಡೆದು, ತೆರಿಗೆ ಸಂಗ್ರಹಕ್ಕೆ ಪ್ರಮುಖ ಇಲಾಖೆಗಳಿಗೆ ಹೆಚ್ಚಿನ ಗುರಿಯನ್ನು ನೀಡಲಾಗಿದೆ. 13,500 ಕೋಟಿ ತೆರಿಗೆ ಬಾಬ್ತುಗಳಿಂದ ಸಂಗ್ರಹವಾಗುತ್ತದೆ. ನಮ್ಮ ಸರ್ಕಾರ 85,808 ಕೋಟಿ ಹೆಚ್ಚುವರಿ ಸಾಲ ಪಡೆಯುತ್ತಿದೆ. ಯೋಜನೆಗಳ ಆದ್ಯತೀಕರಣದಿಂದ ರೂ. 34,650 ಕೋಟಿ ಕ್ರೋಢೀಕರಣ ಮಾಡಲಾಗುತ್ತದೆ. ಇದು ವಿತ್ತೀಯ ಹೊಣೆಗಾರಿಕೆ ಕಾಯ್ದೆಯ ಮಾನದಂಡಗಳ ಮಿತಿಯೊಳಗೆ ಇದೆ. ಮುಂದೆಯೂ ಉಳಿತಾಯ ಬಜೆಟ್ ಮಾಡಲು ಪ್ರಯತ್ನಿಸಲಾಗುವುದು ಎಂದರು.

ಪಂಚ ಯೋಜನೆಗಳಿಗೆ ಅನುದಾನ ಮೀಸಲು ಮಾಡಲಾಗಿದೆ. ರಾಜ್ಯದ ಆರ್ಥಿಕತೆ ದಿವಾಳಿಯಾಗುತ್ತಿಲ್ಲ. 76 ಕಾರ್ಯಕ್ರಮಗಳ ಅನುಷ್ಠಾನ ಮಾಡುವ ಮೂಲಕ ನುಡಿದಂತೆ ನಡೆಯುತ್ತಿದ್ದೇವೆ. ಶಕ್ತಿ ಯೋಜನೆ ಮೂಲಕ ಪ್ರತಿ ದಿನ ಸುಮಾರು 50 ಲಕ್ಷ ಜನ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. 2800 ಕೋಟಿಯನ್ನು ಈ ಯೋಜನೆಗೆ ಈ ವರ್ಷ ಇಡಲಾಗಿದೆ. ಗೃಹಜ್ಯೋತಿ ಯೋಜನೆ ಜುಲೈ ತಿಂಗಳಿನಿಂದ ಜಾರಿ ಮಾಡಿ , ಫಲಾನುಭವಿಗಳು ಆಗಸ್ಟ್ ತಿಂಗಳಿನಿಂದ ಬಿಲ್ಲು ಪಾವತಿಸುವ ಅಗತ್ಯವಿಲ್ಲ. ರಾಜ್ಯದಲ್ಲಿ ಜನರ ಗೃಹಬಳಕೆಯ ವಿದ್ಯುತ್ ಸರಾಸರಿ 53 ಯೂನಿಟ್ 12 ತಿಂಗಳ ಸರಾಸರಿಗೆ ಶೇ.10 ರಷ್ಟು ಸೇರಿಸಿ, ಉಚಿತ ವಿದ್ಯುತ್ ನೀಡಲಾಗುವುದು. ರಾಜ್ಯಕ್ಕೆ ಅನ್ನಭಾಗ್ಯ ಯೋಜನೆಗೆ 2,29,000 ಮೆ.ಟನ್ ಅಕ್ಕಿ ಬೇಕಾಗುತ್ತದೆ. ಅಕ್ಕಿ ಸರಬರಾಜಿಗೆ ಕೇಂದ್ರ ನಿರಾಕರಿಸಿದ್ದರಿಂದ 5 ಕೆಜಿ ಬದಲು 170 ರೂ. ವೆಚ್ಚವನ್ನು ಫಲಾನುಭವಿಗಳಿಗೆ ನೀಡಲಾಗುತ್ತಿದ್ದು, ಈ ಯೋಜನೆಗೆ ಸುಮಾರು 10 ಸಾವಿರ ಕೋಟಿ ರೂ. ಮೀಸಲಿರಿಸಲಾಗಿದೆ. ಈವರೆಗೆ 57.51 ಲಕ್ಷ ಕುಟುಂಬಗಳಿಗೆ 337.08 ಕೋಟಿ ಬ್ಯಾಂಕ್ ಖಾತೆಗೆ ತಲುಪಿಸಲಾಗಿದೆ. ಗೃಹಲಕ್ಷ್ಮಿ ಯೋಜನೆಗೆ 34000 ಕೋಟಿ ರೂ. ಈ ವರ್ಷ 18000 ಕೋಟಿ ರೂ. ಮೀಸಲಿರಿಸಲಾಗಿದೆ. ಯುವನಿಧಿ ಯೋಜನೆಯಡಿ 2022–23ರಲ್ಲಿ ಪಾಸಾದ ಪದವಿಧರರು ಹಾಗೂ ಡಿಪ್ಲೋಮಾ ಪಡೆದಿರುವವರಿಗೆ 3000 ರೂ. ಹಾಗೂ 1500 ರೂ. ಅನುಕ್ರಮವಾಗಿ 24 ತಿಂಗಳವರೆಗೆ ನೀಡಲಾಗುವುದು. ಪಂಚ ಗ್ಯಾರಂಟಿಗಳಿಂದ 1.30 ಕೋಟಿ ಕುಟುಂಬಗಳಿಗೆ ಅನುಕೂಲವಾಗುತ್ತಿದೆ ಎಂದರು.

ಈ ಸರ್ಕಾರ ಸಮಾಜದ ಎಲ್ಲ ವರ್ಗದ ಜನರು, ಅವಕಾಶ ವಂಚಿತರಿಗೆ ನ್ಯಾಯ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನಿಸಲಾಗಿದ್ದು, ಮುಂದೆಯೂ ಪ್ರಯತ್ನಿಸಲಾಗಿದೆ. ಜನಪರ, ಅಭಿವೃದ್ಧಿಪರ, ದೂರದೃಷ್ಟಿಯುಳ್ಳ, ರಾಜ್ಯ ಆರ್ಥಿಕತೆ ಬೆಳವಣಿಗೆಗೆ ಪೂರಕವಾದ ಬಜೆಟ್ ಅನ್ನು ಮಂಡಿಸಲಾಗಿದೆ. ರಾಜ್ಯದ ಜನರು ಈ ಬಜೆಟ್ ಅನ್ನು ಸ್ವಾಗತಿಸಿದ್ದಾರೆ. ಬಜೆಟ್ ಚರ್ಚೆಯಲ್ಲಿ ಭಾಗವಹಿಸಿ, ಬಜೆಟ್ ಸ್ವಾಗತಿಸಿದವರು ಹಾಗೂ ಟೀಕಿಸಿದವರಿಗೆ ಮುಖ್ಯಮಂತ್ರಿಗಳು ಧನ್ಯವಾದಗಳನ್ನು ತಿಳಿಸಿದರು.

ಗ್ಯಾರಂಟಿಗಳಿಗಾಗಿ ಎಸ್ಸಿ–ಎಸ್‌ಟಿ ಕಲ್ಯಾಣದ ಅನುದಾನ ದುರ್ಬಳಕೆ

- ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪ
- ತಮ್ಮ ಪಕ್ಷದ 10 ಮಂದಿ ಶಾಸಕರ ಅಮಾನತುಗೊಳಿಸಿದ್ದನ್ನು ಖಂಡಿಸಿ ಧರಣಿ ಮುಂದುವರಿಕೆ



ಬೆಂಗಳೂರು, ಜು.21(ಕೆಎಂಶಿ)–ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಜಾರಿಗೆ ಹಣಕಾಸು ಹೊಂದಿಸಲು ಎಸ್ಸಿ ಎಸ್ಟಿ ಸಮುದಾಯದ ಕಲ್ಯಾಣಕ್ಕೆ ಮೀಸಲಿಟ್ಟ ಎಸ್ಸಿಪಿ, ಟಿಎಸ್ಪಿ ಅನುದಾನವನ್ನು ದುರ್ಬಳಕೆ ಮಾಡಿ, ಎಸ್ಸಿ ಎಸ್ಟಿ ಸಮುದಾಯಕ್ಕೆ ದ್ರೋಹ ಮಾಡಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಬಿಜೆಪಿ ಸದಸ್ಯರನ್ನು ವಿಧಾನಸಭೆ ಕಲಾಪದಿಂದ ಹೊರಹಾಕಿರುವುದನ್ನು ಖಂಡಿಸಿ ವಿಧಾನಸೌಧದ ಬಳಿ ಇರುವ ಗಾಂಧಿ ಪ್ರತಿಮೆ ಬಳಿ ಪಕ್ಷದ ವತಿಯಿಂದ ನಡೆಸಿದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಸರ್ಕಾರ ಬಂದ ಮೇಲೆ ಕರ್ನಾಟಕದ ಜನರ ಬದುಕು ದುಸ್ತರ ಆಗಿದೆ. ರೈತರು ಎರಡು ಬಾರಿ ಬಿತ್ತನೆ ಮಾಡಿದರು ಬೆಳೆ ಬರದೇ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ಅವರ ರಕ್ಷಣೆಗೆ ಬಂದಿಲ್ಲ. 2013 ರಿಂದ 18ರವರೆಗೆ ಅತೀ ಹೆಚ್ಚು ರೈತರು, ಸುಮಾರು 4000ಕ್ಕೂ ಹೆಚ್ಚು ಮಂದಿ ಆತ್ಮಹತ್ಯೆ ಮಾಡಿಕೊಂಡ ದಾಖಲೆ ಇದೆ ಎಂದು ಹೇಳಿದರು.

ನಾವು ನಮ್ಮ ಬಜೆಟ್‌ನಲ್ಲಿ ಡಿಗ್ರಿವರೆಗೆ ಉಚಿತ ವಿದ್ಯಾಭ್ಯಾಸ ನೀಡುವುದಾಗಿ ಹೇಳಿದ್ದೆವು. ಶಾಲಾ ಮಕ್ಕಳಿಗೆ ಪ್ರತ್ಯೇಕ ಬಸ್ ವ್ಯವಸ್ಥೆ ಮಾಡುವುದಾಗಿ ಹೇಳಿದ್ದೆವು. ಇವರು ಅದನ್ನು ಕೈ ಬಿಟ್ಟಿದ್ದಾರೆ. ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಕೊಲೆ ಸುಲಿಗೆ ಹೆಚ್ಚಾಗಿದೆ.

ಪೊಲೀಸ್ ಠಾಣೆಯಲ್ಲಿ ಮಾಮೂಲು ಕೇಳುವ ಕೆಲಸ ಶುರುವಾಗಿದೆ. ವಿದ್ಯಾರ್ಥಿಗಳು, ರೈತರು, ಸರ್ಕಾರಿ ನೌಕರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ದುಡಿಯುವ ಸಾಮಾನ್ಯ ಜನರ ಬದುಕು ಅಸ್ಥಿರಗೊಳಿಸಿದ್ದಾರೆ. ಇವರು ಮಂಡಿಸಿರುವುದು ಜನ ವಿರೋಧಿ ಬಜೆಟ್. ಇವರು ಗ್ಯಾರಂಟಿಗಳಿಗೆ ಹಣ ಹೊಂದಿಸಲು ಪರದಾಡುತ್ತಿದ್ದಾರೆ. ಇವರ ಅವಧಿಯಲ್ಲಿ ಅತಿ ಹೆಚ್ಚು ಸಾಲ ಮಾಡಿದ್ದಾರೆ. ನಿಜಲಿಂಗಪ್ಪರಿಂದ ಹಿಡಿದು ಜಗದೀಶ್ ಶೆಟ್ಟರ್‌ವರೆಗೆ ಒಂದು ಲಕ್ಷ ಕೋಟಿ ಸಾಲವಾಗಿತ್ತು ಸಿದ್ದರಾಮಯ್ಯ ಅವರ ಅವಧಿಯಲ್ಲಿ ಒಂದು ಲಕ್ಷ ಮೂವತ್ತು ಸಾವಿರ ಕೋಟಿ ಸಾಲ ಮಾಡಿದ್ದಾರೆ.

ದಲಿತರ ಕಲ್ಯಾಣಕ್ಕಾಗಿ ಮೀಸಲಿಟ್ಟ ಎಸ್ಸಿಪಿ, ಟಿಎಸ್‌ಪಿ ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ. ಗೃಹಲಕ್ಷ್ಮಿ ಯೋಜನೆಗೆ 6 ಸಾವಿರ ಕೋಟಿ ರೂ. ಎಸ್‌ಸಿಪಿ ಟಿಎಸ್ಪಿ ಹಣ ಬಳಕೆ ಮಾಡಿಕೊಂಡಿದ್ದಾರೆ. ಗ್ಯಾರಂಟಿಗಳಿಗೆ 13000 ಕೋಟಿ ರೂ. ವರ್ಗಾವಣೆ ಮಾಡಿದ್ದಾರೆ. ಕಾಂಗ್ರೆಸ್‌ನಲ್ಲಿರುವ ದಲಿತ ಶಾಸಕರು ಹಾಗೂ ಸಚಿವರು ಏನು ಮಾಡುತ್ತಿದ್ದೀರಿ. ಅದನ್ನು ಕೇಳಲು ಧೈರ್ಯ ಇಲ್ಲವೇ ನರ ಇಲ್ಲವೇ ಎಂದು ಪ್ರಶ್ನಿಸಿದರು. ಅಂಬೇಡ್ಕರ್ ಅವರ ಹೆಸರಿನಲ್ಲಿ ನಾವು 100 ಹಾಸ್ಟೆಲ್ ನಿರ್ಮಾಣ ಮಾಡಲು ಘೋಷಣೆ ಮಾಡಿದ್ದೆವು, ಹಿಂದುಳಿದ ವರ್ಗದ ಹಾಸ್ಟೆಲ್ ನಿರ್ಮಾಣ ಮಾಡಲು ಘೋಷಣೆ ಮಾಡಿದ್ದೆವು. ಅವುಗಳನ್ನು ನಿಮ್ಮ ಬಜೆಟ್‌ನಲ್ಲಿ ಘೋಷಣೆ ಮಾಡಲಿಲ್ಲ. ನೀವು ದಲಿತರ ವಿರೋಧಿಗಳು ಎಂದು ಆರೋಪಿಸಿದರು.

ಭ್ರಷ್ಟಾಚಾರದಲ್ಲಿ ಸಿದ್ದರಾಮಯ್ಯ ಸರ್ಕಾರ ನಂಬರ್ ಒನ್ ಅಂತ ವರದಿ ಬಂದಿದೆ. ಗುಮಾಸ್ತನಿಂದ ಹಿಡಿದು ಸೆಕ್ರೆಟರಿವರೆಗೂ ವರ್ಗಾವಣೆಗೆ ರೇಟ್ ಫಿಕ್ಸ್ ಮಾಡಿದ್ದೀರಿ. ಮಾಲಿನ್ಯ ನಿಯಂತ್ರಣ ಮಂಡಳಿಗೆ ಐಎಫ್‌ಎಸ್ ಅಧಿಕಾರಿ ನೇಮಕ ಮಾಡಬೇಕು. ಅದರ ಬದಲು ಸಂಬಂಧಿಕ ಅಂತ ಗುತ್ತಿಗೆ ನೌಕರರನ್ನು ಸೆಕ್ರೆಟರಿಯಾಗಿ ನೇಮಕ ಮಾಡಿದ್ದಾರೆ.

ಗ್ಯಾರಂಟಿಗಳಲ್ಲಿ ಜನರಿಗೆ ಮೋಸ ಮಾಡಿದ್ದೀರಿ, ಕರೆಂಟ್ ದರ ಹೆಚ್ಚಳ ಮಾಡಿದ್ದೀರಿ, ಗೃಹಲಕ್ಷ್ಮಿಗೆ ಇನ್ನೂ ಯಜಮಾನಿಯನ್ನು ಹುಡುಕಾಟ ನಡೆಸಿದ್ದಾರೆ. ಯುವ ನಿಧಿ ಅಯೋಮಯವಾಗಿದೆ ಎಂದು ವಾಗ್ದಾಳಿ ನಡೆಸಿದರು.

ಕೋವಿಡ್ ಸಂದರ್ಭದಲ್ಲಿ ನಾವು ಉತ್ತಮ ಆರ್ಥಿಕ ನಿರ್ವಹಣೆ ಮಾಡಿದ್ದಕ್ಕೆ ನೀವು ಇಷ್ಟು ಗಾತ್ರದ ಬಜೆಟ್ ಮಂಡಿಸಲು ಸಾಧ್ಯವಾಗಿದೆ. ನಮ್ಮ ಅವಧಿಯಲ್ಲಿ ಜಿಎಸ್‌ಟಿ, ಮೋಟಾರ್ ವೆಹಿಕಲ್ ತೆರಿಗೆ ಎಲ್ಲವೂ ಹೆಚ್ಚು ಸಂಗ್ರಹವಾಗಿದೆ.

ಕೋವಿಡ್ ಸಂದರ್ಭದಲ್ಲಿ ನರೇಂದ್ರ ಮೋದಿಯವರು ರಾಜ್ಯಕ್ಕೆ ಅತೀ ಹೆಚ್ಚು ಹಣ ನೀಡಿದ್ದಾರೆ. ಕೇಂದ್ರ ಸರ್ಕಾರ ಕಳೆದ ವರ್ಷ 3500 ಕೋಟಿ ವಿಶೇಷ ಅನುದಾನ ನೀಡಿದ್ದಾರೆ. ಯುಪಿಎ ಅವಧಿಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇತ್ತು. ಅವರು ಸೋನಿಯಾಗಾಂಧಿ ಮುಂದೆ ಹೋಗಿ ನಿಲ್ಲಲು ಆಗುತ್ತಿರಲಿಲ್ಲ. ಕೇಂದ್ರ ನೀಡಿದ ಹಣದ ಬಗ್ಗೆ ಸಿದ್ದರಾಮಯ್ಯ ಬಜೆಟ್‌ನಲ್ಲಿ ಪ್ರಸ್ತಾಪ ಮಾಡದೆ ಮರೆಮಾಚಿದ್ದಾರೆ ಎಂದು ಆರೋಪಿಸಿದರು.

ಅಧಿಕಾರಕ್ಕೆ ಬಂದು ಎರಡೇ ತಿಂಗಳಲ್ಲಿ ಸಿದ್ದರಾಮಯ್ಯ ಸರ್ಕಾರ ಜನಪ್ರಿಯತೆ ಕಳೆದುಕೊಂಡಿದೆ. ಐದು ಜನ ಟೆರರಿಸ್ಟ್‌ಗಳು ಸಿಕ್ಕಿಬಿದ್ದಿದ್ದಾರೆ. ಅವರನ್ನು ಟೆರರಿಸ್ಟ್ ಎನ್ನಲು ಆಗುವುದಿಲ್ಲ ಎಂದು ಗೃಹ ಸಚಿವರು ಹೇಳಿದ್ದಾರೆ. ಸಾಮಾನ್ಯ ಅಪರಾಧ ಮಾಡುವವರು ಹ್ಯಾಂಡ್ ಗ್ರೆನೇಡ್ ಇಟ್ಟುಕೊಳ್ಳುತ್ತಾರಾ? ಇದೆಲ್ಲದಕ್ಕೂ ರಾಜ್ಯದ ಜನತೆ ಲೋಕಸಭಾ ಚುನಾವಣೆಯಲ್ಲಿ ಉತ್ತರ ನೀಡಲಿದ್ದಾರೆ ಎಂದು ಹೇಳಿದರು.

ಮೋದಿಯವರು ಪ್ರಧಾನಿಯಾಗುವ ಮುನ್ನ 53 ಲಕ್ಷ ಕೋಟಿ ಇದ್ದ ದೇಶದ ಸಾಲ ಈಗ 170 ಲಕ್ಷ ಕೋಟಿ ಆಗಿದೆ

ಅರ್ಥಾತ್ 118 ಕೋಟಿ ಹೆಚ್ಚಾಗಿದೆ; ಮುಖ್ಯಮಂತ್ರಿ ವಿವರಣೆ

ಬೆಂಗಳೂರು, ಜು.21(ಕೆಎಂಶಿ)– ಮೋದಿ ಅವರು ಪ್ರಧಾನಿ ಆಗುವವರೆಗೂ ದೇಶದ ಸಾಲ 53 ಲಕ್ಷ ಕೋಟಿ ಮಾತ್ರ ಇತ್ತು. ಆದರೆ ಈಗ ದೇಶದ ಸಾಲ 170 ಲಕ್ಷ ಕೋಟಿ ಆಗಿದೆ. ಪ್ರದಾನಿ ಮೋದಿ ಒಬ್ಬರ ಅವಧಿಯಲ್ಲಿ 118 ಲಕ್ಷ ಕೋಟಿ ಸಾಲ ಆಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೇಶದ ಸಾಲದ ಪ್ರಮಾಣವನ್ನು ವಿಧಾನಪರಿಷತ್ತಿನಲ್ಲಿಂದು ಎಳೆ ಎಳೆಯಾಗಿ ಬಿಚ್ಚಿಟ್ಟರು.

ಆಯವ್ಯಯದ ಮೇಲೆ ನಡೆದ ಚರ್ಚೆಗೆ ಉತ್ತರಿಸಿದ ಮುಖ್ಯಮಂತ್ರಿಯವರು, ದೇಶಕ್ಕೆ ಸ್ವಾತಂತ್ರ್ಯ ಬಂದಾಗಿನಿಂದ ಮೋದಿ ಪ್ರಧಾನಿ ಆಗುವವರೆಗೂ ಇದ್ದ ದೇಶದ ಸಾಲ ಕೇವಲ 53 ಲಕ್ಷ ಕೋಟಿ. ಅದನ್ನು 170 ಲಕ್ಷ ಕೋಟಿಗೆ ಏರಿಸಿದ್ದೇ ಮೋದಿಯವರ ಸಾಧನೆ. ಶ್ರೀಮಂತ ಕಾರ್ಪೊರೇಟ್‌ಗಳ 12 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ ಮೋದಿ ಅವರು ನಾವು ಐದು ಗ್ಯಾರಂಟಿಗಳನ್ನು ಜಾರಿ ಮಾಡಿದರೆ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎನ್ನುತ್ತಾರೆ. ಕಚ್ಚಾತೈಲದ ಬೆಲೆ ಕಡಿಮೆ ಇದ್ದಾಗಲೂ ಪೆಟ್ರೋಲ್–ಡೀಸೆಲ್ ಬೆಲೆ ಈ ಮಟ್ಟಕ್ಕೆ ಏರಿಸಿದರೆ, ಹಾಲು–ಮೊಸರು–ಮಜ್ಜಿಗೆ– ಮಂಡಕ್ಕಿ ಮೇಲೂ ಜಿಎಸ್‌ಟಿ ಹಾಕಿದರೆ ಬಡವರು, ಮಧ್ಯಮವರ್ಗದವರ ಗತಿ ಏನು ಎಂದು ಪ್ರಶ್ನಿಸಿದರು.

ಮಹಾತ್ಮಗಾಂಧಿ ಜೀವನ ಸಂದೇಶವೇ ಸತ್ಯ–ಅಹಿಂಸೆ ಆಗಿತ್ತು. ಸದಾ ಸುಳ್ಳು ಹೇಳುವ ಬಿಜೆಪಿಯವರು ಗಾಂಧಿ ಪ್ರತಿಮೆ ಎದುರು ಪ್ರತಿಭಟನೆ ಕುಳಿತಿದ್ದಾರೆ.

ಬಸವಣ್ಣನವರ ದಾಸೋಹ ಮತ್ತು ಕಾಯಕ ಸಂಸ್ಕೃತಿಯ ಆಶಯ ನಮ್ಮ ಆಯವ್ಯಯದಲ್ಲಿದೆ. ಬಿಜೆಪಿಯವರು ಬಸವ ವಿರೋಧಿಗಳು ಎಂದರು.

ಬೆಂಕಿ ಹಚ್ಚುವುದೇ ಬಿಜೆಪಿ ಕೆಲಸ. ಅವರು ಮಣಿಪುರವನ್ನೂ ಬಿಡಲ್ಲ, ಕರ್ನಾಟಕವನ್ನೂ ಬಿಡಲ್ಲ. ಬೆಂಕಿ ಹಚ್ಚುತಾರೆ ಎಂದರು. ಶ್ರಮಿಕರ,ಬಡವರ ಹಣ ಕಿತ್ತು ಶ್ರೀಮಂತ ಕಾರ್ಪೊರೇಟ್‌ಗಳಿಗೆ ಕೊಡುವುದು ಬಿಜೆಪಿಯ ಆರ್ಥಿಕತೆ. ಈ ಕಾರಣಕ್ಕೇ ಹಾಲು, ಮೊಸರು, ಮಂಡಕ್ಕಿ ಮೇಲೂ ತೆರಿಗೆ ಹಾಕಿದ್ದಾರೆ. ಶ್ರೀಮಂತ ಕಾರ್ಪೊರೇಟ್ ಗಳ 12 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ್ದಾರೆ. ಆದರೆ, ರೈತರ ಸಾಲ ಮನ್ನಾ ಮಾಡಿ ಎಂದರೆ ಒಪ್ಪುತ್ತಿಲ್ಲ.

ಸ್ಥಳೀಯರಿಗೆ ಉದ್ಯೋಗ ನೀಡದ ತಾಂಡವಪುರ ಕೈಗಾರಿಕೆಗಳ ವಿರುದ್ಧ ಮುಖ್ಯಮಂತ್ರಿಗಳಿಗೆ ದೂರು

ನಿರುದ್ಯೋಗಿಗಳು, ಗ್ರಾಮಸ್ಥರ ಅಳಲು; ಗ್ರಾಪಂ ಸಭೆಯಲ್ಲಿ ನಿರ್ಧಾರ



ನಂಜನಗೂಡು, ಜು.21– ಸ್ಥಳೀಯರಿಗೆ ಉದ್ಯೋಗ ನೀಡಲು ನಿರಾಕರಿಸುತ್ತಿರುವ ತಾಂಡವಪುರ ಕೈಗಾರಿಕಾ ಪ್ರದೇಶದ ಕಾರ್ಖಾನೆಗಳ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ದೂರು ನೀಡಲು ನಿರ್ಧರಿಸಲಾಗಿದೆ.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾಗವೇಣಿ ರಾಜು ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದ್ದು, ಮುಖ್ಯಮಂತ್ರಿಗಳ ಗಮನಕ್ಕೆ ವಿಷಯ ತಂದು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ತೀರ್ಮಾನಿಸಲಾಯಿತು.

ತಾಲೂಕು ವರುಣ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿರುವ ಕೈಗಾರಿಕೆಗಳಲ್ಲಿ ಸ್ಥಳೀಯ ಯುವಕರಿಗೆ ಗುತ್ತಿಗೆ ಕೆಲಸ ಸೇರಿದಂತೆ ಯಾವುದೇ ಉದ್ಯೋಗ ನೀಡುತ್ತಿಲ್ಲ. ಆದ್ದರಿಂದ ಗ್ರಾಮ ಪಂಚಾಯಿತಿ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸೂಕ್ತ ಕ್ರಮ ಕೈಗೊಂಡು ಉದ್ಯೋಗ ದೊರಕಿಸಿಕೊಡಿ ಎಂದು ನಿರುದ್ಯೋಗಿಗಳು ಮತ್ತು ಗ್ರಾಮಸ್ಥರು ಸಭೆಯಲ್ಲಿ ಅಳಲು ತೋಡಿಕೊಂಡ ಹಿನ್ನೆಲೆಯಲ್ಲಿ ಈ ನಿರ್ಧಾರಕ್ಕೆ ಬರಲಾಯಿತು.

ಈಗಾಗಲೇ ನಾವು ನಮ್ಮ ವ್ಯಾಪ್ತಿಯಲ್ಲಿ ಬರುವ ಕೈಗಾರಿಕೆಗಳಿಗೆ ಕಟ್ಟಡ ನಿರ್ಮಾಣಕ್ಕೆ ಯಾವುದೇ ಅನುಮತಿ ನೀಡುತ್ತಿಲ್ಲ. ನಮ್ಮ ಪಂಚಾಯಿತಿಯಿಂದ ಅನುಮತಿ ಕೇಳುವಾಗ ಸ್ಥಳೀಯ ಯುವಕರಿಗೆ ಉದ್ಯೋಗ ಕೊಡಬೇಕು ಎಂದು ಕಂಪನಿಗಳ ಮಾಲೀಕರುಗಳಿಗೆ ತಿಳಿಸಿದ್ದೇವೆ ಎಂದು ಅಧ್ಯಕ್ಷೆ ನಾಗವೇಣಿ ರಾಜು ತಿಳಿಸಿದರು.

ಕಂಪನಿ ಮಾಲೀಕರುಗಳು ನಾವು ಈಗಾಗಲೇ ಕಂಪನಿಗೆ ಭೂಮಿ ನೀಡಿರುವ ರೈತರ ಮಕ್ಕಳಿಗೆ ಹಾಗೂ ಸ್ಥಳೀಯರಿಗೂ ಉದ್ಯೋಗ ನೀಡಿದ್ದೇವೆ ಎಂದು ಹೇಳುತ್ತಾರೆ. ಆದರೂ ಸಹ ನಮ್ಮಲ್ಲಿ ನಿರುದ್ಯೋಗ ಸಮಸ್ಯೆ ಬಗೆಹರಿದಿಲ್ಲ. ಈ ಬಗ್ಗೆ ಕ್ಷೇತ್ರದ ಶಾಸಕರು ಆದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದೂರು ನೀಡಿ ಸಮಸ್ಯೆ ಬಗೆಹರಿಸಲು ಕ್ರಮವಹಿಸುವೆ ಎಂದರು.

ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಮಾತನಾಡಿ, ನಾನು ಗ್ರಾಮ ಪಂಚಾಯಿತಿಗೆ ಅಭಿವೃದ್ಧಿ ಅಧಿಕಾರಿಯಾಗಿ ಬಂದ ಮೇಲೆ ಗ್ರಾಮದ ಹಲವಾರು ಸಮಸ್ಯೆಗಳನ್ನು ಬಗೆಹರಿಸಿದ್ದೇನೆ. ನಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ 5 ಗ್ರಾಮಗಳ ಗ್ರಾಮ ಸಭೆಗಳಲ್ಲಿ ಹಲವಾರು ಸಮಸ್ಯೆಗಳು ಕೇಳಿ ಬಂದಿವೆ. ಅದರಲ್ಲೂ ಸ್ಮಶಾನಾಭಿವೃದ್ಧಿ, ಕುಡಿಯುವ ನೀರಿನ ಸಮಸ್ಯೆ, ಚರಂಡಿ, ರಸ್ತೆ ಬೀದಿ ದೀಪ ಸೇರಿದಂತೆ ನಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ನಮಗೆ ಸಂಬಂಧಪಟ್ಟ ಎಲ್ಲಾ ಕೆಲಸಗಳನ್ನು ಪ್ರಾಮಾಣಿಕವಾಗಿ ಮಾಡಿ ಗ್ರಾಮದ ಅಭಿವೃದ್ಧಿಗೆ ಶ್ರಮವಹಿಸಿರುವೆ ಎಂದರು. ನಮ್ಮ ಪಂಚಾಯತಿ ವ್ಯಾಪ್ತಿಯಲ್ಲಿ ನಿರುದ್ಯೋಗ ಸಮಸ್ಯೆ ಹೆಚ್ಚಾಗಿದ್ದು, ಈ ಬಗ್ಗೆ ನಮ್ಮ ಕ್ಷೇತ್ರದ ಶಾಸಕರೂ ಆದ ಸಿದ್ದರಾಮಯ್ಯನವರು ಮುಖ್ಯಮಂತ್ರಿಗಳಾಗಿದ್ದಾರೆ. ಅವರ ಗಮನಕ್ಕೆ ತಂದರೆ ಈ ಎಲ್ಲ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ಅದಕ್ಕೆ ನಮ್ಮ ಗ್ರಾಮ ಪಂಚಾಯಿತಿಯಿಂದ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಅವರು ಭರವಸೆ ನೀಡಿದರು.

ಸಭೆಯಲ್ಲಿ ಉಪಾಧ್ಯಕ್ಷ ಲೀಲಾವತಿ ಮಹದೇವ್, ಗ್ರಾಪಂ ಸದಸ್ಯರಾದ ಸಿದ್ದಮ್ಮ, ನಾಗಮ್ಮ, ಮಧುರ, ರತ್ನಮ್ಮ, ಸುಧಾರಾಣಿ, ಭಾಗ್ಯ, ರಾಜೇಶ್ವರಿ, ಶ್ರೀಕಂಠಸ್ವಾಮಿ, ಚಂದ್ರು, ಬಿ.ಶಿವಣ್ಣ, ನಟರಾಜ, ಮಾದಪ್ಪ, ಮಧು, ಕೆ.ರಾಜು, ಬಸಪ್ಪಶೆಟ್ಟಿ, ಪಿಡಿಒ ಪ್ರಕಾಶ್, ಪುಟ್ಟರಾಜು, ದೇವರಾಜು ಹಾಗೂ ಅಂಗನವಾಡಿ, ಆಶಾ ಕಾರ್ಯಕರ್ತರು ಸಾರ್ವಜನಿಕರು ಸಭೆಯಲ್ಲಿ ಹಾಜರಿದ್ದರು.

ಮೊಹರಂ ಶಾಂತಿಯುತ ಆಚರಣೆಗೆ ಮನವಿ



ಸರಗೂರು, ಜು.21–ಶಾಂತಿಯುತವಾಗಿ ಮೊಹರಂ ಆಚರಿಸಲು ಕ್ರಮವಹಿಸಬೇಕು ಎಂದು ಸರ್ಕಲ್ ಇನ್ಸ್‌ಪೆಕ್ಟರ್ ಎಂ.ಲಕ್ಷ್ಮಿಕಾಂತ್ ತಿಳಿಸಿದ್ದಾರೆ.

ಮೊಹರಂ ಹಿನ್ನೆಲೆಯಲ್ಲಿ ಪಟ್ಟಣದ ಪೊಲೀಸ್ ಠಾಣೆಯಲ್ಲಿ ನಡೆದ ಶಾಂತಿಪಾಲನಾ ಸಭೆಯಲ್ಲಿ ಮಾತನಾಡಿದ ಅವರು, ಜು.29ರಂದು ನಡೆಯಲಿರುವ ಮೊಹರಂ ಸಂದರ್ಭದಲ್ಲಿ ಸಮಾಜದವರು ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮುನ್ನೆಚ್ಚರಿಕೆ ಕ್ರಮವಹಿಸಬೇಕು ಎಂದು ಸಲಹೆ ನೀಡಿದರು. ಹಬ್ಬದಂದು ಪ್ರಾಣಿ ಹಿಂಸೆ ಮಾಡಬಾರದು. ಶಾಂತಿ, ಸೌಹಾರ್ದದ ಸಂಕೇತ ಮೊಹರಂ ಆಚರಣೆಗೆ ಎಲ್ಲರೂ ಒಗ್ಗೂಡಿ ಶ್ರಮಿಸಬೇಕು. ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಧಾರ್ಮಿಕ ಕಾರ್ಯಕ್ರಮಗಳಿಗೆ ದಕ್ಕೆಯಾಗದಂತೆ ಪ್ರಾರ್ಥನಾ ಮೆರವಣಿಗೆ ನಡೆಸಬೇಕು ಎಂದು ಹೇಳಿದರು.

ಶಾಂತಿಪಾಲನಾ ಸಭೆಯಲ್ಲಿ ಹಲವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿ ಮಾತನಾಡಿದರು. ಸರ್ಕಲ್ ಇನ್ಸ್‌ಪೆಕ್ಟರ್ ಎಂ.ಲಕ್ಷ್ಮಿಕಾಂತ್, ಪಿಎಸ್ಐ ನಂದೀಶ್‌ಕುಮಾರ್, ಸಿಬ್ಬಂದಿಗಳಾದ ಸುಬ್ರಹ್ಮಣ್ಯ, ಇಮ್ರಾನ್ ಅಹಮದ್, ಮುಸ್ಲೀಂ ಮುಖಂಡರಾದ ಖಲೀಲ್, ಸುಭಾನ್, ಸೊಹೈಲ್, ಹಿದಾಯೀತ್, ಮೈದೀನ್, ಸಾರ್ವಜನಿಕರು, ಸೇರಿದಂತೆ ಇನ್ನಿತರರು ಹಾಜರಿದ್ದರು.

ಕಳಪೆ ಗುಣಮಟ್ಟದ ಸ್ಪ್ರಿಂಕ್ಲರ್ ಪೈಪು: ರೈತರ ಆಕ್ರೋಶ



ತಿ.ನರಸೀಪುರ, ಜು.21– ರೈತರಿಗೆ ವಿತರಿಸುವ ಸಲುವಾಗಿ ತಾಲೂಕು ಮೂಗೂರು ರೈತ ಸಂಪರ್ಕ ಕೇಂದ್ರಕ್ಕೆ ತರಲಾಗಿರುವ ಸ್ಪ್ರಿಂಕ್ಲರ್ ಪೈಪ್‌ಗಳು ಕಳಪೆಯಿಂದ ಕೂಡಿವೆ.

ರಾಜ್ಯ ಕಬ್ಬು ಬೆಳೆಗಾರ ಸಂಘದ ಪದಾಧಿಕಾರಿಗಳು ಭೇಟಿ ನೀಡಿ ಪೈಪನ್ನು ಪರಿಶೀಲಿಸಲಾಗಿ ಅದು ತುಂಬಾ ಕಳಪೆ ಗುಣಮಟ್ಟದಿಂದ ಕೂಡಿರುವುದು ಕಂಡು ಬಂದ ಹಿನ್ನೆಲೆಯಲ್ಲಿ ತಾಲೂಕಿನ ಕೃಷಿ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದು ಅವರನ್ನು ಸ್ಥಳಕ್ಕೆ ಕರೆಯಿಸಿ ಯಾವುದೇ ಕಾರಣಕ್ಕೂ ನಮ್ಮ ತಾಲೂಕಿನ ಯಾವುದೇ ರೈತ ಸಂಪರ್ಕ ಕೇಂದ್ರದಲ್ಲಿ ರೈತರಿಗೆ ವಿತರಣೆ ಮಾಡಬಾರದು ಎಂದು ಆಗ್ರಹಿಸಲಾಯಿತು.

ಪೈಪ್ನು ಸರಬರಾಜು ಮಾಡಿರುವ ಆರ್.ಎಂ. ಇಂಡಸ್ಟ್ರೀಸ್‌ಗೆ ಸ್ಪ್ರಿಂಕ್ಲರ್ ಪೈಪ್‌ಗಳನ್ನು ವಾಪಸ್ ಕಳುಹಿಸಲಾಯಿತು. ಮುಂದೆ ಇದೇ ರೀತಿ ರೈತರಿಗೆ ಕಳಪೆ ಗುಣಮಟ್ಟದ ಪೈಪುಗಳನ್ನು ವಿತರಿಸುವುದು ಕಂಡುಬಂದಲ್ಲಿ ತಾಲೂಕಿನ ಸಂಬಂಧಪಟ್ಟ ಕೃಷಿ ಇಲಾಖೆಯನ್ನು ಹೊಣೆಗಾರರಾಗಿ ಮಾಡಬೇಕಾಗುವುದು. ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಮುಂದಿನ ದಿನಗಳಲ್ಲಿ ರೈತರಿಗೆ ಗುಣಮಟ್ಟದ ಕೃಷಿ ಪರಿಕರಗಳನ್ನು ಸರಬರಾಜು ಮಾಡಬೇಕು. ತಪ್ಪಿದಲ್ಲಿ ಸಂಘಟನೆ ವತಿಯಿಂದ ಕೃಷಿ ಇಲಾಖೆಯ ಮುಂದೆ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಸಲಾಯಿತು.

ತಾಲೂಕು ಅಧ್ಯಕ್ಷ ಕುರುಬೂರು ಸಿದ್ದೇಶ್, ಜಿಲ್ಲಾಧ್ಯಕ್ಷ ಸೋಮಶೇಖರ್, ಜಿಲ್ಲಾ ಕಾರ್ಯದರ್ಶಿ ಕಿರಗಸೂರು ಶಂಕರ್, ಗೌರಿಶಂಕರ್, ಬಿ.ಬಿ.ಪರಶಿವಮೂರ್ತಿ, ತಾಲೂಕು ಪ್ರಧಾನ ಕಾರ್ಯದರ್ಶಿ ಕಿರಗಸೂರು ಪ್ರಸಾದ್ ನಾಯಕ, ಟೌನ್ ಅಧ್ಯಕ್ಷ ಅಪ್ಪೂ ಈ ವೇಳೆ ಹಾಜರಿದ್ದರು.

ಸಂಘದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡುವ ಸರ್ಕಾರಿ ನೌಕರರ ವಿರುದ್ಧ ತಹಶೀಲ್ದಾರ್‌ಗೆ ದೂರು



ಹೆಚ್.ಡಿ.ಕೋಟೆ, ಜು.21– ರಾಜ್ಯ ಸರ್ಕಾರಿ ನೌಕರ ಸಂಘದ ವಿರುದ್ಧ ಅವಹೇಳನಕಾರಿಯಾಗಿ ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ಮಾಡುತ್ತಿರುವ ವ್ಯಕ್ತಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ರಾಜ್ಯ ಸರ್ಕಾರಿ ನೌಕರರ ತಾಲೂಕು ಶಾಖೆ ವತಿಯಿಂದ ಶುಕ್ರವಾರ ತಹಶೀಲ್ದಾರ್ ಸಣ್ಣರಾಮಪ್ಪ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಪಟ್ಟಣದ ತಾಲೂಕು ಆಡಳಿತ ಸೌಧದ ಆವರಣದಲ್ಲಿ ಸಭೆ ಸೇರಿದ ನೌಕರರು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘವು ತಾಲೂಕು, ಜಿಲ್ಲೆ ಶಾಖೆ ಯಾವುದೇ ಫಲಾಪೇಕ್ಷೆ ಇಲ್ಲದೆ ನೌಕರರ ಹಿತ ರಕ್ಷಣೆಗಾಗಿ ಹಾಗೂ ಸಂಘದ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿದೆ. ಇಂತಹ ಸಂದರ್ಭದಲ್ಲಿ ರಾಜ್ಯ, ಜಿಲ್ಲೆ ಹಾಗೂ ತಾಲೂಕು ಘಟಕಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ನಕಲಿ ದಾಖಲಿ ಸೃಷ್ಟಿಸಿ ಸಂಘಕ್ಕೆ ಹಾನಿ ಉಂಟುಮಾಡುತ್ತಿದ್ದಾರೆ ಎಂದು ಆರೋಪಿಸಿ ರಾಜ್ಯ ಸಂಘಕ್ಕೆ ಆಡಳಿತಾಧಿಕಾರಿ ನೇಮಿಸುವಂತೆ ಸರ್ಕಾರಕ್ಕೆ ಆಧಾರ ರಹಿತ ಸುಳ್ಳು ದೂರು ನೀಡಿದ್ದಾರೆ. ಹಾಗಾಗಿ ನೌಕರರ ಹಿತ ಕಾಯುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಘಟನೆ ವಿರುದ್ಧ ತೇಜೋವಧೆ ಮಾಡಿರುವ ವ್ಯಕ್ತಿಗಳ ವಿರುದ್ಧ ಸರ್ಕಾರ ಶಿಸ್ತು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ತಾಲೂಕು ನೌಕರ ಸಂಘದ ಅಧ್ಯಕ್ಷ ಎ.ಎಸ್.ಮಹಾದೇವು ಮಾತನಾಡಿ ರಾಜ್ಯ ಸರ್ಕಾರಿ ನೌಕರರ ಸಂಘವು 1920 ರಲ್ಲಿ ಸ್ಥಾಪನೆಯಾಗಿದ್ದು ಸಂಘ ಸಂಸ್ಥೆಗಳ ನೋಂದಣಿ ಕಾಯ್ದೆಯನ್ವಯ ಮಾನ್ಯತೆ ಪಡೆದು ಸುಮಾರು 5 ಲಕ್ಷಕ್ಕೂ ಹೆಚ್ಚು ಸರ್ಕಾರಿ ನೌಕರರನ್ನು ಪ್ರತಿನಿಧಿಸುವ ಸಂಘವು ರಾಷ್ಟ್ರದಲ್ಲಿಯೇ ಮಾದರಿ ಸಂಘಟನೆಯಾಗಿದೆ ಎಂದರು.

2019 24ನೇ ಸಾಲಿಗೆ ರಾಜ್ಯ ಸರ್ಕಾರ ನೌಕರರ ಸಂಘದ ರಾಜ್ಯಾಧ್ಯಕ್ಷರಾಗಿ ಸಿ.ಎಸ್.ಷಡಕ್ಷರಿ ಅವರು ಆಯ್ಕೆಯಾದ ನಂತರ ನೌಕರರ ಸ್ನೇಹಿ ಕಾರ್ಯಕ್ರಮಗಳನ್ನು ಕೈಗೊಂಡಿರುವುದು ಹೆಮ್ಮೆಯ ಸಂಗತಿಯಾಗಿದೆ. ಇಂತಹ ಸಂದರ್ಭದಲ್ಲಿ ಕೆಲವು ಕಿಡಿಗೇಡಿಗಳು ಸಾಮಾಜಿಕ ಜಾಲತಾಣದಲ್ಲಿ ಅಧ್ಯಕ್ಷರು ಹಾಗೂ ಸಂಘಟನೆಯ ವಿರುದ್ಧ ಅವಹೇಳನಕಾರಿಯಾಗಿ ಅಪಪ್ರಚಾರ ಮಾಡುತ್ತಿರುವುದು ನೌಕರರಿಗೆ ನೋವನ್ನುಂಟು ಮಾಡಿದೆ. ಹಾಗಾಗಿ ಸರ್ಕಾರ ಇವರ ಮೇಲೆ ಶಿಸ್ತುಕ್ರಮ ಜರುಗಿಸಿ ಇವರನ್ನು ಸೇವೆಯಿಂದ ಅವಮಾನತು ಮಾಡಬೇಕೆಂದು ಒತ್ತಾಯಿಸುತ್ತೇವೆ ಎಂದರು.

ನಂತರ ತಹಶೀಲ್ದಾರ್ ಸಣ್ಣ ರಾಮಪ್ಪ ಅವರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಎಸ್.ಬಿ ಸೋಮಸುಂದರ್, ಸಹ ಕಾರ್ಯದರ್ಶಿ ಜುನೈದ್, ಉಪಾಧ್ಯಕ್ಷರಾದ ಸರಳ, ಜಿ.ಸುರೇಶ್, ಖಜಾಂಚಿ ಸೋಮಶೇಖರ್, ರಾಜ್ಯ ಪರಿಷತ್ ಸದಸ್ಯ ಮಹಾದೇವ, ಪದಾಧಿಕಾರಿಗಳಾದ ಗಿರೀಶ್ ಮೂರ್ತಿ, ಮಂಜುನಾಥ್, ಬಿ.ಎಸ್. ಭೀಮಪ್ಪ, ಪ್ರಶಾಂತ್ ಕುಮಾರ್ ಗಮಗೋಳ್ಳಿ, ಪರಮೇಶ್, ಸುನೀಲ್, ಮಹಮದ್ ಸಜ್ಜಾದ್, ಶ್ರಿಪಾಲ್, ಇನ್ನು ಮುಂತಾದವರು ಹಾಜರಿದ್ದರು.

ಧರ್ಮಸ್ಥಳ ಸಂಸ್ಥೆಯಿಂದ ರೈತ ಕ್ಷೇತ್ರ ಪಾಠಶಾಲೆ ಕಾರ್ಯಾಗಾರ



ಹುಣಸೂರು, ಜು.21– ತಾಲೂಕಿನ ಬನ್ನಿಕುಪ್ಪೆ ಪಂಚಾಯಿತಿಯ ಶಂಖಹಳ್ಳಿ ಗ್ರಾಮದ ಹಾಲಿನ ಡೈರಿ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟೆಸ್ಟ್ ರಿಜಿಸ್ಟರ್ ಹುಣಸೂರು ತಾಲೂಕು ವತಿಯಿಂದ ಮಾದರಿ ಹೈನುಗಾರಿಕೆ ಬಗ್ಗೆ ರೈತ ಕ್ಷೇತ್ರ ಪಾಠಶಾಲೆ ಅನುಷ್ಠಾನಗೊಳಿಸಲಾಗಿದ್ದು, ಈ ಕಾರ್ಯಕ್ರಮವನ್ನು ತಾಲೂಕು ಯೋಜನಾಧಿಕಾರಿ ಬಿ.ಧನಂಜಯ್ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಸಂಸ್ಥೆ ವತಿಯಿಂದ ಸಂಘದ ಸದಸ್ಯರಿಗೆ ಹೈನುಗಾರಿಕೆ ತೋಟಗಾರಿಕೆ ಕೃಷಿ ಅರಣ್ಯ ರೇಷ್ಮೆ ಹೀಗೆ ವಿವಿಧ ವಿಷಯಗಳ ಬಗ್ಗೆ ಮಾಹಿತಿ ಕಾರ್ಯಾಗಾರವನ್ನು ಏರ್ಪಡಿಸಿ ಹೊಸ ವೈಜ್ಞಾನಿಕ ವಿಷಯಗಳನ್ನು ತಿಳಿಸಿಕೊಡುವುದು ಇದರ ಉದ್ದೇಶವಾಗಿದೆ.

ಸಂಪನ್ಮೂಲ ವ್ಯಕ್ತಿ ಪಶು ವೈದ್ಯೆ ಡಾ.ಅಮೃತ ಮಾತನಾಡುತ್ತ ಮಾದರಿಯ ಹೈನುಗಾರಿಕೆ ಮಾಡಬೇಕಾದರೆ ಸ್ಥಳೀಯವಾಗಿ ಸಿಗುವ ಹಸುಗಳನ್ನು ಖರೀದಿಸಿ ಚಪ್ಪಡಿ ಕಲ್ಲು ಸಿಮೆಂಟು ಮರ ಮುಟ್ಟು ಗಳನ್ನ ಬಳಸಿ ಅತಿ ಕಡಿಮೆ ಖರ್ಚಿನಲ್ಲಿ ಕೊಟ್ಟಿಗೆಯನ್ನ ನಿರ್ಮಿಸಿ ಹೊಲದಲ್ಲಿ ಬೆಳೆಯುವ ರಾಗಿ, ಜೋಳ, ಹುರಳಿ, ಹಲಸಂದೆ, ಮುಸುಕಿನ ಜೋಳ ಇವುಗಳನ್ನ ಬಳಸಿ ಮನೆಯಲ್ಲೇ ತಯಾರಿಸಿದ ಸಮತೋಲನ ಪಶು ಆಹಾರವನ್ನು ಎರಡೂವರೆ ಲೀಟರ್ ಹಾಲಿಗೆ ಒಂದು ಕೆಜಿಯಂತೆ ಪಶು ತಿಂಡಿಯನ್ನ ಕೊಡುವುದರಿಂದ ಗುಣಮಟ್ಟದ ಹಾಲು ಪಡೆಯಲು ಸಹಕಾರಿ ಎಂದರು. ಕಾಲಕಾಲಕ್ಕೆ ವರ್ಷಕ್ಕೆ ಎರಡು ಬಾರಿ ರೋಗಗಳ ವಿರುದ್ಧ ಚುಚ್ಚು ಮದ್ದುಗಳನ್ನು ಹಾಕಿಸಿ 6 ತಿಂಗಳಿಗೊಮ್ಮೆ ಜಂತು ಹುಳು ನಾಶಕವನ್ನು ಕೊಡುವುದರಿಂದ ಹಾಗೂ ಹಸಿರು ಮೇವುಗಳನ್ನು ಬೆಳೆದು ಹಸುಗಳಿಗೆ ನೀಡುವುದರಿಂದ ಉತ್ತಮ ಆರೋಗ್ಯ ಮತ್ತು ಹಾಲಿನ ಇಳುವರಿ ಹೆಚ್ಚಾಗುತ್ತದೆ ಎಂದರು.

ಮೇಲ್ವಿಚಾರಕಿ ವೀಣಾ ಸ್ವಾಗತಿಸಿದರು. ಅಧ್ಯಕ್ಷರು, ಎಲ್ಲಾ ಸಂಘದ ಸದಸ್ಯರು ಹಾಗೂ ಸೇವಾ ಪ್ರತಿನಿಧಿ, ಸಂಧ್ಯಾ, ಡೈರಿ ಅಧ್ಯಕ್ಷ ಕೆಂಡಗಣ್ಣ ಸ್ವಾಮಿ, ಮಾದೇವಪ್ಪ, ಗಂಗಾಂಬಿಕ ಭಾಗವಹಿಸಿದ್ದರು.

ವಸತಿ ಶಾಲೆಯಲ್ಲಿ ವಿದ್ಯಾರ್ಥಿಗಳಿಂದಲೇ ಶೌಚಾಲಯ ಸ್ವಚ್ಛತೆ

• ಅಧಿಕಾರಿಗಳು, ಸಿಬ್ಬಂದಿಗಳ ವಿರುದ್ಧ ಆಕ್ರೋಶ • ಮಕ್ಕಳ ಹೀನಾಯ ಸ್ಥಿತಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್



ಚುಂಚನಕಟ್ಟೆ, ಜು.21– ವಿದ್ಯಾಭ್ಯಾಸದ ದೃಷ್ಟಿಯಿಂದ ವಸತಿ ಶಾಲೆಗೆ ಬಂದಿರುವ ಮಕ್ಕಳಿಂದ ಶೌಚಾಲಯ ಸೇರಿದಂತೆ ವಸತಿ ಶಾಲೆಯನ್ನು ಸಚ್ಛಗೊಳಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಅಮಾನವೀಯ ಪ್ರಸಂಗ ಸಕ್ಕರೆ ಗ್ರಾಮದ ಅಂಬೇಡ್ಕರ್ ವಸತಿ ಶಾಲೆಯಲ್ಲಿ ನಡೆದಿದೆ.

ಸಾಲಿಗ್ರಾಮ ತಾಲೂಕು ಚುಂಚನಕಟ್ಟೆ ಹೋಬಳಿಯ ಸಕ್ಕರೆ ಗ್ರಾಮದ ಬಳಿ ಮಾಜಿ ಶಾಸಕ ಸಾ.ರಾ. ಮಹೇಶ್ ಅವರ ಆಡಳಿತ ಅವಧಿಯಲ್ಲಿ ಸುಸಜ್ಜಿತವಾದ ಸುಂದರ ಅಂಬೇಡ್ಕರ್ ವಸತಿ ನಿಲಯವನ್ನು ನಿರ್ಮಿಸಿ ಲೋಕಾರ್ಪಣೆ ಮಾಡಲಾಗಿತ್ತು ಆದರೆ ಅಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ವಿದ್ಯಾರ್ಥಿಗಳಿಂದ ಶೌಚಾಲಯವನ್ನು, ವಸತಿ ಶಾಲೆಯನ್ನು ಗುಡಿಸಿ, ಒರೆಸುವುದು, ಕಸವನ್ನು ತೆಗೆಸುವ ಕೆಲಸವನ್ನು ಮಾಡಿಸುತ್ತಿರುವುದು ಸಾಮಾಜಿಕ ಜಾಲ ತಾಣಗಳಲ್ಲಿ ವೈರಲ್ ಆಗಿದೆ.

ಸ್ವಚ್ಛತೆ, ಅಡಿಗೆ ಹಾಗೂ ನಾಲ್ವರು ಸಹಾಯಕರು, 13 ಮಂದಿ ಸಿಬ್ಬಂದಿ, 9 ಮಂದಿ ಶಿಕ್ಷಕರು, ಪ್ರಾಂಶುಪಾಲರು ಕರ್ತವ್ಯ ನಿರ್ವಹಿಸುವ ಈ ವಸತಿ ಶಾಲೆಯಲ್ಲಿ 240 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ.

ವಸತಿ ಶಾಲೆಯಲ್ಲಿ ನಡೆಯುತ್ತಿದ್ದ ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯವನ್ನು ನೋಡಲಾರದೆ ಮೊಬೈಲ್ ಮೂಲಕ ವಿಡಿಯೋ ಚಿತ್ರೀಕರಣ ಮಾಡಿ ವಿದ್ಯಾರ್ಥಿಗಳ ಪೋಷಕರು ಮತ್ತು ಸಾರ್ವಜನಿಕರ ಗಮನಕ್ಕೆ ತರಲಾಗಿದೆ.

ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದಂತೆ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ಪೋಷಕರು ಇಂಥ ಕೆಟ್ಟ ವ್ಯವಸ್ಥೆಯಲ್ಲಿ ತಮ್ಮ ಮಕ್ಕಳ ವಿದ್ಯಾಭ್ಯಾಸವನ್ನು ಮಾಡಿಸಬಾರದೆಂಬ ಉದ್ದೇಶದಿಂದ ಸಾಲವಾದರೂ ಸರಿ ತಮ್ಮ ಆಸ್ತಿಯನ್ನು ಮಾರಿಯಾದರೂ ಸರಿ ಖಾಸಗಿ ಶಾಲೆಗಳು ಕೇಳಿದಷ್ಟು ಡೊನೇಷನ್ ನೀಡಿ ವಿದ್ಯಾಭ್ಯಾಸ ಮಾಡಿಸಲು ಮುಂದಾಗಿದ್ದಾರೆ.

ಸರ್ಕಾರ ಶಿಕ್ಷಣಕ್ಕಾಗಿ, ಶಾಲೆಗಳ ಅಭಿವೃದ್ಧಿಗಾಗಿ, ಕಟ್ಟಡಕ್ಕಾಗಿ ವಸತಿ ಶಾಲೆಗಾಗಿ, ಕೋಟ್ಯಾಂತರ ರೂ.ಗಳನ್ನು ಖರ್ಚು ಮಾಡುತ್ತಿದ್ದರೂ ಕರ್ತವ್ಯ ನಿರ್ವಹಿಸುವ ಶಿಕ್ಷಕರು ಮತ್ತು ನೌಕರರು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸದೇ ಬೇಜವಾಬ್ದಾರಿಯಿಂದ ಇಂತಹ ಕೆಲಸಗಳಲ್ಲಿ ಮಕ್ಕಳನ್ನು ತೊಡಗಿಸಿ ಹೀನಾಯವಾಗಿ ನಡೆಸಿಕೊಳ್ಳಲಾಗುತ್ತಿದೆ. ಇಂಥವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವ ಮೂಲಕ ಬೇರೆ ಎಲ್ಲಿಯೂ ಸಹ ಇಂಥ ಕೆಟ್ಟ ವ್ಯವಸ್ಥೆ ಇರದಂತೆ ಕ್ರಮ ಜರುಗಿಸಲು ಸಾರ್ವಜನಿಕರು ಒತ್ತಾಯಿಸುತ್ತಿದ್ದಾರೆ.

> "ಸಾಮಾಜಿಕ ಜಾಲತಾಣ ಹಾಗೂ ವಾಟ್ಸಾಪ್‌ನಲ್ಲಿ ಈ ವಿಷಯ ಬಹಿರಂಗಗೊಂಡ ತಕ್ಷಣ ಅಂಬೇಡ್ಕರ್ ವಸತಿ ಶಾಲೆಗೆ ಭೇಟಿ ನೀಡಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಜೊತೆ ಚರ್ಚಿಸಿ ವಸತಿ ಶಾಲೆಯ ಪ್ರಾಂಶುಪಾಲ ಸುರೇಶ್ ಅವರಿಗೆ ಸಂಪೂರ್ಣ ವರದಿ ನೀಡುವಂತೆ ತಿಳಿಸಲಾಗಿದೆ. ವರದಿ ಬಂದ ತಕ್ಷಣ ಈ ಕೃತ್ಯಕ್ಕೆ ಕಾರಣರಾದ ಸಿಬ್ಬಂದಿ ಮತ್ತು ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳಲಾಗುವುದು".
> –ರಂಗೇಗೌಡ, ಡಿಡಿ, ಸಮಾಜ ಕಲ್ಯಾಣ ಇಲಾಖೆ ಮೈಸೂರು.

> "ನಮ್ಮ ಸೋದರ ಸಂಬಂಧಿಯ ಮಕ್ಕಳು ಈ ವಸತಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಶಾಲೆಯನ್ನು ಬಿಟ್ಟು ಬೇರೆಡೆಗೆ ಸೇರಿಸುವಂತೆ ಒತ್ತಾಯಿಸುತ್ತಿದ್ದಾರೆ. ಆದ್ದರಿಂದ ತಕ್ಷಣವೇ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ವಿದ್ಯಾರ್ಥಿಗಳು ಮತ್ತು ಪೋಷಕರು ಜಿಲ್ಲಾಧಿಕಾರಿಯವರ ಕಚೇರಿಯ ಮುಂಭಾಗ ಪ್ರತಿಭಟನೆ ಮಾಡಬೇಕಾಗುತ್ತದೆ.
> –ಎಚ್.ಕೆ. ಕೀರ್ತಿ, ಹೊಸೂರು.

> "ಶೌಚಾಲಯ ಸ್ವಚ್ಛಗೊಳಿಸಲು ಒಬ್ಬರು ಸಿಬ್ಬಂದಿ ಸೇರಿದಂತೆ ವಸತಿ ನಿಲಯ ಸ್ವಚ್ಛತೆಗೆ ನಾಲ್ಕು ಜನ ಸಿಬ್ಬಂದಿಗಳಿದ್ದಾರೆ ಆದರೂ ವಿದ್ಯಾರ್ಥಿಗಳಿಂದ ಸ್ವಚ್ಛತೆ ಮಾಡಿರುವುದು ತಿಳಿದು ಬಂದಿದೆ. ಈ ಸಂಬಂಧ ವಿದ್ಯಾರ್ಥಿಗಳಿಂದ ಯಾರು ಸ್ವಚ್ಛತೆ ಮಾಡಿಸಿದ್ದಾರೆ. ಅವರ ಬಗ್ಗೆ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಅವರಿಗೆ ವರದಿ ನೀಡುತ್ತೇನೆ.
> –ಸತೀಶ್, ಪ್ರಾಂಶುಪಾಲ, ಅಂಬೇಡ್ಕರ್ ವಸತಿ ನಿಲಯ ಸಕ್ಕರೆ

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಓಪನ್ಹೈಮರ್ (ಇಂ): ಬೆ.10ಕ್ಕೆ, ಮ.1.35ಕ್ಕೆ, ಸಂ.5.10ಕ್ಕೆ, ರಾ.8.45ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಬಾರ್ಬಿ (ಇಂ): ಬೆ.10.55ಕ್ಕೆ, ರಾ.7.20ಕ್ಕೆ, ಪರಂವಃ (ಕ): ಮ.1.50ಕ್ಕೆ, ದೇವರ ಕನಸ್ಸು (ಕ): ಸಂ.4.45ಕ್ಕೆ, ಹಿಡಿಂಭ (ತೆ): ರಾ.9.50ಕ್ಕೆ.
ಸ್ಕ್ರೀನ್ 3	ವಾಲಟ್ಟಿ (ಮ): ಬೆ.11ಕ್ಕೆ, ಕೊಲೈ (ತ): ಮ.1.25ಕ್ಕೆ, ಬೇಬಿ (ತೆ): ಮ.3.55ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ರಾ.7.15ಕ್ಕೆ, ಅನೀತಿ (ತ): ರಾ.10.05ಕ್ಕೆ.
ಸ್ಕ್ರೀನ್ 4	ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಬೆ.10.15ಕ್ಕೆ, ಡೇವಿಡ್ (ಕ): ಮ.1.20ಕ್ಕೆ, ಮಿಷನ್ ಇಂಪಾಸಿಬಲ್: ಡೆಡ್ ರೆಕನಿಂಗ್ ಪಾರ್ಟ್ ಒನ್ (ಇಂ): ಸಂ.4ಕ್ಕೆ, ರಾ.7.10ಕ್ಕೆ, ರಾ.10.20ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಸತ್ಯಪ್ರೇಮ್ ಕಿ ಕಥಾ (ಹಿಂ): ಬೆ.9.20ಕ್ಕೆ, ಮ.12.30ಕ್ಕೆ, ಸಂ.3.40ಕ್ಕೆ, ಸಂ.6.50ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಇಂಡಿಯಾನಾ ಜೋನ್ಸ್ ಅಂಡ್ ದಿ ಡಯಲ್ ಆಫ್ ಡೆಸ್ಟಿನಿ (ಇಂ): ಬೆ.9.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, ಸ್ಪೈ (ತೆ): ಮ.1.10ಕ್ಕೆ, ಸಾಮಜವರಗಮನ (ತೆ): ಸಂ.4.10ಕ್ಕೆ.
ಸ್ಕ್ರೀನ್ 3	ಸ್ಪೈ (ತೆ): ಬೆ.9.50ಕ್ಕೆ, ರಾ.10.20ಕ್ಕೆ, ಇಂಡಿಯಾನಾ ಜೋನ್ಸ್ ಅಂಡ್ ದಿ ಡಯಲ್ ಆಫ್ ಡೆಸ್ಟಿನಿ (ಇಂ): ಮ.12.45ಕ್ಕೆ, ಬೆಂಗಳೂರು ಬಾಯ್ಸ್ (ಕ): ಸಂ.4ಕ್ಕೆ.
ಸ್ಕ್ರೀನ್ 4	ಮಾಮನ್ನನ್ (ತ): ಬೆ.10.50ಕ್ಕೆ, ಮ.2.10ಕ್ಕೆ, ಸರ್ಕಸ್ (ತು): ಸಂ.6.10ಕ್ಕೆ, ಸಾಮಜವರಗಮನ (ತೆ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಮಧುರ ಕಾವ್ಯ (ಕ): ಬೆ.10.45ಕ್ಕೆ, ಮಾವೀರನ್ (ತ): ಮ.1.20ಕ್ಕೆ, ರಾ.9ಕ್ಕೆ, ಪರಂವಃ (ಕ): ಸಂ.4.25ಕ್ಕೆ, ದೇವರ ಕನಸು (ಕ): ಸಂ.6.35ಕ್ಕೆ.
ಸ್ಕ್ರೀನ್ 2	ಓಪನ್ಹೈಮರ್ (ಇಂ): ಬೆ.10.15ಕ್ಕೆ, ಮ.1.45ಕ್ಕೆ, ಸಂ.5.30ಕ್ಕೆ, ರಾ.9ಕ್ಕೆ.
ಸ್ಕ್ರೀನ್ 3	ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಬೆ.10.20ಕ್ಕೆ, ಮಿಷನ್ ಇಂಪಾಸಿಬಲ್: ಡೆಡ್ ರೆಕನಿಂಗ್ ಪಾರ್ಟ್ ಒನ್ (ಇಂ): ಮ.1.05ಕ್ಕೆ, ಸಂ.6.25ಕ್ಕೆ, ಬಾರ್ಬಿ (ಇಂ): ಸಂ.4.10ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಬಾರ್ಬಿ (ಇಂ): ಬೆ.10.45ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.10ಕ್ಕೆ, ಸಂ.4ಕ್ಕೆ, ರಾ.6.45ಕ್ಕೆ, ವಾಲಟ್ಟಿ (ಮ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, 1 ರಾಬರಿ ಕಥೆ (ಕ): ಸಂ.4.50ಕ್ಕೆ, ಚೌಕಾಬಾರ (ಕ): ರಾ.7.50ಕ್ಕೆ, ಕ್ರಿಡ್ 3 (ಇಂ): ಬೆ.11.35ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, ತುರಮುಖಂ (ಮ): ರಾ.10.30ಕ್ಕೆ, ಅಜಿಲನ್ ಕಿಂಗ್ ಆಫ್ ದಿ ಓಷನ್ (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಸ್ಕ್ರೀಮ್ 6 (ಇಂ): ಮ.2.45ಕ್ಕೆ, ರಾ.7.45ಕ್ಕೆ, 65 (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	**(ದೂ: 2521923)**
ಹಿಡಿಂಬ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಕೊಲೈ (ತ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	**(ದೂ: 2520009)**
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
1920 ಹಾರರ್ಸ್ ಆಫ್ ದಿ ಹಾರ್ಟ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಡಾನ್ ಕುಮಾರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಮಾವೀರನ್ (ತ)	4 ಪ್ರದರ್ಶನಗಳು
ಸಂಗಂ	
ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ)	4 ಪ್ರದರ್ಶನಗಳು
ಲಿಡೋ	
ಬೇಬಿ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಹಿಡಿಂಬ (ತೆ)	4 ಪ್ರದರ್ಶನಗಳು
ಪ್ರಭಾ	
ಮಧುರಕಾವ್ಯ (ಕ)	4 ಪ್ರದರ್ಶನಗಳು

300ಕ್ಕೂ ಹೆಚ್ಚು ಮಕ್ಕಳಿಗೆ ಶಾಲಾ ಬ್ಯಾಗ್, ನೋಟ್ ಬುಕ್ ವಿತರಣೆ



ತಿ.ನರಸೀಪುರ. ಜು.21– ತಾಲೂಕಿನ ಮೂಗೂರು ಕೆಪಿಎಸ್ ಪ್ರಾಥಮಿಕ ಶಾಲೆಯಲ್ಲಿ ರಸಗೊಬ್ಬರ ತಯಾರಕ ಕಂಪನಿ ಸ್ಪಿಕ್ ಮತ್ತು ಗ್ರೀನ್ ಸ್ಟಾರ್ ಫರ್ಟಿಲೈಸರ್ ಲಿಮಿಟೆಡ್ ವತಿಯಿಂದ ಮಕ್ಕಳಿಗೆ ಶಾಲಾ ಬ್ಯಾಗ್ ಮತ್ತು ನೋಟ್ ಬುಕ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸುಮಾರು 300ಕ್ಕೂ ಹೆಚ್ಚು ಶಾಲಾ ವಿದ್ಯಾರ್ಥಿಗಳಿಗೆ ಬ್ಯಾಗ್ ಮತ್ತು ನೋಟ್ ಬುಕ್ ವಿತರಣೆ ಮಾಡಿದ ಸ್ಪಿಕ್ ಕಂಪೆನಿಯ ಮೈಸೂರು ಪ್ರಾದೇಶಿಕ ವ್ಯವಸ್ಥಾಪಕ ನಂಜುಂಡಸ್ವಾಮಿ ಮಾತನಾಡಿ, ನಮ್ಮ ಸ್ಪೀಕ್ ಕಂಪನಿಯು ರೈತ ವರ್ಗಕ್ಕೆ ಚಿರಪರಿಚಿತ. ರೈತರ ಜಮೀನುಗಳ ಮಣ್ಣು ಪರೀಕ್ಷೆ ರಿಯಾಯಿತಿ ದರದಲ್ಲಿ ರಸಗೊಬ್ಬರ, ಕೀಟನಾಶಕ, ಗ್ರಾಮೀಣ ಮೆಡಿಕಲ್ ಕ್ಯಾಂಪ್, ಕ್ರೀಡೆಗೆ ಹೆಚ್ಚು ಪ್ರಾಮುಖ್ಯತೆಯನ್ನು ನೀಡುತ್ತಿದೆ. ಹಾಗೆಯೇ ಮುಂದಿನ ದಿನಗಳಲ್ಲಿ ರಾಜ್ಯದ ಸರ್ಕಾರಿ ಶಾಲೆಗಳಿಗೆ ಅವಶ್ಯವಿರುವ ಸಾಮಗ್ರಿಗಳು ವಿತರಿಸುವ ಕಡೆ ನಮ್ಮ ಕಂಪನಿ ಸದಾ ನಿಮ್ಮ ಜೊತೆ ಇರುತ್ತದೆ ಎಂದರು.

ಈ ಸಂಧರ್ಭದಲ್ಲಿ ಎಸ್ ಡಿಎಂಸಿ ಅಧ್ಯಕ್ಷ ಸಿದ್ದರಾಜು, ಮುಖ್ಯಶಿಕ್ಷಕಿ ಆರ್. ಭ್ರಮರಾಂಭ, ಸಿಆರ್‌ಪಿ ಶಿವರಾಜು, ಎಸ್‌ಡಿಎಂಸಿ ಸದಸ್ಯರಾದ ಗುರುಸ್ವಾಮಿ, ವಾಸು, ಶಿಕ್ಷಕರಾದ ಪ್ರಕಾಶ್, ಪಾಲ ಪ್ರೇಮಾಚಂದ್, ವಿಶ್ವನಾಥ್, ತುಳಸಿಬಾಯಿ, ಚಂದ್ರಿಕ, ವಿದ್ಯಾಶ್ರೀ, ಮರೀಗೌಡ, ನಿರ್ಮಲ,ಗಂಗಾ, ಕಂಪನಿಯ ಮಾರುಕಟ್ಟೆ ಅಧಿಕಾರಿ ಚಂದ್ರಕುಮಾರ್, ಮಾರುಕಟ್ಟೆ ಅಭಿವೃದ್ಧಿ ಅಧಿಕಾರಿ ಮಾರುತಿಕುಮಾರ್, ಕಿರಿಯ ಅಭಿವೃದ್ಧಿ ಅಧಿಕಾರಿ ಸಿದ್ದಾರ್ಥ್, ಮಲ್ಲಿಕಾರ್ಜುನ ಎಂಟರ್‌ಪ್ರೈಸಸ್‌ನ ಮೈಸೂರು ಮಾಲೀಕ ನಾಗರಾಜು ಮತ್ತಿತರರು ಹಾಜರಿದ್ದರು.

ಅನ್ನಭಾಗ್ಯಕ್ಕೆ ಆಧಾರ್ ಕಾರ್ಡ್ ಲಿಂಕ್ ಅಗತ್ಯ

ಹುಣಸೂರು, ಜು.21– ಅನ್ನಭಾಗ್ಯ ಯೋಜನೆಯಲ್ಲಿ ನೇರ ನಗದು ವರ್ಗಾವಣೆ ಆಗಬೇಕಾದರೆ ಬ್ಯಾಂಕಿನ ಖಾತೆಗೆ ಆಧಾರ್ ಕಾರ್ಡ್ ಜೋಡಣೆ ಮಾಡಿಸಬೇಕೆಂದು ಆಹಾರ ಶಿರಸ್ತೇದಾರ್ ರಾಮಚಂದ್ರ ತಿಳಿಸಿದ್ದಾರೆ. ಪಟ್ಟಣದ ಆಹಾರ ನಾಗರಿಕ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲೂಕಿನಲ್ಲಿ ಎ.ಎ.ವೈ 6592, ಬಿಪಿಎಲ್ 70933, ಒಟ್ಟು 77,525 ಕಾರ್ಡ್‌ದಾರರಿದ್ದು, ಇದರಲ್ಲಿ ನಿಷ್ಕ್ರಿಯವಾಗಿರುವ ಬ್ಯಾಂಕ್ ಖಾತೆ ಇಲ್ಲದೇ ಇರುವ ಕಾರ್ಡ್‌ಗಳ ಸಂಖ್ಯೆ 6014 ಎಂದರು.

ವಿರೋಧ ಪಕ್ಷದ ನಾಯಕನಿಲ್ಲದೆ 16ನೇ ವಿಧಾನಸಭೆಯ ಮೊದಲ ಅಧಿವೇಶನಕ್ಕೆ ತೆರೆ

ಬೆಂಗಳೂರು, ಜು.21– 16ನೇ ವಿಧಾನಸಭೆಯ ಮೊದಲ ಅಧಿವೇಶನಕ್ಕೆ ಇಂದು ತೆರೆ ಬಿದ್ದಿದೆ. ಈ ಅಧಿವೇಶನದಲ್ಲಿ ನೂತನ ಕಾಂಗ್ರೆಸ್ ಸರ್ಕಾರ ಹೊಸ ಬಜೆಟ್ ಮಂಡಿಸಿದೆ. ಹಾಗೆಯೇ ವಿರೋಧ ಪಕ್ಷದ ನಾಯಕನಿಲ್ಲದೆ ನಡೆದ ಅಧಿವೇಶನ ಹೊಸ ಇತಿಹಾಸಕ್ಕೂ ಕಾರಣವಾಗಿದೆ. 16ನೇ ವಿಧಾನಸಭೆಯ ಮೊದಲ ಅಧಿವೇಶನ ಜುಲೈ 3 ರಂದು ರಾಜ್ಯಪಾಲರು ಜಂಟಿ ಅಧಿವೇಶವನ್ನುದ್ದೇಶಿಸಿ ಭಾಷಣ ಮಾಡುವ ಮೂಲಕ ಆರಂಭವಾಗಿತ್ತು. ಜುಲೈ 7ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2023–24ನೇ ಸಾಲಿನ ಬಜೆಟ್‌ಅನ್ನು ವಿಧಾನಸಭೆಯಲ್ಲಿ ಮಂಡಿಸಿದ್ದರು.

ಈ ಅಧಿವೇಶನದಲ್ಲಿ ಪ್ರಶ್ನೋತ್ತರ ಕಲಾಪ, ರಾಜ್ಯಪಾಲರ ಭಾಷಣದ ವಂದನಾ ನಿರ್ಣಯ, ಬಜೆಟ್ ಮೇಲಿನ ಚರ್ಚೆ, ಬಜೆಟ್ ಅಂಗೀಕಾರ ಸೇರಿದಂತೆ ಹಲವು ಕಲಾಪಗಳು ನಡೆದವು. ರಾಜ್ಯ ಅನುಸೂಚಿತ ಜಾತಿಗಳು ಮತ್ತು ಬುಡಕಟ್ಟುಗಳ ಕೆಲವು ಭೂಮಿಗಳ ವರ್ಗಾವಣೆ ನಿಷೇಧ ತಿದ್ದುಪಡಿ ವಿಧೇಯಕ –2023, ರಾಜ್ಯ ಅಗ್ನಿಶಾಮಕ ತುರ್ತು ಸೇವೆಗಳು ಮತ್ತು ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ತಿದ್ದುಪಡಿ ವಿಧೇಯಕ ಸೇರಿದಂತೆ ಹಲವು ವಿಧೇಯಕಗಳು ಅಂಗೀಕಾರಗೊಂಡವು.


ವಿಧಾನಮಂಡಲ ಇತಿಹಾಸದಲ್ಲೇ ವಿಪಕ್ಷ ನಾಯಕನಿಲ್ಲದೆ ನಡೆದ ಅಧಿವೇಶನ ಇದಾಗಿದೆ. ವಿರೋಧ ಪಕ್ಷವಾದ ಬಿಜೆಪಿ ತನ್ನ ನಾಯಕನನ್ನು ಅಧಿವೇಶನ ಮುಗಿಯುವವರೆಗೂ ಆಯ್ಕೆ ಮಾಡಿಕೊಳ್ಳಲು ಸಾಧ್ಯವಾಗಲಿಲ್ಲ. ಈ ವಿಚಾರವನ್ನು ಮುಂದಿಟ್ಟುಕೊಂಡು ಆಡಳಿತಾರೂಢ ಕಾಂಗ್ರೆಸ್ ಸದಸ್ಯರು ಬಿಜೆಪಿಯನ್ನು ಅಧಿವೇಶನದುದ್ದಕ್ಕೂ ಲೇವಡಿ ಮಾಡಿದರು.

ಇಂದು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ

ಬೆಂಗಳೂರು, ಜು.21– ರಾಜ್ಯದ ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಯೂ ಸೇರಿದಂತೆ ವೈಫಲ್ಯಗಳನ್ನು ಖಂಡಿಸಿ ಜುಲೈ 22ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಸಲಾಗುವುದು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನಪರಿಷತ್ ಸದಸ್ಯ ಎನ್ ರವಿಕುಮಾರ್ ತಿಳಿಸಿದ್ದಾರೆ.

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ತೀವ್ರವಾಗಿ ಕುಸಿದಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ 48 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. 12 ಕೊಲೆಗಳು ನಡೆದಿವೆ. ವಿದ್ಯುತ್ ಸೇರಿದಂತೆ ಜೀವನಾವಶ್ಯಕ ಬೆಲೆಗಳು ತೀವ್ರವಾಗಿ ಹೆಚ್ಚಾಗಿದ್ದು, ಜನರು ಜೀವನ ಮಾಡುವುದೇ ದುಸ್ತರವಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಬಜೆಟ್ ಅಲ್ಪಸಂಖ್ಯಾತರ ಪರ ಮಾತ್ರವಲ್ಲ, ಹಿಂದೂಗಳ ವಿರೋಧಿ, ರೈತ ವಿರೋಧಿ, ನೀರಾವರಿ ವಿರೋಧಿ ಮತ್ತು ಶಿಕ್ಷಣ ವಿರೋಧಿಯಾಗಿದೆ. ಕೇಂದ್ರ ಸರ್ಕಾರವನ್ನು ತೆಗಳುವ ಬಜೆಟ್ ಇದಾಗಿದೆ ಎಂದಿದ್ದಾರೆ. ರಾಜ್ಯದಲ್ಲಿ ಭಯೋತ್ಪಾದನಾ ಚಟುವಟಿಕೆಗಳು ಹೆಚ್ಚಾಗುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದ ಅವರು, ಭಯೋತ್ಪಾದನಾ ಚಟುವಟಿಕೆಗಳು ಅಂತಾರಾಷ್ಟ್ರೀಯ ವ್ಯಾಪ್ತಿಯನ್ನು ಹೊಂದಿರುವ ಸಾಧ್ಯತೆ ಇದ್ದು, ಈ ಪ್ರಕರಣವನ್ನು ತನಿಖೆಗಾಗಿ ಎನ್‌ಐಎಗೆ ಹಸ್ತಾಂತರ ಮಾಡುವಂತೆ ಆಗ್ರಹಿಸಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸುವಲ್ಲಿ ವೈಫಲ್ಯವನ್ನು ಖಂಡಿಸಿ ಪ್ರತಿಭಟನೆ ನಡೆಯಲಿದೆ. ಸಭಾಧ್ಯಕ್ಷರು ವಿಧಾನಮಂಡಲದ ಕಲಾಪವನ್ನು ಸರ್ವಾಧಿಕಾರಿಯಂತೆ ನಡೆಸಿದ್ದಾರೆ. ಅಲ್ಲದೆ ಪ್ರತಿಪಕ್ಷವನ್ನು ಹತ್ತಿಕ್ಕಲಾಗಿದೆ. ವಿಧಾನಮಂಡಲದಲ್ಲಿ ಸಭಾಧ್ಯಕ್ಷರು ಬಿಜೆಪಿಯ 10 ಶಾಸಕರನ್ನು ಅಮಾನತು ಮಾಡಿದ್ದನ್ನು ವಿರೋಧಿಸಿ ಈ ಪ್ರತಿ ಭಟನೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಮದ್ಯದ ಬೆಲೆ ಶೇ.20ರಷ್ಟು ಏರಿಕೆ



ಬೆಂಗಳೂರು, ಜು.21– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಬಜೆಟ್‌ನಲ್ಲಿ ಘೋಷಿಸಿದ ಪ್ರಕಾರ, ಮದ್ಯದ ಬೆಲೆ ಇಂದಿನಿಂದ (ಜುಲೈ 20) ಅನ್ವಯವಾಗುವಂತೆ ಹೆಚ್ಚಳವಾಗಿದೆ. ಇದರೊಂದಿಗೆ ಗರಿಷ್ಠ ಶೇ.20ರಷ್ಟು ಹೆಚ್ಚಿನ ದರದೊಂದಿಗೆ ಹೊಸ ಬೆಲೆಯಲ್ಲಿ ಶುಕ್ರವಾರದಿಂದ ಮದ್ಯ ಮಾರಾಟವಾಗುತ್ತಿದೆ. ಸರ್ಕಾರಿ ಆದೇಶದ ಪ್ರಕಾರ ಗುರುವಾರ ಮಧ್ಯರಾತ್ರಿಯಿಂದ ಈ ದರ ಹೆಚ್ಚಳ ಜಾರಿಗೆ ಬಂದಿದೆ. ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ರಾಜ್ಯ ಸರ್ಕಾರ ಬ್ರಾಂದಿ, ವಿಸ್ಕಿ, ಜಿನ್, ರಮ್ ಮತ್ತು ಅಂಥಹ ಇತರ ಮದ್ಯಗಳ ಸುಂಕವನ್ನು ಶೇ.20ರಷ್ಟು ಏರಿಕೆ ಮಾಡಿತ್ತು. ಅಲ್ಲದೆ, ಬಿಯರ್ ಮೇಲಿನ ಅಬಕಾರಿ ಸುಂಕವನ್ನು ಶೇ.10ರಷ್ಟು ಹೆಚ್ಚಿಸಿತ್ತು. ಹೀಗಾಗಿ ಹಾಲಿ ದರಕ್ಕೆ ಹೋಲಿಸಿದಾಗ ಶೇ.10ರಷ್ಟು ಬಿಯರ್ ದರ ಹೆಚ್ಚಳವಾಗಲಿದೆ. ಭಾರತೀಯ ಮದ್ಯ (ಐಎಂಎಲ್) ಒಂದು ಪೆಗ್ (60 ಎಂಎಲ್)ಗೆ 10ರಿಂದ 20 ರೂ. ಹಾಗೂ ಬಿಯರ್ ಬೆಲೆ ಪ್ರತಿ ಬಾಟಲ್‌ಗೆ ಶೇ.10ರಷ್ಟು ಹೆಚ್ಚಳವಾಗಲಿದೆ.

ಅರ್ಜಿ ಆಹ್ವಾನ

ಮೈಸೂರು,ಜು.21– ಮೈಸೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಕುಸ್ತಿಪಟುಗಳಿಗೆ ಪ್ರೋತ್ಸಾಹ ಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಸುಮಾರು 20 ರಿಂದ 50 ವಯೋಮಿತಿ ಹೊಂದಿರುವ ಕುಸ್ತಿ ಕ್ರೀಡಾಪಟುಗಳು ನಿಗದಿತ ನಮೂನೆಯೊಂದಿಗೆ ಜಾತಿ ಪ್ರಮಾಣ ಪತ್ರ, ವಾರ್ಷಿಕ ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಗುರುತಿನ ಚೀಟಿ, ಬ್ಯಾಂಕ್ ಪಾಸ್ ಬುಕ್ ಜೆರಾಕ್ಸ್, ಪ್ರಶಸ್ತಿ ಪತ್ರಗಳು, ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸಿದ ಭಾವಚಿತ್ರಗಳು, ಪ್ರಮಾಣ ಪತ್ರ ಹಾಗೂ ಇನ್ನಿತರ ದಾಖಲಾತಿಗಳೊಂದಿಗೆ ದೃಢೀಕರಿಸಿ ಆಗಸ್ಟ್ 31ರ ಒಳಗಾಗಿ ಅರ್ಜಿಯನ್ನು ಸಲ್ಲಿಸಬೇಕೆಂದು ಮೈಸೂರು ಮಹಾನಗರ ಪಾಲಿಕೆಯ ಹೆಚ್ಚುವರಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತದಾರರಿಗೆ ಆಮಿಷ: ಸಿಎಂ ಸಿದ್ದರಾಮಯ್ಯ ಆಯ್ಕೆ ಅಸಿಂಧು ಕೋರಿ ಹೈಕೋರ್ಟ್‌ಗೆ ಅರ್ಜಿ

ಬೆಂಗಳೂರು, ಜು.21– ಕಳೆದ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸುವ ಮೂಲಕ ಮತದಾರರಿಗೆ ಆಮಿಷವೊಡ್ಡಿರುವ ಹಿನ್ನೆಲೆಯಲ್ಲಿ ವರುಣಾ ಕ್ಷೇತ್ರದ ಶಾಸಕ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಯ್ಕೆಯನ್ನು ಅಸಿಂಧುಗೊಳಿಸುವಂತೆ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ.

ಪ್ರಜಾಪ್ರತಿನಿಧಿ ಕಾಯ್ದೆಯ ಸೆಕ್ಷನ್ 123(1) ಪ್ರಕಾರ ಮತದಾರರಿಗೆ ಆಮಿಷ ಒಡ್ಡುವಂತಿಲ್ಲ. ಆದರೆ ಕಾಂಗ್ರೆಸ್ ಪಕ್ಷ ಮತದಾರರಿಗೆ ಗ್ಯಾರಂಟಿ ಕಾರ್ಡ್ ವಿತರಿಸಿ ಆಮಿಷ ಒಡ್ಡಿದೆ. ಹೀಗಾಗಿ ಸಿದ್ದರಾಮಯ್ಯ ಅವರ ಶಾಸಕ ಸ್ಥಾನದ ಆಯ್ಕೆಯನ್ನು ಅಸಿಂಧುಗೊಳಿಸಬೇಕು ಎಂದು ಕೋರಿ ಕೆ.ಎಂ. ಶಂಕರ ಎಂಬುವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಅರ್ಜಿಯಲ್ಲಿನ ಆಕ್ಷೇಪಣೆಗಳನ್ನು ಸರಿಪಡಿಸುವಂತೆ ಸೂಚನೆ ನೀಡಿದ ಹೈಕೋರ್ಟ್, ಪ್ರಕರಣದ ವಿಚಾರಣೆಯನ್ನು ಜುಲೈ 28ಕ್ಕೆ ಮುಂದೂಡಿದೆ. ಕಾಂಗ್ರೆಸ್ 5 ಗ್ಯಾರಂಟಿ ಕಾರ್ಡ್‌ಗಳ ಮೂಲಕ ಮತದಾರರಿಗೆ ಆಮಿಷವೊಡ್ಡಿದೆ. ಅಲ್ಲದೇ ಗ್ಯಾರಂಟಿ ಕಾರ್ಡ್‌ಗಳಲ್ಲಿ ಸಿದ್ದರಾಮಯ್ಯ ಅವರ ಸಹಿ ಇದೆ. ಆದ್ದರಿಂದ ಅವರ ಶಾಸಕ ಸ್ಥಾನದಿಂದ ಅನರ್ಹಗೊಳಿಸಿ ಎಂದು ಮನವಿ ಮಾಡಲಾಗಿದೆ.

ಗ್ರಾಪಂ ಹಂತದಲ್ಲಿ ಜಾಗತಿಕ ಗುಣಮಟ್ಟದ ಶಾಲೆ

ಬೆಂಗಳೂರು, ಜು.21– ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಗತಿಕ ಗುಣಮಟ್ಟದ ಶಾಲೆಯನ್ನು ತೆರೆಯಲು ಉದ್ದೇಶಿಸಲಾಗಿದೆ. ಈ ಕುರಿತು ನನ್ನ ಪರಿಕಲ್ಪನೆಯನ್ನು ಶಿಕ್ಷಣ ಸಚಿವರ ಜತೆ ಹಂಚಿಕೊಂಡಿದ್ದೇನೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ವಿಧಾನಸಭೆಯಲ್ಲಿ ಶುಕ್ರವಾರ ಗಮನ ಸೆಳೆಯುವ ಸೂಚನೆಯ ಕಲಾಪದ ವೇಳೆಯಲ್ಲಿ ಈ ವಿಷಯ ತಿಳಿಸಿದರು. ನಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಈ ಅಂಶವನ್ನು ಪ್ರಸ್ತಾಪಿಸಿದ್ದೇವೆ. ನವೋದಯ ಶಾಲೆಯ ಮಾದರಿಯಲ್ಲಿ ಸಿಬಿಎಸ್‌ಸಿ ಗುಣಮಟ್ಟದ ಶಾಲೆಯನ್ನು ಆರಂಭಿಸಲಾಗುವುದು. ನಮ್ಮ ರಾಜ್ಯದ ಮಕ್ಕಳು ವಿಶ್ವಮಟ್ಟದಲ್ಲಿ ಸ್ಪರ್ಧಿಸುವಂತಾಗಬೇಕಾದರೆ ಜಾಗತಿಕ ಗುಣಮಟ್ಟದ ಶಾಲೆಗಳೇ ಬೇಕು. ಖಾಸಗಿ ಕಂಪನಿಗಳು ಒಂದೊಂದು ಶಾಲೆಯನ್ನು ದತ್ತು ತೆಗೆದುಕೊಂಡು ನಡೆಸಬೇಕು ಎಂದರು.



ವರ್ಗಾವಣೆಗೊಂಡ ಶಿಕ್ಷಕರ ಬಿಡುಗಡೆ; ಹಾಜರಾತಿಗೆ ಕ್ರಮಕ್ಕೆ ಸೂಚನೆ

ಮೈಸೂರು, ಜು.21(ಎಸ್‌ಪಿಎನ್)–ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ನಡೆದ 2ನೇ ಹಂತದ ವರ್ಗಾವಣೆ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು, ಈ ಕೂಡಲೇ ಕರ್ತವ್ಯದಿಂದ ಬಿಡುಗಡೆ, ಹಾಜರಾತಿಗೆ ಕ್ರಮವಹಿಸಲು ಆಯಾ ತಾಲೂಕು ಬಿಇಓಗಳಿಗೆ ಶಾಲಾ ಶಿಕ್ಷಣ ಇಲಾಖೆಯ ಡಿಡಿಪಿಐ (ಆಡಳಿತ) ಹೆಚ್.ಕೆ.ಪಾಂಡು ಶುಕ್ರವಾರ ಸೂಚಿಸಿದ್ದಾರೆ. ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರು ಜು.11ರಿಂದ 14ರವರೆಗೆ ಹಾಗೂ ವಿಭಾಗೀಯ ಕಾರ್ಯದರ್ಶಿಗಳ ಹಂತದಲ್ಲಿ ಜು.18ರಿಂದ ಮುಕ್ತಾಯ ಹಂತದವರೆಗೆ ನಡೆದ ಕೋರಿಕೆ ವರ್ಗಾವಣೆ ಕೌನ್ಸೆಲಿಂಗ್ ಹಾಜರಾಗಿ ಸ್ಥಳ ನಿಯುಕ್ತಿ ಆದೇಶ ಪಡೆದಿರುವ ಶಿಕ್ಷಕರನ್ನು ತಕ್ಷಣದಿಂದಲೇ ಹಾಜರಾಗಲು ಅನುಕೂಲವಾಗುವಂತೆ ಕರ್ತವ್ಯದಿಂದ ಬಿಡುಗಡೆ ಮಾಡಿ ವರದಿ ನೀಡಲು ಸಂಬಂಧಿಸಿದ ಬಿಇಓ ಹಾಗೂ ಪ್ರೌಢಶಾಲಾ ಮುಖ್ಯಶಿಕ್ಷಕರಿಗೆ ಸೂಚಿಸಲಾಗಿದೆ. ವರ್ಗಾವಣೆಗೊಂಡ ಶಿಕ್ಷಕರ ಬಿಡುಗಡೆಗೆ ವಿಳಂಬಕ್ಕೆ ಆಸ್ಪದ ನೀಡಿದ್ದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಶ್ರೀರಾಂಪುರ ಪಟ್ಟಣ ಪಂಚಾಯಿತಿ ಕಾರ್ಯಾಲಯ

ಮೈಸೂರು ಜಿಲ್ಲೆ– 570008

ದೂರವಾಣಿ ಸಂಖ್ಯೆ: 0821-233010 ಇ-ಮೇಲ್ :itstaff_ulb_srirampur@yahoo.com

ಸಂ: ಪಪಂಶ್ರೀ:ಎಸ್‌ಎಫ್‌ಸಿ/ಪ.ಪಂ.ನಿ:ವೆ:ಕಾ:ಸಾಪ್ರ/ಸಿಆರ್:1:2023–24 ದಿನಾಂಕ:19–07–2023

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಶ್ರೀರಾಂಪುರ ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ವಾಸವಾಗಿರುವ ನಾಗರೀಕರಿಗೆ ತಿಳಿಯಪಡಿಸುವುದೇನೆಂದರೆ ಶ್ರೀರಾಂಪುರ ಪಟ್ಟಣ ಪಂಚಾಯ್ತಿಯ 2023–24ನೇ ಸಾಲಿನ ಕ್ರಿಯಾಯೋಜನೆಯು ಕೆಲವು ಷರತ್ತುಗಳಿಗೊಳಪಟ್ಟು ಮಾನ್ಯ ಜಿಲ್ಲಾಧಿಕಾರಿಗಳು,ಮೈಸೂರು ಜಿಲ್ಲೆ, ಮೈಸೂರುರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ:ಮುನಿಸಿ(4)/ಎಸ್.ಎಫ್.ಸಿ.ಮುನಿ:ಶ್ರೀಪಪಂ/ ಕ್ರಿಯೋ/ಸಿಆರ್–14/2023–24. ದಿ :20–06–2023ರ ರೀತ್ಯಾ ಮಂಜೂರಾಗಿದ್ದು, ಅದರಂತೆ 1)ಶೇ.24.10ರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮತ್ತು ಪೌರಕಾರ್ಮಿಕರು 2)ಶೇ.7.25ರ ಇತರೆ ಬಡಜನರು ಮತ್ತು 3)ಶೇ.5ರ ವಿಶೇಷಚೇತನ ಬಡಜನರ ಕಲ್ಯಾಣಕ್ಕಾಗಿ ಸರ್ಕಾರದ ನಿಯಮ/ನಿಬಂಧನೆಗಳಿಗೊಳಪಟ್ಟು ಈ ಕೆಳಕಂಡ ವಿವಿಧ ವೈಯಕ್ತಿಕ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಪೂರಕ ದಾಖಲೆಗಳೊಂದಿಗೆ ಅರ್ಜಿಯನ್ನು ಆಹ್ವಾನಿಸಲಾಗಿರುತ್ತದೆ. ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ ಪೂರಕ ದಾಖಲಾತಿಗಳೊಂದಿಗೆ ದಿ:10–08–2023ರ ಸಂಜೆ 5.00 ಗಂಟೆಯೊಳಗೆ ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿ ಮತ್ತು ಅರ್ಜಿಗಳಿಗಾಗಿ ಕಛೇರಿ ವೇಳೆಯಲ್ಲಿ ಯೋಜನಾ ಶಾಖೆಯನ್ನು ಭೇಟಿ ಮಾಡತಕ್ಕದ್ದು.

ಕ್ರ.ಸಂ	ಕಾರ್ಯಕ್ರಮಗಳ ವಿವರಗಳು	ಲಭ್ಯ ಅನುದಾನ
1.	ಸರ್ಕಾರದ ವಿವಿಧ ವಸತಿ ಯೋಜನೆಯಡಿ ಆಯ್ಕೆ ಆಗಿರುವ ಪ.ಜಾತಿಯ ಫಲಾನುಭವಿಗಳಿಗೆ ಫಲಾನುಭವಿ ವಂತಿಕೆ ನೀಡುವುದು.	ಪ.ಪಂ.ನಿಧಿ=48,000/–
2.	ಸರ್ಕಾರದ ವಿವಿಧ ವಸತಿ ಯೋಜನೆಯಡಿ ಆಯ್ಕೆ ಆಗಿರುವ ಪ.ಪಂಗಡದ ಫಲಾನುಭವಿಗಳಿಗೆ ಫಲಾನುಭವಿ ವಂತಿಕೆ ನೀಡುವುದು.	ಪ.ಪಂ.ನಿಧಿ=18,000/–
3.	ಪೌರಕಾರ್ಮಿಕರ ಕುಟುಂಬದವರಿಗೆ ವೈದ್ಯಕೀಯ ವೆಚ್ಚ ಮರುಪಾವತಿ/ಕ್ರೀಡೆಗೆ ಪ್ರೋತ್ಸಾಹಧನ ನೀಡುವುದು,	ಎಸ್‌ಎಫ್‌ಸಿ=1,11,000/–
4.	ಸರ್ಕಾರದ ವಿವಿಧ ವಸತಿ ಯೋಜನೆಯಡಿ ಆಯ್ಕೆ ಆಗಿರುವ ಇತರೆ ಹಿಂದುಳಿದ ವರ್ಗದ ಫಲಾನುಭವಿಗಳಿಗೆ ಫಲಾನುಭವಿ ವಂತಿಕೆ ನೀಡುವುದು.	ಪ.ಪಂ.ನಿಧಿ=24,000/–
5.	ವಿಕಲಚೇತನರ ಕುಟುಂಬದವರಿಗೆ ಶೌಚಾಲಯ ನಿರ್ಮಾಣಕ್ಕೆ ಸಹಾಯಧನ ನೀಡುವುದು.(ತಲಾ 10000–00ರಂತೆ)	ಪ.ಪಂ.ನಿಧಿ=20,000/–

ಪ್ರತಿ ಅರ್ಜಿದಾರರು ಕಡ್ಡಾಯವಾಗಿ ಶ್ರೀರಾಂಪುರ ಟೌನ್ ನಿವಾಸಿಗಳಾಗಿದ್ದು, ಭರ್ತಿ ಮಾಡಲಾದ ನಿಗಧಿತ ನಮೂನೆಯ ಅರ್ಜಿ ಜೊತೆ ಚಾಲ್ತಿಯಲ್ಲಿರುವ 1)ಜಾತಿ ಮತ್ತು ಆಧಾಯ ಪ್ರಮಾಣ ಪತ್ರ (ವಾರ್ಷಿಕ ಆಧಾಯ 3 ಲಕ್ಷದೊಳಗಿರಬೇಕು), 2) ಪಡಿತರ ಚೀಟಿ, 3) ಆಧಾರ್ ಕಾರ್ಡು, 4) ಚುನಾವಣಾ ಗುರುತಿನ ಚೀಟಿ, 5) ಬ್ಯಾಂಕ್ ಪಾಸ್ ಬುಕ್ ನಕಲುಗಳ ಸ್ವಯಂ ದೃಢೀಕೃತ ನಕಲುಗಳು, 6) ಸರ್ಕಾರದ ವಸತಿ ಯೋಜನೆಯಡಿ ಮಂಜೂರಾಗಿರುವ ಮಂಜೂರಾತಿ ಪತ್ರದ ನಕಲು, 7) 3 ಸಂಖ್ಯೆ ಇತ್ತೀಚಿನ ಭಾವಚಿತ್ರ, 8) ಮೊಬೈಲ್ ಸಂಖ್ಯೆ 8) ವಿಶೇಷ ಚೇತನರೆಂಬುದಕ್ಕೆ ಪ್ರಮಾಣ ಪತ್ರ, 9) ಪೌರಕಾರ್ಮಿಕ ಕುಟುಂಬದವರ ಕ್ರೀಡೆ/ವೈದ್ಯಕೀಯ ದಾಖಲೆಗಳು, ಇನ್ನಿತರ ಅಗತ್ಯ ದಾಖಲೆಗಳನ್ನು ಲಗತ್ತಿಸುವುದು. ಮೇಲಿನ ಸೌಲಭ್ಯಗಳನ್ನು ಕಲ್ಪಿಸುವ/ಮಾರ್ಪಡಿಸುವ/ರದ್ದುಪಡಿಸುವ/ವಿತರಣೆ ಮಾಡುವ/ ಮಾಡದಿರುವ ಹಕ್ಕನ್ನು ಸರ್ಕಾರ/ಪಟ್ಟಣ ಪಂಚಾಯ್ತಿ,ಶ್ರೀರಾಂಪುರ ಕಾಯ್ದಿರಿಸಿಕೊಂಡಿರುತ್ತದೆ. ಹೆಚ್ಚಿನ ಮಾಹಿತಿ ಮತ್ತು ನಿಗಧಿತ ನಮೂನೆಯ ಅರ್ಜಿಗಳಿಗಾಗಿ ಪಟ್ಟಣ ಪಂಚಾಯ್ತಿಯ ಯೋಜನಾ ಶಾಖೆಗೆ ಭೇಟಿ ನೀಡಿ ಪಡೆದುಕೊಳ್ಳತಕ್ಕದ್ದು.

ಸಹಿ/– ಆಡಳಿತಾಧಿಕಾರಿಗಳು, ಪಟ್ಟಣ ಪಂಚಾಯ್ತಿ, ಶ್ರೀರಾಂಪುರ, ಸಹಿ/– ಮುಖ್ಯಾಧಿಕಾರಿ, ಪಟ್ಟಣ ಪಂಚಾಯ್ತಿ, ಶ್ರೀರಾಂಪುರ,